

ಮೈಸೂರು ಮಿತ್ರ


ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ನವೆಂಬರ್ 20 ಬುಧವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 213 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com
₹4



ಶೇ.50:50ರ ಅನುಪಾತದಡಿ ಮುಡಾ ನಿವೇಶನ ಹಂಚಿಕೆ ಹಗರಣ

ಲೋಕಾಯುಕ್ತ ಮೈಸೂರು ಎಸ್‌ಪಿ ಕಚೇರಿಯಲ್ಲಿ ಮುಡಾ ಮಾಜಿ ಆಯುಕ್ತ ಡಾ.ಡಿ.ಬಿ.ನಟೇಶ್ ತೀವ್ರ ವಿಚಾರಣೆ

ಮೈಸೂರು, ನ.19(ಆರ್‌ಕೆ)–ಶೇ 50:50ರ ಅನುಪಾತದಡಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಪತ್ನಿ ಶ್ರೀಮತಿ ಪಾರ್ವತಿ ಅವರಿಗೆ ಪ್ರತಿಷ್ಠಿತ ವಸತಿ ಬಡಾವಣೆಗಳಲ್ಲಿ 14 ನಿವೇಶನ ಮಂಜೂರು ಮಾಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದ ಹಿಂದಿನ ಆಯುಕ್ತ ಡಾ.ಡಿ.ಬಿ.ನಟೇಶ್, ಇಂದು ಲೋಕಾಯುಕ್ತ ಮೈಸೂರು ಎಸ್‌ಪಿ ಕಚೇರಿಯಲ್ಲಿ ತೀವ್ರ ವಿಚಾರಣೆ ಎದುರಿಸಿದರು.

ಇದೇ ಮೊದಲ ಬಾರಿಗೆ ಮುಡಾ ಮಾಜಿ ಆಯುಕ್ತ ನಟೇಶ್ ಪ್ರಕರಣದ ಸಂಬಂಧ ಅಗತ್ಯ ದಾಖಲಾತಿಗಳೊಂದಿಗೆ ಮೈಸೂರಿನ ಲೋಕಾಯುಕ್ತ ಕಚೇರಿಗೆ ಆಗಮಿಸಿ, ವಿಚಾರಣೆ ಎದುರಿಸಿದರು. ಲೋಕಾಯುಕ್ತ ಎಸ್‌ಪಿ ಕಚೇರಿಯಿಂದ ಡಾ.ನಟೇಶ್ ಅವರಿಗೆ ನೋಟಿಸ್ ಜಾರಿ ಮಾಡಿದ ಹಿನ್ನೆಲೆಯಲ್ಲಿ ಇಂದು ಬೆಳಗ್ಗೆ ಸುಮಾರು 11 ಗಂಟೆ ವೇಳೆಗೆ ಆಟೋದಲ್ಲಿ ಬಂದಿಳಿದ ಡಾ.ನಟೇಶ್ ಅವರು ನೇರವಾಗಿ ಕಚೇರಿ ಪ್ರವೇಶಿಸಿದರು. ಈ ಸಂದರ್ಭ ಸ್ಥಳದಲ್ಲಿದ್ದ ಪತ್ರಕರ್ತರು, ಪತ್ರಿಕಾ ಛಾಯಾಗ್ರಾಹಕರು, ವಿಡಿಯೋಗ್ರಾಫರ್ಸ್ ಅವರತ್ತ ಧಾವಿಸಿದಾಗ ಸಿಡಿಮಿಡಿಗೊಂಡರು. ಸಿಡುಕಿನಲ್ಲೇ ಕಚೇರಿ ●9ನೇ ಪುಟಕ್ಕೆ


ಲೋಕಾಯುಕ್ತ ಮೈಸೂರು ಎಸ್‌ಪಿ ಕಚೇರಿಯಲ್ಲಿ ವಿಚಾರಣೆಗೆ ಹಾಜರಾದ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದ ಹಿಂದಿನ ಆಯುಕ್ತ ಡಾ.ಡಿ.ಬಿ.ನಟೇಶ್

ನಾನೇನು ಡ್ಯಾನ್ಸ್ ಮಾಡ್ತಾ ಇದ್ದೀನಾ... ಮಾಧ್ಯಮದವರ ಮೇಲೆ ಹರಿಹಾಯ್ದ ಡಾ.ಡಿ.ಬಿ.ನಟೇಶ್

ಮೈಸೂರು, ನ.19 (ಆರ್‌ಕೆ)–ಮುಖ್ಯಮಂತ್ರಿ ಪತ್ನಿ ಪಾರ್ವತಿ ಅವರಿಗೆ ಶೇ.50:50 ಅನುಪಾತದಡಿ ಪರಿಹಾರವಾಗಿ 14 ನಿವೇಶನಗಳನ್ನು ಮಂಜೂರು ಮಾಡಿದ್ದ ಪ್ರಕರಣದಲ್ಲಿ ಮೈಸೂರಿನ ಲೋಕಾಯುಕ್ತ ಎಸ್‌ಪಿ ಕಚೇರಿಗೆ ಇಂದು ವಿಚಾರಣೆಗೆ ಹಾಜರಾದ ಮುಡಾ ಮಾಜಿ ಆಯುಕ್ತ ಡಾ.ಡಿ.ಬಿ.ನಟೇಶ್, ಪತ್ರಕರ್ತರು, ಪತ್ರಿಕಾ ಛಾಯಾಗ್ರಾಹಕರು ಹಾಗೂ ದೃಶ್ಯ ಮಾಧ್ಯಮದ ವಿಡಿಯೋಗ್ರಾಫರ್‌ಗಳ ಮೇಲೆ ಹರಿಹಾಯ್ದ ಪ್ರಸಂಗ ನಡೆಯಿತು.

ದೇವರಾಜ ಮೊಹಲ್ಲಾದ ಲೋಕಾಯುಕ್ತ ಎಸ್‌ಪಿ ಕಚೇರಿಗೆ ಆಟೋವೊಂದರಲ್ಲಿ ದಾಖಲಾತಿಯ ಬ್ಯಾಗ್‌ನೊಂದಿಗೆ ಬೆಳಗ್ಗೆ 11 ಗಂಟೆ ವೇಳೆಗೆ ಡಾ.ನಟೇಶ್ ಆಗಮಿಸಿದರು. ಅವರ ಆಗಮನ ನಿರೀಕ್ಷೆಯಲ್ಲಿದ್ದ ಮಾಧ್ಯಮದವರು ಅವರು ಆಟೋದಿಂದ ಇಳಿಯುತ್ತಿದ್ದಂತೆ ಸುತ್ತುವರಿದು ಫೋಟೋ, ವಿಡಿಯೋ ತೆಗೆಯಲು ಆರಂಭಿಸಿದ್ದರಿಂದ ಕೆರಳಿ ಕೆಂಡಾಮಂಡಲವಾದರು. ಏನ್ರೀ... ನಾನೇನು ಡ್ಯಾನ್ಸ್ ಮಾಡ್ತಾ ಇದ್ದೀನಾ... ನಿಮಗೆ ಮಿನಿಮಮ್ ಕಾಮನ್‌ಸೆನ್ಸ್ ಇಲ್ವಾ.. ನಾವೇನು ಮನುಷ್ಯರಾ ಥರಾ ಕಾಣಿಸಲ್ವಾ... ಎಲ್ಲಿ ಹೋದರೂ, ●9ನೇ ಪುಟಕ್ಕೆ

ಸಿದ್ದರಾಮಯ್ಯನವರು ತಮ್ಮ ಪತ್ನಿ ಪಾರ್ವತಿಯವರಿಗೆ ಬದಲಿ ನಿವೇಶನ ಕೊಡುವ ತೀರ್ಮಾನ ಒಪ್ಪಿರಲಿಲ್ಲ

- ಮುಡಾ ಮಾಜಿ ಅಧ್ಯಕ್ಷ ಡಿ.ಧ್ರುವಕುಮಾರ್ ಹೇಳಿಕೆ
- ಲೋಕಾಯುಕ್ತ ಎಸ್‌ಪಿ ಕಚೇರಿಯಲ್ಲಿ ವಿಚಾರಣೆಗೆ ಹಾಜರು


ಮುಡಾ ಕಚೇರಿ


ಮೈಸೂರು, ನ.19(ಆರ್‌ಕೆ)–ತಮ್ಮ ಪತ್ನಿ ಶ್ರೀಮತಿ ಪಾರ್ವತಿ ಅವರಿಗೆ ಬದಲಿ ನಿವೇಶನ ನೀಡುವ ಮುಡಾ ಸಭೆಯ ನಿರ್ಣಯವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಒಪ್ಪಿರಲಿಲ್ಲ ಎಂದು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದ ಮಾಜಿ ಅಧ್ಯಕ್ಷ ಡಿ.ಧ್ರುವಕುಮಾರ್ ಸ್ಪಷ್ಟಪಡಿಸಿದ್ದಾರೆ.

ಮೈಸೂರಿನ ವಿಜಯನಗರ 3 ಮತ್ತು 4ನೇ ಹಂತದಲ್ಲಿ ಶ್ರೀಮತಿ ಪಾರ್ವತಿಯವರಿಗೆ 14 ನಿವೇಶನ ಮಂಜೂರಾತಿ ಕುರಿತಂತೆ ಮೈಸೂರಿನ ಲೋಕಾಯುಕ್ತ ಕಚೇರಿಯಲ್ಲಿ ವಿಚಾರಣೆಗೆ ಹಾಜರಾದ ವೇಳೆ ಸ್ಥಳದಲ್ಲಿದ್ದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಅಧ್ಯಕ್ಷನಾಗಿದ್ದ ಅವಧಿಯಲ್ಲಿ ಸಿಎಂ ಸಿದ್ದರಾಮಯ್ಯ, ಪತ್ನಿ ಪಾರ್ವತಿ ಅವರಿಗೆ ಕೆಸರೆ ಗ್ರಾಮದ ಸರ್ವೆ ನಂ. 464ರಲ್ಲಿ 3.16 ಎಕರೆ ಭೂಮಿಯನ್ನು ದೇವನೂರು 1ನೇ ಹಂತದ ವಸತಿ ಬಡಾವಣೆ ಅಭಿವೃದ್ಧಿ ವೇಳೆ ಭೂಸ್ವಾಧೀನ ಪ್ರಕ್ರಿಯೆ ನಡೆಸದೆಯೇ ಬಳಸಿಕೊಂಡ ಹಿನ್ನೆಲೆಯಲ್ಲಿ ಬದಲಿಯಾಗಿ ಸಮಾನಾಂತರ ಬಡಾವಣೆಯಲ್ಲಿ ನಿವೇಶನಗಳನ್ನು ಕೊಡಲು ತೀರ್ಮಾನಿಸಲಾಗಿತ್ತು. ಆದರೆ ಅದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಒಪ್ಪಿರಲಿಲ್ಲ. ನನ್ನ ಅವಧಿಯಲ್ಲಿಯೂ ಈ ವಿಚಾರ ಮುಡಾ ಸಭೆಯಲ್ಲಿ ಚರ್ಚೆಗೆ ಬಂದಿತ್ತು ಎಂದರು. ಈ ವಿಷಯವನ್ನು ನಾನೇ ಖುದ್ದಾಗಿ ಸಿದ್ದರಾಮಯ್ಯನವರನ್ನು ಭೇಟಿ ಮಾಡಿ ತಿಳಿಸಿದ್ದೆ. ಅವರು ಯಾವುದೇ ಕಾರಣಕ್ಕೂ ಬೇಡ ಎಂದಿದ್ದರು. ನಾನು ಸಿಎಂ ಆಗಿರುವ ಸಮಯದಲ್ಲಿ ಈ ನಿರ್ಣಯಗಳು ಆಗುವುದು ಬೇಡ ಅಂದಿದ್ದರು. ಆದರೂ ಪಾರ್ವತಿ ಅವರು ಕಳೆದುಕೊಂಡ ಭೂಮಿಗೆ ಸಮಾನಾಂತರ ಬಡಾವಣೆಯಲ್ಲಿ ನಿವೇಶನ ನೀಡಲು ಸಭೆಯಲ್ಲಿ ತೀರ್ಮಾನಿಸಲಾಗಿತ್ತು ಎಂದರು. ನನ್ನ ಅವಧಿ ನಂತರ ಮುಂದೆ ಏನಾಗಿದೆ ಎಂಬುದು ನನಗೆ ಗೊತ್ತಿಲ್ಲ. ಈ ಸಂಬಂಧ ನಾನು ಮುಡಾ ಆಯುಕ್ತರಿಗೆ ಯಾವುದೇ ಪತ್ರ ಬರೆದಿಲ್ಲ. ಹಾಗೂ ಮೌಖಿಕವಾಗಿಯೂ ಯಾವ ಸಲಹೆಯನ್ನೂ ನೀಡಿಲ್ಲ. ನನ್ನ ಅವಧಿ, ಅಲ್ಲದೆ ಈ ಹಿಂದೆಯೇ ಶೇ.50:50 ಅನುಪಾತದಡಿ ನಿವೇಶನ ಕೊಡುವ ಪದ್ಧತಿ ಜಾರಿಯಲ್ಲಿತ್ತು. ಆದರೆ ನಾನು ಅಧ್ಯಕ್ಷನಾಗಿದ್ದ ಅವಧಿಯಲ್ಲಿ ಈ ಅನುಪಾತದಡಿ 10 ಅಡಿ ಜಾಗವನ್ನೂ ಕೊಟ್ಟಿಲ್ಲ. ರೈತರನ್ನು ನಾವು ಕೇಳಿಕೊಂಡಿದ್ದೆವಾದರೂ ಯಾರೂ ಒಪ್ಪಿರಲಿಲ್ಲ. ಹೀಗಾಗಿ ಹೊಸ ವಸತಿ ಬಡಾವಣೆ ನಿರ್ಮಾಣ ಮಾಡಲಾಗಿರಲಿಲ್ಲ. ಸಿದ್ದರಾಮಯ್ಯನವರ ● 9ನೇ ಪುಟಕ್ಕೆ


ಮುಡಾ ಮಾಜಿ ಅಧ್ಯಕ್ಷ ಡಿ.ಧ್ರುವಕುಮಾರ್

ಬಿಪಿಎಲ್ ಕಾರ್ಡ್ ಬೇಕಿರುವ ಬಡವರು ಅರ್ಜಿ ಹಾಕಿ

- ಮುಖ್ಯಮಂತ್ರಿ ಸಿದ್ದರಾಮಯ್ಯ ಸಲಹೆ
- ಅನರ್ಹರು ಬಿಪಿಎಲ್ ಕಾರ್ಡ್ ದುರುಪಯೋಗಪಡಿಸಿಕೊಳ್ಳುವುದ ತಡೆಯಲಷ್ಟೇ ಕ್ರಮ ಕೈಗೊಂಡಿದ್ದೇವೆ
- ಇಂತಹವರ ಬಿಪಿಎಲ್ ಅನ್ನು ಎಪಿಎಲ್ ಕಾರ್ಡ್ ಆಗಿ ಪರಿವರ್ತನೆ
- ಕಾಂಗ್ರೆಸ್ ಸರ್ಕಾರದಿಂದ ಅಷ್ಟೇ ಬಡವರಿಗೆ ನಾನಾ ಅನುಕೂಲ: ಡಿಕೆಶಿ



ಬೆಂಗಳೂರು, ನ.19(ಕೆಎಂಶಿ)–ಬಡತನ ರೇಖೆಗಿಂತ ಕೆಳಗಿನ ಕುಟುಂಬಕ್ಕೆ ಬಿಪಿಎಲ್ ಪಡಿತರ ಚೀಟಿ ದೊರೆಯದಿದ್ದರೆ ಅಂತಹವರು ಅರ್ಜಿ ಸಲ್ಲಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಶೇಕಡ 20ರಷ್ಟು ಮಂದಿ ಅನರ್ಹರು ಬಿಪಿಎಲ್ ಪಡಿತರ ಚೀಟಿ ಪಡೆದು ಸರ್ಕಾರದ ಎಲ್ಲಾ ಸವಲತ್ತು ಪಡೆದುಕೊಳ್ಳುತ್ತಿದ್ದಾರೆ. ಅಂತಹವರಿಗೆ ಕಡಿವಾಣ ಹಾಕಲು ಇಲಾಖೆ ಮುಂದಾಗಿದೆ. ಬಿಪಿಎಲ್, ಎಪಿಎಲ್ ಅಂದರೆ, ಬಡತನ ರೇಖೆಗಿಂತ ಕೆಳಗಿನವರು ಮತ್ತು ಮೇಲಿನವರು ಎಂದರ್ಥ. ಆದರೆ, ಅನರ್ಹರು ಬಿಪಿಎಲ್ ಪಡಿತರ ಚೀಟಿಗಳನ್ನು ಪಡೆದು ಅರ್ಹರಿಗೆ ದಕ್ಕಬೇಕಾದ ಸವಲತ್ತುಗಳನ್ನು ಕಸಿದುಕೊಂಡಿದ್ದಾರೆ.

ಅಂತಹವರ ಬಿಪಿಎಲ್ ಪಡಿತರ ಚೀಟಿಗಳನ್ನು ದೊಡ್ಡ ಪ್ರಮಾಣದಲ್ಲಿ ಎಪಿಎಲ್ ಚೀಟಿಗಳಾಗಿ ಪರಿವರ್ತಿಸುವ ಕಾರ್ಯ ನಡೆದಿದೆ. ಇದೇ ಸಂದರ್ಭದಲ್ಲಿ ಬಡತನ ರೇಖೆಗಿಂತ ಕೆಳಗಿನವರಿದ್ದರೆ, ಅಂತಹವರು ಅರ್ಜಿ ಹಾಕಿ ಪಡೆದುಕೊಳ್ಳಿ ಎಂದರು.

ಕೆಪಿಸಿಸಿ ಕಚೇರಿಯಲ್ಲಿ ಮಾಜಿ ಪ್ರಧಾನಿ ಇಂದಿರಾ ಗಾಂಧಿ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ನಮ್ಮ ಸರ್ಕಾರ ಬಡವರ ಅನ್ನ ಹಾಗೂ ಹಕ್ಕನ್ನು ಕಸಿಯುವುದಿಲ್ಲ.

ಪ್ರತಿಪಕ್ಷ ಬಿಜೆಪಿ ಅನಗತ್ಯ ಗೊಂದಲ ಸೃಷ್ಟಿಸುತ್ತಿದೆ. ಅರ್ಹರಿರುವವರಿಗೆ ಬಿಪಿಎಲ್ ಪಡಿತರ ಚೀಟಿ ಪಡೆದುಕೊಳ್ಳಲು ಅವಕಾಶ ಮಾಡಿಕೊಡುತ್ತಿದ್ದೇವೆ. ರಾಜ್ಯದಲ್ಲಿ ಶೇಕಡ 80ರಷ್ಟು ಬಡವರ ಪ್ರಮಾಣ ಇದೆಯೇ ಎಂದು ಪ್ರಶ್ನಿಸಿದ ಮುಖ್ಯಮಂತ್ರಿ ಅವರು, ಸುಳ್ಳು ದಾಖಲೆಗಳನ್ನು ನೀಡಿ ಉಳ್ಳವರು ಬಿಪಿಎಲ್ ಕಾರ್ಡ್ ಪಡೆದಿರುವುದರಿಂದ ಇಷ್ಟು ದೊಡ್ಡ ಪ್ರಮಾಣದಲ್ಲಿ ನಮ್ಮಲ್ಲಿ



ಬಡತನ ಇದೆ ಎಂದು ತೋರಿಸಿಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದರು.

ಬಡವರಿಗೆ ಕಾಂಗ್ರೆಸ್ ಸರ್ಕಾರದ ನೆರವು: ಇದೇ ಸಂದರ್ಭದಲ್ಲಿ ಮಾತನಾಡಿದ ಕೆಪಿಸಿಸಿ ಅಧ್ಯಕ್ಷ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಬಡವರಿಗೆ ಪಡಿತರ ಕಾರ್ಡ್, ಅಕ್ಕಿ, ಪಿಂಚಣಿ, ನಿವೇಶನ, ಆಶ್ರಯ ಯೋಜನೆ, ಉಳುವವನಿಗೆ ಭೂಮಿ ಸೇರಿದಂತೆ ಜನರಿಗೆ ಪ್ರಮುಖ ಯೋಜನೆ ಕೊಟ್ಟಿರುವುದು ಕಾಂಗ್ರೆಸ್ ಸರ್ಕಾರವೇ ಹೊರತು ಬಿಜೆಪಿಯಲ್ಲ ಎಂದರು.

ನಮ್ಮ ಸರ್ಕಾರದಿಂದ ಬಡವರಿಗೆ ತೊಂದರೆ ಆಗುವುದಿಲ್ಲ, ರಾಜಕೀಯ ಮಾಡಲು ವಿರೋಧ ಪಕ್ಷಗಳು ಮೊಸರಲ್ಲಿ ಕಲ್ಲು ಹುಡುಕುತ್ತಿವೆ. ಬಿಜೆಪಿ ಹಾಗೂ ಎಚ್.ಡಿ. ಕುಮಾರಸ್ವಾಮಿ ಅವರಿಗೆ ನಮ್ಮ ಸರ್ಕಾರದ ಮೇಲೆ ಟೀಕೆ ಮಾಡಲು ಬೇರೆ ವಿಚಾರಗಳಿಲ್ಲ. ಅವರ ಕಾಲದಲ್ಲಿ ಏನೇನು ಅನ್ಯಾಯ ಮಾಡಬೇಕೋ ಮಾಡಿದ್ದಾರೆ. ಅವರ ಸರ್ಕಾರದ ಅವಧಿಯಲ್ಲಿ ಬಡವರಿಗೆ ಸಹಾಯ ಮಾಡಲಿಲ್ಲ.

ಕುಮಾರಸ್ವಾಮಿ ಕೊಡುಗೆ ಏನು?: ರಾಜ್ಯದ ಆರ್ಥಿಕ ಪರಿಸ್ಥಿತಿ ಹದಗೆಟ್ಟಿದೆ ಎನ್ನುವ ಕುಮಾರಸ್ವಾಮಿ, ಅವರು ಅಧಿಕಾರದಲ್ಲಿದ್ದಾಗ ಏನು ಮಾಡಿದರು, ರಾಜ್ಯಕ್ಕೆ ಅವರ ಕೊಡುಗೆ ಏನು, ಗಾಳಿಯಲ್ಲಿ ಗುಂಡು ಹೊಡೆಯುವುದೇ ಅವರ ಕೊಡುಗೆ, ಅವರ ಕಾಲದಲ್ಲಿ ಸರ್ಕಾರಕ್ಕೆ ಆರ್ಥಿಕ ಶಕ್ತಿ ತುಂಬುವ ಕೆಲಸ ಮಾಡಿದ್ದಾರಾ ಎಂದು ಪ್ರಶ್ನಿಸಿದರು. ನಾವು ಬಂಡವಾಳ ತಂದು ರಾಜ್ಯದ ಆರ್ಥಿಕತೆಗೆ ಶಕ್ತಿ ತುಂಬುತ್ತಿದ್ದೇವೆ, ಟೆಕ್ ಸಮ್ಮಿಟ್ ಮಾಡಿದ್ದು ಉದ್ಯೋಗ ಸೃಷ್ಟಿ ಹಾಗೂ ಬಂಡವಾಳ ತರುವ ಉದ್ದೇಶದಿಂದ, ಪ್ರಧಾನಿ ಮೋದಿ ಅವರು ಕೊಟ್ಟಿರುವ ಕೆಲಸವನ್ನು ಕುಮಾರಸ್ವಾಮಿ ಮಾಡಲಿ. ●9ನೇ ಪುಟಕ್ಕೆ

ಜೆ.ದೇವರಾಜು ವಿಚಾರಣೆಗೆ ಮತ್ತೆ ಲೋಕಾಯುಕ್ತ ಸಮನ್ಸ್

ಮೈಸೂರು, ನ.19(ಆರ್‌ಕೆ)–ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಅವರಿಗೆ 14 ಮುಡಾ ನಿವೇಶನ ಮಂಜೂರು ಮಾಡಿರುವ ಪ್ರಕರಣದ ಸಂಬಂಧ ತನಿಖೆ ನಡೆಸುತ್ತಿರುವ ಲೋಕಾಯುಕ್ತ ಮೈಸೂರು ಎಸ್‌ಪಿ ಕಚೇರಿಯಿಂದ 4ನೇ ಆರೋಪಿ ಜೆ.ದೇವರಾಜು ಅವರಿಗೆ ಮತ್ತೆ ವಿಚಾರಣೆಗೆ ಆಗಮಿಸುವಂತೆ ಸಮನ್ಸ್ ಜಾರಿ ಮಾಡಲಾಗಿದೆ. ಈಗಾಗಲೇ ಒಮ್ಮೆ ವಿಚಾರಣೆ ನಡೆಸಲಾಗಿದ್ದು, ಅಗತ್ಯವಿರುವುದರಿಂದ ಎರಡನೇ ಹಂತದ ವಿಚಾರಣೆಗೆ ಹಾಜರಾಗುವಂತೆ ದೇವರಾಜು ಅವರಿಗೆ ಲೋಕಾಯುಕ್ತ ಎಸ್‌ಪಿ ಕಚೇರಿಯಿಂದ ನೋಟಿಸ್ ನೀಡಲಾಗಿದೆ. ದೇವರಾಜು ಅವರು ಕೆಸರೆ ಸರ್ವೆ ನಂ. 464ರ 3.16 ಎಕರೆ ಭೂಮಿಯ ಮೂಲ ಮಾಲೀಕನಾಗಿದ್ದು, ಸದರಿ ಭೂಮಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಭಾಮೈದುನ ಬಿ.ಎಂ.ಮಲ್ಲಿಕಾರ್ಜುನಸ್ವಾಮಿ ಅವರಿಗೆ ಮಾರಾಟ ಮಾಡಿದ್ದಾರೆ. ಆ ಜಾಗವನ್ನು ಮಲ್ಲಿಕಾರ್ಜುನಸ್ವಾಮಿ ಅವರು ಅರಿಶಿನ ಕುಂಕುಮಕ್ಕೆಂದು ತಮ್ಮ ಸಹೋದರಿ ಬಿ.ಎಂ.ಪಾರ್ವತಿ ಅವರಿಗೆ ದಾನ ರೂಪದಲ್ಲಿ ಕೊಟ್ಟಿದ್ದರು. ಸದರಿ ಜಾಗವನ್ನು ಮುಡಾದವರು ದೇವನೂರು 1ನೇ ಹಂತದ ವಸತಿ ಬಡಾವಣೆ ನಿರ್ಮಿಸುವ ಸಲುವಾಗಿ ನಿಯಮಾನುಸಾರ ಭೂ ಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸಿ, ಪರಿಹಾರ ನೀಡದೆ ಬಳಸಿಕೊಂಡ ●9ನೇ ಪುಟಕ್ಕೆ


ಜೆ.ದೇವರಾಜು





ಎನ್‌ಕೌಂಟರ್‌ನಲ್ಲಿ ನಕ್ಸಲ್ ನಾಯಕ ವಿಕ್ರಂಗೌಡ ಬಲಿ

- ಉಡುಪಿಯ ಹೆಬ್ರಿ ಬಳಿ ಪೊಲೀಸರು–ನಕ್ಸಲರ ನಡುವೆ ಗುಂಡಿನ ಚಕಮಕಿ
- ಮೋಸ್ಟ್ ವಾಂಟೆಡ್ ನಕ್ಸಲ್ ನಾಯಕನ ಅಂತ್ಯ
- ಈತನ ವಿರುದ್ಧ ಕರ್ನಾಟಕದಲ್ಲಿ 61, ಕೇರಳದಲ್ಲಿ 19 ಕೇಸ್ ದಾಖಲಾಗಿದ್ದವು


ನಕ್ಸಲ್ ಮುಖಂಡ ವಿಕ್ರಂಗೌಡ

ಉಡುಪಿ, ನ.19– ಉಡುಪಿ ಜಿಲ್ಲೆಯ ಕಾರ್ಕಳ ತಾಲೂಕಿನ ಹೆಬ್ರಿ ಕಬ್ಬಿನಾಲೆಯ ಪೀತಬೈಲುವಿನಲ್ಲಿ ಪೊಲೀಸರು ಮತ್ತು ನಕ್ಸಲರ ನಡುವೆ ಗುಂಡಿನ ಕಾಳಗ ನಡೆದಿದ್ದು, ಈ ವೇಳೆ ಮೋಸ್ಟ್ ವಾಂಟೆಡ್ ನಕ್ಸಲ್ ಮುಖಂಡ ವಿಕ್ರಂಗೌಡ ಬಲಿಯಾಗಿದ್ದಾನೆ.

ಕಳೆದ ಕೆಲವು ದಿನಗಳಿಂದ ಹೆಬ್ರಿ–ಕಾರ್ಕಳ ಪ್ರದೇಶದಲ್ಲಿ ನಕ್ಸಲರ ಚಟುವಟಿಕೆ ಹೆಚ್ಚಾಗಿತ್ತು. ಈ ಹಿನ್ನೆಲೆಯಲ್ಲಿ ಕರ್ನಾಟಕದ ನಕ್ಸಲ್ ನಿಗ್ರಹದಳ (ANF) ಕಾರ್ಯಾಚರಣೆಗೆ ಮುಂದಾಗಿತ್ತು.

ನಿನ್ನೆ ಮಧ್ಯರಾತ್ರಿ 5 ಮಂದಿ ನಕ್ಸಲರ ತಂಡ ಸೀತಂಬೈಲು ಸಮೀಪರೇಷನ್ ಸಂಗ್ರಹಕ್ಕೆ ಬಂದಾಗ ಕೂಂಬಿಂಗ್ ಶುರುವಾಗಿದೆ. ಈ ವೇಳೆ ಕಬ್ಬಿನಾಲೆ ಮೂಲದ ವಿಕ್ರಂಗೌಡ ಗುಂಡಿನ ದಾಳಿಗೆ ಬಲಿಯಾಗಿದ್ದಾನೆ. ಇನ್ನುಳಿದ ನಕ್ಸಲರಿಗಾಗಿ ತೀವ್ರ ಶೋಧಕಾರ್ಯ ಮುಂದುವರೆದಿದೆ. ಹತನಾಗಿರುವ ವಿಕ್ರಂಗೌಡ ನಕ್ಸಲರ ನೇತ್ರಾವತಿ ದಳದ ನಾಯಕನಾಗಿದ್ದ.

ಕೆಲವು ದಿನಗಳ ಹಿಂದೆ ದಕ್ಷಿಣ ಕನ್ನಡ ಜಿಲ್ಲೆಯ ಕಡಬ, ಸುಳ್ಯ ಭಾಗದಲ್ಲಿ ಕೆಲವು ಗ್ರಾಮಗಳಿಗೆ ನಕ್ಸಲರು ಭೇಟಿ ನೀಡಿದ ಬಗ್ಗೆ ವರದಿಯಾಗಿತ್ತು. ಅದೇ ರೀತಿ, ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ತಾಲೂಕಿನ ಕೆಲವೆಡೆ ನಕ್ಸಲರು ಭೇಟಿ ನೀಡಿದ ಸುಳಿವು ದೊರೆತಿತ್ತು. ಕೊಪ್ಪ ತಾಲೂಕಿನ ಕಡೆಗುಂಡಿ ಗ್ರಾಮದ ಸುಬ್ಬೆಗೌಡ ಎಂಬುವರ ಮನೆಯಲ್ಲಿ 3 ಬಂದೂಕುಗಳು ಪತ್ತೆಯಾಗಿದ್ದವು. ಆ ಮನೆಗೆ ನಕ್ಸಲ್ ನಾಯಕಿ ಮುಂಡಗಾರು ಲತಾ ಮತ್ತು ಆಕೆಯ ತಂಡ ಭೇಟಿ ನೀಡಿರುವ ಸುಳಿವು ಸಿಕ್ಕಿತ್ತು. ನಂತರ ನಕ್ಸಲರ ನಿಗ್ರಹ ಪಡೆ ಕಾರ್ಯಾಚರಣೆ ತೀವ್ರಗೊಳಿಸಿದೆ. ಅರಣ್ಯ ಒತ್ತುವರಿ ತೆರವು, ಕಸ್ತೂರಿರಂಗನ್ ವರದಿ ಜಾರಿ ವಿರೋಧಿಸಿ ನಕ್ಸಲರು ಕೊಪ್ಪ, ಶೃಂಗೇರಿ ತಾಲೂಕಿನಲ್ಲಿ ಸಭೆಗಳನ್ನು ನಡೆಸಿರುವ ಶಂಕೆ ವ್ಯಕ್ತವಾಗಿತ್ತು. ಇದೇ ಕಾರಣದಿಂದ ಮಲೆನಾಡು ಹಾಗೂ ಕರಾವಳಿ ಭಾಗದ ಪಶ್ಚಿಮ ಘಟ್ಟದ ಅಂಚಿನ ಗ್ರಾಮಗಳಲ್ಲಿ ನಕ್ಸಲ್ ಚಟುವಟಿಕೆ ಮತ್ತೆ ಹೆಚ್ಚಾಗುತ್ತಿರುವ ಅನುಮಾನಗಳು ವ್ಯಕ್ತವಾಗಿವೆ. ಕರ್ನಾಟಕದ ಮೋಸ್ಟ್ ವಾಂಟೆಡ್ ನಕ್ಸಲ್ ಆಗಿರುವ ವಿಕ್ರಂಗೌಡನ ಮೂಲ ಉಡುಪಿ ಹೆಬ್ರಿ ತಾಲೂಕಿನ ಕೂಡ್ಲು ನಾಡ್ಪಾಲು


ಗ್ರಾಮ. ದಕ್ಷಿಣ ಭಾರತದಲ್ಲಿ ನಕ್ಸಲ್ ಸಂಘಟನೆಯ ನಾಯಕತ್ವ ತಮಿಳುನಾಡು ಮೂಲದ ಕುಪ್ಪುಸ್ವಾಮಿ ವಹಿಸಿಕೊಂಡಿದ್ದರೆ, ರಾಜ್ಯದಲ್ಲಿನ ಜವಾಬ್ದಾರಿ ವಿಕ್ರಂಗೌಡ ಹೆಗಲಿಗೆ ಬಿದ್ದಿತ್ತು. 20ಕ್ಕೂ ಹೆಚ್ಚು ಪ್ರಕರಣಗಳಲ್ಲಿ ●9ನೇ ಪುಟಕ್ಕೆ


ಆಂತರಿಕ ಭದ್ರತಾ ಐಜಿಪಿ ರೂಪಾ ಅವರು ನಕ್ಸಲ್ ವಿರುದ್ಧದ ಕಾರ್ಯಾಚರಣೆ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಪೊಲೀಸರ ಮೇಲೆ ದಾಳಿ ನಡೆಸಿದ್ದರಿಂದ ಎನ್‌ಕೌಂಟರ್ ಅನಿವಾರ್ಯವಾಗಿತ್ತು

ಬೆಂಗಳೂರು, ನ.19– ಪೊಲೀಸರ ಮೇಲೆ ದಾಳಿ ವಿಕ್ರಮ್‌ಗೌಡ ತಂಡ ದಾಳಿ ನಡೆಸಿದ್ದು, ಹೀಗಾಗಿ ಅನಿವಾರ್ಯವಾಗಿ ಎನ್ಕೌಂಟರ್ ನಡೆಸಲಾಗಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಮಂಗಳವಾರ ಹೇಳಿದ್ದಾರೆ. ಮೋಸ್ಟ್ ವಾಂಟೆಡ್ ನಕ್ಸಲ್ ನಾಯಕ ವಿಕ್ರಮ್‌ಗೌಡ ಹತ್ಯೆ ವಿಚಾರವಾಗಿ ಸುದ್ದಿಗಾರರೊಂದಿಗೆ ಮಾತನಾಡಿರುವ ಸಚಿವರು, ಕಳೆದ 20 ವರ್ಷಗಳಿಂದ ಆತನಿಗಾಗಿ ಪೊಲೀಸರು ಹುಡುಕಾಟ ನಡೆಸುತ್ತಿದ್ದರು. ಆದರೆ, ಆತ ತಪ್ಪಿಸಿಕೊಂಡು ಓಡಾಡುತ್ತಿದ್ದ. ಈ ಹಿಂದೆ ನಡೆದ ಅನೇಕ ಎನ್‌ಕೌಂಟರ್‌ಗಳಲ್ಲಿ ವಿಕ್ರಮ್‌ಗೌಡ ತಪ್ಪಿಸಿಕೊಂಡಿದ್ದ. ನಿನ್ನೆ ಸಂಜೆ ವಿಕ್ರಮ್‌ಗೌಡ ಎನ್‌ಕೌಂಟರ್ ಆಗಿದೆ. ● 9ನೇ ಪುಟಕ್ಕೆ


ಪರಮೇಶ್ವರ್



ಮಲಬಾರ್ ಗೋಲ್ಡ್ ಅಂಡ್ ಡೈಮಂಡ್ಸ್‌ನಲ್ಲಿ ಬ್ರೈಡ್ಸ್ ಆಫ್ ಇಂಡಿಯಾ ಫೆಸ್ಟಿವಲ್ ವಧುವಿನ ಆಭರಣಗಳ ವಿಶೇಷ ಪ್ರದರ್ಶನ, ಮಾರಾಟ



ಮೈಸೂರಿನ ಬಿ.ಎನ್.ರಸ್ತೆಯಲ್ಲಿರುವ ಅತಿದೊಡ್ಡ ಚಿನ್ನ ಮತ್ತು ವಜ್ರದ ಶೋರೂಮ್ ಮಲಬಾರ್ ಗೋಲ್ಡ್ ಮತ್ತು ಡೈಮಂಡ್ಸ್ ಶೋ ರೂಂನಲ್ಲಿ 'ಬ್ರೈಡ್ಸ್ ಆಫ್ ಇಂಡಿಯಾ' ಆಭರಣಗಳ ವಿಶೇಷ ಪ್ರದರ್ಶನ, ಮಾರಾಟವನ್ನು ಅನಾವರಣಗೊಳಿಸಲಾಯಿತು.

ಮೈಸೂರು, ನ. 19– ಮೈಸೂರಿನ ಬಿ.ಎನ್.ರಸ್ತೆಯಲ್ಲಿರುವ ಅತಿದೊಡ್ಡ ಚಿನ್ನ ಮತ್ತು ವಜ್ರದ ಶೋರೂಮ್ ಮಲಬಾರ್ ಗೋಲ್ಡ್ ಮತ್ತು ಡೈಮಂಡ್ಸ್ ಶೋ ರೂಂನಲ್ಲಿ ನ. 17 ರಂದು 'ಬ್ರೈಡ್ಸ್ ಆಫ್ ಇಂಡಿಯಾ' ಆಭರಣಗಳ ವಿಶೇಷ ಪ್ರದರ್ಶನ ಮತ್ತು ಮಾರಾಟವನ್ನು ಅನಾವರಣಗೊಳಿಸಲಾಯಿತು.

ಮಲಬಾರ್ ಗೋಲ್ಡ್ ವಿಶೇಷ ಗ್ರಾಹಕರು ಹಾಗೂ ರೂಪದರ್ಶಿಗಳಾದ ಮಿಸ್ ರೇಖಾ, ಮಿಸ್ ಆಶ್ರೀತಾ ಮತ್ತು ಮಿಸ್ ಪ್ರಕೃತಿ, ಮಲಬಾರ್ ಝೋನಲ್ ಹೆಡ್ ಹಾಗೂ ಸ್ಟೋರ್ ಹೆಡ್ ಶ್ರೀ ಶರಫುದ್ದೀನ್ ಮತ್ತು ಇತರ ನಿರ್ವಹಣಾ ಸದಸ್ಯರ ಉಪಸ್ಥಿತಿಯಲ್ಲಿ ಅನಾವರಣಗೊಂಡಿತು.

ಮಲಬಾರ್ ಗೋಲ್ಡ್ & ಡೈಮಂಡ್ಸ್, ವಿಶ್ವದ ಅತಿದೊಡ್ಡ ಮತ್ತು ಅತ್ಯಂತ ವಿಶ್ವಾಸಾರ್ಹ ಆಭರಣ ಸಮೂಹಗಳಲ್ಲಿ ಒಂದಾಗಿದೆ. ಭಾರತದಲ್ಲಿನ ತನ್ನ ಎಲ್ಲಾ ಶೋರೂಮ್‌ಗಳಲ್ಲಿ ಬ್ರೈಡ್ಸ್ ಆಫ್ ಇಂಡಿಯಾ ಫೆಸ್ಟಿವಲ್ ಪ್ರಾರಂಭಿಸಿದೆ. ವಧುವಿನ ಆಭರಣ ಅಭಿಯಾನದ ಭಾಗವಾಗಿ, ಮಲಬಾರ್ ಗೋಲ್ಡ್ & ಡೈಮಂಡ್ಸ್ ಈ ವರ್ಷ ಚಿನ್ನ, ವಜ್ರ, ಪೋಲ್ಕಿ, ಅಮೂಲ್ಯ ರತ್ನದ ಕಲ್ಲುಗಳು ಮತ್ತು ಹೆಚ್ಚಿನವುಗಳಲ್ಲಿ ವಿಶೇಷವಾದ ವಧುವಿನ ಆಭರಣ ಸಂಗ್ರಹಗಳನ್ನು ಹೊರತಂದಿದೆ.

ಡಿ.8ರವರೆಗೆ ನೀಡಿರುವ ವಿಶೇಷ ಆಫರ್ ಅವಧಿಯಲ್ಲಿ, ಮಲಬಾರ್ ಗೋಲ್ಡ್ ಮತ್ತು ಡೈಮಂಡ್ಸ್ ಚಿನ್ನದ ಆಭರಣಗಳ ಮೇಕಿಂಗ್ ಚಾರ್ಜ್‌ನಲ್ಲಿ ಶೇ. 25ರವರೆಗೆ ರಿಯಾಯಿತಿ ಇದೆ. ರತ್ನದ ಕಲ್ಲು ಮತ್ತು ಕತ್ತರಿಸದ ಆಭರಣಗಳ ಮೇಕಿಂಗ್ ಚಾರ್ಜ್‌ನಲ್ಲಿ ಶೇ. 25 ಮತ್ತು ವಜ್ರದ ಮೌಲ್ಯದ ಮೇಲೆ ಶೇ.25ರವರೆಗೆ ರಿಯಾಯಿತಿ ಇದೆ. ಹೆಚ್ಚುವರಿಯಾಗಿ, ಮುಂಗಡ ಬುಕಿಂಗ್ ಸೌಲಭ್ಯವಿದೆ. ಇದರ ಅಡಿಯಲ್ಲಿ ಗ್ರಾಹಕರು ಕನಿಷ್ಠ ಶೇ.10 ಮುಂಗಡವನ್ನು ಪಾವತಿಸಿ ಆಭರಣಗಳನ್ನು ಬುಕ್ ಮಾಡಬಹುದು. ಬುಕ್ ಮಾಡಿದ ದರ ಅಥವಾ ಚಾಲ್ತಿಯಲ್ಲಿರುವ ದರದಲ್ಲಿ ಆಭರಣವನ್ನು ಪಡೆಯಬಹುದು.

ಬ್ರೈಡ್ಸ್ ಆಫ್ ಇಂಡಿಯಾ ಫೆಸ್ಟಿವಲ್ ಕೊಡುಗೆಗಳ ಬಿಡುಗಡೆ ಕುರಿತು ಪ್ರತಿಕ್ರಿಯಿಸಿದ ಮಲಬಾರ್ ಗ್ರೂಪ್‌ನ ಅಧ್ಯಕ್ಷ ಎಂ.ಪಿ.ಅಹಮ್ಮದ್, ಪ್ರತಿ ವರ್ಷ ಪರಿಚಯಿಸುವ ವಿಶಿಷ್ಟ ವಿನ್ಯಾಸದ ಆವಿಷ್ಕಾರಗಳಿಂದಾಗಿ ಬ್ರೈಡ್ಸ್ ಆಫ್ ಇಂಡಿಯಾ ನವ ವಧುವಿನ ಆಭರಣಗಳ ಅಭಿಯಾನವಾಗಿ ಹೊರಹೊಮ್ಮಿದೆ.

ಮೈಸೂರು ಸರ್ಕಾರಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘಕ್ಕೆ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ



2024–29ನೇ ಸಾಲಿನ ಮೈಸೂರು ಸರ್ಕಾರಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಕೆ.ಎನ್.ಅಣ್ಣೇಗೌಡ, ಉಪಾಧ್ಯಕ್ಷರಾಗಿ ಬಿ.ಸಿ.ಲೋಕೇಶ್ ಆಯ್ಕೆಯಾದರು. ಅವರನ್ನು ಸದಸ್ಯರು ಅಭಿನಂದಿಸಿದರು.

ಮೈಸೂರು, ನ.19(ಜಿಎ)–ಮೈಸೂರು ಸರ್ಕಾರಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘದ 2024–29ನೇ ಸಾಲಿನ ನೂತನ ಅಧ್ಯಕ್ಷರಾಗಿ ಕೆ.ಎನ್. ಅಣ್ಣೇಗೌಡ, ಉಪಾಧ್ಯಕ್ಷರಾಗಿ ಬಿ.ಸಿ. ಲೋಕೇಶ್ ಅವಿರೋಧ'ವಾಗಿ ಮಂಗಳವಾರ ಆಯ್ಕೆಗೊಂಡರು.

ಇತ್ತೀಚೆಗೆ ಅನಾರೋಗ್ಯದಿಂದ ಅಧ್ಯಕ್ಷರಾಗಿದ್ದ ಮಹೇಶ್ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ ಹಿನ್ನೆಲೆಯಲ್ಲಿ ಇಂದು ನಡೆದ ಚುನಾವಣೆಯಲ್ಲಿ ಆಡಳಿತ ಮಂಡಳಿ ಸದಸ್ಯರು ಅಧ್ಯಕ್ಷ ಸ್ಥಾನಕ್ಕೆ ಈ ಹಿಂದೆ ಉಪಾಧ್ಯಕ್ಷರಾಗಿದ್ದ ಕೆ.ಎನ್. ಅಣ್ಣೇಗೌಡ ಅವರನ್ನು ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಬಿ.ಸಿ.ಲೋಕೇಶ್ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಿದರು.

ಈ ವೇಳೆ ನೂತನ ಅಧ್ಯಕ್ಷ ಕೆ.ಎನ್. ಅಣ್ಣೇಗೌಡ ಮಾತನಾಡಿ, ಈಗಾಗಲೇ ಸಂಘದಿಂದ 6 ಸಾವಿರಕ್ಕೂ ಅಧಿಕ ನಿವೇಶನ ನೀಡಲಾಗಿದೆ. ಬಾಕಿರುವ 3,500 ಹಿರಿಯ ಸದಸ್ಯರಿಗೆ ನಿವೇಶನ ಒದಗಿಸಿಕೊಡಬೇಕು. ಸಂಘದ ಬಳಿ ಸ್ಥಳವಿದೆ. ಮುಡಾದಿಂದಲೂ ಅನುಮೋದನೆ ಪಡೆದುಕೊಂಡಿದ್ದೇವೆ ಎಂದರು.

ಉಪಾಧ್ಯಕ್ಷ ಬಿ.ಸಿ.ಲೋಕೇಶ್ ಮಾತನಾಡಿ, ಸಂಘದಿಂದ ಸಾಕಷ್ಟು ಯೋಜನೆಗಳನ್ನು ರೂಪಿಸಿ, ಉತ್ತಮ ಸೇವೆ ನೀಡಿದ್ದೇವೆ. ಆದರೆ, ಕೋವಿಡ್‌ನಿಂದ ಕುಂಠಿತಗೊಂಡಿತ್ತು. ಈಗ ಅವುಗಳನ್ನು ಸರಿಪಡಿಸಿಕೊಂಡು ಮತ್ತಷ್ಟು ಉತ್ತಮ ಸೇವೆ ನೀಡುತ್ತೇವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ರಾಮಲಿಂಗಯ್ಯ, ಆರ್.ಜೋಸೆಫ್, ಕೆ.ಎಂ.ಗೋಪಮ್ಮ, ಪಿ.ಕಮಲಮ್ಮ, ಎಂ.ರಾಜಣ್ಣ, ಎಸ್.ಅವಿನಾಶ್, ಎಸ್.ಮಂಜಪ್ಪ, ಶ್ರೀಕೃಷ್ಣ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಕೃಷಿಕ್ ಸರ್ವೋದಯ ಫೌಂಡೇಷನ್‌ನಿಂದ ತರಬೇತಿಗೆ ಸ್ಕಾಲರ್‌ಶಿಪ್ ಸಹಿತ ಅರ್ಜಿ ಆಹ್ವಾನ

ಮೈಸೂರು, ನ. 19 – ಮೈಸೂರಿನ ಕೃಷಿಕ್ ಸರ್ವೋದಯ ಫೌಂಡೇಶನ್ ವತಿಯಿಂದ 2025ನೇ ಸಾಲಿನ ಐಎಎಸ್, ಐಎಫ್‌ಎಸ್ ಪ್ರಿಲಿಮ್ಸ್ ಪರೀಕ್ಷೆಗಳಿಗೆ ಆನ್‌ಲೈನ್ ಮತ್ತು ಆಫ್‌ಲೈನ್ ತರಬೇತಿಯನ್ನು ನ. 25 ರಿಂದ 6 ತಿಂಗಳವರೆಗೆ ಹಮ್ಮಿಕೊಂಡಿದ್ದು, ತರಬೇತಿ ಪಡೆಯುವ ಎಲ್ಲಾ ಅಭ್ಯರ್ಥಿಗಳಿಗೂ ಸಂಸ್ಥೆ ವತಿಯಿಂದ ಸ್ಕಾಲರ್‌ಶಿಪ್ ಅವಕಾಶವಿದ್ದು, ಆಸಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಕೋರಲಾಗಿದೆ. ತರಬೇತಿಯು ಡಿಸೆಂಬರ್ 1ರಂದು ಪ್ರಾರಂಭವಾಗುತ್ತಿದ್ದು, ತರಬೇತಿಗಳನ್ನು ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ನಡೆಸಲಾಗುವುದು. ಆಸಕ್ತರು ಕೃಷಿಕ್ ಸರ್ವೋದಯ ಫೌಂಡೇಷನ್ ಕಚೇರಿಯಲ್ಲಿ ಹೆಸರು ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗೆ ಮೊ. 8296031570, 7892845218 ಸಂಪರ್ಕಿಸಬಹುದು.

ಹಿರಿಯ ಸಾಹಿತಿ ದೇವನೂರು ಮಹದೇವ, ದಲಿತ ಚಳುವಳಿ ಬಗ್ಗೆ ಗೋವಿಂದಯ್ಯ ಹೇಳಿಕೆಗೆ ಖಂಡನೆ

ಮೈಸೂರು,ನ.19(ಜಿಎ)–ಮೈಸೂರಿನಲ್ಲಿ ಇತ್ತೀಚೆಗೆ ಒಳ ಮೀಸಲಾತಿಗೆ ಸಂಬಂಧಿಸಿದಂತೆ ನಡೆದ ಕಾರ್ಯಕ್ರಮವೊಂದರಲ್ಲಿ ದಲಿತ ಮುಖಂಡ ಹೆಚ್.ಗೋವಿಂದಯ್ಯ ಅವರು, ಹಿರಿಯ ಸಾಹಿತಿ ದೇವನೂರು ಮಹಾದೇವ ಹಾಗೂ ದಲಿತ ಚಳವಳಿ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿರುವುದನ್ನು ದಲಿತ ಸಂಘರ್ಷ ಸಮಿತಿ ರಾಜ್ಯ ಶಾಖೆ ತೀವ್ರವಾಗಿ ಖಂಡಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರಾಜ್ಯ ಸಂಘಟನಾ ಸಂಚಾಲಕ ಎನ್. ಮುನಿಸ್ವಾಮಿ, ದೇವನೂರು ಮಹಾದೇವ ಅವರು ತಮಗೆ ಎರಡು ಬಾರಿ ಎಂಎಲ್‌ಸಿ ಆಗುವ ಅವಕಾಶ ಸಿಕ್ಕರೂ ಅದನ್ನು ತಿರಸ್ಕರಿಸಿ ರಾಜಕೀಯದಿಂದ ದೂರ ಉಳಿದಿದ್ದಾರೆ. ಅವರ ಬಗ್ಗೆ ಸಾಹಿತ್ಯ, ಸಾಂಸ್ಕೃತಿಕ, ವೈಚಾರಿಕ, ಪ್ರಗತಿಪರ ಚಳವಳಿ ಕ್ಷೇತ್ರ ಹಾಗೂ ಸಾರ್ವಜನಿಕವಾಗಿ ಅಪಾರ ಪ್ರೀತಿ, ವಿಶ್ವಾಸ, ನಂಬಿಕೆ, ಗೌರವದ ಸದಭಿಪ್ರಾಯವಿದೆ. ಹೀಗಾಗಿ ಇಂತಹ ಮೌಲ್ಯಯುತ ಪ್ರತಿಭಾವಂತರ ವಿರುದ್ಧ ಗೋವಿಂದಯ್ಯ ಅವರು ತಳ ಬುಡವಿಲ್ಲದ ನಿಂದನೆಗೆ ಇಳಿದಿರುವುದು ಅವರ ವಿಕೃತಿ ತೋರುತ್ತದೆ ಎಂದು ಟೀಕಿಸಿದರು.

ಗೋವಿಂದಯ್ಯ ಅವರು ಮೈಸೂರು ವಿವಿ ಬಾಬು ಜಗಜೀವನರಾಂ ಅಧ್ಯಯನ ಮತ್ತು ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರದ ನಿರ್ದೇಶಕ ಪ್ರೊ.ಆರ್.ತಿಮ್ಮರಾಯಪ್ಪ ಅವರ ಸಮ್ಮುಖದಲ್ಲಿ ವಿವಿಗಳ ಅಂಬೇಡ್ಕರ್ ಅಧ್ಯಯನ ಕೇಂದ್ರಗಳು ದಲಿತ ಜಾತಿವಾದಿಗಳ ಕೇಂದ್ರಗಳಾಗಿವೆ ಎಂದು ಸಹಾ ದುರುದ್ದೇಶಪೂರ್ವಕ ಹೇಳಿಕೆ ನೀಡಿದ್ದಾರೆ. ಆರ್‌ಎಸ್‌ಎಸ್‌ನ ವಾದಿರಾಜ್ ಅವರ ಶಿಷ್ಯತ್ವ ಸ್ವೀಕರಿಸಿರುವ ಗೋವಿಂದಯ್ಯ ಆರ್‌ಎಸ್‌ಎಸ್‌ನ ಕೇಶವ ಕೃಪದ ಅಂಗಳದಲ್ಲಿ ನಿಂತು ಮಾತನಾಡುತ್ತಿದ್ದಾರೆ. ಹೀಗಾಗಿ ಇವರಿಂದ ದಲಿತ ಸಮುದಾಯ ಮತ್ತು ಸಮಾಜ ಏನನ್ನು ತಾನೇ ನಿರೀಕ್ಷಿಸಲು ಸಾಧ್ಯ ಎಂದು ಪ್ರಶ್ನಿಸಿದರು.

ರಾಜ್ಯ ಸಂಚಾಲಕ ಗುರುಪ್ರಸಾದ್ ಕೆರಗೋಡು ಮಾತನಾಡಿ, ಒಳ ಮೀಸಲಾತಿಯನ್ನೂ ಯಾರೊಬ್ಬರೂ ವಿರೋಧಿಸಿಲ್ಲ. ಆದರೆ ವೈಜ್ಞಾನಿಕವಾಗಿರಬೇಕೆಂದಷ್ಟೇ ಹೇಳುತ್ತಿದ್ದಾರೆ. ಹೀಗಿದ್ದರೂ ಅನಗತ್ಯ ಗೊಂದಲ ಮೂಡಿಸಲಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು. ಸುದ್ದಿಗೋಷ್ಠಿಯಲ್ಲಿ ಬೆಟ್ಟಯ್ಯಕೋಟೆ, ಎನ್.ವೆಂಕಟೇಶ್, ಆಲಗೂಡು ಶಿವಕುಮಾರ್, ಶಂಭುಲಿಂಗ ಸ್ವಾಮಿ, ಬಿ.ಡಿ.ಶಿವಬುದ್ಧಿ ಉಪಸ್ಥಿತರಿದ್ದರು.

ಪ್ರಧಾನಿ ದಿವಂಗತ ಇಂದಿರಾ ಗಾಂಧಿ ಜನ್ಮ ದಿನಾಚರಣೆ



ಮೈಸೂರಿನ ಹೊಯ್ಸಳ ಟ್ರಸ್ಟ್ ವತಿಯಿಂದ ಗನ್‌ಹೌಸ್ ವೃತ್ತದಲ್ಲಿರುವ ಇಂದಿರಾ ಕ್ಯಾಂಟೀನ್‌ನಲ್ಲಿ ಪ್ರಧಾನಿ ದಿವಂಗತ ಇಂದಿರಾ ಗಾಂಧಿ ಅವರ ಜನ್ಮದಿನಾಚರಣೆ ಅಂಗವಾಗಿ ಸಾರ್ವಜನಿಕರಿಗೆ ಮೈಸೂರು ಪಾಕ್ ವಿತರಿಸಲಾಯಿತು. ಈ ವೇಳೆ ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್, ಹೊಯ್ಸಳ ಟ್ರಸ್ಟ್ ಅಧ್ಯಕ್ಷ ರಾಜೇಶ ಪಳನಿ, ಎಸ್.ಎನ್.ರಾಜೇಶ್, ಜೈ ಭೀಮ್ ಜನಸ್ಪಂದನ ವೇದಿಕೆ ಅಧ್ಯಕ್ಷ ಚೇತನ್ ಕಾಂತರಾಜು, ಲೋಕೇಶ್, ಆಲನಹಳ್ಳಿ ಎಂ.ಎನ್.ಚೇತನ್‌ಗೌಡ, ಸುನೀಲ್, ಕಡಕೊಳ ಶಿವು ಇನ್ನಿತರರು ಈ ವೇಳೆ ಉಪಸ್ಥಿತರಿದ್ದರು.

ವಕೀಲರ ಸಂಘದಿಂದ ಕನಕದಾಸರ ಜಯಂತಿ



ಮೈಸೂರು ಜಿಲ್ಲಾ ನ್ಯಾಯಾಲಯದ ವಕೀಲರ ಸಂಘದ ಆವರಣದಲ್ಲಿ ಕನಕದಾಸರ ಜಯಂತಿ ಆಚರಿಸಲಾಯಿತು. ಈ ವೇಳೆ ಸಂಘದ ಮಾಜಿ ಕಾರ್ಯದರ್ಶಿ ಬಿ.ಶಿವಣ್ಣ, ಹಿರಿಯ ವಕೀಲರಾದ ಸಂಗಮೇಶ್ವರ, ಗುರುಸಿದ್ದಪ್ಪ, ಮಾದೇಗೌಡ, ತೇಜಸ್ವಿ, ಪ್ರದೀಪ ಹಾಗೂ ಮಂಜುಳಾ ಇನ್ನಿತರರು ಉಪಸ್ಥಿತರಿದ್ದರು.

ಮೊಣಕಾಲು ಮರುಜೋಡಣೆ ಉಚಿತ ಶಸ್ತ್ರಚಿಕಿತ್ಸೆ ಪರೀಕ್ಷೆ



ಮೈಸೂರು,ನ.19–ಆದಿಚುಂಚನಗಿರಿ ಪೀಠಾಧ್ಯಕ್ಷರಾದ ಡಾ.ಶ್ರೀ ಬಾಲಗಂಗಾಧರನಾಥ ಸ್ವಾಮೀಜಿಯವರ ಪುಣ್ಯಸ್ಮರಣೆ ಅಂಗವಾಗಿ ಒಕ್ಕಲಿಗ ಯುವ ಬ್ರಿಗೇಡ್ ವತಿಯಿಂದ ಅವಾಂಟ್ ಬಿಕೆಜಿ ಆಸ್ಪತ್ರೆಯಲ್ಲಿ ಮೈಸೂರು ಸುತ್ತಮುತ್ತಲಿನ ಬಡವರಿಗೆ ನ.21ರಿಂದ ಡಿ.7ರವರೆಗೆ ಉಚಿತ ಮೊಣಕಾಲು ಮರುಜೋಡಣೆಯ ಶಸ್ತ್ರಚಿಕಿತ್ಸೆ ಪರೀಕ್ಷೆ ಏರ್ಪಡಿಸಲಾಗಿದೆ. ಆಯ್ಕೆಯಾದ ಮೊದಲ 50 ಜನರಿಗೆ ಉಚಿತ ಮೊಣಕಾಲು ಮರುಜೋಡಣೆಯ ಶಸ್ತ್ರಚಿಕಿತ್ಸೆ ನೆರವೇರಿಸಲಾಗುವುದು. ಹೆಚ್ಚಿನ ಮಾಹಿತಿಗೆ 9606939954, 9663793655, 9686564192 ಸಂಪರ್ಕಿಸಬಹುದು.

ನೇಮಕ



ಶಿವಕುಮಾರ್

ಮೈಸೂರು, ನ. 19– ಕರುನಾಡ ಕಾರ್ಮಿಕರ ವೇದಿಕೆಯ ಮೈಸೂರು ಜಿಲ್ಲಾ ಉಪಾಧ್ಯಕ್ಷರಾಗಿ ಗೌರಿಶಂಕರನಗರದ ನಿವಾಸಿ ಶಿವಕುಮಾರ್ ಅವರನ್ನು ವೇದಿಕೆ ಸಂಸ್ಥಾಪಕ ರಾಜ್ಯಾಧ್ಯಕ್ಷ ಚಂದ್ರೇಗೌಡ ನೇಮಕ ಮಾಡಿದ್ದಾರೆ.

ವನಜಾ ಬಿ. ಪಂಡಿತ್ ಅವರಿಗೆ ಶ್ರದ್ಧಾಂಜಲಿ



ಮೈಸೂರಿನ ಸಿದ್ಧಾರ್ಥನಗರದಲ್ಲಿರುವ ಗೀತಾ ಶಿಶು ಶಿಕ್ಷಣ ಸಂಸ್ಥೆ ಆವರಣದಲ್ಲಿ ಟ್ರಸ್ಟ್ ಅಧ್ಯಕ್ಷರಾದ ಶ್ರೀಮತಿ ವನಜಾ ಬಿ.ಪಂಡಿತ್ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಸಭೆಯಲ್ಲಿ ಟ್ರಸ್ಟ್‌ನ ಪದಾಧಿಕಾರಿಗಳು, ಸದಸ್ಯರು ಉಪಸ್ಥಿತರಿದ್ದರು.

ನ.21, ಮೈಸೂರಲ್ಲಿ 'ಕರುನಾಡ ತಾಯಿ ಸದಾ ಚಿನ್ಮಯಿ' ಸಂಗೀತ ಕಾರ್ಯಕ್ರಮ

ಮೈಸೂರು, ನ.19(ಜಿಎ)–ಮೈಸೂರಿನ ಜನಚೈತನ್ಯ ಫೌಂಡೇಷನ್ ವತಿಯಿಂದ ಕನ್ನಡ ರಾಜ್ಯೋತ್ಸವ ಅಂಗವಾಗಿ ನ.21 ರಂದು ಸಂಜೆ 4ಗಂಟೆಯಿಂದ ರಾತ್ರಿ 9ರವರೆಗೆ ನಗರದ ನಾದಬ್ರಹ್ಮ ಸಂಗೀತ ಸಭಾದಲ್ಲಿ 'ಕರುನಾಡ ತಾಯಿ ಸದಾ ಚಿನ್ಮಯಿ' ಶೀರ್ಷಿಕೆ ಅಡಿಯಲ್ಲಿ ಸಂಗೀತ ಕಾರ್ಯಕ್ರಮ ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಫೌಂಡೇಷನ್ ಅಧ್ಯಕ್ಷ ಆರ್.ಲಕ್ಷ್ಮಣ್ ಈ ವಿಷಯ ತಿಳಿಸಿ, ನಾಗರಾಜ ವಿ.ಭೈರಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಡಾ.ಕೆ.ಎ.ಕೆ. ಸುರೇಂದ್ರನ್, ಅಜರುದ್ದೀನ್, ಡಾ.ರೇಖಾ ಅರುಣ್ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಕರೋಕೆ ಕಾರ್ಯಕ್ರಮವಾಗಿದ್ದು, ಸುಮಾರು 45 ಹಾಡು ಪ್ರಸ್ತುತಪಡಿಸಲಾಗುವುದು ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಜಾಯ್ಸ್ ವೈಶಾಕ್, ರಾಜೇಶ್ ಕಾಲ್ರೋ, ಪೌಲ್ ದೇವಾನಂದ್, ತಿಪ್ಪಯ್ಯ ಉಪಸ್ಥಿತರಿದ್ದರು.

ಪೈಲ್ವಾನ್ ಎಂ.ಮಹದೇವ ಪ್ರಸಾದ್‌ಗೆ ದಿ.ಉಸ್ತಾದ್ ಕರಗಯ್ಯ ಪ್ರಶಸ್ತಿ

ಮೈಸೂರು, ನ.19–ಮಾಜಿ ಮೇಯರ್ ಪೈಲ್ವಾನ್ ಪುರುಷೋತ್ತಮ್ ಅವರ ಅಭಿಮಾನಿ ಬಳಗದ ವತಿಯಿಂದ ನವೆಂಬರ್ 17ರಂದು ದೊಡ್ಡಕೆರೆ ಮೈದಾನದ ದಿ.ದೇವರಾಜ ಅರಸು ಕ್ರೀಡಾಂಗಣದಲ್ಲಿ ನಡೆದ 42 ಜೊತೆ ರಾಷ್ಟ್ರಮಟ್ಟದ ಅಮೋಘ ನಾಡಕುಸ್ತಿ ಪಂದ್ಯಾವಳಿಯಲ್ಲಿ ಅಶೋಕಪುರಂನ ಪೈಲ್ವಾನ್ ಮಹದೇವ ಪ್ರಸಾದ್ ಎಂ. ಅವರು, ಬೆಂಗಳೂರಿನ ಪೈಲ್ವಾನ್ ಗಣೇಶ್ ಅವರನ್ನು ಪರಾಭವಗೊಳಿಸಿ, ದಿ.ಉಸ್ತಾದ್ ಕರಗಯ್ಯರವರ ಪ್ರಶಸ್ತಿ ಹಾಗೂ ಫಲಕವನ್ನು ಪಡೆದರು.

ಪೈಲ್ವಾನ್ ಮಹದೇವ ಪ್ರಸಾದ್ ಅವರು ಅಶೋಕಪುರಂ 12ನೇ ಕ್ರಾಸ್‌ನ ನಿವಾಸಿ ಮಹದೇವು ಹಾಗೂ ಲೇ.ಮಹದೇವಮ್ಮನವರ ಪುತ್ರ. ಅಲ್ಲದೆ, ಅಶೋಕಪುರಂ ಚಿಕ್ಕಗರಡಿ ಪೈಲ್ವಾನ್ ಬಾಲಣ್ಣನವರ ಶಿಷ್ಯರು.




ಶಾಸಕ ಟಿ.ಎಸ್.ಶ್ರೀವತ್ಸರಿಗೆ ಶುಭ ಹಾರೈಕೆ



ಮೈಸೂರು ಪಾಲಿಕೆ ವಲಯ ಕಚೇರಿ 1ರ ಕಟ್ಟಡದಲ್ಲಿ ಉದ್ಘಾಟನೆಗೊಂಡ ಶಾಸಕ ಟಿ.ಎಸ್.ಶ್ರೀವತ್ಸ ಅವರ ನೂತನ ಕಚೇರಿ ಕರ್ತವ್ಯ ಭವನದ ಉದ್ಘಾಟನಾ ಸಮಾರಂಭದಲ್ಲಿ ಚಾಮುಂಡೇಶ್ವರಿ ಕ್ಷೇತ್ರದ ಬಿಜೆಪಿ ಮುಖಂಡರು ಶಾಸಕರಿಗೆ ಶುಭಾಶಯ ಕೋರಿದರು.

ಚಿತ್ರದಲ್ಲಿ ಕ್ಷೇತ್ರದ ನಗರ ಮಂಡಲದ ಅಧ್ಯಕ್ಷ ರಾಕೇಶ್ ಭಟ್, ಉಪಾಧ್ಯಕ್ಷ ಬಿ.ಸಿ.ಶಶಿಕಾಂತ್, ಯುವ ಮೋರ್ಚಾದ ಮಧು ಸೋಮಶೇಖರ್, ಚಂದನ್‌ಗೌಡ, ಚಂದ್ರಶೇಖರ ಸ್ವಾಮಿ, ರಾಘವೇಂದ್ರ, ದೇವರಾಜು, ಮಹಾದೇವ, ರಾಜೀವ್ ಇದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

20.11.2024 ಬುಧವಾರ, ಮಳೆ ನಕ್ಷತ್ರ: ಅನೂರಾಧ, 19.11.2024 ರಿಂದ 01.12.2024 ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಕಾರ್ತಿಕ ಮಾಸ, ಕೃಷ್ಣ ಪಕ್ಷ, ತಿಥಿ: ಪಂಚಮಿ, ನಕ್ಷತ್ರ: ಪುನರ್ವಸು, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

■ **ಮೈಸೂರು ಸಶಸ್ತ್ರ ಪಡೆಗಳ ಮಾಜಿ ಸೈನಿಕರ ಸಂಘ :** ವಾರ್ಷಿಕೋತ್ಸವ ಹಾಗೂ 25ನೇ ಆಪರೇಷನ್ ವಿಜಯ್ ದಿವಸ್ ಆಚರಣೆ, ಮುಖ್ಯ ಅತಿಥಿಗಳು : ಮೇಜರ್ ಜನರಲ್ (ನಿವೃತ್ತ) ಎಸ್.ಜಿ. ಒಂಬತ್ಕೆರೆ, ಜಿಲ್ಲಾ ಉಸ್ತುವಾರಿ ಹವಲ್ದಾರ್ (ನಿವೃತ್ತ) ಪಿ.ಕೆ. ಬಿದ್ದಪ್ಪ, ಸ್ಥಳ: ಬಿಎಸ್‌ಎನ್‌ಎಲ್ ಕಚೇರಿ, ಜಯಲಕ್ಷ್ಮಿಪುರಂ, ಬೆಳಗ್ಗೆ 8 ರಿಂದ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಶ್ರವಣ ಸಮಸ್ಯೆಗಳಿಗೆ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿ ರಸ್ತೆ, ಆಲನಹಳ್ಳಿ, ಬೆಳಗ್ಗೆ 9 ಗಂಟೆಗೆ.

■ **ನವ ಕರ್ನಾಟಕ ಪಬ್ಲಿಕೇಷನ್ ಪ್ರೈವೇಟ್ ಲಿಮಿಟೆಡ್ :** ಕನ್ನಡ ರಾಜ್ಯೋತ್ಸವದ ಪ್ರಯುಕ್ತ ವಿಶೇಷ ರಿಯಾಯಿತಿ ಪುಸ್ತಕ ಮಾರಾಟ, ಸ್ಥಳ: ಚಾಮರಾಜ ಜೋಡಿ ರಸ್ತೆ, ರಾಮಸ್ವಾಮಿ ಸರ್ಕಲ್ ಬೆಳಗ್ಗೆ 9.30 ರಿಂದ.

■ **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ ದಸರೆಯ ಬೊಂಬೆ ಪ್ರದರ್ಶನ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆಯ ಮೇಲೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10 ಗಂಟೆಯಿಂದ.

■ **ನವದೆಹಲಿಯ ಅಭಿವೃದ್ಧಿ ಆಯುಕ್ತರು (ಕೈಮಗ್ಗ) ಜವಳಿ ಸಚಿವಾಲಯದ ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ ಬೆಂಗಳೂರು ಮತ್ತು ಕರ್ನಾಟಕ ರಾಜ್ಯ ಸಹಕಾರಿ ಕೈಮಗ್ಗ ನೇಕಾರರ ಮಹಾಮಂಡಳಿ ನಿಯಮಿತ ಮತ್ತು ಜೆಎಸ್‌ಎಸ್ ಮೈಸೂರು ಅರ್ಬನ್ ಹಾತ್ :** ರಾಜ್ಯ ಕೈಮಗ್ಗ ವಸ್ತು ಪ್ರದರ್ಶನ ಮತ್ತು ಮಾರಾಟ – ಹಾತ್ ಕರ್ಗ್, ಸ್ಥಳ: ಜೆಎಸ್‌ಎಸ್ ಅರ್ಬನ್ ಹಾತ್, ರಿಂಗ್ ರಸ್ತೆ, ಬೆಳಗ್ಗೆ 10 ರಿಂದ.

■ **ವಾತ್ಸಲ್ಯ ಶಿಕ್ಷಣ ಮಹಾವಿದ್ಯಾಲಯ, ಶ್ರೀ ನಟರಾಜ ಸ್ನಾತಕೋತ್ತರ ಅಧ್ಯಯನ ಕೇಂದ್ರ :** ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಸಮಾರೋಪ, ಸಾನ್ನಿಧ್ಯ : ಶ್ರೀ ನಟರಾಜ ಪ್ರತಿಷ್ಠಾನದ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಸಮಾರೋಪ ನುಡಿ : ಮೈಸೂರು ವಿವಿ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ವಿಭಾಗದ ಅಧ್ಯಕ್ಷ ಡಾ. ಎಂ. ಚಂದ್ರಶೇಖರ್, ಅಧ್ಯಕ್ಷತೆ : ಶ್ರೀ ನಟರಾಜ ಪ್ರತಿಷ್ಠಾನ ವಿಶೇಷಾಧಿಕಾರಿ ಪ್ರೊ. ಎಸ್. ಶಿವರಾಜಪ್ಪ, ಉಪಸ್ಥಿತರು : ಪ್ರಿನ್ಸಿಪಾಲ್ ಡಾ. ಎಂ. ಶಾರದ, ವಾತ್ಸಲ್ಯ ಶಿಕ್ಷಣ ಮಹಾವಿದ್ಯಾಲಯ ಪ್ರಿನ್ಸಿಪಾಲ್ ಡಾ. ಮಹೇಶ್ ದಳಪತಿ, ವಾತ್ಸಲ್ಯ ಶಿಕ್ಷಣ ಮಹಾವಿದ್ಯಾಲಯ ಗ್ರಂಥಪಾಲಕರಾದ ಶ್ರೀಮತಿ ಟಿ.ಆರ್. ವಿದ್ಯಾ, ಸ್ಥಳ: ಶ್ರೀ ನಟರಾಜ ಸಭಾಂಗಣ, ಬೆಳಗ್ಗೆ 11ಕ್ಕೆ.

■ **ಮರಿಮಲ್ಲಪ್ಪನವರ ಪದವಿಪೂರ್ವ ಕಾಲೇಜು :** 69ನೇ ಕನ್ನಡ ರಾಜ್ಯೋತ್ಸವ ಸಮಾರಂಭ, ಅಧ್ಯಕ್ಷತೆ : ಮರಿಮಲ್ಲಪ್ಪ ವಿದ್ಯಾಸಂಸ್ಥೆ ಗೌರವ ಕಾರ್ಯದರ್ಶಿ ಕೆ.ಎನ್. ಪಂಚಾಕ್ಷರಿಸ್ವಾಮಿ, ಮುಖ್ಯ ಅತಿಥಿಗಳು : ಪ್ರಿನ್ಸಿಪಾಲ್ ಡಾ. ಸಂತೋಷ್ ಚೊಕ್ಕಾಡಿ, ಬರಹಗಾರ್ತಿ ಶ್ರೀಮತಿ ನೇಮಿಚಂದ್ರ, ಪ್ರಿನ್ಸಿಪಾಲ್ ಡಾ. ಎಸ್.ಕೆ. ಅನಿಲ, ಶೈಕ್ಷಣಾಧಿಕಾರಿ ಶ್ರೀಮತಿ ಮಂಗಳ ಮುದ್ದುಮಾದಪ್ಪ, ಸ್ಥಳ: ಮರಿಮಲ್ಲಪ್ಪನವರ ಸಭಾ ಮಂಟಪ, ಮಧ್ಯಾಹ್ನ 1ಕ್ಕೆ.

■ **ಜಗದ್ಗುರು ಶ್ರೀ ವೀರ ಸಿಂಹಾಸನ ಮಹಾಸಂಸ್ಥಾನ ಮಠ (ಶ್ರೀ ಸುತ್ತೂರು ಕ್ಷೇತ್ರ, ಮೈಸೂರು ಜಿಲ್ಲೆ) :** ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳ ಕರ್ತೃ ಗದ್ದುಗೆ, ಶ್ರೀ ಮಹದೇಶ್ವರ ಸನ್ನಿಧಿ, ಶ್ರೀ ವೀರಭದ್ರೇಶ್ವರ ಮತ್ತು ಶ್ರೀ ಸೋಮೇಶ್ವರ ದೇವಸ್ಥಾನಗಳು, ಕಾರ್ತಿಕ ಮಾಸದ ವಿಶೇಷ ಪೂಜಾ ಕಾರ್ಯಕ್ರಮ, ಸ್ಥಳ: ಮಠದ ಆವರಣ, ಸಂಜೆ.


■ **ಶಾರದಾ ವಿಲಾಸ ಫಾರ್ಮಸಿ ಕಾಲೇಜು :** ರಾಷ್ಟ್ರೀಯ ಫಾರ್ಮಸಿ ಸಪ್ತಾಹ, ಮುಖ್ಯ ಅತಿಥಿಗಳು : ಶಾರದಾ ವಿಲಾಸ ಶಿಕ್ಷಣ ಸಂಸ್ಥೆ ಅಧ್ಯಕ್ಷ ಡಾ.ಬಿ.ಎಂ.ಸುಬ್ರಾಯ, ಡಾ.ಎಸ್.ಪಿ.ಯೋಗಣ್ಣ, ಕಾಲೇಜು ಕಾರ್ಯದರ್ಶಿ ಎನ್. ಚಂದ್ರಶೇಖರ್, ಡಾ. ಸಿ. ನಂದೀಶ್, ಅಧ್ಯಕ್ಷತೆ : ಶಾರದಾ ವಿಲಾಸ ಫಾರ್ಮಸಿ ಕಾಲೇಜು ಪ್ರಿನ್ಸಿಪಾಲ್ ಡಾ. ಹನುಮಂತಾಚಾರ್ ಜೋಷಿ, ಸ್ಥಳ: ಪ್ರೊ. ಚಿನ್ನಸ್ವಾಮಿ ಶೆಟ್ಟಿ ಕಾನ್ಫರೆನ್ಸ್ ಹಾಲ್, ಮಧ್ಯಾಹ್ನ 3ಕ್ಕೆ.

■ **ವಸುಂಧರ ಪ್ರದರ್ಶಕ ಕಲೆಗಳ ಕೇಂದ್ರ, ಮೈಸೂರು :** ವಸುಂಧರೋತ್ಸವ–2024, ನೃತ್ಯ ಕಾರ್ಯಕ್ರಮ, ಸಂಜೆ 6 ರಿಂದ ಡಾ. ಪಿ.ಕೆ. ನಾಗಲಕ್ಷ್ಮಿ ನಾಗರಾಜನ್ (ಡಾ. ವಸುಂಧರ ದೊರೆಸ್ವಾಮಿಯವರ ಶಿಷ್ಯರು); ಸಂಜೆ 6.45 ರಿಂದ ವಿದುಷಿ ನಿತ್ಯಶ್ರೀ ಎಂ.ಎಸ್. ಮತ್ತು ವಿದುಷಿ ಚಿನ್ಮಯಿ ಭಾರದ್ವಾಜ (ವಿದುಷಿ ನಂದಿನಿ ಈಶ್ವರ್ ಮತ್ತು ಪ್ರೊ. ಡಾ. ರೋಹಿನ್ ಈಶ್ವರ್‌ರವರ ಶಿಷ್ಯರು); ಸಂಜೆ 7.30 ರಿಂದ ವಿದ್ವಾನ್ ಶ್ರೀಕಾಂತ್ ಕನವಳ್ಳಿ (ವ್ಯಾಸತೀರ್ಥಾಚಾರ್ಯ) (ನಾಟ್ಯಾಚಾರ್ಯ ಪ್ರೊ. ಕೆ. ರಾಮಮೂರ್ತಿ ರಾವ್‌ರವರ ಶಿಷ್ಯರು); ಗೌರವ ಅತಿಥಿಗಳು : ಶ್ರೀ ರಾಜೇಶ್ವರಿ ವಸ್ತ್ರಾಲಂಕಾರದ ಬಿ.ಎಂ. ರಾಮಚಂದ್ರ, ಸ್ಥಳ: ವಸುಂಧರ ಭವನ, ಕಲಾಂಧಿಕ ಅಕಾಡೆಮಿ ಆಫ್ ಆರ್ಟ್ಸ್.

■ **ಜಗದ್ಗುರು ಶ್ರೀ ಶಿವರಾತ್ರೀಶ್ವರ ವಿದ್ಯಾರ್ಥಿ ನಿಲಯ :** ಅಂತರ ವಿದ್ಯಾರ್ಥಿ ನಿಲಯಗಳ ಚರ್ಚಾ ಸ್ಪರ್ಧೆ, ಸ್ಥಳ: ಜೆಎಸ್‌ಎಸ್ ವಿದ್ಯಾರ್ಥಿ ನಿಲಯ (ಪ್ರಧಾನ ಭವನ), ಆರ್‌ಟಿಓ ಕಚೇರಿ ಹತ್ತಿರ, ವಿ.ವಿ. ರಸ್ತೆ, ಸಂಜೆ 5ಕ್ಕೆ.

■ **ಶ್ರೀ ಸಿದ್ದಪ್ಪಾಜಿ ದೇವಸ್ಥಾನ :** ಶ್ರೀ ಮಹಾಗಣಪತಿ ಶ್ರೀ ಸಿದ್ದಪ್ಪಾಜಿ ಶ್ರೀ ಸುಬ್ರಹ್ಮಣ್ಯಸ್ವಾಮಿ 14ನೇ ವರ್ಷದ ಕುಂಭಾಭಿಷೇಕ ಮಹೋತ್ಸವ, ಬೆಳಿಗ್ಗೆ 9.30 ರಿಂದ ಪೂರ್ಣಾಹುತಿ, ಕುಂಭಾಭಿಷೇಕ ಅಲಂಕಾರ, ಮಹಾಮಂಗಳಾರತಿ, ಮಧ್ಯಾಹ್ನ 12.30ಕ್ಕೆ ತೀರ್ಥಪ್ರಸಾದ ವಿನಿಯೋಗ, ಅನ್ನಸಂತರ್ಪಣೆ, ಮುಖ್ಯ ಅತಿಥಿಗಳು : ಆದಿಚುಂಚನಗಿರಿ ಪೀಠಾಧ್ಯಕ್ಷ ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ಆದಿಚುಂಚನಗಿರಿ ಶಾಖಾ ಮಠದ ಶ್ರೀ ಸೋಮನಾಥ ಸ್ವಾಮೀಜಿ, ನಿವೃತ್ತ ಪ್ರಾಧ್ಯಾಪಕ ಶೈವಾಗಮ ರತ್ನ ವಿದ್ವಾನ್ ಎಂ. ಮಲ್ಲಣ್ಣ, ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಕೆ. ಹರೀಶ್‌ಗೌಡ, ಮಾಜಿ ಶಾಸಕ ಎಲ್. ನಾಗೇಂದ್ರ, ಮಾಜಿ ಮೇಯರ್ ಆರ್. ಲಿಂಗಪ್ಪ, ಪಾಲಿಕೆ ಮಾಜಿ ಸದಸ್ಯರಾದ ಎಂ. ಶಿವಕುಮಾರ್, ನಿಂಗಣ್ಣ, ಕೆ.ಎಂ. ಶಂಕರ್, ಎಸ್. ಬಾಲು, ಚನ್ನಪ್ಪ, ಕೆಂಪಣ್ಣ, ಗೋಪಿ, ಶ್ರೀಮತಿ ಲಕ್ಷ್ಮಿ ಮಾದೇಗೌಡ, ಸ್ಥಳ: ಸಿದ್ದಪ್ಪಾಜಿ ದೇವಸ್ಥಾನ, ಕೆ.ಜಿ. ಕೊಪ್ಪಲು.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ವಾದ್ಯ ವೈಭವ–ಸಂಗೀತ ವಾದ್ಯಗಳ ಪರಿಚಯ ಮಾಲಿಕೆ, ಪ್ರಸ್ತುತಿ: ಚೈತ್ರಿಕಾ. ಎಸ್, 6.40 ಅರಿವಿನ ಶಿಖರ : ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಡಾ. ಪಿ.ಎಸ್. ಮುರಳೀಧರ್, ಎಂ. ಆರ್. ಸುಧಾ, ವ್ಯಾಖ್ಯಾನ–ಡಾ. ಬಿ.ವಿ. ವಸಂತಕುಮಾರ್, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಚಿತ್ರಗೀತೆಗಳು, 9.00 ವೃತ್ತಿ ಮಾರ್ಗದರ್ಶನ 'ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ಹಾಗೂ ಸಂಶೋಧನೆಯ ಅವಕಾಶಗಳು' ಕುರಿತು ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ಹಾಗೂ ಸಂಶೋಧನಾ ವಿಭಾಗದ ಮುಖ್ಯಸ್ಥರಾದ ಡಾ. ಶೆಲ್ವ ಪಿಳ್ಳೈ ಅಯ್ಯಂಗಾರ್ ಇವರೊಂದಿಗೆ ಭಾಗವಹಿಸುತ್ತಾರೆ : ಬೇದ್ರೆ ಮಂಜುನಾಥ್, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ರಾಧಿಕಾ ಮೋಹನ್ ಮೈತ್ರ–ಸರೋದ್ ವಾದನ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.35 ಆಯುಷ್‌ವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, 12.40 ದೇವರನಾಮ, 12.45 ಜನಪದ ಸಂಗೀತ, 1.00 ಸಕ್ಕರೆ ನಾಡಿನ ಅಕ್ಕರೆಯ ಲೇಖಕರು, ಲೇಖನ ಹಾಗೂ ಪ್ರಸ್ತುತಿ: ಶಭಾನ ಮತ್ತು ಕೀರ್ತಿ. ಎಸ್. ಬೈಂದೂರು, ಪರಿಕಲ್ಪನೆ : ಅಬ್ದುಲ್ ರಶೀದ್, 1.20 ಕೋಮು ಏಕತಾ ಸಪ್ತಾಹ–ಅಲ್ಪಸಂಖ್ಯಾತರ ಕಲ್ಯಾಣ, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ನಿರ್ಮಲಾ ರಾಜಶೇಖರ್–ವೀಣಾ ವಾದನ, 4.00 ಮಹಿಳಾರಂಗ–ರಾಜ್ಯೋತ್ಸವ ತಿಂಗಳ ವಿಶೇಷ–ಮಹಿಳಾ ಸಾಧಕಿಯರೊಂದಿಗೆ ಸಂವಾದ, 4.45 ಹಿಂದಿ ಪಾಠ–ಎಸ್. ಈಶ್ವರ್ ಭಟ್, 6.50 ಕೃಷಿರಂಗ : ಕೃಷಿ ದೀವಿಗೆ 'ಸಂಶೋಧನಾ ಸಂಸ್ಥೆಯೊಂದಿಗೆ ಕೃಷಿ ಕಲಿಕೆ' ಕುರಿತ ಬಾನುಲಿ ಸರಣಿ ವಿ.ಸಿ. ಫಾರಂ ಕೃಷಿ ಮೇಳ ಕುರಿತ ನೇರ ಫೋನ್ ಇನ್ ಕಾರ್ಯಕ್ರಮ. ಭಾಗವಹಿಸುತ್ತಾರೆ : ಮಂಡ್ಯದ ವಿ.ಸಿ. ಫಾರಂ ವಲಯ ಕೃಷಿ ಸಂಶೋಧನಾ ಕೇಂದ್ರದ ಸಹ ಸಂಶೋಧನಾ ನಿರ್ದೇಶಕರಾದ ಡಾ. ಎನ್. ಶಿವಕುಮಾರ್, ಪ್ರಸ್ತುತಿ : ಎನ್. ಕೇಶವಮೂರ್ತಿ, 7.45 ನಮ್ಮ ಆರೋಗ್ಯ 'ಆಂಟಿ ಮೈಕ್ರೋಬಿಯಲ್ ರೆಸಿಸ್ಟೆನ್ಸ್ ಜಾಗೃತಿ ಸಪ್ತಾಹದ ಸಂದರ್ಭದಲ್ಲಿ 'ಆಂಟಿ ಮೈಕ್ರೋಬಿಯಲ್ ರೆಸಿಸ್ಟೆನ್ಸ್' ಕುರಿತು ಮೈಸೂರಿನ ಜೆಎಸ್‌ಎಸ್ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಯ ಮೈಕ್ರೋಬಯಾಲಜಿ ವಿಭಾಗದ ಪ್ರೊಫೆಸರ್ ಡಾ.ಎಂ.ಎನ್. ಸುಮನಾ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ : ಬೇದ್ರೆ ಮಂಜುನಾಥ್, 9.30 ಕ್ರೀಡಾಲೋಕ, 10.00 ಜನಪದ ಸಂಗೀತ, 10.30 ಸವಿನೆನಪು

ಬೀಗ ಹಾಕಿದ ಮನೆ ದೋಚಿದ ಕಳ್ಳರು!

ಮೈಸೂರು, ನ.19(ಎಸ್‌ಬಿಡಿ)– ಮನೆಯ ಬೀಗ ಮುರಿದು ನಗದು ಹಾಗೂ ಚಿನ್ನದ ಡಾಲರ್ ಕಳ್ಳತನ ಮಾಡಿರುವ ಘಟನೆ ಮೈಸೂರಿನ ವಿಜಯನಗರದಲ್ಲಿ ನಡೆದಿದೆ.

ವಿಜಯನಗರ 4ನೇ ಹಂತ, ಮೂರನೇ ಘಟ್ಟ, 2ನೇ ಅಡ್ಡರಸ್ತೆ ನಿವಾಸಿ ವಿಶ್ವನಾಥ್ ಹಾಗೂ ಅವರ ಪತ್ನಿ ಕಲಾಶ್ರೀ ಅವರು ನ.15ರಂದು ಸಂಜೆ ಬೆಂಗಳೂರಿಗೆ ತೆರಳಿದ್ದರು. ಕೆಲಸದ ನಿಮಿತ್ತ ವಿಶ್ವನಾಥ್ ಅಲ್ಲಿಯೇ ಉಳಿದುಕೊಂಡಿದ್ದು, ಕಲಾಶ್ರೀ ಅವರು ಸೋಮವಾರ(ನ.18) ಸಂಜೆ ವಾಪಸ್ಸಾದಾಗ ಕಳ್ಳತನವಾಗಿರುವುದು ಗೊತ್ತಾಗಿದೆ.

ಕಿಟಕಿಯ ಲಾಕ್ ಮುರಿದು ಆ ಮೂಲಕ ಬಾಗಿಲು ತೆರೆದು ಒಳ ನುಗ್ಗಿರುವ ಖದೀಮರು, ಕೊಠಡಿಗಳ ಬಾಗಿಲಿಗೆ ಹಾಕಿದ್ದ ಬೀಗಗಳನ್ನೂ ಮುರಿದು, ಬೀರುವಿನಲ್ಲಿದ್ದ 50 ಸಾವಿರ ನಗದು ಹಾಗೂ ಸುಮಾರು 40 ಸಾವಿರ ಮೌಲ್ಯದ ಚಿನ್ನದ ಡಾಲರ್ ಕದ್ದೊಯ್ದಿದ್ದಾರೆ ಎಂದು ಕಲಾಶ್ರೀ ಅವರು ಪೊಲೀಸರಿಗೆ ನೀಡಿರುವ ದೂರಿನಲ್ಲಿ ತಿಳಿಸಿದ್ದಾರೆ. ಈ ಸಂಬಂಧ ವಿಜಯನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮನೆ ಕೀ ಬಚ್ಚಿಟ್ಟಿದ್ದು ತಿಳಿದುಕೊಂಡು ನಗದು, ಚಿನ್ನಾಭರಣ ದೋಚಿದ ಖದೀಮರು!

ಮೈಸೂರು, ನ.19(ಎಸ್‌ಬಿಡಿ)– ಮನೆಯ ಕೀ ಇಟ್ಟಿರುವ ಜಾಗವನ್ನು ತಿಳಿದುಕೊಂಡು ಲಕ್ಷಾಂತರ ರೂ. ನಗದು ಹಾಗೂ ಚಿನ್ನಾಭರಣ ದೋಚಿರುವ ಘಟನೆ ಮೈಸೂರಿನ ಇಲವಾಲ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ಇಲವಾಲ ಹೋಬಳಿ ಮಾದಗಳ್ಳಿ ಗ್ರಾಮದ ನಿವಾಸಿ, ಪಪ್ಪಾಯಿ ವ್ಯಾಪಾರಿ ರಾಮ್‌ಮೋಹನ್ ಮನೆಗೆ ನುಗ್ಗಿ, 2.55 ಲಕ್ಷ ನಗದು ಹಾಗೂ ಸುಮಾರು 32 ಸಾವಿರ ರೂ. ಮೌಲ್ಯದ 8 ಗ್ರಾಂ ಚಿನ್ನದ ಓಲೆಗಳನ್ನು ಖದೀಮರು ದೋಚಿದ್ದಾರೆ.

ರಾಮ್‌ಮೋಹನ್ ಭಾನುವಾರ ಬೆಳಗ್ಗೆ ಎಂದಿನಂತೆ ವ್ಯಾಪಾರಕ್ಕೆ ಹೋಗಿದ್ದರು. ಅವರ ಪತ್ನಿ ಊರಿಗೆ ಹೋಗಿದ್ದರಿಂದ ಪುತ್ರಿ ಮನೆಗೆ ಬೀಗ ಹಾಕಿ, ಕೀಯನ್ನು ಬಾತ್‌ರೂಂನಲ್ಲಿಟ್ಟು ಅತ್ತೆ(ತಂದೆಯ ಸಹೋದರಿ) ಮನೆಗೆ ಹೋಗಿದ್ದಳು. ವ್ಯಾಪಾರ ಮುಗಿಸಿಕೊಂಡು ರಾಮ್‌ಮೋಹನ್ ಅವರೂ ಸಹೋದರಿ ಮನೆಗೆ ಹೋಗಿ ಅಲ್ಲಿಯೇ ತಂಗಿದ್ದರು.

ಸೋಮವಾರ ಬೆಳಗ್ಗೆ ಮನೆ ಬಳಿ ಬಂದು ಬಾತ್‌ರೂಂನಲ್ಲಿಟ್ಟಿದ್ದ ಕೀ ತೆಗೆದುಕೊಂಡು ಬಾಗಿಲು ತೆಗೆದಾಗ ವಸ್ತುಗಳೆಲ್ಲಾ ಚೆಲ್ಲಾಪಿಲ್ಲಿಯಾಗಿ ಬಿದ್ದಿದ್ದವು. ಗಾಬರಿಯಿಂದ ರೂಂಗೆ ಹೋಗಿ ನೋಡಿದಾಗ ಎರಡು ಬೀರುಗಳ ಬಾಗಿಲು ತೆರೆದಿತ್ತು ಪರಿಶೀಲಿಸಿದಾಗ ಅವುಗಳಲ್ಲಿದ್ದ ನಗದು ಹಾಗೂ ಚಿನ್ನಾಭರಣ ಕಳುವಾಗಿದ್ದವು. ಈ ಸಂಬಂಧ ರಾಮ್‌ಮೋಹನ್ ನೀಡಿದ ದೂರಿನನ್ವಯ ಇಲವಾಲ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

ಹಳ್ಳಕ್ಕೆ ಬೈಕ್ ಬಿದ್ದು ಸವಾರ ಸ್ಥಳದಲ್ಲೇ ಸಾವು

ಮೈಸೂರು, ನ.19(ಎಸ್‌ಬಿಡಿ)– ಬೈಕ್ ನಿಯಂತ್ರಣ ತಪ್ಪಿ ಹಳ್ಳಕ್ಕೆ ಬಿದ್ದ ಪರಿಣಾಮ ಸವಾರ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಮೈಸೂರು–ದಡದಹಳ್ಳಿ ಮುಖ್ಯರಸ್ತೆಯಲ್ಲಿ ಭಾನುವಾರ ರಾತ್ರಿ ನಡೆದಿದೆ.

ವಿದ್ಯಾರಣ್ಯಪುರಂ ಸಿವೇಜ್ ಫಾರಂನ ಪೌರಕಾರ್ಮಿಕರ ಕಾಲೋನಿ ನಿವಾಸಿ ರಮೇಶ್(30) ಅಪಘಾತದಲ್ಲಿ ಮೃತಪಟ್ಟವರು. ಸಿವೇಜ್ ಫಾರಂನಲ್ಲಿ ಹೊಸಮನೆ ನಿರ್ಮಾಣ ಮಾಡುತ್ತಿರುವ ಹಿನ್ನೆಲೆಯಲ್ಲಿ ಅವರು ಒಂದೂವರೆ ತಿಂಗಳಿಂದ ಮಂಡಕಳ್ಳಿ ಗ್ರಾಮದಲ್ಲಿ ವಾಸವಿದ್ದರು.

ಮೈಸೂರಿನ ಚಿತ್ರಮಂದಿರವೊಂದರಲ್ಲಿ ಸ್ವಚ್ಛತಾ ಕೆಲಸ ಮಾಡಿಕೊಂಡಿದ್ದ ರಮೇಶ್, ಭಾನುವಾರ ಬೆಳಗ್ಗೆ ಮಂಡಕಳ್ಳಿಯಿಂದ ತಮ್ಮ ಹೀರೋ ಸ್ಪ್ಲೆಂಡರ್ ಪ್ಲಸ್ ಬೈಕ್(ಕೆಎ–09, ಜೆಎಲ್–9840) ಕೆಲಸಕ್ಕೆ ತೆರಳಿದ್ದರು. ರಾತ್ರಿ ಕೆಲಸ ಮುಗಿಸಿಕೊಂಡು ವಾಪಸ್ಸಾಗುವಾಗ ಮೈಸೂರು–ದಡದಹಳ್ಳಿ ರಸ್ತೆ, ಸಿಮೆಂಟ್ ಬ್ರಿಕ್ಸ್ ಫ್ಯಾಕ್ಟರಿ ಬಳಿ ತಿರುವಿನಲ್ಲಿ ನಿಯಂತ್ರಣ ತಪ್ಪಿ ಬೈಕ್ ಸಹಿತ ಹಳ್ಳಕ್ಕೆ ಬಿದ್ದಿದ್ದಾರೆ. ಮರುದಿನ ಬೆಳಗ್ಗೆ ಈ ಘಟನೆ ಬೆಳಕಿಗೆ ಬಂದಿದೆ.

ಈ ಸಂಬಂಧ ರಮೇಶ್ ತಾಯಿ ನೀಡಿದ ದೂರಿನನ್ವಯ ಮೈಸೂರು ದಕ್ಷಿಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು, ಮುಂದಿನ ಕ್ರಮ ಕೈಗೊಳ್ಳಲಾಗಿದೆ.

ವರುಣ ನಾಲೆಯಲ್ಲಿ ಅಪರಿಚಿತ ಮಹಿಳೆ ಶವ ಪತ್ತೆ

ಮೈಸೂರು, ನ.19(ಎಸ್‌ಬಿಡಿ)– ಮೈಸೂರು ಸಮೀಪದ ಮೊಗರಳ್ಳಿ ಮಂಟಿಯ ವರುಣ ನಾಲೆಯಲ್ಲಿ ಮಂಗಳವಾರ ಅಪರಿಚಿತ ಮಹಿಳೆ ಶವ ಪತ್ತೆಯಾಗಿದೆ.

ಮೃತ ಮಹಿಳೆಗೆ ಸುಮಾರು 40 ವರ್ಷವಾಗಿದ್ದು, ಕಪ್ಪು ಬಣ್ಣದ ಚೂಡಿದಾರ್ ಹಾಗೂ ಶೂ ಧರಿಸಿದ್ದಾರೆ. ಆದರೆ ಈವರೆಗೂ ಅವರ ಗುರುತು ಪತ್ತೆಯಾಗಿಲ್ಲ.

ಶವ ಪತ್ತೆಯಾದ ಸ್ಥಳ ಮಂಡ್ಯ ಜಿಲ್ಲೆ, ಶ್ರೀರಂಗಪಟ್ಟಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿದ್ದು, ಸಾರ್ವಜನಿಕರ ಮಾಹಿತಿ ಮೇರೆಗೆ ಅಲ್ಲಿನ ಪೊಲೀಸರು ಸ್ಥಳಕ್ಕೆ ಧಾವಿಸಿ, ಅಗ್ನಿಶಾಮಕ ಸಿಬ್ಬಂದಿ ಸಹಕಾರದೊಂದಿಗೆ ಶವವನ್ನು ನೀರಿನಿಂದ ಮೇಲೆತ್ತಿ, ಮೈಸೂರು ವೈದ್ಯಕೀಯ ಮತ್ತು ಸಂಶೋಧನಾ ಸಂಸ್ಥೆ ಶವಾಗಾರಕ್ಕೆ ಸಾಗಿಸಿದ್ದಾರೆ.

ಈ ಸಂಬಂಧ ಶ್ರೀರಂಗಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಮೃತ ಮಹಿಳೆಯ ವಾರಸುದಾರರು ಠಾಣೆ ಸಂಪರ್ಕಿಸುವಂತೆ ಪೊಲೀಸರು ಮನವಿ ಮಾಡಿದ್ದಾರೆ.

ಪತ್ರಕರ್ತರು ಒಂದು ರೀತಿಯಲ್ಲಿ ಬಿಜೆಪಿ ಗುಲಾಮರು: ರಾಹುಲ್ ಗಾಂಧಿ ಹೇಳಿಕೆಗೆ ಪ್ರೆಸ್ ಕ್ಲಬ್ ಕಿಡಿ

ಮುಂಬೈ, ನ.19– ಮಹಾರಾಷ್ಟ್ರದಲ್ಲಿ ನಡೆಯುತ್ತಿರುವ ವಿಧಾನಸಭೆ ಚುನಾವಣೆಯ ಪ್ರಚಾರ ಸಮಾವೇಶವೊಂದರಲ್ಲಿ ಲೋಕಸಭೆಯ ವಿಪಕ್ಷ ನಾಯಕ ರಾಹುಲ್ ಗಾಂಧಿಯವರು ಪ್ರಧಾನಿ ನರೇಂದ್ರ ಮೋದಿ ವಿರುದ್ಧ ವಾಗ್ದಾಳಿ ನಡೆಸುವಾಗ 'ಪತ್ರಕರ್ತರು ಒಂದು ರೀತಿಯಲ್ಲಿ ಬಿಜೆಪಿ ಗುಲಾಮರು' ಎಂದು ಹೇಳಿರುವುದು ತೀವ್ರ ವಿವಾದಕ್ಕೆ ಕಾರಣವಾಗಿದೆ.

ರಾಹುಲ್ ಗಾಂಧಿ ಹೇಳಿದ್ದೇನು?: ಶನಿವಾರ ಅಮರಾವತಿಯಲ್ಲಿ ಭಾಷಣ ಮಾಡಿದ್ದ ರಾಹುಲ್ ಗಾಂಧಿ, ನಾನು ಮೀಸಲಾತಿ ಮಿತಿ ಹೆಚ್ಚಿಸಬೇಕು ಎಂದು ಹೇಳಿದರೆ ಪ್ರಧಾನಿ ಮೋದಿ ರಾಹುಲ್ ಗಾಂಧಿ ಮೀಸಲಾತಿಗೆ ವಿರುದ್ಧವಾಗಿದ್ದಾರೆ ಎಂದು ಆರೋಪಿಸುತ್ತಾರೆ. ಅದನ್ನು ಮಾಧ್ಯಮಗಳೂ ಪ್ರಶ್ನಿಸದೆ ವರದಿ ಮಾಡುತ್ತವೆ. ಪತ್ರಕರ್ತರು ಬಿಜೆಪಿಗೆ ಸೇರಿದವರೇ ಆಗಿದ್ದಾರೆ. ಅವರು ನನ್ನನ್ನು ನೋಡಿ ನಕ್ಕಾಗ ನನಗೆ ಹೌದೌದು, ನಾವು ಬಿಜೆಪಿಗೆ ಸೇರಿದವರು ಎಂದು ಹೇಳಿದಂತೆ ಅನ್ನಿಸುತ್ತದೆ. ಇದರಲ್ಲಿ ಅವರ ತಪ್ಪಿಲ್ಲ. ಅವರಿಗೆ ಕೆಲಸ ಬೇಕು, ಸಂಬಳ ಬೇಕು, ಮಕ್ಕಳನ್ನು ಸಾಕಬೇಕು, ಶಿಕ್ಷಣ ಕೊಡಿಸಬೇಕು, ಊಟ ಮಾಡಬೇಕು. ಅವರು ತಮ್ಮ ಮಾಲೀಕರ ವಿರುದ್ಧ ಕೆಲಸ ಮಾಡಲು ಸಾಧ್ಯವಿಲ್ಲ. ಒಂದು ರೀತಿಯಲ್ಲಿ ಅವರು ಗುಲಾಮರಿದ್ದಂತೆ ಎಂದು ಹೇಳಿದ್ದರು ಎಂದು ಕೆಲ ಮಾಧ್ಯಮಗಳು ವರದಿ ಮಾಡಿವೆ. ಈ ವರದಿಗಳನ್ನು ಉಲ್ಲೇಖಿಸಿ ಮುಂಬೈ ಪ್ರೆಸ್ ಕ್ಲಬ್ ಖಂಡನೆ ವ್ಯಕ್ತಪಡಿಸಿದೆ.

ರಾಜ್ಯದ ಸಿಇಟಿ, ನೀಟ್, ಜೆಇಇ ಪರೀಕ್ಷಾರ್ಥಿಗಳಿಗೆ 'ಫ್ರೀ ಕೋಚಿಂಗ್'

ಬೆಂಗಳೂರು, ನ.19– ರಾಜ್ಯದಲ್ಲಿನ ಸಿಇಟಿ, ನೀಟ್ ಹಾಗೂ ಜೆಇಇ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಉಚಿತ ಸಿಇಟಿ, ನೀಟ್, ಜೆಇಇ ತರಬೇತಿಗೆ ಪ್ರಾಥಮಿಕ ಶಿಕ್ಷಣ ಹಾಗೂ ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಇಂದು ಚಾಲನೆ ನೀಡಲಿದ್ದಾರೆ. ಇನ್ನು ಮುಂದೆ ರಾಜ್ಯ ಸರ್ಕಾರದಿಂದಲೇ ಉಚಿತ ಕೋಚಿಂಗ್ ನೀಡಲಾಗುತ್ತದೆ. ಬಜೆಟ್ ಅಯವ್ಯಯ ಕಂಡಿಕೆ 101ರಲ್ಲಿ ಘೋಷಿಸಿರುವಂತೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ವಿಜ್ಞಾನ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿರುವ 25,000 ವಿದ್ಯಾರ್ಥಿಗಳಿಗೆ ಸರ್ಕಾರದ ವತಿಯಿಂದ ಉಚಿತವಾಗಿ ಸಿಇಟಿ, ನೀಟ್, ಜೆಇಇ ಆನ್‌ಲೈನ್ ತರಬೇತಿ ಆರಂಭಿಸಲಾಗುತ್ತಿದೆ.

ಮೈಸೂರು ಹಿರಿಯ ಹೋಟೆಲ್ ಉದ್ಯಮಿ ಗೋಪಾಲಕೃಷ್ಣರಾವ್ ನಿಧನ



ಮೈಸೂರು, ನ.19– ಮೈಸೂರಿನ ಹಿರಿಯ ಹೋಟೆಲ್ ಉದ್ಯಮಿ ಪಿ.ಎಸ್.ಗೋಪಾಲಕೃಷ್ಣರಾವ್(87) ಅವರು ಖಾಸಗಿ ಆಸ್ಪತ್ರೆಯಲ್ಲಿ ಮಂಗಳವಾರ ನಿಧನರಾದರು.

ನಂದಿನಿ ಗ್ರೂಪ್ಸ್ ಆಫ್ ಹೋಟೆಲ್ ಮಾಲೀಕರಾಗಿದ್ದ ಇವರು ಮೈಸೂರು ಹೋಟೆಲ್ ಮಾಲೀಕರ ಸಂಘದ ಹಿರಿಯ ಸದಸ್ಯರಾಗಿದ್ದರು. ಹೋಟೆಲ್ ಸೊಸೈಟಿ ಮಾಜಿ ಉಪಾಧ್ಯಕ್ಷರು ಹಾಗೂ ಶ್ರೀ ಕೃಷ್ಣ ಮಿತ್ರಮಂಡಳಿಯ ಹಿರಿಯ ಸದಸ್ಯರಾಗಿದ್ದ ಇವರನ್ನು ರಾಜ್ಯ ಹೋಟೆಲು ಸಂಘವು ಪ್ರತಿಷ್ಠಿತ 'ಆತಿಥ್ಯ ರತ್ನ' ಪ್ರಶಸ್ತಿ ನೀಡಿ, ಗೌರವಿಸಿತ್ತು.

ಇವರು, ನಾಲ್ವರು ಪುತ್ರರು ಹಾಗೂ ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ನಜರ್‌ಬಾದ್ ಸೆಂಚುರಿಯನ್ ಪಾರ್ಕ್ ಬಳಿ ಇರುವ ಅವರ ಪುತ್ರ ಪ್ರವೀಣ್ ನಿವಾಸದ ಬಳಿ ಬುಧವಾರ ಬೆಳಗ್ಗೆ 10 ಗಂಟೆವರೆಗೆ ಪಾರ್ಥಿವ ಶರೀರವನ್ನು ಅಂತಿಮ ದರ್ಶನಕ್ಕಿಟ್ಟು, ನಂತರ ಚಾಮುಂಡಿಬೆಟ್ಟ ತಪ್ಪಲಿನ ರುದ್ರಭೂಮಿಯಲ್ಲಿ ಅಂತಿಮ ಸಂಸ್ಕಾರ ನಡೆಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಗೋಪಾಲಕೃಷ್ಣರಾವ್ ನಿಧನಕ್ಕೆ ಮೈಸೂರು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ ಹಾಗೂ ಪದಾಧಿಕಾರಿಗಳು ಸಂತಾಪ ವ್ಯಕ್ತಪಡಿಸಿದ್ದಾರೆ.

ಚಾಮುಂಡಿಬೆಟ್ಟದ ಪರಿಸರಕ್ಕೆ ಪ್ರತಿಕೂಲ ಚಟುವಟಿಕೆ ಆರೋಪ

ಪರಿಸರವಾದಿ, ವಿವಿಧ ಸಂಘಟನೆ ಮುಖಂಡರಿಂದ ಹಲವು ಮರಗಳನ್ನು ಕಡಿದಿರುವ ಆಪಾದನೆ



ಚಾಮುಂಡಿಬೆಟ್ಟದಲ್ಲಿ ದಾಸೋಹ ಭವನ ಹಿಂಭಾಗದ ಪ್ರದೇಶದಲ್ಲಿ ಮಣ್ಣು ಅಗೆದಿರುವುದು.



ಕೆಲ ಮರದ ಕೊಂಬೆಗಳು ಬಿದ್ದಿರುವುದನ್ನು ಕಾಣಬಹುದು.

ಮೈಸೂರು,ನ.19(ಪಿಎಂ)– ಚಾಮುಂಡಿ ಬೆಟ್ಟದ ದಾಸೋಹ ಭವನದ ಹಿಂಭಾಗ ಬೆಟ್ಟದ ಅರಣ್ಯ ಸಂಪತ್ತಿಗೆ ಮಾರಕವಾಗುವ ಚಟುವಟಿಕೆಗಳು ನಡೆಯುತ್ತಿದ್ದು, ಹಲವು ಮರಗಳನ್ನು ಕಡಿಯಲಾಗಿದೆ. ಆದರೆ ಸಂಬಂಧಿಸಿದ ಅಧಿಕಾರಿ ವರ್ಗ ಮಾತ್ರ ಯಾವುದೇ ಕ್ರಮ ಕೈಗೊಳ್ಳದೇ ಕಣ್ಮುಚ್ಚಿ ಕುಳಿತಿದೆ ಎಂದು ಕೆಲ ಪರಿಸರವಾದಿಗಳು ಮತ್ತು ವಿವಿಧ ಸಂಘಟನೆಗಳ ಮುಖಂಡರು ಆರೋಪಿಸಿದ್ದಾರೆ.

ಸದರಿ ಪ್ರದೇಶದಲ್ಲಿ ಬಂಡೆಗಳನ್ನು ಒಡೆದಿದ್ದು, ಮಣ್ಣನ್ನು ಅಗೆಯಲಾಗಿದೆ. ಜೊತೆಗೆ ಮರಗಳನ್ನು ಕಡಿದು ಹಾಕಿರುವ ಕುರುಹು ಸಹ ಇದೆ. ಪೈಪ್‌ಲೈನ್ ಕಾಮಗಾರಿ ಮಾಡುವ ಉದ್ದೇಶದಿಂದಲೋ ಏನೊ ಬಂಡೆಗಳನ್ನು ಒಡೆಯಲಾಗಿದೆ. ಇಲ್ಲಿ ಏನು ಮಾಡಲಾಗುತ್ತಿದೆ ಎಂದು ವಿಚಾರಿಸಿದರೆ, ಯಾವುದೇ ಅಧಿಕಾರಿಗಳು ಸರಿಯಾದ ಮಾಹಿತಿ ನೀಡುತ್ತಿಲ್ಲವೆಂಬ ಆಪಾದನೆ ಕೇಳಿ ಬಂದಿದೆ. ಪರಿಸರ ಸಂರಕ್ಷಣಾ ಸಮಿತಿ ಅಧ್ಯಕ್ಷ ಭಾನುಮೋಹನ್ ಸೇರಿದಂತೆ ಹಲವರು ಈ ರೀತಿ ಆರೋಪ ಮಾಡಿದ್ದು, ಇನ್ನಾದರೂ ಬೆಟ್ಟದಲ್ಲಿ ಯಾವುದೇ ನಿರ್ಮಾಣ ಕಾಮಗಾರಿಗಳಿಗೆ ಅವಕಾಶ ನೀಡಬಾರದು ಎಂದು ಒತ್ತಾಯಿಸಿದ್ದಾರೆ.

'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಭಾನುಮೋಹನ್, ದಾಸೋಹ ಭಾವನದ ಹಿಂಭಾಗ ಸುಮಾರು 4 ಎಕರೆ ಪ್ರದೇಶದಲ್ಲಿ ಹಲವು ಮರಗಳನ್ನು ಕಡಿಯಲಾಗಿದೆ ಜೊತೆಗೆ ಬಂಡೆಗಳನ್ನು ಒಡೆಯಲಾಗಿದೆ ಇಲ್ಲಿ ಏನು ಮಾಡಲಾಗುತ್ತಿದೆ ಎಂದು ವಿಚಾರಿಸಿದಾಗ, ಯಾವುದೇ ಮರಗಳನ್ನು ಕಡಿದಿಲ್ಲ, ಗಿಡ ಗಂಟಿ ತೆರವು ಮಾಡಲಾಗಿದೆ ಅಷ್ಟೇ ಎಂದು ಅರಣ್ಯ ಇಲಾಖೆಯವರು ತಿಳಿಸಿದ್ದು, ಯಾರೋ ಗೋಶಾಲೆ ಮಾಡುತ್ತಿರುವ ಮಾಹಿತಿ ದೊರೆತಿದೆ ಎಂದು ತಿಳಿಸಿದರು.

ಇಲ್ಲಿನ ಗ್ರಾಪಂನಲ್ಲಿ ವಿಚಾರಿಸಿದರೆ ಅದಕ್ಕೂ ನಮಗೂ ಸಂಬಂಧವೇ ಇಲ್ಲ ಎನ್ನುತ್ತಾರೆ. ನಾನು ಸೇರಿದಂತೆ ಹಲವರು ಸ್ಥಳಕ್ಕೆ ಭೇಟಿ ನೀಡಿದ್ದೆವು. ಈ ಸಂಬಂಧ ಜಿಲ್ಲಾಧಿಕಾರಿಗಳನ್ನೂ ಸಂಪರ್ಕಿಸಲು ಪ್ರಯತ್ನಿಸಿದೆವು. ಆದರೆ ಅದು ಸಾಧ್ಯವಾಗಲಿಲ್ಲ ನಾನು ಹಾಗೂ ಹೃದಯವಂತ ಕನ್ನಡಿಗರ ಬಳಗದ ಡಿಪಿಕೆ ಪರಮೇಶ್, ಕನ್ನಡಾಂಬೆ ವೇದಿಕೆ ಅಧ್ಯಕ್ಷ ರಾಜಶೇಖರ್ ಸಂಗಡಿಗರು ಸ್ಥಳಕ್ಕೆ ಭೇಟಿ ನೀಡಿದ್ದೆವು ಎಂದರು.

ಬೆಟ್ಟ ಸಂರಕ್ಷಿತ ಅರಣ್ಯ ಪ್ರದೇಶವಾಗಿದ್ದು, ಮೆದು ಮಣ್ಣು ಇರುವ ಕಾರಣ, ಯಾವುದೇ ನಿರ್ಮಾಣ ಕಾಮಗಾರಿ ಮಾಡುವುದು ಸೂಕ್ತವಲ್ಲ. ಈಗಾಗಲೇ ಅನೇಕ ಕಾಮಗಾರಿ ಮಾಡಿದ್ದು, ಇನ್ನಾದರೂ ಇದಕ್ಕೆ ಅಂತ್ಯ ಹಾಡಬೇಕು. ಇಲ್ಲವಾದರೆ ಭೂ ಕುಸಿತ ಉಂಟಾಗುವ ಸಾಧ್ಯತೆ ಹೆಚ್ಚಿದ್ದು, ಈಗಾಗಲೇ ನಂದಿ ಪ್ರತಿಮೆ ಬಳಿ ಭೂ ಕುಸಿತ ಉಂಟಾಗಿರುವುದು ನಮ್ಮ ಕಣ್ಣೆದುರೇ ಇದೆ. ವಿಚಾರಿಸಿದ ಎಲ್ಲರೂ ಅದು ಖಾಸಗಿ ಸ್ವತ್ತು ಎಂದು ಕೈ ಚೆಲ್ಲುತ್ತಿದ್ದಾರೆ. ಅರಣ್ಯ ಇಲಾಖೆಯವರು ನಮ್ಮ ಇಲಾಖೆ ವ್ಯಾಪ್ತಿಗೆ ಸದರಿ ಪ್ರದೇಶ ಒಳಪಡುವುದಿಲ್ಲ ಎನ್ನುತ್ತಿದ್ದಾರೆ. ಸದರಿ ಪ್ರದೇಶದಲ್ಲಿ ಯಾವ ರೀತಿಯಲ್ಲಿ ಖಾಸಗಿ ಸ್ವತ್ತು ವ್ಯಾಪ್ತಿಗೆ ಬರುತ್ತದೆ ಎಂಬುದು ನಮಗೆ ಅರ್ಥವಾಗುತ್ತಿಲ್ಲ ಎಂದು ಹೇಳಿದರು.

ಯಾವುದೇ ಮರ ಕಡಿದಿಲ್ಲ: ಸದರಿ ಪ್ರದೇಶವು ಕಂದಾಯ ಭೂಮಿಯಾಗಿದೆ. ನಮ್ಮ ಸಿಬ್ಬಂದಿ ಕಳುಹಿಸಿ ಸ್ಥಳದಲ್ಲಿ ಪರಿಶೀಲನೆ ಸಹ ಮಾಡಿಸಲಾಗಿದೆ. ಸದರಿ ಪ್ರದೇಶದಲ್ಲಿ ಯಾವುದೇ ಮರಗಳನ್ನು ಕಡಿದಿಲ್ಲ. ಗಿಡಗಂಟಿ ತೆರವು ಮಾಡಲಾಗಿದೆಯಷ್ಟೇ. ಜೊತೆಗೆ ಅವರು ಯಾವುದೇ ಕಾಮಗಾರಿ ಮಾಡುತ್ತಿಲ್ಲ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ಪತ್ರಿಕೆಗೆ ತಿಳಿಸಿದರು.

ಪ್ರಾಧಿಕಾರಕ್ಕೆ ಸಂಬಂಧಿಸಿದ್ದಲ್ಲ: ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಎಂ.ಜೆ.ರೂಪ ಮಾತನಾಡಿ, ಅದೊಂದು ಖಾಸಗಿ ಭೂಮಿ. ಪ್ರಾಧಿಕಾರದ ವ್ಯಾಪ್ತಿಗೆ ಅದು ಬರುವುದಿಲ್ಲ. ನಾನು ಸ್ಥಳಕ್ಕೆ ಭೇಟಿ ನೀಡಿದ್ದೆ. ಗೋಶಾಲೆ ಎಂಬ ಫಲಕ ಅಳವಡಿಸಿದ್ದು ಕಂಡು ಬಂದಿತು. ಪ್ರಾಧಿಕಾರದ ಅಧೀನಕ್ಕೊಳಪಡುವ ಸುಮಾರು 12 ಅಡಿ ಜಾಗಕ್ಕೂ ಅವರು ಗೇಟ್ ಅಳವಡಿಸಿದ್ದರು. ಪರಿಶೀಲಿಸಿ ಅದನ್ನು ತೆರವುಗೊಳಿಸಲಾಗಿದೆ. ಉಳಿದಂತೆ ಸ್ಥಳೀಯ ಸಂಸ್ಥೆಯವರಿಗೆ ಈ ವಿಚಾರ ಸಂಬಂಧಿಸಿದ್ದಾಗಿದೆ ಎಂದು ಹೇಳಿದರು.

ಸರ್ವೇ ನಂಬರ್ 22/2ಕ್ಕೆ ಒಳಪಡುವ ಖಾಸಗಿ ವ್ಯಕ್ತಿಗಳ ಸ್ವಂತ ಜಮೀನು

'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಚಾಮುಂಡಿಬೆಟ್ಟ ಗ್ರಾಪಂ ಪಿಡಿಓ ರೂಪೇಶ್, ಅದು ಸರ್ವೇ ನಂಬರ್ 22/2ಕ್ಕೆ ಒಳಪಡುವ ಖಾಸಗಿ ವ್ಯಕ್ತಿಗಳ ಸ್ವಂತ ಜಮೀನು. ಒಟ್ಟು ಮೂವರಿಗೆ ಸಂಬಂಧಿಸಿದ ಜಮೀನು ಇದಾಗಿದೆ. ತಲಾ 27 ಗುಂಟೆ ಇಬ್ಬರಿಗೆ ಸೇರಿದ್ದರೆ, 32 ಗುಂಟೆ ಒಬ್ಬರಿಗೆ ಸೇರಿದೆ. ಈ ಮೂವರು ಸ್ಥಳೀಯರಾಗಿದ್ದು, ಇದೀಗ ಮಂಗಳೂರು ಮೂಲದವರಿಗೆ ಮಾರಾಟ ಮಾಡಿದ್ದಾರೆ ಎಂಬ ಮಾಹಿತಿ ಇದೆ. ಈ ಭೂಮಿ ಕಂದಾಯ ಇಲಾಖೆ ವ್ಯಾಪ್ತಿಗೆ ಬರುವ ಹಿನ್ನೆಲೆಯಲ್ಲಿ ಹೆಚ್ಚಿನ ಮಾಹಿತಿ ನಮ್ಮಲ್ಲಿ ಲಭ್ಯವಿಲ್ಲ ಎಂದು ತಿಳಿಸಿದರು.

ಗೋಶಾಲೆ ಮಾಡುವ ಸಂಬಂಧ ಫಲಕ ಅಳವಡಿಸಿದ್ದಾರೆ. ಕುರುಚಲು ಗಿಡ–ಗಂಟಿ ತೆರವು ಮಾಡಿ, ಅಲ್ಲಿರುವ ಮಣ್ಣಿನಿಂದಲೇ ಸಮತಟ್ಟು ಮಾಡಿರುವುದು ಕಂಡುಬಂದಿದೆ. ಕೆಲಭಾಗದಲ್ಲಿ ಕಾಂಪೌಂಡ್ ನಿರ್ಮಿಸಿದ್ದಾರೆ. ಅಲ್ಲಿ ಯಾವುದೇ ಕಟ್ಟಡ ನಿರ್ಮಿಸುವ ಮಾಹಿತಿ ಇಲ್ಲ ಕಂದಾಯ ಭೂಮಿಯಿಂದ ಪರಿವರ್ತನೆಗೊಳ್ಳದೇ ಸದರಿ ಭೂ ಮಾಲೀಕರು ನಮ್ಮಲ್ಲಿಗೆ ಬರುವ ಅಗತ್ಯವಿಲ್ಲ. ಈಗ ಅದು ವ್ಯವಸಾಯ ಭೂಮಿ ಎಂದೇ ಇದೆ. ವಸತಿ ಉದ್ದೇಶಕ್ಕೆಂದು ಅವರು ಪರಿವರ್ತನೆ ಮಾಡಿಕೊಂಡಲ್ಲಿ ನಮ್ಮ ವ್ಯಾಪ್ತಿಗೆ ಬರಲಿದೆ. ಈಗ ಸದರಿ ಸ್ವತ್ತು ಪಂಚಾಯಿತಿ ವ್ಯಾಪ್ತಿಗೆ ಬರುವುದಿಲ್ಲ ಎಂದು ಹೇಳಿದರು.

ಮೈಸೂರಿನ ವಾಲ್ಮೀಕಿ ರಸ್ತೆಯಲ್ಲಿ ಹೂಗುಚ್ಛ ಮಾರಾಟ ಮಳಿಗೆ ಉದ್ಘಾಟನೆ

ಮೈಸೂರು ಪಾಲಿಕೆಯಿಂದ ಫುಡ್ ಝೋನ್‌ಗೆ ಚಿಂತನೆ: ಶಾಸಕ ಕೆ.ಹರೀಶ್‌ಗೌಡ




ಮೈಸೂರಿನ ವಾಲ್ಮೀಕಿ ರಸ್ತೆಯಲ್ಲಿ ನಗರ ಪಾಲಿಕೆ ವತಿಯಿಂದ ನಿರ್ಮಿಸಿರುವ ಹೂಗುಚ್ಛ ಮಾರಾಟ ಮಳಿಗೆಗಳನ್ನು ಶಾಸಕ ಕೆ.ಹರೀಶ್ ಗೌಡ ಮಂಗಳವಾರ ಉದ್ಘಾಟಿಸಿದರು.

ಮೈಸೂರು, ನ.19(ಜಿಎ)–ಮೈಸೂರಿನ ವಾಲ್ಮೀಕಿ ರಸ್ತೆಯಲ್ಲಿ ನಗರ ಪಾಲಿಕೆ ವತಿಯಿಂದ 35 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಿರುವ ಹೂಗುಚ್ಛ ಮಾರಾಟ ಮಳಿಗೆಗಳನ್ನು ಶಾಸಕ ಕೆ.ಹರೀಶ್‌ಗೌಡ ಮಂಗಳವಾರ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು, ಪಾಲಿಕೆಯ ಅನುದಾನದಲ್ಲಿ ಈ ಮಳಿಗೆಗಳನ್ನು ನಿರ್ಮಾಣ ಮಾಡಿದ್ದು, ಫುಡ್ ಝೋನ್ ಮಾಡುವ ಚಿಂತನೆಯೂ ಇದೆ. ಪಾಲಿಕೆ ಆಯುಕ್ತರ ಆಸಕ್ತಿ ಮತ್ತು ಅಧಿಕಾರಿಗಳ ಉತ್ತಮ ಕಾರ್ಯದಿಂದ ಈ ಹಂತಕ್ಕೆ ತಲುಪಿದೆ ಎಂದರು.

ಹೆಬ್ಬಾಳಿನ ವಾಟರ್ ಟ್ಯಾಂಕ್‌ನ ಬಳಿ ಫುಡ್ ಝೋನ್ ಮಾಡುವ ಚಿಂತನೆ ನಡೆಯುತ್ತಿದೆ. ಹಾಗೇ ಮೈಸೂರಿನ ಎಲ್ಲಾ ಕ್ಷೇತ್ರಗಳಲ್ಲಿ ಅನಗತ್ಯವಾಗಿ ನಿರ್ಮಾಣವಾಗಿರುವ ಮಾರುಕಟ್ಟೆಗಳನ್ನು ಬೀದಿ ಬದಿ ವ್ಯಾಪಾರಿಗಳಿಗೆ ನೀಡುವ ಬಗ್ಗೆ ಇತ್ತೀಚೆಗೆ ನಡೆದ ಸಭೆಯಲ್ಲಿ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಟಿ.ಎಸ್.ಶ್ರೀವತ್ಸ ಅವರು ಚರ್ಚಿಸಿದ್ದು, ಸದ್ಯದಲ್ಲಿಯೇ ಈ ಸಮಸ್ಯೆ ಬಗೆಹರಿದು ಬೀದಿಬದಿ ವ್ಯಾಪಾರಿಗಳಿಗೆ ಅನುಕೂಲವಾಗುವಂತೆ ಅನುವು ಮಾಡಿ ಕೊಡಲಾಗುತ್ತದೆ ಎಂದು ತಿಳಿಸಿದರು.

ಸುಸಜ್ಜಿತವಾಗಿ ನಿರ್ಮಾಣಗೊಂಡಿರುವ ಹೂಗುಚ್ಛಗಳ ಮಳಿಗೆಗಳನ್ನು ಕಂಡು ಸಂತಸಗೊಂಡ ವ್ಯಾಪಾರಿಗಳು ಶಾಸಕ ಹರೀಶ್‌ಗೌಡ ಹಾಗೂ ಪಾಲಿಕೆ ಅಧಿಕಾರಿಗಳಿಗೆ ಧನ್ಯವಾದ ತಿಳಿಸಿ, ಅಭಿನಂದಿಸಿದರು. ಈ ವೇಳೆ ಪಾಲಿಕೆ ಅಧೀಕ್ಷಕಿ ಕೆ.ಜೆ.ಸಿಂಧು, ಪಾಲಿಕೆ ಅಭಿವೃದ್ಧಿ ಅಧಿಕಾರಿ ಮಧುಸೂದನ್ ಉಪಸ್ಥಿತರಿದ್ದರು.



ಪರಮೇಶ್ವರ್‌ಗೆ ಅಭಿನಂದನೆ

ಕಾರ್ಯ ನಿಮಿತ್ತ ಮೈಸೂರಿಗೆ ಆಗಮಿಸಿದ್ದ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರನ್ನು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸಿ.ನರೇಂದ್ರ ನಾಗವಾಲ, ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕನಕಮೂರ್ತಿ ಹಡಜನ, ಮಹೇಶ್ ನಾಗವಾಲ, ಸಿಗಳ್ಳಿ ಕುಮಾರ್, ಸಂತೋಷ್ ಇನ್ನಿತರರು ಆತ್ಮೀಯವಾಗಿ ಅಭಿನಂದಿಸಿದರು.

ಬೆಳಗಾವಿ ಚಳಿಗಾಲದ ಅಧಿವೇಶನ: ಬಿಜೆಪಿ ಅಸ್ತ್ರಕ್ಕೆ ಕಾಂಗ್ರೆಸ್ ಪ್ರತ್ಯಾಸ್ತ್ರ

ಬೆಂಗಳೂರು, ನ.19– ಬೆಳಗಾವಿಯಲ್ಲಿ ಡಿಸೆಂಬರ್ 9 ರಿಂದ ಆರಂಭವಾಗಲಿರುವ ವಿಧಾನಮಂಡಲದ ಅಧಿವೇಶನ ಡಿ.20ವರೆಗೆ ನಡೆಯಲಿದೆ. ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಇಲಾಖೆಯು ಅಧಿವೇಶನ ಕರೆಯುವ ಸಂಬಂಧ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಗೆ ಕಡತ ರವಾನಿಸಿದ್ದು, ಅವರು ಇಂದು (ನವೆಂಬರ್ 19) ಒಪ್ಪಿಗೆ ಸೂಚಿಸಿದ್ದಾರೆ.

ಇತ್ತೀಚೆಗೆ ಸುವರ್ಣ ವಿಧಾನಸೌಧಕ್ಕೆ ಭೇಟಿ ನೀಡಿದ್ದ ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಮತ್ತು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಅಧಿಕಾರಿಗಳ ಸಭೆ ನಡೆಸಿದ್ದರು. ಅಲ್ಲದೆ, ಅಧಿವೇಶನ ನಡೆಸಲು ಅಗತ್ಯವಾದ ಸಿದ್ಧತೆಗಳನ್ನು ಮಾಡುವಂತೆ ಸೂಚನೆ ನೀಡಿದ್ದರು. ರಾಜ್ಯಪಾಲರು ಸಹ ಅಧಿವೇಶನಕ್ಕೆ ಗ್ರೀನ್ ಸಿಗ್ನಲ್ ನೀಡಿದ್ದಾರೆ. ಆದರೆ, ಅವರ ಭಾಷಣ ಈ ಬಾರಿ ಮಹತ್ವ ಪಡೆದುಕೊಳ್ಳಲಿದೆ. ಕಾರಣ, ರಾಜ್ಯಪಾಲರು ಮತ್ತು ಸರ್ಕಾರದ ನಡುವೆ ಮುಡಾ ಸೇರಿದಂತೆ ಕೆಲ ವಿಚಾರಗಳಲ್ಲಿ ಸಂಘರ್ಷ ಏರ್ಪಟ್ಟಿತ್ತು. ಹಾಗೇ ಸರ್ಕಾರದ ವಿರುದ್ಧ ವಿರೋಧ ಪಕ್ಷ ಕೆಲ ದೂರುಗಳನ್ನು ನೀಡಿದೆ. ಇದರಿಂದ ಬೆಳಗಾವಿ ಚಳಿಗಾಲದ ಅಧಿವೇಶದಲ್ಲಿ ರಾಜ್ಯಪಾಲರು ತಮ್ಮ ಭಾಷಣದಲ್ಲಿ ಏನೆಲ್ಲಾ ಹೇಳಲಿದ್ದಾರೆ ಎನ್ನುವುದು ಕುತೂಹಲ ಮೂಡಿಸಿದೆ.

ಸರ್ಕಾರದ ವಿರುದ್ಧ ಮುಗಿಬೀಳಲು ವಿಪಕ್ಷ ಸನ್ನದ್ಧ: ಇನ್ನು ಬೆಳಗಾವಿ ಅಧಿವೇಶನದಲ್ಲಿ ಸರ್ಕಾರದ ವಿರುದ್ಧ ಮುಗಿಬೀಳಲು ವಿಪಕ್ಷ ಬಿಜೆಪಿ ಮತ್ತು ಜೆಡಿಎಸ್ ಸನ್ನದ್ಧವಾಗಿವೆ. ಈಗಾಗಲೇ ಸಾಲು ಸಾಲು ಆರೋಪಗಳನ್ನು ಮಾಡಿರುವ ವಿಪಕ್ಷಗಳು ಅವುಗಳನ್ನೇ ಅಸ್ತ್ರವಾಗಿ ಮಾಡಿಕೊಂಡು ಸದನದಲ್ಲಿ ಧ್ವನಿ ಎತ್ತಲಿವೆ. ಮುಡಾ ಹಾಗೂ ವಾಲ್ಮೀಕಿ ಹಗರಣ ಈಗಾಗಲೇ ಕಳೆದ ಮುಂಗಾರು ಅಧಿವೇಶನದಲ್ಲಿ ಚರ್ಚೆಯಾಗಿದೆ ಈಗ ಹೊಸದಾಗಿ ವಕ್ಫ್ ವಿವಾದ, ಬಿಪಿಎಲ್ ಕಾರ್ಡ್ ರದ್ದು ಸೇರಿದಂತೆ ಇತರೆ ಅಂಶಗಳನ್ನು ಮುಂದಿಟ್ಟುಕೊಂಡು ಸದನದಲ್ಲಿ ಅರ್ಭಟಿಸಲು ಸಜ್ಜಾಗಿವೆ.

ವಿಪಕ್ಷಗಳಿಗೆ ತಿರುಗೇಟು ಕೊಡಲು ಸರ್ಕಾರ ಸಿದ್ಧ ಈಗಾಗಲೇ ಸರ್ಕಾರದ ವಿರುದ್ಧ ಸಾಲು ಸಾಲು ಆರೋಪ ಮಾಡಿರುವ ಬಿಜೆಪಿ, ಸದನದಲ್ಲೂ ಧ್ವನಿ ಎತ್ತುವುದು ಖಚಿತ ಎಂದು ಗೊತ್ತಾಗುತ್ತಿದ್ದಂತೆಯೇ ಇತ್ತ ಸಿಎಂ ಸಿದ್ದರಾಮಯ್ಯ ಎಚ್ಚೆತ್ತುಕೊಂಡಿದ್ದಾರೆ. ಈ ಸಂಬಂಧ ನಿನ್ನೆ (ನವೆಂಬರ್ 18) ಹಿರಿಯ ಸಚಿವ ಜೊತೆ ಮಹತ್ವದ ಸಭೆ ನಡೆಸಿದ್ದು, ವಿಪಕ್ಷಗಳಿಗೆ ಹೇಗೆಲ್ಲಾ ತಿರುಗೇಟು ನೀಡಬೇಕೆನ್ನುವ ಬಗ್ಗೆ ಸಚಿವರಿಗೆ ಪಾಠ ಮಾಡಿದ್ದಾರೆ. ಅಲ್ಲದೇ ರಾಜ್ಯಾದ್ಯಂತ ತೀವ್ರ ಆಕ್ರೋಶಕ್ಕೆ ಕಾರಣವಾಗಿರುವ ಬಿಪಿಎಲ್ ಕಾರ್ಡ್ ಗೊಂದಲ ಬೇಗ ಬಗೆಹರಿಸುವಂತೆ ಸಚಿವ ಮುನಿಯಪ್ಪ ಅವರಿಗೆ ಖಡಕ್ ಸೂಚನೆ ನೀಡಿದ್ದಾರೆ.

ಇನ್ನು ಸರ್ಕಾರ ವಿರುದ್ಧ ಹಗರಣ ಬಗ್ಗೆ ಬಿಜೆಪಿ ಧ್ವನಿ ಎತ್ತಿದರೆ ಇದಕ್ಕೆ ಪ್ರತಿಯಾಗಿ ಕೋವಿಡ್ ಹಗರಣವನ್ನು ಎತ್ತಲು ಸರ್ಕಾರ ಮುಂದಾಗಿದೆ. ಹೀಗೆ ವಿಪಕ್ಷಗಳ ಆರೋಪಗಳಿಗೆ ತಕ್ಕನಾಗಿ ತಿರುಗೇಟು ನೀಡಲು ಸಿದ್ದರಾಮಯ್ಯ ಸರ್ಕಾರ ಎಲ್ಲಾ ರೀತಿಯ ತಯಾರಿ ಮಾಡಿಕೊಳ್ಳಲುತ್ತಿದೆ.

ಹೀಗಾಗಿ ಈ ಬಾರಿ ಚಳಿಗಾಲದ ಅಧಿವೇಶನ ತೀವ್ರ ಸ್ವರೂಪ ಪಡೆದುಕೊಳ್ಳಲಿದ್ದು, ಸದನ ಕೋಲಾಹಲವಾಗುವುದರಲ್ಲಿ ಅನುಮಾನವೇ ಇಲ್ಲ ಇನ್ನು ಪ್ರಮುಖವಾಗಿ ಉತ್ತರ ಕರ್ನಾಟದ ಸಮಸ್ಯೆ ಬಗ್ಗೆ ಚರ್ಚೆ ಮಾಡಲು ಬೆಳಗಾವಿಯಲ್ಲಿ ಚಳಿಗಾಲ ಅಧಿವೇಶನ ನಡೆಸಲಾಗುತ್ತದೆ ಎಂದು ಈಗಾಗಲೇ ಸ್ಪೀಕರ್ ಹೇಳಿದ್ದಾರೆ. ಆದ್ರೆ, ಸರ್ಕಾರ ಮತ್ತು ವಿಪಕ್ಷಗಳ ಆರೋಪ–ಪ್ರತ್ಯಾರೋಪ ಮಧ್ಯ ಎಷ್ಟರಮಟ್ಟಿಗೆ ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚೆಯಾಗುತ್ತವೆ ಎನ್ನುವುದನ್ನು ಕಾದುನೋಡಬೇಕಿದೆ.

ವಿವಿಗಳು, ಪದವಿ ಕಾಲೇಜಲ್ಲಿ ಬೋಧಕರಿಲ್ಲದೆ ಶಿಕ್ಷಣ ಗುಣಮಟ್ಟ ಪಾತಾಳಕ್ಕಿಳಿದಿದೆ

ರಾಜ್ಯ ಸಂಗೀತ ವಿವಿ ಕುಲಪತಿ ನಾಗೇಶ್ ವಿ.ಬೆಟ್ಟಕೋಟೆ ವಿಷಾದ



14 ದಿನಗಳ ರಂಗ ತರಬೇತಿ ಶಿಬಿರದಲ್ಲಿ ಕರ್ನಾಟಕ ರಾಜ್ಯ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿವಿ ಉಪಕುಲಪತಿ ನಾಗೇಶ್ ವಿ.ಬೆಟ್ಟಕೋಟೆ ಮಾತನಾಡುತ್ತಿರುವುದು.

ಮೈಸೂರು, ನ.19(ಎಸ್‌ಪಿಎನ್)– ವಿವಿ ಮತ್ತು ಪದವಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಅನುಪಾತಕ್ಕೆ ಅನುಗುಣವಾಗಿ ಬೋಧಕರ ನೇಮಕವಾಗುತ್ತಿಲ್ಲ. ಪ್ರಸ್ತುತ ಸ್ನಾತಕೋತ್ತರ ಶಿಕ್ಷಣದ ಗುಣಮಟ್ಟ ಪಾತಾಳಕ್ಕಿಳಿದಿದೆ ಎಂದು ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿವಿ ಉಪಕುಲಪತಿ ನಾಗೇಶ್ ವಿ.ಬೆಟ್ಟಕೋಟೆ ಬೇಸರ ಹೊರಹಾಕಿದ್ದಾರೆ.

ಮೈಸೂರು ಕೃಷ್ಣಮೂರ್ತಿಪುರಂನ ನಮನ ಕಲಾಮಂಟಪದಲ್ಲಿ ಪರಿವರ್ತನ ಸಂಸ್ಥೆ, ನಮನ ಕಲಾವೇದಿಕೆ ಹಾಗೂ ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿವಿ ಸಹಯೋಗದೊಂದಿಗೆ ಏರ್ಪಡಿಸಿರುವ 14 ದಿನಗಳ ರಂಗ ತರಬೇತಿ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ದೇಶದ ಪ್ರಗತಿ ಎಂದರೆ, ರೋಡ್, ಕಟ್ಟಡ ಮಾತ್ರವಲ್ಲ. ಯುವಕರಿಗೆ ಉನ್ನತ ಶಿಕ್ಷಣ ನೀಡುವುದೂ ಪ್ರಗತಿಯ ಭಾಗ. ಕಟ್ಟಡ ಕಟ್ಟಿದರೆ, ರಸ್ತೆ ಮಾಡಿದರೆ, ಸಂಬಂಧಪಟ್ಟವರು ಸರ್ಕಾರದ ಪ್ರತಿನಿಧಿಗಳಿಗೆ ಕಮಿಷನ್ ಕೊಡುತ್ತಾರೆ. ಯುವಕರಿಗೆ ವಿದ್ಯೆ ಕೊಟ್ಟರೆ ಕಮಿಷನ್ ಯಾರು ಕೊಡುತ್ತಾರೆ. ಅದಕ್ಕೆ ಉನ್ನತ ಶಿಕ್ಷಣವನ್ನು ನಮ್ಮನ್ನಾಳುವ ಸರ್ಕಾರಗಳು ಸಂಪೂರ್ಣ ಕಡೆಗಣಿಸಿವೆ ಎಂದು ಆರೋಪಿಸಿದರು.

ಸಂಶೋಧಕರು, ಉನ್ನತ ಶಿಕ್ಷಣ ಪೂರೈಸಿದ ಯುವಕರಿಲ್ಲದಿದ್ದರೆ ದೇಶದ ಪ್ರಗತಿ ಸಾಧ್ಯವೆ? ಎಂದು ಪ್ರಶ್ನಿಸಿದ ಅವರು, ಕೇವಲ ಕಟ್ಟಡ ಕಟ್ಟಿ, ಬೋಧಕರನ್ನು ನೇಮಕ ಮಾಡದಿದ್ದರೆ, ಕಟ್ಟಡ ಕಟ್ಟಿಯೂ ವ್ಯರ್ಥ. ಕಳೆದ ಹದಿನೈದು ವರ್ಷಗಳಿಂದ ರಾಜ್ಯದ ವಿವಿಗಳಿಗೆ ಬೋಧಕರ ನೇಮಕವಾಗುತ್ತಿಲ್ಲ. ಪದವಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿದ್ದರೂ ಬೋಧಕರಿಲ್ಲ. ಇದರಿಂದ ವಿದ್ಯಾರ್ಥಿಗಳ ಗುಣಮಟ್ಟದ ಶಿಕ್ಷಣಕ್ಕೆ ಒತ್ತು ನೀಡದಿದ್ದರೆ ಏನು ಪ್ರಯೋಜನ. ಹಾಗಾಗಿ ಅತಿಥಿ ಪ್ರಾಧ್ಯಾಪಕರ ಮೇಲೆ ಅವಲಂಬನೆ ಅನಿವಾರ್ಯ ಎಂದರು.

ರಂಗಭೂಮಿಯಲ್ಲಿ ತೊಡಗಿಸಿಕೊಳ್ಳುವ ಪ್ರತಿಯೊಬ್ಬ ವ್ಯಕ್ತಿಯ ನಡೆ ಮೃದುವಾಗುತ್ತದೆ. ಮಗುವಿನಂತಹ ಗುಣಗಳನ್ನು ಹೊಂದಲು ಸಹಕಾರಿ. ಹಾಗಾಗಿ ಕಾಲೇಜು ವಿದ್ಯಾರ್ಥಿಗಳು ಓದಿನ ಜೊತೆಗೆ ರಂಗಭೂಮಿಯಲ್ಲೂ ಮುಂದಿನ ದಿನಗಳಲ್ಲಿ ತೊಡಗಿಸಿಕೊಳ್ಳುವಂತೆ ಸಲಹೆ ನೀಡಿದರು.

ಈ ವೇಳೆ ಬಾಸುದೇವ ಸೋಮಾನಿ ಕಾಲೇಜು ನಿವೃತ್ತ ಪ್ರಾಂಶುಪಾಲ ಪ್ರೊ.ಎಸ್.ಆರ್.ರಮೇಶ್, ಹಿರಿಯ ರಂಗಕರ್ಮಿ ಮಾಧವ್ ಖರೆ, ನಮನ ಕಲಾವೇದಿಕೆಯ ಅಧ್ಯಕ್ಷೆ ಅನುರಾಧ ನಂದಕುಮಾರ್ ಸೇರಿದಂತೆ ಇತರರಿದ್ದರು. ಶಿಬಿರದ ವಿದ್ಯಾರ್ಥಿಗಳಾದ ಸ್ನೇಹ, ಬಸವೇಶ್, ವಿನೇಶ್, ಭೂಮಿ, ಚಂದ್ರ ಅಧಿಪತಿ, ನಾಗೇಶ್, ರಾಜೀವ್, ನಂದಿನಿ ಉಪಸ್ಥಿತರಿದ್ದರು.

ನಕ್ಕರೆ ಅದೇ ಸ್ವರ್ಗ

ಕಾರಿನ ಡ್ರೈವರ್ : ಸಾಹೇಬ್ರೆ, ಪೆಟ್ರೋಲ್ ಖಾಲಿಯಾಗಿ ಹೋಗಿದೆ...! ಮುಂದೆ ಹೋಗಲ್ಲ.

ಮಾಲೀಕ : ಸರಿ, ಹಾಗಾದ್ರೆ ಮನೆಗೆ ವಾಪಸ್ ನಡಿ...

ಮೈಸೂರು ಮಿತ್ರ

ಬುಧವಾರ, 20 ನವೆಂಬರ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ..........

ಯಾವುದೇ ಸಂಬಂಧದಲ್ಲಿ ಅರ್ಥವಾಗುವ ಮುಂಚೆ ಹತ್ತಿರವಾಗಬಾರದು.
ಹತ್ತಿರವಾದ ಮೇಲೆ ಅಪಾರ್ಥ ಮಾಡಿಕೊಳ್ಳಬಾರದು.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಉತ್ತಮವಾದ ನಗು ನೇಸರನ ಮಗು.

ನಿಮ್ಮ ಪತ್ರಗಳು

■ ಚಳಿಗಾಲದಲ್ಲಿ ಹಿರಿಯರ ಆರೋಗ್ಯ ರಕ್ಷಣೆ ಒಂದು ಸವಾಲು

ಮಾನ್ಯರೇ,

ವ್ಯಕ್ತಿಯು ವೃದ್ಧಾಪ್ಯದತ್ತ ತೆವಳುತ್ತಿರುವಂತೆ ಪೌಷ್ಟಿಕ ಆಹಾರ ಸೇವನೆಯ ಬಗ್ಗೆ ಕಾಳಜಿ ವಹಿಸುವುದು ಉತ್ತಮ. ಚಳಿಗಾಲದಲ್ಲಿ ದೇಹದಲ್ಲಿ ರೋಗ ನಿರೋಧಕ ಶಕ್ತಿ ಕಡಿಮೆಯಾಗುತ್ತದೆ. ದೇಹ ಶುಷ್ಕವಾಗುತ್ತದೆ ಹಾಗೂ ತೇವಾಂಶವನ್ನು ಕಳೆದುಕೊಳ್ಳುತ್ತದೆ. ಆದ್ದರಿಂದ ಚಳಿಗಾಲದಲ್ಲಿ ಹೆಚ್ಚು ಎಚ್ಚರಿಕೆಯ ಅಗತ್ಯವಿರುತ್ತದೆ. ಹೆಚ್ಚು ಜನರು ಚಳಿಗಾಲದಲ್ಲಿ ಜ್ವರ, ಶೀತ, ಕೆಮ್ಮುಗಳಿಂದ ಬಳಲುತ್ತಿರುತ್ತಾರೆ. ಈ ಸಮಸ್ಯೆಗಳಿಂದ ದೂರ ಉಳಿಯಲು ಸಮತೋಲಿತ ಆಹಾರದ ವೇಳಾಪಟ್ಟಿ ಬಹುಮುಖ್ಯ. ಚಳಿಗಾಲದಲ್ಲಿ ಹಣ್ಣುಗಳಾದ ಕಿತ್ತಳೆ, ಮೋಸಂಬಿ, ಸೇಬು. ತರಕಾರಿಗಳಾದ ಕ್ಯಾರೆಟ್, ಬಟಾಣಿ, ಮೂಲಂಗಿ ಹಾಗೂ ಸೊಪ್ಪುಗಳಾದ ಪಾಲಕ್ ಸೊಪ್ಪು, ಬಸಳೆ ಸೊಪ್ಪು, ಮೆಂತ್ಯ ಸೊಪ್ಪು, ಸಾಸಿವೆ ಎಲೆಗಳನ್ನು ಹಾಗೂ ಕಡಲೆ ಬೀಜವನ್ನು ಹೆಚ್ಚಾಗಿ ಉಪಯೋಗಿಸಿದರೆ ಬಹಳ ಒಳ್ಳೆಯದು. ಶುಷ್ಕ ವಾತಾವರಣದ ಈ ಸಮಯದಲ್ಲಿ ಜಿಡ್ಡಿನ ಅಂಶವುಳ್ಳ ಹಾಲು, ಮಜ್ಜಿಗೆ, ತುಪ್ಪ ಕೆನೆಯನ್ನು ನಿಯಮಿತವಾಗಿ ಸೇವಿಸುವುದರ ಜೊತೆಗೆ ನೀರನ್ನು ಹೆಚ್ಚು ಕುಡಿಯಬೇಕು.

ಹೃದಯದ ಸಮಸ್ಯೆ ಎನ್ನುವುದು ಯಾವುದೇ ಲಿಂಗ ಅಥವಾ ವಯಸ್ಸು ನೋಡಿ ಬರುವುದಿಲ್ಲ. ಹೃದಯ ಸಂಬಂಧಿ ಕಾಯಿಲೆಗಳು ಇಂದಿನ ದಿನಗಳಲ್ಲಿ ಸಾಮಾನ್ಯ. ಆದ್ದರಿಂದ ಚಳಿಗಾಲದಲ್ಲಿ ನವಿಲುಕೋಸು (ಗೆಡ್ಡೆಕೋಸು)ಸೇವನೆ ಮಾಡಿದರೆ ಅದು ಹೃದಯವನ್ನು ರಕ್ಷಿಸುತ್ತದೆ ಎಂಬುದು ಅಧ್ಯಯನದಿಂದ ತಿಳಿದುಬಂದ ವಿಚಾರವಾಗಿದೆ.

ಚಳಿಗಾಲದಲ್ಲಿ ವಾತಾವರಣದ ತಾಪಮಾನ ಇಳಿಕೆಯಾಗುವಂತೆ ದೇಹದ ತಾಪಮಾನವು ಇಳಿಯುತ್ತದೆ. ಚಳಿಗಾಲದಲ್ಲಿ ಸೋಂಕುಗಳು ವೇಗವಾಗಿ ಹರಡುತ್ತವೆ. ಆದ್ದರಿಂದ ಬೆಚ್ಚಗಿನ ಬಟ್ಟೆ ಧರಿಸಿ ಬೆಚ್ಚಗಿನ ವಾತಾವರಣವನ್ನು ಸೃಷ್ಟಿ ಮಾಡಿಕೊಳ್ಳುವುದು ಒಳಿತು. ಚಳಿಗಾಲದಲ್ಲಿ ನೀರಿನಿಂದ ಉಂಟಾಗುವ ಕಾಯಿಲೆಗಳು ಹೆಚ್ಚು. ಆದ್ದರಿಂದ ಚೆನ್ನಾಗಿ ಕುದಿಸಿ ಆರಿಸಿದ ನೀರನ್ನು ಸೇವಿಸಬೇಕು.

ಹೊರಗಿನ ಆಹಾರ ತಿನ್ನುವುದನ್ನು ಆದಷ್ಟು ಕಡಿಮೆ ಮಾಡಬೇಕು. ಫ್ರಿಡ್ಜ್‌ನಲ್ಲಿ ಇಟ್ಟ ಆಹಾರ ಸೇವಿಸಕೂಡದು. ಅತ್ಯಂತ ತಣ್ಣನೆಯ ಆಹಾರ ಮತ್ತು ಪಾನೀಯಗಳನ್ನು ಸದ್ಯದ ಪರಿಸ್ಥಿತಿಯಲ್ಲಿ ತ್ಯಜಿಸಿದರೆ ಒಳಿತು. ಎಲ್ಲಕ್ಕಿಂತ ಮುಖ್ಯವಾಗಿ ನಿಯಮಿತ ವ್ಯಾಯಾಮ ಬಹು ಮುಖ್ಯ .ಸದಾ ಕಾಲ ಚಟುವಟಿಕೆಯಿಂದ, ಸಂತೋಷದಿಂದ ಇದ್ದರೆ ಹಿರಿಯರ ಆರೋಗ್ಯ ವೃದ್ಧಿಯಾಗುತ್ತದೆ.

–ಕೆಂಡಗಣ್ಣಸ್ವಾಮಿ, ಸರಗೂರು ತಾಲೂಕು, ಮೈಸೂರು ಜಿಲ್ಲೆ

■ ಕಠಿಣ ಶಿಕ್ಷೆಯಾಗಲಿ

ಮಾನ್ಯರೆ,

ವೀಕೆಂಡ್ ಪ್ರವಾಸ ಹೋಗಿದ್ದ ಮೈಸೂರಿನ ಮೂವರು ಎಂಜಿನಿಯರಿಂಗ್ ವಿದ್ಯಾರ್ಥಿನಿಯರು ಮಂಗಳೂರು ಹೊರವಲಯದ ರೆಸಾರ್ಟ್‌ನ ಈಜುಕೊಳದಲ್ಲಿ ಮುಳುಗಿ ದಾರುಣ ಅಂತ್ಯ ಕಂಡಿರುವುದು ವಿಷಾದನೀಯ. ಈಜುಕೊಳದ ಬಳಿ ರೆಸಾರ್ಟ್‌ನ ಯಾವುದೇ ಸಿಬ್ಬಂದಿ ಇಲ್ಲದೆ ಇದ್ದಿದ್ದು ಮತ್ತು ರೆಸಾರ್ಟ್‌ನವರ ನಿರ್ಲಕ್ಷ್ಯವೇ ಈ ಸಾವಿಗೆ ಕಾರಣವಾಗಿದೆ. ಇವರ ಸಾವಿಗೆ ರೆಸಾರ್ಟ್‌ನ ಸಿಬ್ಬಂದಿಗಳೇ ನೇರ ಕಾರಣವಾಗಿದ್ದಾರೆ. ಆದ್ದರಿಂದ ಇವರ ಮೇಲೆ ಉದ್ದೇಶಪೂರ್ವಕ ಕೊಲೆ ಪ್ರಕರಣ ದಾಖಲಿಸಿ ರೆಸಾರ್ಟ್ ಮಾಲೀಕ, ವ್ಯವಸ್ಥಾಪಕ, ಮೇಲ್ವಿಚಾರಕರನ್ನು ಕಠಿಣ ಶಿಕ್ಷೆಗೆ ಗುರಿಪಡಿಸಬೇಕು. ಹಾಗಾದಾಗ ಮಾತ್ರ ಇವರುಗಳು ಮುಂದೆ, ಜವಾಬ್ದಾರಿಯಾಗಿ ಕಾರ್ಯ ನಿರ್ವಹಿಸುವಂತೆ ಆಗುತ್ತದೆ. ಈಜು ಬರದಿದ್ದರೂ ಸೆಲ್ಫಿ ಹುಚ್ಚಿಗೆ ಪ್ರಾಣವನ್ನೇ ತೆತ್ತು, ಪೋಷಕರು ಮರುಗುವಂತೆ ಮಾಡಿದ್ದು ವಿಪರ್ಯಾಸ.

–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು.

■ ಮಾನವ ಸಂಪನ್ಮೂಲಕ್ಕೆ ಕೊಡಬೇಕಾಗಿದೆ ಆದ್ಯತೆ, ಉದ್ಯೋಗಿಗಳಿಗಿರಬೇಕು ಬದ್ಧತೆ

ಮಾನ್ಯರೆ,

ಇತ್ತೀಚಿನ ದಿನಗಳಲ್ಲಿ ಉದ್ಯೋಗವಕಾಶ ತಕ್ಕಮಟ್ಟಿಗೆ ಎಲ್ಲಾ ವಲಯದಲ್ಲಿದೆ. ಆದರೆ ಉದ್ಯೋಗಿಗಳು ಒಂದೇ ಕಂಪನಿಯಲ್ಲಿ ನಿರಂತರವಾಗಿ ಕೆಲಸಕ್ಕೆ ನಿಲ್ಲುವುದು ಕಡಿಮೆ ಆಗಿದೆ.ಒಂದು ಕಂಪನಿಯಿಂದ ಇನ್ನೊಂದು ಕಂಪನಿಗೆ ವಲಸೆ ಹೋಗುವವರ ಸಂಖ್ಯೆ ಹೆಚ್ಚುತ್ತಿದೆ.

ಇದಕ್ಕೆ ಪ್ರಮುಖವಾದ ಕೆಲವು ಕಾರಣಗಳು.

1) ಕಂಪನಿ, ಉದ್ಯೋಗದಾತ ನಿಷ್ಠೆಯಿಂದ, ಪ್ರಾಮಾಣಿಕವಾಗಿ ಕಂಪನಿಯ ಏಳಿಗಾಗಿಯೇ ದುಡಿಯುವವರನ್ನು ಗುರುತಿಸುವುದರಲ್ಲಿ ವಿಫಲವಾಗಿರುವುದು.

2) ಅರ್ಹತೆ ಇದ್ದರೂ ಸರಿಯಾದ ಮಾನದಂಡ ಉಪಯೋಗಿಸದೇ ಅರ್ಹರಿಗೆ ಸರಿಯಾದ ಸಮಯದಲ್ಲಿ ಬಡ್ತಿ ನೀಡದಿರುವುದು

3) ಪ್ರತಿಸ್ಪರ್ಧಿ ಕಂಪನಿಗಳು ಉದ್ಯೋಗಿಗಳಿಗೆ ಕೊಡುವಷ್ಟು ಆಕರ್ಷಕ ಸೌಲಭ್ಯ ಕೊಡದಿರುವುದು.

4) ಉದ್ಯೋಗಿಗಳೂ ಕೂಡ ಸರಿಯಾದ ಕೆಲಸ ಮಾಡದೇ ,ಕೆಲಸಕ್ಕೆ ಬೇಕಾದ ಅಗತ್ಯ ಕೌಶಲ ಬೆಳೆಸಿಕೊಳ್ಳದೇ ಕಂಪನಿಯಿಂದ ಹೊರ ಹೋಗುವ ಸಂದರ್ಭವನ್ನು ತಾವೇ ಸೃಷ್ಟಿಸಿಕೊಳ್ಳುವುದು.

ಒಂದು ಕಂಪನಿ/ಸಂಸ್ಥೆಯ ಏಳಿಗೆ, ಉನ್ನತಿ, ಯಶಸ್ಸುಗಳಿಗೆ ಮಾನವ ಸಂಪನ್ಮೂಲ ಅತಿ ಮುಖ್ಯವಾದ ಅಂಶ ಎನ್ನುವುದನ್ನು ಸಂಸ್ಥೆಗಳು ಮರೆಯಬಾರದು. ಪ್ರಾಮಾಣಿಕವಾಗಿ ಸಂಸ್ಥೆಯ ಏಳಿಗೆಗಾಗಿ ಕೆಲಸ ಮಾಡುವ ಕಾಲಕಾಲಕ್ಕೆ ಬೇಕಾದಂತೆ ಅಗತ್ಯ ಕೌಶಲ ಬೆಳೆಸಿಕೊಳ್ಳುವ ಉದ್ಯೋಗಿಗಳನ್ನು ಗುರುತಿಸಿ ಪ್ರೋತ್ಸಾಹಿಸಬೇಕು. ಅದು ಅವರಿಗೆ ಮತ್ತಷ್ಟು ಕೆಲಸ ಮಾಡಲು ಉತ್ತೇಜನ ನೀಡುತ್ತದೆ.ಅದರಿಂದ ಮತ್ತೆ ಸಂಸ್ಥೆಗೇ ಹೆಚ್ಚಿನ ಲಾಭವಾಗುತ್ತದೆ. ಅದೇ ರೀತಿ ಕೆಲವು ಉದ್ಯೋಗಿಗಳೂ ಕೂಡ ಒಂದು ಕೆಲಸ ಸಿಕ್ಕಿತು ಅಂತ ಆದ ಕೂಡಲೇ ಸ್ವಲ್ಪ ಅರಾಮಾಗಿರಲು ಬಯಸುತ್ತಾರೆ .ಯಾವುದೂ ಹೊಸತನ್ನು ಕಲಿಯದೇ ಪ್ರಾಮಾಣಿಕವಾಗಿ ಕೆಲಸ ಮಾಡದೇ ಸಂಸ್ಥೆಯು ಎದುರಿಸುವ ಸವಾಲುಗಳನ್ನು ಎದುರಿಸಲು ತಮ್ಮನ್ನು ತಾವು ತೊಡಗಿಸಿಕೊಳ್ಳದೇ ಕಂಪನಿಯಿಂದ ಕಡೆಗಣಿಸಲ್ಪಡುತ್ತಾರೆ. ಈಗಿನ ಸ್ಪರ್ಧಾತ್ಮಕ ಯುಗದಲ್ಲಿ ಯಾವುದೇ ಒಂದು ಸಂಸ್ಥೆಯನ್ನು ಯಶಸ್ವಿಯಾಗಿ ಮುನ್ನಡೆಸುವುದು ಅಷ್ಟು ಸುಲಭವಿಲ್ಲ.ಸಂಸ್ಥೆಯ ಮುಖ್ಯಸ್ಥರಾಗಿದ್ದವರು ಸಂಸ್ಥೆಯ ಯಶಸ್ಸು ಅಥವಾ ವೈಫಲ್ಯಕ್ಕೆ ಸಂಪೂರ್ಣ ಹೊಣೆಗಾರರಾಗಿರುತ್ತಾರೆ. ಸಂಸ್ಥೆಯ ಆಡಳಿತ ಮಂಡಳಿಗೆ, ಗ್ರಾಹಕರಿಗೆ, ಷೇರುದಾರರಿಗೆ, ನಿಯಂತ್ರಕರಿಗೆ (Regulator) ಮುಂತಾದವರಿಗೆ ಉತ್ತರಿಸುವ ಜವಾಬ್ದಾರಿ ಅವರಿಗಿರುತ್ತದೆ. ಹಾಗಾಗಿ ಅಲ್ಲಿ ಕೆಲಸ ಮಾಡುವ ಉದ್ಯೋಗಿಗಳು ಇದನ್ನೆಲ್ಲಾ ಮನಸ್ಸಿನಲ್ಲಿಟ್ಟುಕೊಂಡು ತಮ್ಮ ವೈಯಕ್ತಿಕ ಹಾಗೂ ಕಂಪನಿಯ ಏಳಿಗೆಗಾಗಿ ದುಡಿಯುವ 'ಬದ್ಧತೆ ' ಹೊಂದಿರಬೇಕು.ಕಂಪನಿಗಳೂ ಕೂಡ ಸರಿಯಾದ ಸಮಯದಲ್ಲಿ ತರಬೇತಿ ನೀಡಿ,ಒಳ್ಳೆಯ ಕೆಲಸ ಮಾಡುವವರನ್ನು ಗುರುತಿಸಿ, ಮಾನವ ಸಂಪನ್ಮೂಲಕ್ಕೆ ಕೊಡಬೇಕಾಗಿದೆ ಹೆಚ್ಚಿನ 'ಆದ್ಯತೆ'.

–ರಾಘವೇಂದ್ರ ಜೋಯಿಸ್, ಮೈಸೂರು



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ವಸುಂಧರೋತ್ಸವ–2024

ಭರತನಾಟ್ಯದ ರಮ್ಯ ಲಲಿತಮ ನೋಟ
ಧರಣಿಯೊಳು ಸಜ್ಜನರ ಸೌಂದರ್ಯ ಕೂಟ
ಪರಿಕಿಸುವ ರಸಿಕರಿಗೆ ಇದು ಹಬ್ಬದೂಟ
ಪರತತ್ತ್ವವನು ತೋರ್ಪ ನರ್ತನದ ಮಾಟ

ನಾಟ್ಯವು ಅಭಿವ್ಯಕ್ತಿಯ ಪ್ರಥಮ ಸಾಧನ. ಇದು ಕಲೆಯಾಗಿ ಬೆಳೆದು ರಸಾನುಭವಕ್ಕೂ ದೈವಸಾಕ್ಷಾತ್ಕಾರಕ್ಕೂ 'ಮಾರ್ಗ'ವಾಯಿತು. ಹಾಗೆ ನೋಡಿದರೆ ರಸಾನುಭವವೂ ದೈವಸಾಕ್ಷಾತ್ಕಾರವೂ ಬೇರೆಯಲ್ಲ. ರಸೋ ವೈ ಸಃ ಎಂದು ಉಪನಿಷತ್ತು ಘೋಷಿಸಿದೆ. ಹೀಗೆ ಕಲೆಯಿಂದಲೇ ಸಾಕ್ಷಾತ್ಕಾರವನ್ನು ಪಡೆದ ಕಲಾತಪಸ್ವಿಗಳು ಕಲೆಗಳ ಬೀಡಾದ ಮೈಸೂರಿನಲ್ಲಿ ಆಗಿ ಹೋಗಿದ್ದಾರೆ. ಈಗಲೂ ಇದ್ದಾರೆ. ಅವರನ್ನು ಗುರುತಿಸಲು, ಗೌರವಿಸಲು, ಅವರ ಕಲಾಸಿದ್ಧಿಯನ್ನು ಜನರಿಗೆ ಪರಿಚಯಿಸಲು ನಡೆಯುತ್ತಿರುವ ಹತ್ತು ದಿನಗಳ ಹಬ್ಬ ವಸುಂಧರೋತ್ಸವ. ಇದನ್ನು ಆಯೋಜಿಸಿ ನಡೆಸುತ್ತಿರುವವರು ನಾಟ್ಯ ಜ್ಯೋತಿ, ನೃತ್ಯಯೋಗಿನಿ ಇತ್ಯಾದಿ ಹತ್ತಾರು, ನೂರಾರು ಪ್ರಶಸ್ತಿಗಳಿಂದ ಅಲಂಕೃತರಾಗಿರುವ ನೃತ್ಯಾಂಗನೆ ಡಾ. ವಸುಂಧರಾ ದೊರೆಸ್ವಾಮಿ. ಅವರ ನಾಮಾಂಕಿತವನ್ನೇ ಹೊಂದಿರುವ ವಸುಂಧರಾ ಭವನ, ಆದಿಚುಂಚನಗಿರಿ ರಸ್ತೆಯಲ್ಲಿರುವ ರಮಾಗೋವಿಂದ ಪ್ರೇಕ್ಷಾಗೃಹ ಮತ್ತು ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದ ನಾದ ಮಂಟಪ ಎಂಬ ಪ್ರಶಸ್ತ ಸ್ಥಳಗಳಲ್ಲಿ ವಸುಂಧರೋತ್ಸವದ ನೃತ್ಯ ಪ್ರದರ್ಶನಗಳು ನಡೆಯುತ್ತಿವೆ. ನೃತ್ಯಗುರು ವಸುಂಧರಾ ದೊರೆಸ್ವಾಮಿಯವರ ಶಿಷ್ಯರು ಮಾತ್ರವಲ್ಲ, ಬೇರೆ ಗುರುಗಳ ಶಿಷ್ಯರನೇಕರಿಗೂ ಇಲ್ಲಿ ಅವಕಾಶ ಸಿಕ್ಕಿದೆ. ಪರಿಣತ ಪಾರಂಗತರನ್ನು ಯುವ ಪ್ರತಿಭೆಗಳನ್ನು ನೋಡುವ ಸದವಕಾಶ ಮೈಸೂರು ನಗರದ ಕಲಾಭಿಮಾನಿಗಳಿಗೆ ದೊರೆತಿದೆ.

ಇಲ್ಲಿ ಸಂಪನ್ನಗೊಳ್ಳುತ್ತಿರುವ ಕಾರ್ಯಕ್ರಮಗಳಲ್ಲಿ ವೈಶಿಷ್ಟ್ಯವಿದೆ, ನೂತನತೆಯೂ ಇದೆ. ಉದ್ಘಾಟನಾ ದಿನದ (15.11.2024) ವಿಶೇಷವೇನೆಂದರೆ ಅಂದು ವೇದಿಕೆಯಿಂದ ಡಾ. ವಸುಂಧರಾ ದೊರೆಸ್ವಾಮಿ ಅವರ ಸಾಧನಗಾಥೆಯೆನ್ನಬಹುದಾದ ಎರಡು ಪುಸ್ತಕಗಳು ಲೋಕಾರ್ಪಣೆಗೊಂಡವು. ಕನ್ನಡದಲ್ಲಿ 'ಗೆಜ್ಜೆ ಉಲುಹಿನ ನಡುವೆ' ಮತ್ತು ಇಂಗ್ಲೀಷಿನಲ್ಲಿ Orbit of Vasundhara ಎಂಬ ಈ ಎರಡು ಪುಸ್ತಕಗಳನ್ನು ಬರೆದಿರುವವರು ಶ್ರೀಮತಿ ಶುಭದಾ ಸುಬ್ರಮಣ್ಯಮ್ ಅವರು ಡಾ. ವಸುಂಧರಾ ಅವರ ಶಿಷ್ಯೆಯಾಗಿದ್ದು ಈಗ ಜರ್ಮನಿಯಲ್ಲಿ ನೆಲೆಸಿದ್ದಾರೆ.

ಈ ಪುಸ್ತಕಗಳು ಅತ್ಯಂತ ಆಕರ್ಷಕವಾಗಿರುವುದೇಕೆಂದರೆ ಅವು ಸಂವಾದರೂಪದಲ್ಲಿವೆ. ಭರತನಾಟ್ಯದ ಇತಿಹಾಸ, ಸ್ವರೂಪ, ಗುರುಕುಲ ಪದ್ಧತಿ, ಇಂದಿನ ಪ್ರಪಂಚದಲ್ಲಿ ಅದರ ಸ್ಥಿತಿ, ಕಲಾವಿದರ ಸಮಸ್ಯೆಗಳು, ಶಾಸ್ತ್ರಜ್ಞಾನದ ಆವಶ್ಯಕತೆ ಮುಂತಾದ ಅನೇಕಾನೇಕ ವಿಷಯಗಳ ಬಗೆಗೆ ವಸುಂಧರಾ ಅವರು ಬೆಳಕನ್ನು ಚೆಲ್ಲಿದ್ದಾರೆ. ಶುಭದಾ ಅವರು ಮಾಡಿರುವ ನಿರೂಪಣೆಯೂ ಉತ್ಕೃಷ್ಟವಾಗಿದೆ.

ವಸುಂಧರೋತ್ಸವದ ಇನ್ನೊಂದು ವಿಶೇಷವೇನೆಂದರೆ ಪುರುಷ ಕಲಾವಿದರಿಗೆ, ಎಂದರೆ ನರ್ತಕರಿಗೆ ಪ್ರತಿಭಾ ಪ್ರದರ್ಶನದ ಅವಕಾಶವನ್ನು ಕಲ್ಪಿಸಿರುವುದು. ಎಂ.ಎಲ್. ಸುಧನ್ವ, ಬದ್ರಿ ದಿವ್ಯಭೂಷಣ, ರೋಹಿತ್ ಈಶ್ವರ್ ಮುಂತಾದ ಕಲಾವಿದರನ್ನು ರಂಗದ ಮೇಲೆ ಕಾಣಬಹುದು.

ವಸುಂಧರೋತ್ಸವದಲ್ಲಿ ವಿಶೇಷ ಕಾರ್ಯಕ್ರಮವೆಂದರೆ ಇಪ್ಪತ್ತ ಮೂರರಂದು (23.11.2024) ಆಯೋಜಿಸಲಾಗಿರುವ ವಿಚಾರಗೋಷ್ಠಿ. ಇದರಲ್ಲಿ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ನಾಗೇಶ್ ಬೆಟ್ಟಕೋಟೆ, ನಾಟ್ಯಾಚಾರ್ಯ ಪ್ರೊ.ಕೆ. ರಾಮಮೂರ್ತಿರಾವ್, ಡಾ. ಸೂರ್ಯಪ್ರಸಾದ್, ಡಾ. ನಾಗಮಣಿ ಶ್ರೀನಾಥ್, ಡಾ. ವೀಣಾಮೂರ್ತಿ, ಡಾ. ಕೃಪಾ ಫಡ್ಕೆ, ವಿದುಷಿ ಪೂರ್ಣಿಮಾ ಗುರುರಾಜ್ ಮುಂತಾದ ಪರಿಣತರು ಭಾಗವಹಿಸಲಿದ್ದಾರೆ. ನಾಟ್ಯಶಾಸ್ತ್ರದ ಮತ್ತು ಭರತನಾಟ್ಯದ ಸೂಕ್ಷ್ಮಾತಿಸೂಕ್ಷ್ಮ ವಿಚಾರಗಳ ವಿಮರ್ಶೆ ನಡೆಯಲಿದೆ.

ಈ ಸಂದರ್ಭದಲ್ಲಿ ಜ್ಞಾನವೃದ್ಧರೂ ವಯೋವೃದ್ಧರೂ ತಪೋವೃದ್ಧರೂ ಆಗಿರುವ, ಮೈಸೂರಿನ ಕಲಾಪ್ರಪಂಚದ ರತ್ನಾಭರಣಾಯಮಾನರೂ ಆಗಿರುವ ಪ್ರೊ. ರಾ. ವಿಶ್ವೇಶ್ವರನ್ ಅವರನ್ನು ಸಂಮಾನಿಸುತ್ತಿರುವುದು ವೀಣಾ ಸರಸ್ವತಿಯ ಸಮ್ಮಾನವೇ ಆಗಿದೆ.

ವಿಶ್ವೇಶ್ವರಂ ಸಕಲಸದ್ಗುಣಶೇವಧಿಂ ತ್ವಾಂ
ವಿದ್ಯಾನಿಧಿಂ ವಿವಿಧಶಾಸ್ತ್ರವಿಚಾರದಕ್ಷಮ್।
ವೀಣಾಪ್ರಪಂಚಪರಮೇಷ್ಠಿನಮದ್ಯ ನತ್ವಾ
ಧನ್ಯಾಃ ಸಮಸ್ತವಿಬುಧಾಶ್ಚ ವಸುಂಧರಾ ಚ॥

ಈ ವಸುಂಧರೋತ್ಸವ ಸುವರ್ಣ ಕಲಶದಂತೆ ಇರುವ ಕಾರ್ಯಕ್ರಮ. ಈ ತಿಂಗಳ ಇಪ್ಪತ್ತನಾಲ್ಕನೆಯ ದಿನ (24.11.2024) ನಡೆಯಲಿರುವ ಮೈಸೂರು ಕಲಾದಿವಸ. ಈ ಕಾರ್ಯಕ್ರಮ ಮೈಸೂರಿನ ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದ ನಾದಮಂಟಪದಲ್ಲಿ ಜರುಗಲಿದೆ. ಇದು ನಿಜವಾಗಿ 'ನ ಭೂತೋ ನ ಭವಿಷ್ಯತಿ' ಎನಿಸುವ ಕಾರ್ಯಕ್ರಮ. ಡಾ. ವಸುಂಧರಾ ದೊರೆಸ್ವಾಮಿಯವರ ಶಿಷ್ಯರು, ಪ್ರಶಿಷ್ಯರು ಮತ್ತು ಪ್ರತಿಷ್ಠಿತ ನೃತ್ಯ ಗುರುಗಳ ಶಿಷ್ಯ ಪರಂಪರೆಯ ಐನೂರಕ್ಕೂ ಹೆಚ್ಚು ಸಂಖ್ಯೆಯ ಕಲಾವಿದರು ಅದರಲ್ಲಿ ಪ್ರದರ್ಶನವನ್ನು ಮಾಡುವರು.

ಭೋಜರಾಜನ ಆಸ್ಥಾನದಲ್ಲಿ ಇಂತಹ ಅದ್ಭುತ ಕಲಾಪ್ರದರ್ಶನವು ನಡೆಯುತ್ತಿತ್ತೆಂದು ಕೇಳಿದ್ದೇವೆ. ವಸುಂಧರಾ ಪ್ರದರ್ಶಕ ಕಲೆಗಳ ಕೇಂದ್ರವು ಇಪ್ಪತ್ತೊಂದನೆಯ ಶತಮಾನದಲ್ಲೂ ಇದನ್ನು ಸಾಧ್ಯಗೊಳಿಸಿದೆ. ಅಂದು (24.11.2024) ಬೆಳಗ್ಗೆ 9.30ಕ್ಕೆ ಆರಂಭಗೊಳ್ಳುವ ಕಾರ್ಯಕ್ರಮದಲ್ಲಿ ಅಷ್ಟೊಂದು ಜನಕಲಾವಿದರ ನೈಪುಣ್ಯವನ್ನು ಕಣ್ಣಾರೆ ನೋಡುವ ಪುಣ್ಯ ನಮ್ಮೆಲ್ಲರದಾಗಲಿದೆ.

ಭಾರತೀಯ ಸಂಸ್ಕೃತಿಯ ಪೆಂಪು, ಕಂಪು, ಸೊಂಪು ಜಗತ್ತಿಗೆ ಅರಿವಾಗಲು ಇಂತಹ ಉತ್ಸವಗಳು ನಡೆಯಬೇಕು. ಭರತಮುನಿ ಸ್ಥಾಪಿಸಿದ ನಾಟ್ಯ ಪರಂಪರೆ ವಿಕಸಿತವಾಗಿ ವಿಶ್ವವ್ಯಾಪಿಯಾಗಬೇಕು. ಸಾಂಸ್ಕೃತಿಕ ರಾಯಭಾರಿಗಳಾದ ಕಲಾವಿದರಿಂದ ಈ ಕಾರ್ಯವಾಗುತ್ತಿದೆ. ಭರತನಾಟ್ಯವು ಭಾರತ ದೇಶಕ್ಕೆ ಸೀಮಿತವೆಂಬ ಭಾವನೆ ಭರತಮುನಿಯಲ್ಲಿರಲಿಲ್ಲ.

ತ್ರೈಲೋಕ್ಯಸ್ಯಾಸ್ಯ ಸರ್ವಸ್ಯ ನಾಟ್ಯಂ ಭಾವಾನುಕೀರ್ತನಮ್ (I-107)

ಈ ನಾಟ್ಯವು ಸಮಸ್ತ ತ್ರಿಲೋಕಗಳ ಭಾವಾನುಕೀರ್ತನ ಎಂದು ಹೇಳಿದ್ದಾನೆ. ಆದ್ದರಿಂದ ಸಕಲ ದೇವತೆಗಳ, ಅಸುರರ ಮತ್ತು ಮಾನವರ ಭಾವನೆಗಳ ಸ್ಪಂದನೆ ಇದರಲ್ಲಿದೆ. ಅದರ ಅರಿವನ್ನೂ ಅನುಭವವನ್ನೂ ತಂದುಕೊಡುವುದು ಕಲಾವಿದರ ಕರ್ತವ್ಯ. ಯೋಗದಂತೆ ನಾಟ್ಯವೂ ಸಮಸ್ತ ವಿಶ್ವದಲ್ಲಿ ಜನಪ್ರಿಯವಾಗಬೇಕು. ಅದನ್ನು ಗುರುಮುಖದಿಂದ ಕಲಿಯುವ ಉತ್ಸಾಹ ವಿದೇಶದವರಲ್ಲೂ ಮೂಡಿ ಬೆಳೆಯಬೇಕು.

ನಾಟ್ಯವನ್ನು ನೋಡಿ ಸ್ಪಂದಿಸಿ ಆನಂದಿಸುವ ಪ್ರೇಕ್ಷಕರನ್ನೂ ಸಮಾಜವು ಒದಗಿಸಬೇಕು. ಉತ್ತಮ ಪ್ರೇಕ್ಷಕನಾಗುವುದಕ್ಕೂ ಪ್ರಶಿಕ್ಷಣವು ಬೇಕು.

ಅವ್ಯಗ್ರೈರಿಂದ್ರಿಯೈಃಶುದ್ಧಃ ಊಹಾಪೋಹವಿಚಕ್ಷಣಃ।
ವ್ಯಕ್ತಾದೋಷೋನುರಾಗೀ ಚ ಸ ನಾಟ್ಯೇ ಪ್ರೇಕ್ಷಕಃ ಸ್ಮೃತಃ॥
ಯಸ್ತುಷ್ಟೇ ತುಷ್ಟಿಮಾಯಾತಿ ಶೋಕೇ ಶೋಕಮುಪೈತಿ ಚ।
ದೈನ್ಯೇ ದೀನತ್ವಮಭ್ಯೇತಿ ಸ ನಾಟ್ಯೇ, ಪ್ರೇಕ್ಷಕಃ ಸ್ಮೃತಃ॥

ಈ ರೀತಿಯಾದ ಸಹೃದಯತ್ವ ಇದ್ದವರಿಗೆ ನಿಜವಾದ ರಸಾನುಭವ. ನಾಟ್ಯವನ್ನು ನೋಡುತ್ತಿರುವಾಗಲೂ ಮಧ್ಯೇ ಮಧ್ಯೇ ಮೊಬೈಲಿಗೆ ಕಿವಿಗೊಡುವವರಿಗೆ ತನ್ಮಯತ್ವ ಹೇಗೆ ಸಾಧ್ಯ? ಐದು ನಿಮಿಷ ಮಾತ್ರ ನೋಡಿಕೊಂಡು ಹೋಗುತ್ತೇನೆ ಎಂದು ಬಂದು ಎದ್ದು ಹೋಗುವವರು ಪ್ರೇಕ್ಷಕರೆ? ಭಾವಗ್ರಹಣಕ್ಕೆ ಮನಸ್ಸನ್ನು ಹೊಂದಿಸಲು ಸಮಯ ಕೊಡದವರು ಪ್ರೇಕ್ಷಕರೆ? ನಾಟ್ಯವನ್ನು ನೋಡುವುದು ಹೇಗೆ, ನಾಟಕವನ್ನು ವೀಕ್ಷಿಸುವುದು ಹೇಗೆ, ಸಂಗೀತವನ್ನು ಕೇಳುವುದು ಹೇಗೆ ಎಂಬ ಪ್ರಶಿಕ್ಷಣವೂ ಇಂದಿನ ಸಮಾಜದಲ್ಲಿ ಬೇಕಾಗಿದೆ.


ಪೋಷಕರು ಮತ್ತು ಪ್ರಾಯೋಜಕರು ಕಲೆಗಳ ಅಭಿವೃದ್ಧಿಯಲ್ಲಿ ಮಹತ್ತ್ವದ ಪಾತ್ರವನ್ನು ವಹಿಸುತ್ತಾರೆ. ಅವರನ್ನು ಕೃತಜ್ಞತೆಯಿಂದ ಇಲ್ಲಿ ನೆನಪಿಸಿಕೊಳ್ಳಬೇಕು. ಹಿಂದೆ ರಾಜಮಹಾರಾಜರು ಕಲಾವಿದರಿಗೆ ಮನ್ನಣೆಯನ್ನು ನೀಡಿ ಪೋಷಿಸುತ್ತಿದ್ದರು. ಈಗ ಸರ್ಕಾರ ಆ ಕೆಲಸವನ್ನು ಸ್ವಲ್ಪಮಟ್ಟಿಗಾದರೂ ಮಾಡುತ್ತಿದೆ. ಸರ್ಕಾರವೇ ಕಲೆಗಳ ಕಾಲೇಜುಗಳನ್ನು ವಿಶ್ವವಿದ್ಯಾನಿಲಯಗಳನ್ನೂ ನಡೆಸುತ್ತಿದೆ. ಸಂಗೀತ ನೃತ್ಯ ಅಕಾಡೆಮಿ ಮುಂತಾದ ಸಂಸ್ಥೆಗಳ ಮೂಲಕ ವಿವಿಧ ಪ್ರೋತ್ಸಾಹವನ್ನು ಕೊಡುತ್ತಿದೆ. ದೊಡ್ಡ ಉದ್ಯಮ ಸಂಸ್ಥೆಗಳೂ ಉದ್ಯಮಿಗಳೂ ಕಾರ್ಯಕ್ರಮಗಳ ಪ್ರಾಯೋಜಕತ್ವವನ್ನು ವಹಿಸಿಕೊಂಡು ಪ್ರೋತ್ಸಾಹಿಸಿದ್ದಾರೆ. ಇಂತಹ ಪ್ರೋತ್ಸಾಹಕರ ಸಂಖ್ಯೆ ಹೆಚ್ಚಾದರೆ ಕಲೆಗಳು ಉಳಿಯುತ್ತವೆ, ಬೆಳೆಯುತ್ತವೆ.

ಶತಂ ವಸುಂಧರಾ ಜೀಯಾದ್
ವರ್ಷಾಣಿ ವಸುಧಾತಲೇ।
ಬೋಧಯಂತೀ ನೃತ್ಯವಿದ್ಯಾಂ
ರಕ್ಷಂತೀ ಸಂಸ್ಕೃತಿಂ ಸದಾ ॥
ಕಲೆಗಳ ಬೀಡಿದು ಕನ್ನಡ ನಾಡು
ನಲಿಯಲಿ ನೃತ್ಯವು ಹೃದಯದ ಹಾಡು
ಉಲಿಯುತ ಬೆಳೆಯಲಿ ರಸಿಕರ ಗೂಡು
ಫಲಿಸಲು ಸರ್ವವು ಯತ್ನವ ಮಾಡು.

ನ.21, 22ಕ್ಕೆ ರಾಜ್ಯಾದ್ಯಂತ 'ನಮ್ಮ ಭೂಮಿ ನಮ್ಮ ಹಕ್ಕು' ಬಿಜೆಪಿ ಅಭಿಯಾನ

ಬೆಂಗಳೂರು: 'ಕೃಷಿ ಭೂಮಿ, ಮಠ, ದೇವಸ್ಥಾನಗಳ ಜಮೀನುಗಳ ಸ್ವಾಧೀನಕ್ಕೆ ವಕ್ಫ್ ನೋಟಿಸ್ ನೀಡಿರುವುದನ್ನು ವಿರೋಧಿಸಿ 'ನಮ್ಮ ಭೂಮಿ ನಮ್ಮ ಹಕ್ಕು' ಹೆಸರಿನಲ್ಲಿ ಇದೇ 21 ಮತ್ತು 22ರಂದು ರಾಜ್ಯದ ಎಲ್ಲ ಜಿಲ್ಲಾಧಿಕಾರಿ ಕಚೇರಿಗಳು ಮತ್ತು ತಹಶೀಲ್ದಾರ್‌ಗಳ ಕಚೇರಿಗಳ ಮುಂದೆ ಪ್ರತಿಭಟನೆ ನಡೆಸಲಾಗುವುದು' ಎಂದು ಶಾಸಕ ಡಾ.ಸಿ.ಎನ್.ಅಶ್ವತ್ಥನಾರಾಯಣ ತಿಳಿಸಿದರು.

ಪ್ರತಿಭಟನೆಯ ಜತೆಗೆ ಸಂತ್ರಸ್ತರಿಂದ ಅರ್ಜಿಗಳ ಸ್ವೀಕಾರ, ವಕ್ಫ್ ಅಧಿಕಾರ ದುರ್ಬಳಕೆಯಿಂದ ಸಮಸ್ಯೆ, ಶೋಷಣೆಗೆ ಒಳಗಾದವರ ಮಾಹಿತಿ ಸಂಗ್ರಹಿಸಲಾಗುವುದು ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.



ಈ ಅಭಿಯಾನ ನಡೆಸಲು ಈಗಾಗಲೇ ಮೂರು ತಂಡಗಳನ್ನು ರಚಿಸಲಾಗಿದೆ. ಪಕ್ಷದ ಅಧ್ಯಕ್ಷ ಬಿ.ವೈ.ವಿಜಯೇಂದ್ರ, ವಿರೋಧಪಕ್ಷದ ನಾಯಕ ಆರ್.ಅಶೋಕ ಮತ್ತು ವಿಧಾನಪರಿಷತ್ ವಿರೋಧಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರ ತಂಡ ನೇತೃತ್ವ ವಹಿಸಲಿದ್ದಾರೆ. 'ಈ ತಂಡಗಳು ಡಿಸೆಂಬರ್ ಮೊದಲನೇ ವಾರದಲ್ಲಿ ರಾಜ್ಯದಾದ್ಯಂತ ಪ್ರವಾಸ ಮಾಡಲಿವೆ. ರೈತರು, ಮಠಾಧೀಶರು ಸೇರಿ ತೊಂದರೆಗೆ ಒಳಗಾದವರಿಂದ ಮಾಹಿತಿ ಪಡೆಯಲಿವೆ. ಬೆಳಗಾವಿಯಲ್ಲಿ ನಡೆಯುವ ಚಳಿಗಾಲದ ಅಧಿವೇಶನದಲ್ಲಿ ಈ ವಿಷಯವನ್ನು ಪ್ರಸ್ತಾಪಿಸಿ, ಜನರ ಸಮಸ್ಯೆ ಪರಿಹಾರಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡಲಿದ್ದೇವೆ. ಅಧಿವೇಶನಕ್ಕೂ ಮೊದಲು ಬೆಳಗಾವಿಯಲ್ಲಿ ಬೃಹತ್ ಸಮಾವೇಶ ಹಮ್ಮಿಕೊಳ್ಳಲಾಗುವುದು' ಎಂದರು. ತೊಂದರೆಗೆ ಒಳಗಾದವರಿಂದ ಅಹವಾಲು ಮತ್ತು ಮಾಹಿತಿ ಸಂಗ್ರಹಕ್ಕಾಗಿ ಪ್ರತಿ ಜಿಲ್ಲೆಯಲ್ಲೂ ರೈತರು, ವಕೀಲರು ಸೇರಿ ಪ್ರಮುಖರನ್ನು ಒಳಗೊಂಡ ಐದು ಜನರ ತಂಡ ರಚಿಸಲಾಗಿದೆ.

ಬಿಜೆಪಿ ಹೋರಾಟದಿಂದ ರಾಜ್ಯ ಸರ್ಕಾರವು ನೋಟಿಸ್ ಹಿಂದಕ್ಕೆ ಪಡೆಯಲು ಸೂಚನೆ ನೀಡಿದೆ. ಪಹಣಿಯಲ್ಲಿ ವಕ್ಫ್ ಹೆಸರು ಇದ್ದರೆ ಅದನ್ನೂ ತೆಗೆದು ಹಾಕಬೇಕು. 1974ರ ಗೆಜೆಟ್ ಅಧಿಸೂಚನೆ ಹಿಂದಕ್ಕೆ ಪಡೆಯಬೇಕು. ವಕ್ಫ್ ಮೂಲಕ ಆಸ್ತಿ ವಶಪಡಿಸಿಕೊಳ್ಳುವ ವಿಚಾರದಲ್ಲಿ ಜನಜಾಗೃತಿ ಆಗಿದೆ. ವಕ್ಫ್ ಮತ್ತು ಕಾಂಗ್ರೆಸ್ ಸರ್ಕಾರದ ಅಧಿಕಾರ ದುರ್ಬಳಕೆ, ಜಮೀರ್ ಅಹಮ್ಮದ್ ಅವರು ಮುಖ್ಯಮಂತ್ರಿಯವರ ಆದೇಶ ಎಂದು ತಿಳಿಸಿ ತ್ವರಿತವಾಗಿ ಕಲಂ 9 ಮತ್ತು 11ರಲ್ಲಿ ಇಂಡೀಕರಣ, ಆಸ್ತಿ ಬದಲಾವಣೆ ಪ್ರಯತ್ನ ಮಾಡಿದ್ದರು ಎಂದು ದೂರಿದರು. ಗೋಷ್ಠಿಯಲ್ಲಿ ಸಂಸದ ಪಿ.ಸಿ.ಮೋಹನ್, ಸಿ.ಕೆ.ರಾಮಮೂರ್ತಿ ಮತ್ತು ಸಪ್ತಗಿರಿಗೌಡ ಉಪಸ್ಥಿತರಿದ್ದರು.

ಅಮಿತ್ ಷಾ ಕೇಂದ್ರ ಸಹಕಾರಿ ಸಚಿವರಾದ ಮೇಲೆ ರಾಜ್ಯಕ್ಕೆ ನೀಡುವ ನಬಾರ್ಡ್ ಸಾಲ ಇಳಿಕೆ

●ಈ ಮೂಲಕ ದ್ವೇಷ ರಾಜಕಾರಣ; ಸಚಿವರಾದ ಚಲುವರಾಯಸ್ವಾಮಿ, ರಾಜಣ್ಣ ಆರೋಪ ●9000 ಕೋಟಿಗೆ ಮನವಿ ಮಾಡಿದರೆ ಮಂಜೂರಾಗಿರುವುದು ಬರೀ 2340 ಕೋಟಿ ●ಇದರಿಂದ ರೈತರಿಗೆ ಸಾಲ ನೀಡಲು ಸಾಧ್ಯವಾಗದು ●ರೈತರು ಖಾಸಗಿಯವರ ಬಳಿ ಸಾಲ ಮಾಡಿ ಸಂಕಷ್ಟಕ್ಕೀಡಾಗುವ ಭೀತಿ

ಬೆಂಗಳೂರು, ನ.19(ಕೆಎಂಶಿ)–ಅಮಿತ್ ಷಾ ಕೇಂದ್ರ ಸಹಕಾರಿ ಸಚಿವರಾದ ನಂತರ ಕರ್ನಾಟಕಕ್ಕೆ ನೀಡುವ ನಬಾರ್ಡ್ ಸಾಲ ಪ್ರಮಾಣ ಇಳಿಕೆಯಾಗುತ್ತಿದ್ದು, ದ್ವೇಷದ ರಾಜಕಾರಣ ಮಾಡುತ್ತಿದ್ದಾರೆ ಎಂದು ರಾಜ್ಯ ಕಾಂಗ್ರೆಸ್ ಸರ್ಕಾರ ಆರೋಪಿಸಿದೆ.

ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವರಾದ ಚಲುವರಾಯಸ್ವಾಮಿ ಹಾಗೂ ಕೆ.ಎನ್. ರಾಜಣ್ಣ, ಪ್ರಸಕ್ತ ಸಾಲಿಗೆ ರಾಜ್ಯಕ್ಕೆ 9,000 ಕೋಟಿ ರೂ. ನೀಡುವಂತೆ ಕೇಳಿದರೆ, 2,340 ಕೋಟಿ ರೂ. ಮಾತ್ರ ಮಂಜೂರು ಮಾಡಲಾಗಿದೆ, ಯಾವುದೇ ಸೂಚನೆ ಇಲ್ಲದೇ ಕೃಷಿ ಸಾಲ ಮಿತಿ ಗಣನೀಯವಾಗಿ ಕಡಿಮೆಯಾಗಿದೆ ಎಂದರು.

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಿಗೆ ಪತ್ರ ಬರೆಯಲಾಗಿದೆ, ರಾಜ್ಯಕ್ಕೆ ನ್ಯಾಯ ಕೊಡಿಸಲು ಕೇಂದ್ರ ಸರ್ಕಾರದಲ್ಲಿ ರಾಜ್ಯವನ್ನು ಪ್ರತಿನಿಧಿಸುವ ಸಚಿವರಾದ ಎಚ್.ಡಿ. ಕುಮಾರಸ್ವಾಮಿ, ಪ್ರಹ್ಲಾದ್ ಜೋಶಿ ಸಹಾಯಕ್ಕೆ ಬರಬೇಕು, ಮಾಜಿ ಪ್ರಧಾನಮಂತ್ರಿ ಎಚ್.ಡಿ. ದೇವೇಗೌಡ ಹಿರಿಯರಾಗಿದ್ದು, ರಾಜ್ಯಕ್ಕೆ ಆಗಿರುವ ಅನ್ಯಾಯದ ಬಗ್ಗೆ ಮಾತನಾಡಬೇಕು.

ಕುಮಾರಸ್ವಾಮಿ ಬಾಯಿ ಬಿಡುತ್ತಿಲ್ಲ: ಯಾವಾಗಲೂ ರೈತರ ಪರ ಅನ್ನೋ ಕುಮಾರಸ್ವಾಮಿ ನಬಾರ್ಡ್ ಸಾಲ ಪ್ರಮಾಣದ ಬಗ್ಗೆ ಏಕೆ ಬಾಯಿ ಬಿಡುತ್ತಿಲ್ಲ. ರಾಜ್ಯಕ್ಕೆ ಬಂದು ರಾಜಕಾರಣ ಮಾಡಲಿ, ಆದರೆ, ರೈತರ ವಿಚಾರದಲ್ಲಿ ನ್ಯಾಯ ಕೊಡಿಸಬೇಕಲ್ಲವೇ ಎಂದರು.

ರೈತರನ್ನು ಆರ್ಥಿಕವಾಗಿ ಸದೃಢಗೊಳಿಸಬೇಕು, ಪ್ರತಿ ವರ್ಷ ರೈತರಿಗೆ ಸಾಲ ಸೌಲಭ್ಯ ವ್ಯವಸ್ಥೆ, ಬಿತ್ತನೆಬೀಜಕ್ಕೆ ಹಣಕಾಸಿನ ರೂಪದಲ್ಲಿ ಸಹಾಯ ಮಾಡುತ್ತೇವೆ. ಶೇಕಡ 4.5 ಬಡ್ಡಿ ದರದಲ್ಲಿ ಸಾಲ ಸೌಲಭ್ಯ ನೀಡಲಾಗುತ್ತಿತ್ತು, ರೈತರಿಗೆ ಶಕ್ತಿ ತುಂಬಲು ಸಹಕಾರ ಸಂಘಗಳಿವೆ, ಇವುಗಳಿಗೆ ಬಲ ತುಂಬುವುದು ನಬಾರ್ಡ್. ನಬಾರ್ಡ್‌ನಿಂದ ರಾಜ್ಯಕ್ಕೆ ಮಂಜೂರಾದ ಅಲ್ಪಾವಧಿ ಕೃಷಿ ಸಾಲ ಪ್ರಮಾಣದ ವರ್ಷವಾರು ವಿವರ ನೀಡಿದ ಅವರು, 2020/21ರಲ್ಲಿ 5,500 ಕೋಟಿ ರೂ., 21/22ರಲ್ಲಿ 5,483 ಕೋಟಿ ರೂ., 22/23ರಲ್ಲಿ 5,550 ಕೋಟಿ ರೂ., 23/24 ರಲ್ಲಿ 5,600 ಕೋಟಿ ರೂ. ಬಂದಿದ್ದರೆ, ಈ ಬಾರಿ ಕೇವಲ 2,300 ಕೋಟಿ ರೂ. ಬಂದಿದೆ, 2024/25ರಲ್ಲಿ ರಿಯಾಯಿತಿ ಬಡ್ಡಿ ದರದಲ್ಲಿ ಶೇಕಡಾ 58 ಕಡಿಮೆ ಮಾಡಲಾಗಿದೆ.



ಬೆಂಗಳೂರಿನಲ್ಲಿ ಮಂಗಳವಾರ ಜಂಟಿ ಸುದ್ದಿಗೋಷ್ಠಿಯಲ್ಲಿ ಸಚಿವರಾದ ಚಲುವರಾಯಸ್ವಾಮಿ ಹಾಗೂ ಕೆ.ಎನ್.ರಾಜಣ್ಣ ಮಾತನಾಡಿದರು.

ರೈತರಿಗೆ ನಾವು ಶೂನ್ಯ ಬಡ್ಡಿ ದರದಲ್ಲಿ ಸಾಲ ಕೊಡುತ್ತಿದ್ದೆವು, ಪ್ರಸ್ತುತ ಬಡ್ಡಿರಹಿತ ಸಾಲ ಸೌಲಭ್ಯ ಒದಗಿಸಲಾಗಿದೆ, 3 ಲಕ್ಷದಿಂದ 5 ಲಕ್ಷ ರೂ.ವರೆಗೆ ಶೂನ್ಯ ಬಡ್ಡಿ ಸಾಲ ಕೊಡುತ್ತಿದ್ದೇವೆ, ದೀರ್ಘಾವಧಿ ಸಾಲ 10ರಿಂದ 15 ಲಕ್ಷ ರೂ. ಕೊಡುತ್ತೇವೆ.

ರೈತರ ಸಂಕಷ್ಟಕ್ಕೆ ಕೇಂದ್ರವೇ ಹೊಣೆ: ಆದರೆ, ನಬಾರ್ಡ್‌ನಿಂದ ಈ ಬಾರಿ ಸಾಲ ಪ್ರಮಾಣದಲ್ಲಿ ಕಡಿತವಾಗಿರುವ ಪರಿಣಾಮ ಸಹಕಾರಿ ಬ್ಯಾಂಕ್‌ಗಳ ಸಾಲ ನೀಡಿಕೆ ಪ್ರಮಾಣವೂ ಕಡಿಮೆಯಾಗಲಿದ್ದು, ರೈತರು ಖಾಸಗಿ ಬ್ಯಾಂಕ್ ಹಾಗೂ ಲೇವಾದೇವಿದಾರರ ಬಳಿ ಅಧಿಕ ಬಡ್ಡಿ ದರದ ಸಾಲ ಪಡೆಯಲು ಮುಂದಾಗುತ್ತಾರೆ. ಹೆಚ್ಚಿನ ಬಡ್ಡಿಗೆ ಸಾಲ ಪಡೆಯುವ ರೈತರು, ಸಾಲ ತೀರಿಸಲಾಗದೆ, ಸಂಕಷ್ಟಕ್ಕೆ ಸಿಲುಕುತ್ತಾರೆ, ಇದಕ್ಕೆ ಕೇಂದ್ರ ಸರ್ಕಾರವೇ ಜವಾಬ್ದಾರಿ ಹೊರಬೇಕಾಗುತ್ತದೆ. ಈ ಹಿಂದೆ ನೆರವಿಗಾಗಿ ಕೇಂದ್ರಕ್ಕೆ ಬೇಡಿಕೆ ಇಟ್ಟಿದ್ದೆವು, ಸಚಿವರಾದ ಪ್ರಿಯಾಂಕ್ ಖರ್ಗೆ, ಕೃಷ್ಣಬೈರೇಗೌಡ ಅವರೊಂದಿಗೆ ದೆಹಲಿಗೆ ತೆರಳಿ ರಾಜ್ಯ ಮನವಿ ಮಾಡಿದರೂ ಯಾವುದೇ ಸ್ಪಂದನೆ ದೊರೆಯಲಿಲ್ಲ, ಅನಿವಾರ್ಯವಾಗಿ ಸುಪ್ರೀಂ ಕೋರ್ಟ್ ಮೊರೆ ಹೋಗಬೇಕಾಯಿತು ಎಂದರು.

ಜಿಎಸ್‌ಟಿಯಲ್ಲೂ ಅನ್ಯಾಯ: ಎನ್‌ಡಿಆರ್‌ಎಫ್‌ನಲ್ಲಿ ಬರುವ ಹಣ ಕಡಿಮೆ ಆಗಿದೆ ಎಂದು ರೈತರು ಅಸಮಾಧಾನ ಹೊರ ಹಾಕಿದ್ದಾರೆ. ಕೇಂದ್ರ ಸರ್ಕಾರ, ಆರ್‌ಬಿಐ ಜೊತೆ ವ್ಯವಹರಿಸಿ ಅಲ್ಪಾವಧಿ ಕೃಷಿ ಸಾಲ ಪಡೆಯಲು ಸಹಕಾರ ನೀಡಬೇಕು, ಜಿಎಸ್‌ಟಿ ಹಣದಲ್ಲಿ ನಮಗೆ 52 ಸಾವಿರ ಕೋಟಿ ರೂ. ಬರಬೇಕಿದೆ. ಪ್ರತಿ ವರ್ಷ ನಬಾರ್ಡ್ ಹೆಚ್ಚು ಹಣ ನೀಡುತ್ತಿತ್ತು. ಆದರೆ, ಈ ವರ್ಷ ಮಾತ್ರವೇ ಕಡಿಮೆ ಕೊಟ್ಟಿದ್ದಾರೆ. ನಬಾರ್ಡ್ ಕೇಂದ್ರ ಸರ್ಕಾರದ ಅಧೀನದಲ್ಲಿ ಕೆಲಸ ಮಾಡುತ್ತದೆ. ನಾವು ಕೇಂದ್ರ ಸರ್ಕಾರವನ್ನು ಕೇಳಿದರೆ ಸ್ಪಂದನೆಯೇ ಇಲ್ಲ. ಜಿಎಸ್‌ಟಿಯಲ್ಲೂ ಕರ್ನಾಟಕಕ್ಕೆ ಅನ್ಯಾಯ ಆಗಿದೆ, ನಮ್ಮ ರಾಜ್ಯ 4 ಲಕ್ಷದ 50 ಸಾವಿರ ಕೋಟಿ ರೂ. ತೆರಿಗೆ ಪಾವತಿಸುತ್ತದೆ. ಆದರೆ, ನಮಗೆ ಹಿಂತಿರುಗಿ ಬರುವುದು ಕೇವಲ 52 ಸಾವಿರ ಕೋಟಿ ರೂ. ಮಾತ್ರ ಪ್ರಧಾನಿ ಆವಾಸ್ ಯೋಜನೆಯಡಿ ಹಣ ನೀಡುತ್ತದೆ. ಬಡವರ ಯೋಜನೆಯಲ್ಲೂ ಹಣ ಕಡಿತವಾಗುತ್ತದೆ. ಇದು ಸಾಮಾನ್ಯರ ಮೇಲೆ ದುಷ್ಪರಿಣಾಮ ಉಂಟುಮಾಡುತ್ತದೆ. ಬಿಜೆಪಿಯವರು ಸುಳ್ಳು ಹೇಳಿಕೊಂಡು ತಿರುಗುತ್ತಿದ್ದಾರೆ, ರಾಷ್ಟ್ರಮಟ್ಟದಲ್ಲಿ ಟಾಂಟಾಂ ಹೊಡೆಯುತ್ತಾರೆ. ಅದಕ್ಕಾಗಿಯೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಿನ್ನೆ ನಡೆದ ಸಭೆಯಲ್ಲಿ ನಮಗೆ ಹಲವು ಸೂಚನೆ ಕೊಟ್ಟಿದ್ದಾರೆ.

ಗೃಹ ಸಚಿವ ಡಾ.ಜಿ.ಪರಮೇಶ್ವರ್ ತುಮಕೂರಿನಲ್ಲಿ ಸರ್ಕಾರಿ ಸವಲತ್ತುಗಳ ಸಮಾವೇಶ ಮಾಡಲಿದ್ದಾರೆ, ಹಾಸನದಲ್ಲಿ ರಾಜಕೀಯ ಸಮಾವೇಶ ನಡೆಯಲಿದೆ, ಡಿಸೆಂಬರ್ 5ರಂದು ಸಮಾವೇಶ ನಡೆಸಲು ಯೋಜನೆ ರೂಪಿಸಲಾಗುತ್ತಿದೆ. ಸಿದ್ದರಾಮಯ್ಯ ಅವರಿಗೆ ಶಕ್ತಿ ಇದೆ, ಇದು ಸಮಾನಮನಸ್ಕರ ಸಮಾವೇಶ, ಪಕ್ಷವನ್ನೊಳಗೊಂಡ ಸಮಾವೇಶ ಎಂದರು.

ಸಿದ್ದರಾಮಯ್ಯ ಟಗರು: ಮುಡಾ ಪ್ರಕರಣದಲ್ಲಿ ಮುಖ್ಯಮಂತ್ರಿ ಅವರಿಗೆ ಇ.ಡಿ. ತನಿಖೆಯಿಂದ ಯಾವುದೇ ಒತ್ತಡ ಉಂಟಾಗಿಲ್ಲ. ಸಿದ್ದರಾಮಯ್ಯ ಅವರನ್ನು ಟಗರು ಅಂತಾ ಕರೀತಾರೆ, ಎಂಟತ್ತು ಹೆಣ್ಣು ಕುರಿಗಳಿದ್ದರೆ, ಒಂದೇ ಟಗರು ಇರುತ್ತೆ ಅದು ಸಿದ್ದರಾಮಯ್ಯ, ಅದಕ್ಕೆಲ್ಲ ಹೆದರುವುದಕ್ಕೆ ಆಗುತ್ತೇನ್ರಿ ಎಂದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಕಾಂಗ್ರೆಸ್ ಸಂಕಷ್ಟದಲ್ಲಿರುವ ಎಲ್ಲರ ಹಿತ ಕಾಯುವ ಪಕ್ಷ

● ಮುಖ್ಯಮಂತ್ರಿ ಸಿದ್ದರಾಮಯ್ಯ ಬಣ್ಣನೆ ● ಪ್ರಧಾನಿ ದಿವಂಗತ ಇಂದಿರಾಗಾಂಧಿ ಜನ್ಮ ದಿನಾಚರಣೆ; ಅವರ ಸೇವೆ, ತ್ಯಾಗ ಸ್ಮರಣೆ



ದಿವಂಗತ ಮಾಜಿ ಪ್ರಧಾನಿ ಇಂದಿರಾಗಾಂಧಿ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನಮನ ಸಲ್ಲಿಸಿದರು.

ಬೆಂಗಳೂರು, ನ.19(ಕೆಎಂಶಿ)–ಪ್ರಧಾನಿ ದಿವಂಗತ ಇಂದಿರಾ ಗಾಂಧಿ ಅವರ ಜನ್ಮದಿನವನ್ನು ಇಡೀ ದೇಶ ಆಚರಿಸುತ್ತಿದ್ದು ಅವರು ದಿಟ್ಟತನದಿಂದ ದೇಶವನ್ನು ಆಳಿದರು ಎನ್ನುವುದನ್ನು ಮರೆಯಲು ಸಾಧ್ಯವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬಣ್ಣಿಸಿದ್ದಾರೆ.

ಇಂದಿರಾ ಗಾಂಧಿ ದೇಶಕ್ಕಾಗಿ ಮಾಡಿದ ತ್ಯಾಗ, ಬಲಿದಾನ ಸ್ಮರಿಸುತ್ತಿದ್ದೇವೆ, ದೇಶದ ಐಕ್ಯತೆಗೆ ಪ್ರಾಣವನ್ನೇ ತ್ಯಾಗ ಮಾಡಿದ ಅವರ ಬದುಕು ನಮ್ಮೆಲ್ಲರಿಗೂ ಆದರ್ಶ ಎಂದರು.

ಕೆಪಿಸಿಸಿ ಕಚೇರಿಯಲ್ಲಿ ಮಹಿಳಾ ಕಾಂಗ್ರೆಸ್ ಆಯೋಜಿಸಿದ್ದ ಮಾಜಿ ಪ್ರಧಾನಿ ಇಂದಿರಾ ಗಾಂಧಿ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ಸದಾ ಬಡವರು, ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು, ಮಹಿಳೆಯರು, ರೈತರ ಪರವಾಗಿರುವ ಪಕ್ಷ, ಸಂವಿಧಾನದಲ್ಲಿ ಅಪಾರ ನಂಬಿಕೆ ಇಟ್ಟುಕೊಂಡು ಕೆಲಸ ಮಾಡುತ್ತಿರುವ ಪಕ್ಷ, ಸಂವಿಧಾನದ ಧ್ಯೇಯೋದ್ದೇಶಗಳನ್ನು ಜಾರಿ ಮಾಡಬೇಕು, ಇದರ ಪಾಲನೆ ಪ್ರತಿಯೊಬ್ಬರ ಕರ್ತವ್ಯ ಎಂದರು.

ಇಂದಿರಾ ಗಾಂಧಿ ಬಡವರ ಪರವಾಗಿ ಬಹಳಷ್ಟು ಕೆಲಸಗಳನ್ನು ಮಾಡಿದ್ದಾರೆ, ಭೂ ಸುಧಾರಣಾ ಕಾಯ್ದೆ, ಗರೀಬಿ ಹಟಾವೋ ಕಾರ್ಯಕ್ರಮ, ಬ್ಯಾಂಕ್‌ಗಳ ರಾಷ್ಟ್ರೀಕರಣ ಫಲ ಬಡವರಿಗೆ ದೊರಕಬೇಕು, ಬಡವರು ಆರ್ಥಿಕ–ಸಾಮಾಜಿಕ ಶಕ್ತಿ ಪಡೆದುಕೊಳ್ಳಬೇಕೆಂಬ ಉದ್ದೇಶ ಅವರಿಗಿತ್ತು.

ಬ್ಯಾಂಕ್‌ಗಳು ರಾಷ್ಟ್ರೀಕರಣವಾಗುವ ಮೊದಲು ಬಡವರು ಬ್ಯಾಂಕುಗಳ ಮೆಟ್ಟಿಲುಗಳನ್ನು ಹತ್ತಲು ಸಾಧ್ಯವಾಗುತ್ತಿರಲಿಲ್ಲ, ರಾಷ್ಟ್ರೀಕರಣ ನಂತರ ಬ್ಯಾಂಕ್‌ಗಳ ಬಾಗಿಲು ಬಡವರಿಗೂ ತೆರೆಯಿತು, ಕಾಂಗ್ರೆಸ್ ಪಕ್ಷ ಮಾತ್ರ ಸಮಾಜದಲ್ಲಿ ಸಾಮಾಜಿಕ ನ್ಯಾಯ, ಜಾತ್ಯತೀತ ತತ್ವ, ಸಂವಿಧಾನ, ಪ್ರಜಾಪ್ರಭುತ್ವಗಳಲ್ಲಿ ಅಪಾರ ನಂಬಿಕೆ ಇಟ್ಟು ಅದರಂತೆ ನಡೆಯುವ ಪಕ್ಷ ಎಂದರು.

ಅಧಿಕಾರ ವಿಕೇಂದ್ರೀಕರಣ: ಬಿಜೆಪಿ ಅಧಿಕಾರದಲ್ಲಿರುವ ರಾಜ್ಯಗಳಲ್ಲಿ ಇದಕ್ಕೆ ತದ್ವಿರುದ್ಧವಾಗಿದ್ದು, ಬಡವರ, ಸಾಮಾಜಿಕ ನ್ಯಾಯದ ಪರವಾಗಿ ಇರಲು ಸಾಧ್ಯವೇ ಇಲ್ಲ, ಸಂವಿಧಾನದ ಬಗ್ಗೆ ಗೌರವ ಇಲ್ಲ, ಸಂವಿಧಾನ ಬದಲಾಗಬೇಕೆಂದು ಬಯಸುವ ಪಕ್ಷ, ಅವರಿಗೆ ಪ್ರಜಾಪ್ರಭುತ್ವದಲ್ಲಿ ನಂಬಿಕೆ ಇಲ್ಲ, ನಮಗೆ ಅಧಿಕಾರ ವಿಕೇಂದ್ರೀಕರಣದಲ್ಲಿ ನಂಬಿಕೆಯಿದ್ದರೆ, ಬಿಜೆಪಿಗೆ ಕೇಂದ್ರೀಕೃತ ವ್ಯವಸ್ಥೆಯಲ್ಲಿ ನಂಬಿಕೆ ಇದೆ. ಪ್ರಧಾನಿ ಮೋದಿ ಅವರು ಅಧಿಕಾರಕ್ಕೆ ಬಂದ ಮೇಲೆ ಆರ್ಥಿಕ ಅಧಿಕಾರ ಕೇಂದ್ರೀಕೃತಗೊಳ್ಳುತ್ತಿದೆ, ನೆಹರೂ, ಇಂದಿರಾ ಗಾಂಧಿ, ರಾಜೀವ್ ಗಾಂಧಿ ಇಲ್ಲದೇ ಹೋಗಿದ್ದರೆ ಈ ದೇಶದಲ್ಲಿ ಅಧಿಕಾರ ವಿಕೇಂದ್ರೀಕರಣ ಆಗಲು ಸಾಧ್ಯವಾಗುತ್ತಿರಲಿಲ್ಲ, ಮಹಾತ್ಮ ಗಾಂಧಿ ದೇಶದಲ್ಲಿ ಗ್ರಾಮ ಸ್ವರಾಜ್ಯ ವ್ಯವಸ್ಥೆ ಬಯಸಿದ್ದರು, ಮಹಿಳೆಯರಿಗೆ ಮೀಸಲಾತಿ ಕೊಟ್ಟಿದ್ದೇ ಕಾಂಗ್ರೆಸ್ ಪಕ್ಷ. ರಾಜೀವ್ ಗಾಂಧಿ ಅಧಿಕಾರದಲ್ಲಿದ್ದಾಗ ಸಂವಿಧಾನಕ್ಕೆ ತಿದ್ದುಪಡಿ ತಂದು ಅಧಿಕಾರ ವಿಕೇಂದ್ರೀಕರಣದ ಮೂಲಕ ಪಟ್ಟಣ ಪಂಚಾಯತ್, ನಗರಸಭೆಗಳಲ್ಲಿ ಮಹಿಳೆಯರಿಗೆ ಅಧಿಕಾರ ನೀಡಿದರು, ಇಲ್ಲದಿದ್ದರೆ ಮಹಿಳೆಯರಿಗೆ ಶೇಕಡ 55 ಮೀಸಲಾತಿ ದೊರೆಯುತ್ತಿರಲಿಲ್ಲ.

ರಾಮಾ ಜೋಯಿಸ್ ಎಂಬ ಬಿಜೆಪಿ ಸಂಸದರು ಇದನ್ನು ಪ್ರಶ್ನಿಸಿ ಸರ್ವೋಚ್ಚ ನ್ಯಾಯಾಲಯಕ್ಕೆ ಹೋಗಿದ್ದರು. ಬಿಜೆಪಿ ಮಹಿಳಾ ವಿರೋಧಿ ಮನಃಸ್ಥಿತಿ ಹೊಂದಿದೆ. ಅಧಿಕಾರ ಹಂಚಿಕೆ ಆಗಬೇಕೆಂದಿದ್ದರೆ ನ್ಯಾಯಾಲಯಕ್ಕೆ ಏಕೆ ಹೋಗುತ್ತಿದ್ದರು. ಕಾಂಗ್ರೆಸ್ಸಿನಲ್ಲಿ ಸೈದ್ಧಾಂತಿಕ ಸ್ಪಷ್ಟತೆ ಇಲ್ಲದೆ, ಹಾಗೂ ಇರಲಿ, ಹೀಗೂ ಇರಲಿ ಎನ್ನುವವರೂ ಇದ್ದಾರೆ. ಸ್ಪಷ್ಟತೆ ಇಲ್ಲದೇ ಹೋದರೆ ಕಾಂಗ್ರೆಸ್ ಸಿದ್ಧಾಂತವನ್ನು ಬೆಳೆಸಲು ಸಾಧ್ಯವಿಲ್ಲ ಎಂದರು.

ಆಹಾರ ಭದ್ರತೆ ನೀಡಿದೆವು: ಡಾ. ಮನ್‌ಮೋಹನ್ ಸಿಂಗ್ ಪ್ರಧಾನಿ ಆಗಿದ್ದಾಗ ಆಹಾರ ಭದ್ರತಾ ಕಾಯ್ದೆ ಜಾರಿ ಮಾಡಿದರು, ಕರ್ನಾಟಕದಲ್ಲಿ 2013ರಲ್ಲಿ ಒಂದು ರೂ.ಗೆ, ನಂತರ ಉಚಿತವಾಗಿ ಅಕ್ಕಿ ಕೊಟ್ಟಿದ್ದು ಕಾಂಗ್ರೆಸ್ ಪಕ್ಷ, ವಾಜಪೇಯಿ ಅವರಾಗಲೀ, ಯಡಿಯೂರಪ್ಪ ಅವರಾಗಲೀ ಇಂತಹದ್ದನ್ನು ಮಾಡಿದ್ದಾರೆಯೇ, ನಾವು ಬಡವರ ಪರವಾಗಿದ್ದೇವೆ, ಬಿಜೆಪಿ ಬಡವರ ಪರವಾಗಿ ಇರಲು ಸಾಧ್ಯವೇ ಇಲ್ಲ.

ಭರಪೂರ ಕೊಡುಗೆ: ಗ್ಯಾರಂಟಿ ಯೋಜನೆಗಳು, ಹಲವಾರು ಭಾಗ್ಯ ಯೋಜನೆಗಳು, ಇಂದಿರಾ ಕ್ಯಾಂಟೀನು, ಎಸ್.ಸಿ.ಎಸ್‌ಪಿ/ಟಿಎಸ್‌ಪಿ ಕಾಯ್ದೆ ಜಾರಿ ಮಾಡಿದ್ದು ಕಾಂಗ್ರೆಸ್ ಪಕ್ಷ. ದೇಶದ ಬಜೆಟ್ 48 ಲಕ್ಷ ಕೋಟಿ ರೂ., ಆದರೆ, 60,000 ಕೋಟಿ ರೂ. ಮಾತ್ರ ಎಸ್‌ಸಿ.ಎಸ್‌ಪಿ/ಟಿ.ಎಸ್.ಪಿ ಯೋಜನೆಯಡಿ ವೆಚ್ಚ ಮಾಡುತ್ತಿದ್ದಾರೆ, ನಮ್ಮ ಸರ್ಕಾರ 3,71,000 ಕೋಟಿ ರೂ. ಬಜೆಟ್‌ನಲ್ಲಿ 39,121 ಕೋಟಿ ರೂ. ಪರಿಶಿಷ್ಟರಿಗೆ ಮೀಸಲಿಟ್ಟಿದೆ, ಗೃಹಲಕ್ಷ್ಮಿ ಯೋಜನೆಯಡಿ 1 ಕೋಟಿ 22 ಲಕ್ಷ ಕುಟುಂಬಗಳಿಗೆ ತಿಂಗಳಿಗೆ 2,000 ರೂ. ಕೊಡಲಾಗುತ್ತಿದೆ. ಮೋದಿ ಅವರು ಇದನ್ನು ವಿರೋಧಿಸಿದ್ದರು. 32,000 ಕೋಟಿ ರೂ.ಗಳನ್ನು ಗೃಹಲಕ್ಷ್ಮಿ ಯೋಜನೆಗೆ ವೆಚ್ಚ ಮಾಡಲಾಗುತ್ತಿದೆ. ಗ್ಯಾರಂಟಿಗಳಿಗೆ ಒಟ್ಟು 56,000 ಕೋಟಿ ರೂ. ವೆಚ್ಚ ಮಾಡಲಾಗುತ್ತಿದೆ. ಬಿಜೆಪಿ ದೇಶಭಕ್ತಿ ಬಗ್ಗೆ ಉದ್ದನೆ ಭಾಷಣ ಮಾಡುತ್ತಾರೆ. ದೇಶಭಕ್ತಿ ಉಳಿದಿದ್ದರೆ ಅದು ಕಾಂಗ್ರೆಸ್ ಪಕ್ಷದಿಂದ ಮಾತ್ರ ಇದರ ಆಧಾರದ ಮೇಲೆ ಈ ದೇಶ ಕಟ್ಟಬೇಕಾಗುತ್ತದೆ.

ಮಹಿಳೆಯರಿಗೆ ಮೀಸಲಾತಿ ಇಚ್ಛಾಶಕ್ತಿ ಇಲ್ಲ: ಮಹಿಳೆಯರಿಗೆ ಮೀಸಲಾತಿ 2028ರಲ್ಲಿ ಕೊಡುವುದಾಗಿ ಹೇಳುವ ನರೇಂದ್ರ ಮೋದಿ ಅವರು ಅದನ್ನು ಈಗಲೇ ಮಾಡಬಹುದಿತ್ತು. ಅದಕ್ಕೆ ರಾಜಕೀಯ ಇಚ್ಛಾಶಕ್ತಿ ಹಾಗೂ ಬದ್ಧತೆ ಅಗತ್ಯವಿದೆ. ಸಂಸತ್ತಿನಲ್ಲಿ ಮಹಿಳೆಯರಿಗೆ 50% ಮೀಸಲಾತಿ ನೀಡಲು ನಮ್ಮ ತಕರಾರು ಇಲ್ಲ. ನಾವೇ ಇದನ್ನು ಜಾರಿಗೆ ತರಬೇಕು ಎಂದರು.

ಭಾರತದ ಇಂದಿನ ಅಭಿವೃದ್ಧಿಗೆ ಇಂದಿರಾ ಗಾಂಧಿಯವರ ದೂರದೃಷ್ಟಿಯೂ ಕಾರಣ

● ಕೆಪಿಸಿಸಿ ವಕ್ತಾರೆ ತೇಜಸ್ವಿನಿ ಗೌಡ ಪ್ರತಿಪಾದನೆ ● ಮೈಸೂರು ಕಾಂಗ್ರೆಸ್ ಕಚೇರಿಯಲ್ಲಿ ಇಂದಿರಾ ಗಾಂಧಿ ಜನ್ಮ ದಿನಾಚರಣೆ

ಮೈಸೂರು, ನ.19(ಎಂಟಿವೈ)– ಭಾರತದ ಸಮಗ್ರ ಅಭಿವೃದ್ಧಿಯ ದೂರದೃಷ್ಟಿಯಿಂದ ಕೈಗೊಳ್ಳಬೇಕಾದ ಎಲ್ಲಾ ಕ್ರಮವನ್ನು ಪ್ರಧಾನಮಂತ್ರಿ ದಿವಂಗತ ಇಂದಿರಾ ಗಾಂಧಿ ಅವರು ಕೈಗೊಂಡ ಫಲವಾಗಿ ಇಂದು ಭಾರತ ಅಭಿವೃದ್ಧಿ ಹೊಂದಲು ಸಾಧ್ಯವಾಯಿತು ಎಂದು ಕೆಪಿಸಿಸಿ ವಕ್ತಾರರಾದ ತೇಜಸ್ವಿನಿಗೌಡ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಮಂಗಳವಾರ ಆಯೋಜಿಸಿದ್ದ ಉಕ್ಕಿನ ಮಹಿಳೆ ಪ್ರಧಾನಮಂತ್ರಿ ದಿವಂಗತ ಇಂದಿರಾಗಾಂಧಿಯವರ ಜನ್ಮದಿನಾಚರಣೆಯಲ್ಲಿ 'ಭಾರತದ ರಾಜಕಾರಣದ ದಾರ್ಶನಿಕ ಪ್ರಜ್ಞೆ– ಶ್ರೀಮತಿ ಇಂದಿರಾ ಗಾಂಧಿ' ವಿಚಾರ ಕುರಿತು ಮಾತನಾಡಿದ ಅವರು, ದೇಶ ವಿಭಜನೆಯಾದಾಗ ಆಹಾರದ ಕೊರತೆ ಇತ್ತು. ಕಿತ್ತು ತಿನ್ನುವ ಬಡತನ. ಭೀಕರವಾದ ಬರಗಾಲದಿಂದ ದೇಶ ನಲುಗಿತ್ತು. ಭಾಷಾವಾರು ಪ್ರಾಂತ್ಯಗಳ ರಚನೆಯ ಸಮಸ್ಯೆ ಇತ್ಯರ್ಥಪಡಿಸುವುದು ಮತ್ತು ನೆರೆಯ ದೇಶಗಳಿಂದ ಯುದ್ಧದ ಭೀತಿಯಿತ್ತು. ಈ ಸಮಸ್ಯೆಯನ್ನು ಗಾಂಧಿ ಕುಟುಂಬ ಯಶಸ್ವಿಯಾಗಿ ನಿಭಾಯಿಸಿತು ಎಂದು ಹೇಳಿದರು.

ಕಾಂಗ್ರೆಸ್ ಪಕ್ಷ ಮಾತ್ರವಲ್ಲ; ಚಳವಳಿ: ಗಾಂಧಿ ಕುಟುಂಬ ಎಂದರೆ ವಂಶಾಡಳಿತ ಅಲ್ಲ. ಕಾಂಗ್ರೆಸ್ ರಾಜಕೀಯ ಪಕ್ಷ ಮಾತ್ರವಲ್ಲ, ಒಂದು ಚಳವಳಿ. ಉಕ್ಕಿನ ಮಹಿಳೆಯ ಎದೆಯಲ್ಲಿ ಬೇನೆ ಇದ್ದರೂ ದೇಶಕ್ಕಾಗಿ ದುಡಿದರು. ಸೋನಿಯಾ ಗಾಂಧಿ ಅನಿವಾರ್ಯವಾಗಿ ರಾಜಕೀಯ ಪ್ರವೇಶಿಸಿದರು. ಇಂದಿರಾ ಗಾಂಧಿ ಎದುರಿಸಿದ ಸವಾಲುಗಳನ್ನು ರಾಹುಲ್ ಗಾಂಧಿ ಮತ್ತು ಪ್ರಿಯಾಂಕಾ ಗಾಂಧಿ ಎದುರಿಸುತ್ತಿದ್ದಾರೆ. ಮಣಿಪುರ ಹೊತ್ತಿ ಉರಿಯುತ್ತಿದ್ದರೂ ಪ್ರಧಾನಿಗಳು ಮೌನವಾಗಿದ್ದಾರೆ. ಸೂಕ್ಷ್ಮ ಪರಿಸ್ಥಿತಿ ನಿರ್ಮಾಣವಾಗಿದ್ದರೂ ಕೈ ಕಟ್ಟಿ ಕುಳಿತಿದ್ದಾರೆ. ದೇಶದ ಸಾರ್ವಭೌಮತೆ ಮತ್ತು ಸುರಕ್ಷತೆಗೆ ಧಕ್ಕೆ ಬಂದಾಗ ತುರ್ತು ಪರಿಸ್ಥಿತಿ ಘೋಷಿಸುವಂತೆ ಭಾರತದ ಸಂವಿಧಾನವೇ ಹೇಳಿದೆ. ಯುದ್ಧದಲ್ಲಿ ಬಾಂಗ್ಲಾ ಗೆಲುವಿಗಾಗಿ ಇಂದಿರಾ ಗಾಂಧಿ ಅವರಿಗೆ 'ಭಾರತ ರತ್ನ' ಪ್ರಶಸ್ತಿ ನೀಡಲಾಯಿತು. ಅಮೆರಿಕ ಮದರ್ ಪ್ರಶಸ್ತಿ ನೀಡಿತು. ಫ್ರಾನ್ಸ್ ಜಗತ್ತಿನ ಪ್ರಭಾವಿ ನಾಯಕಿ ಗೌರವ ನೀಡಿತು. ಈಗ ಇಂದಿರಾ ಗಾಂಧಿ ಅವರನ್ನು ಎಷ್ಟೇ ಟೀಕಿಸಿದರೂ ಅವರ ಸಾಧನೆಯನ್ನು ಅಳಿಸಲು ಸಾಧ್ಯವಿಲ್ಲ ಎಂದು ಹೇಳಿದರು.



ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಮಂಗಳವಾರ ನಡೆದ ಮಾಜಿ ಪ್ರಧಾನಿ ದಿ.ಇಂದಿರಾಗಾಂಧಿ ಜಯಂತಿ ಕಾರ್ಯಕ್ರಮದಲ್ಲಿ ಮಾಜಿ ಸಂಸದೆ ತೇಜಸ್ವಿನಿಗೌಡ, ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ, ಶಾಸಕ ಕೆ.ಹರೀಶ್‌ಗೌಡ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

ರಾಧಿಕ ಕರಿಯ ಅಂದ್ರೆ ಓಕೆ! ಜಮೀರ್ ಕರೆದ್ರೆ ಯಾಕೆ!!

ಬೆಂಗಳೂರು, ನ. 19: ಕಾಲಾ(ಕರಿಯ) ಕುಮಾರಸ್ವಾಮಿ ಎನ್ನುವ ಸಚಿವ ಜಮೀರ್ ಅಹಮ್ಮದ್ ಖಾನ್ ಹೇಳಿಕೆ ರಾಜ್ಯ ರಾಜಕಾರಣದಲ್ಲಿ ವಿವಾದ ಎಬ್ಬಿಸಿದೆ. ಜಮೀರ್ ಹೇಳಿಕೆಗೆ ಈಗಾಗಲೇ ತೀವ್ರ ಆಕ್ರೋಶಗಳು ವ್ಯಕ್ತವಾಗಿವೆ. ಸ್ವತಃ ಕಾಂಗ್ರೆಸ್ ನಾಯಕರೇ ಖಂಡಿಸಿದ್ದಾರೆ. ಅಷ್ಟೇ ಅಲ್ಲ ಜಮೀರ್ ವಿರುದ್ಧ ಹೈಕಮಾಂಡ್‌ಗೆ ದೂರು ನೀಡಲಾಗಿದೆ. ಇದೆಲ್ಲ ತಣ್ಣಗಾಗುವಷ್ಟರಲ್ಲೇ ಕಾಂಗ್ರೆಸ್ ನಾಯಕಿ ತೇಜಸ್ವಿನಿ ಗೌಡ ಈ ವಿವಾದದಲ್ಲಿ ಮಧ್ಯ ಪ್ರವೇಶಿಸಿದ್ದು, ರಾಧಿಕ ಕರಿಯ ಅಂತ ಕರೆದ್ರೆ ಓಕೆ. ಆದ್ರೆ, ಜಮೀರ್ ಕರೆದ್ರೆ ಯಾಕೆ ಎಂದು ಹೇಳುವ ಮೂಲಕ ವಿವಾದದ ಕಿಡಿಹೊತ್ತಿಸಿದ್ದಾರೆ.

ಮೈಸೂರಿನಲ್ಲಿಂದು ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಭಾಗಿಯಾಗಿ ಮಾತನಾಡಿದ ತೇಜಸ್ವಿನಿ ಗೌಡ, ಸಂದರ್ಶನದಲ್ಲಿ ನಿಮ್ಮನ್ನ ಕುಮಾರಸ್ವಾಮಿ ಏನೆಂದು ಕರೆಯುತ್ತಾರೆ ಅಂತ ಕೇಳುತ್ತಾರೆ. ಅದಕ್ಕೆ ಚಿನ್ನು ಅಂತ ಕರೆಯುತ್ತಾರೆ ಅಂತಾರೆ. ನೀವು ಏನಂತ ಕರೆಯುತ್ತೀರಾ ಅಂತ ಕೇಳುತ್ತಾರೆ. ಅದಕ್ಕೆ ಕರಿಯ ಅಂತ ಕರೆಯುತ್ತೇನೆ ಎಂದು ಹೇಳುತ್ತಾರೆ ಎಂದು ಹಳೇ ವಿಚಾರಗಳನ್ನು ಹೇಳಿ ಸಚಿವ ಜಮೀರ್ ಅಹಮ್ಮದ್ ಖಾನ್ ಅವರನ್ನು ಸಮರ್ಥಿಕೊಳ್ಳುವ ಭರದಲ್ಲಿ ವಿವಾದ ಸೃಷ್ಟಿಸಿದ್ದಾರೆ.

ಕಾಂಗ್ರೆಸ್ ಪುಟಿದೇಳುತ್ತದೆ: 1980ರಲ್ಲಿ ಸ್ಥಾಪನೆಯಾದ ಭಾರತೀಯ ಜನತಾ ಪಕ್ಷವೂ ಕಾಂಗ್ರೆಸ್ ಅನ್ನು ಮುಕ್ತ ಮಾಡುವುದಾಗಿ ಹೇಳುತ್ತದೆ. ರಾಜಕೀಯ ದ್ವೇಷದಿಂದ ಹೀಗೆ ಹೇಳುತ್ತಿದ್ದಾರೆ. ಅದು ಎಂದಿಗೂ ಸಾಧ್ಯವಿಲ್ಲ. ಕಾಂಗ್ರೆಸ್ ಪಕ್ಷ ಒಮ್ಮೊಮ್ಮೆ ಮಂಕಾಗಬಹುದು. ಮತ್ತೆ ಪುಟಿದೇಳುತ್ತದೆ. ಚಳವಳಿಯಾಗಿ ಜನರ ಮಧ್ಯೆ ನಿಲ್ಲುತ್ತದೆ. ಬಿಜೆಪಿಯವರು ಮನೆಗೆ ಹೋಗಲ್ಲ, ಕಾಂಗ್ರೆಸ್‌ನವರು ಬೀದಿಗೆ ಹೋಗಲ್ಲ ಎಂಬ ಮಾತಿದೆ. ಎಲ್ಲ ಕಾರ್ಯಕರ್ತರು ಜನರೊಂದಿಗೆ ಬೆರೆಯಬೇಕು. ಸರ್ಕಾರದ ಯೋಜನೆಗಳು, ಪಕ್ಷದ ಕಾರ್ಯಕ್ರಮಗಳ ಬಗ್ಗೆ ಮನವರಿಕೆ ಮಾಡಬೇಕು. ಅಧ್ಯಯನ ಶಿಬಿರಗಳನ್ನು ಆಯೋಜಿಸಿ ಬಲಿಷ್ಠ ಕಾರ್ಯಕರ್ತರ ಪಡೆಯನ್ನು ರೂಪಿಸಬೇಕು ಎಂದು ಸಲಹೆ ನೀಡಿದರು.

ಇದೇ ವೇಳೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಮಾತನಾಡಿ, ದೇಶ ಹಿಂದೆಂದೂ ಕಂಡರಿಯದ ಧೀಮಂತ ನಾಯಕಿ ಇಂದಿರಾ ಗಾಂಧಿ. ನವ ಭಾರತ ನಿರ್ಮಾಣಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಗರೀಬಿ ಹಟಾವೋ ಧ್ಯೇಯವಾಕ್ಯದ ಮೂಲಕ ಭಾರತದ ಬಡತನ ನಿರ್ಮೂಲನೆಗೆ ಭದ್ರ ಬುನಾದಿಯನ್ನು ಹಾಕಿಕೊಟ್ಟ ಉಕ್ಕಿನ ಮಹಿಳೆ ಎನಿಸಿದ್ದಾರೆ. ಮನುವಾದದ ವಿರುದ್ಧ ಹೋರಾಡಿದ ಗಟ್ಟಿತನ ಇರುವ ಮಹಿಳೆಯಾಗಿ ಛಾಪು ಮೂಡಿಸಿದ್ದಾರೆ ಎಂದು ಹೇಳಿದರು.

ಕ್ರಾಂತಿಕಾರಿ ಯೋಜನೆ ಜಾರಿ: ಪ್ರಧಾನಿಯಾಗಿದ್ದ ವೇಳೆ ಇಂದಿರಾ ಗಾಂಧಿ ಅವರು, ಅನೇಕ ಯೋಜನೆಗಳನ್ನು ಜಾರಿಗೊಳಿಸಿದರು. ಅದರಲ್ಲಿ ಉಳುವವನೇ ಭೂಮಿಯ ಒಡೆಯ ಎಂಬ ಕಾನೂನನ್ನು ಜಾರಿಗೆ ತಂದು ಲಕ್ಷಾಂತರ ಕುಟುಂಬಗಳಿಗೆ ಭೂಮಿ ಸಿಗುವಂತೆ ಮಾಡಿದರು. ಬ್ಯಾಂಕ್‌ಗಳ ರಾಷ್ಟ್ರೀಕರಣ ಮಾಡಿದರು. ಧ್ವನಿ ಇಲ್ಲದವರಿಗೆ ಧ್ವನಿ ಕೊಡುವ ಮೂಲಕ ದೇಶದ ಎಲ್ಲಾ ವರ್ಗದ ಜನರನ್ನು ಸಮಾನವಾಗಿ ಕಂಡಂತಹ ಪ್ರಧಾನಿ ಎನಿಸಿದರು. ದೇಶಕ್ಕೆ ಮತ್ತು ಪಕ್ಷಕ್ಕೆ ಸಲ್ಲಿಸಿದ ಸೇವೆ ಸ್ಮರಣೀಯ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ, ಶಾಸಕ ಕೆ.ಹರೀಶ್‌ಗೌಡ, ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷೆ ಡಾ.ಪುಷ್ಪಾ ಅಮರನಾಥ್, ವಿಧಾನಪರಿಷತ್ ಮಾಜಿ ಸದಸ್ಯ ಮರಿತಿಬ್ಬೇಗೌಡ, ಮಾಜಿ ಸಚಿವ ಕೋಟೆ ಎಂ. ಶಿವಣ್ಣ, ಮಾಜಿ ಸಂಸದ ಶಿವಣ್ಣ, ಮೈಲ್ಯಾಕ್ ಮಾಜಿ ಅಧ್ಯಕ್ಷ ಹೆಚ್.ಎ. ವೆಂಕಟೇಶ್, ಮುಖಂಡರಾದ ಎಂ. ಶಿವಣ್ಣ, ಮಾಜಿ ಮೇಯರ್‌ಗಳಾದ ಪುರುಷೋತ್ತಮ್, ಪುಷ್ಪಲತಾ ಚಿಕ್ಕಣ್ಣ, ಮೋದಾಮಣಿ, ಮುಖಂಡರಾದ ಉತ್ತನಹಳ್ಳಿ ಶಿವಣ್ಣ, ಲತಾ ಸಿದ್ದಶೆಟ್ಟಿ, ಈಶ್ವರ್ ಚಕ್ಕಡಿ, ಡೈರಿ ವೆಂಕಟೇಶ್, ಮಂಜುಳಾ ಮಂಜುನಾಥ್, ಸೇವಾದಳದ ಗಿರೀಶ್ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

ಮೈಸೂರಲ್ಲೇ ಇದ್ದಂತಹ ವಾಹನಗಳಿಗೆ ಪಿರಿಯಾಪಟ್ಟಣ, ನಂ.ಗೂಡಲ್ಲಿ ಟ್ರಿಪಲ್ ರೈಡಿಂಗ್, ಹೆಲ್ಮೆಟ್ ಹಾಕದ್ದಕ್ಕೆ ದಂಡ!

ಸಿಸಿ ಕ್ಯಾಮರಾಗಳ ಎಡವಟ್ಟಿಗೆ ನಿದರ್ಶನವಿದು

ಮೈಸೂರು, ನ.19(ಆರ್‌ಕೆ)– ಮೈಸೂರಲ್ಲೇ ಇದ್ದ ದ್ವಿಚಕ್ರ ವಾಹನಗಳ ಮೇಲೆ ಪಿರಿಯಾಪಟ್ಟಣದ ಬೆಟ್ಟದಪುರ ಸರ್ಕಲ್‌ನಲ್ಲಿ ಟ್ರಿಪಲ್ ರೈಡಿಂಗ್, ನಂಜನಗೂಡಿನ ಹುಲ್ಲಹಳ್ಳಿ ಸರ್ಕಲ್‌ನಲ್ಲಿ ಹೆಲ್ಮೆಟ್ ಹಾಕದೇ ಇರುವ ಪ್ರಕರಣ ದಾಖಲಾಗಿದ್ದು, ತಲಾ 500 ರೂ. ದಂಡ ಕಟ್ಟುವಂತೆ ವಾಹನದ ಆರ್‌ಸಿ ಮಾಲೀಕರಿಗೆ ಮೊಬೈಲ್‌ಗಳಿಗೆ ಸಂದೇಶ ಬಂದಿದೆ.



ಮೈಸೂರಿನ ಎನ್‌ಆರ್ ಮೊಹಲ್ಲಾ, ಶಿವಾಜಿ ರಸ್ತೆ ನಿವಾಸಿ ಎನ್.ಗಿರೀಶ್ ಹಾಗೂ ಪತ್ರಿಕಾ ವಿತರಕರಾದ ಹೊನ್ನಪ್ಪನವರ ಮೊಬೈಲ್‌ಗೆ ಈ ರೀತಿಯ ಸಂದೇಶಗಳು ಬಂದಿವೆ.

ಮೈಸೂರಿನ ಬನ್ನಿಮಂಟಪದಲ್ಲಿರುವ ಸಂಸ್ಥೆಯೊಂದರಲ್ಲಿ ಕೆಲಸ ನಿರ್ವಹಿಸುತ್ತಿರುವ ಗಿರೀಶ್, ತಮ್ಮ ಟಿವಿಎಸ್ ಎಕ್ಸ್‌ಎಲ್ ಸೂಪರ್ ಕೆಎ 09–ಜೆಡಿ 9131 ಮೊಪೆಡ್‌ನಲ್ಲಿ ಮನೆಯಿಂದ ನಿತ್ಯ ಬೆಳಗ್ಗೆ 11 ಗಂಟೆಗೆ ಬಂದು ಕಚೇರಿಯಲ್ಲಿ ಆ ವಾಹನ ನಿಲ್ಲಿಸಿ, ಸಂಸ್ಥೆಯ ಮತ್ತೊಂದು ವಾಹನ ಬಳಸುತ್ತಾರೆ. ನಂತರ ರಾತ್ರಿ 9 ಗಂಟೆಗೆ ತಮ್ಮ ಸ್ವಂತ ವಾಹನದೊಂದಿಗೆ ಮನೆಗೆ ತೆರಳುವುದು ವಾಡಿಕೆ.

ಆದರೆ, ಮೈಸೂರಿನ ಕಚೇರಿಯಲ್ಲಿ ನಿಂತಿರುವ ಎಕ್ಸ್‌ಎಲ್ ಸೂಪರ್ ಕೆಎ 09–ಜೆಡಿ 9131 2024ರ ನವೆಂಬರ್ 17ರಂದು ಮಧ್ಯಾಹ್ನ 3.43 ಗಂಟೆ ವೇಳೆ ಪಿರಿಯಾಪಟ್ಟಣ ಟೌನ್, ಬೆಟ್ಟದಪುರ ಸರ್ಕಲ್‌ನಲ್ಲಿ ಟ್ರಿಪಲ್ ರೈಡಿಂಗ್ ಮಾಡುತ್ತಿರುವ ಬಗ್ಗೆ ಐಎಂವಿ ಆಕ್ಟ್ 133ರ ರೀತ್ಯಾ 500 ರೂ. ದಂಡ ವಿಧಿಸಲಾಗಿದೆ ಎಂದು ಗಿರೀಶ್ ಮೊಬೈಲ್‌ಗೆ ಸಂದೇಶ ರವಾನೆಯಾಗಿದೆ.

ಅಚ್ಚರಿ ಎಂದರೆ, ಸದರಿ ಸಂಖ್ಯೆಯ ವಾಹನ ಅಂದು ಬೆಳಗ್ಗೆಯಿಂದ ರಾತ್ರಿವರೆಗೂ ಮೈಸೂರಿನ ಬನ್ನಿಮಂಟಪದ ಕಚೇರಿಯ ಪಾರ್ಕಿಂಗ್ ಸ್ಥಳದಲ್ಲೇ ನಿಂತಿತ್ತು. ಟೋಲ್‌ಗೇಟ್ ದಾಟದ ವಾಹನದ ಮೇಲೆ ಪ್ರಕರಣ ದಾಖಲಿಸಿರುವ ಸ್ಟ್ರೀಟ್ ಸಿಸಿ ಕ್ಯಾಮರಾ ತಂತ್ರಜ್ಞಾನದ ಎಡವಟ್ಟಿನಿಂದ ದ್ವಿಚಕ್ರ ವಾಹನದ ಮಾಲೀಕ ಎನ್.ಗಿರೀಶ್ ವಿಚಲಿತರಾಗಿದ್ದಾರೆ.

ಮತ್ತೊಂದು ಪ್ರಕರಣದಲ್ಲಿ ಮೈಸೂರಿನ ಗಾಂಧಿ ಸ್ಕ್ವೇರ್‌ನಲ್ಲಿ ತಮ್ಮ ಬೈಕ್ ನಿಲ್ಲಿಸಿದ್ದ ಪತ್ರಿಕಾ ವಿತರಕ ಹೊನ್ನಪ್ಪ ಅವರ ಹೀರೋ ಹೋಂಡಾ ಪ್ಯಾಷನ್ ಪ್ಲಸ್ ಬೈಕ್ (ಕೆಎ 09–ಇಎಲ್ 7999) ನಂಜನಗೂಡು ಟೌನ್, ಹುಲ್ಲಹಳ್ಳಿ ಸರ್ಕಲ್‌ನಲ್ಲಿ ಹೆಲ್ಮೆಟ್ ಧರಿಸದೇ ಚಾಲನೆ ಮಾಡಲಾಗಿದೆ ಎಂದು ಪ್ರಕರಣ ದಾಖಲಾಗಿರುವ ಬಗ್ಗೆ ಮೆಸೇಜ್ ಬಂದಿದೆ.

ಶಾರದಾ ವಿಲಾಸ ಪ್ರೌಢಶಾಲೆಯಲ್ಲಿ ಗುರುವಂದನಾ ಕಾರ್ಯಕ್ರಮ



ಮೈಸೂರಿನ ಶಾರದಾ ವಿಲಾಸ ಪ್ರೌಢಶಾಲೆಯ 1982–85ನೇ ಸಾಲಿನ ಹಳೆಯ ವಿದ್ಯಾರ್ಥಿಗಳು ಖಾಸಗಿ ಹೋಟೆಲ್‌ನಲ್ಲಿ 'ಗುರುವಂದನಾ ಕಾರ್ಯಕ್ರಮ' ನೆರವೇರಿಸಿದರು. ಚಿತ್ರದಲ್ಲಿ ಶಾಲೆಯ ಶಿಕ್ಷಕರು, ಹಳೆಯ ವಿದ್ಯಾರ್ಥಿಗಳನ್ನು ಕಾಣಬಹುದು.

ಗುಂಡು ಹಾರಿಸಿ ಸ್ಯಾಂಡಲ್‌ವುಡ್ ನಿರ್ದೇಶಕನ ಕೊಲೆ ಯತ್ನ; ನಟ ತಾಂಡವ ರಾಮ್ ಬಂಧನ

ಬೆಂಗಳೂರು, ನ.19– 'ಮುಗಿಲ್ ಪೇಟೆ' ಸಿನಿಮಾ ನಿರ್ದೇಶಕನ ಕೊಲೆಗೆ ಯತ್ನಿಸಿದ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ನಟ ತಾಂಡವ ರಾಮ್, ನಿರ್ದೇಶಕ ಭರತ್ ಮೇಲೆ ಗುಂಡು ಹಾರಿಸಿ ಕೊಲೆಗೆ ಯತ್ನಿಸಿದ ಘಟನೆ ಚಂದ್ರಾ ಲೇಔಟ್‌ನಲ್ಲಿ ನಡೆದಿದೆ.



ಲೈಸೆನ್ಸ್ ಗನ್ ತೋರಿಸಿ, ಬೆದರಿಕೆ ಹಾಕಿ ಗುಂಡು ಕೂಡ ಹಾರಿಸಿದ್ದಾರೆಂದು ಹೇಳಲಾಗಿದೆ. ನಿರ್ದೇಶಕ ಭರತ್ ಅವರು ತಾಂಡವ ರಾಮ್ ಅವರನ್ನು ಹೀರೋ ಆಗಿ ಹಾಕಿಕೊಂಡು ಸಿನಿಮಾ ಶುರು ಮಾಡಿ ಅರ್ಧಕ್ಕೆ ನಿಲ್ಲಿಸಿದ್ದರಂತೆ. ಈ ಕಾರಣಕ್ಕೆ ಗಲಾಟೆ ಮಾಡಿ ಕೊಲೆ ಯತ್ನವೂ ನಡೆದಿದೆ ಎಂದು ಆರೋಪಿಸಲಾಗಿದೆ. ಜೋಡಿ ಹಕ್ಕಿ, ಭೂಮಿಗೆ ಬಂದ ಭಗವಂತ ಸೇರಿ ಹಲವು ಧಾರಾವಾಹಿಯಲ್ಲಿ ನಟಿಸಿದ್ದ ತಾಂಡವ ರಾಮ್, ಭರತ್ ಕೊಲೆಗೆ ಯತ್ನ ನಡೆಸಿದ್ದು, ತಾಂಡವ ರಾಮ್ ನನ್ನು ಪೊಲೀಸರು ಬಂಧಿಸಿ ವಿಚಾರಣೆ ನಡೆಸುತ್ತಿದ್ದಾರೆ. ನಿರ್ದೇಶಕ ಭರತ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಮಾಧ್ಯಮದವರ ಮುಂದೆ ಉದ್ಧಟತನ ಪ್ರದರ್ಶನ; ಡಾ.ಡಿ.ಬಿ.ನಟೇಶ್ ವರ್ತನೆ ಖಂಡಿಸಿ ಧರಣಿ

ಮೈಸೂರು,ನ.19(ಆರ್‌ಕೆ)– ಮೈಸೂರು ಲೋಕಾಯುಕ್ತ ಕಚೇರಿ ಬಳಿ ಮಾಧ್ಯಮದವರ ಮೇಲೆ ಹರಿಹಾಯ್ದ ಮುಡಾ ಮಾಜಿ ಆಯುಕ್ತ ಡಾ.ಡಿ.ಬಿ.ನಟೇಶ್ ವರ್ತನೆ ಖಂಡಿಸಿ ಆರ್‌ಟಿಐ ಕಾರ್ಯಕರ್ತ ಗಂಗರಾಜ್ ಹಾಗೂ ಮುಡಾ ನಿವೃತ್ತ ಅಧಿಕಾರಿ ಪಿ.ಎಸ್.ನಟರಾಜ್ ಸ್ಥಳದಲ್ಲೇ ಧರಣಿ ನಡೆಸಿದರು.

ಒಬ್ಬ ಜವಾಬ್ದಾರಿಯುತ ಅಧಿಕಾರಿಯಾಗಿ ಮಾಧ್ಯಮದವರಿಗೆ ಸೂಕ್ತ ಪ್ರತಿಕ್ರಿಯೆ ನೀಡದೇ ಅವರ ಮೇಲೆ ಹರಿಹಾಯ್ದು, ಉದ್ಧಟತನದಿಂದ ವರ್ತಿಸಿರುವುದು ಸರಿಯಲ್ಲ ಎಂದು, ಕಪ್ಪು ಪಟ್ಟಿ ಧರಿಸಿ ಪ್ರತಿಭಟನೆ ನಡೆಸಿದರಲ್ಲದೇ, ಅವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ, ಬಂಧಿಸಬೇಕೆಂದು ಒತ್ತಾಯಿಸಿದರು.

ಬಿ.ಎಂ.ಮಲ್ಲಿಕಾರ್ಜುನಸ್ವಾಮಿ ಅವರಿಂದ ಬಿ.ಎಂ.ಪಾರ್ವತಿ ಅವರು ಕೆಸರೆ ಗ್ರಾಮದ ಸರ್ವೆ ನಂ.464ರ 3.16 ಎಕರೆ ಜಮೀನನ್ನು ಖರೀದಿಸಿದ್ದಾರೆಂದು ಸರ್ಕಾರಕ್ಕೆ ತಪ್ಪು ಮಾಹಿತಿ ನೀಡಿರುವ ಡಾ.ನಟೇಶ್, 2021ರ ಡಿಸೆಂಬರ್ 30ರಂದು ನಡೆದ ಮುಡಾ ಸಭೆಯಲ್ಲಿ ನಿರ್ಣಯವಾಗದಿದ್ದರೂ, ತಪ್ಪು ಮಾಹಿತಿ ಉಲ್ಲೇಖಿಸಿ ಬಿ.ಎಂ. ಪಾರ್ವತಿ ಅವರಿಗೆ 14 ನಿವೇಶನಗಳನ್ನು ಮಂಜೂರು ಮಾಡಿ, ಅಕ್ರಮವೆಸಗಿರುವುದರಿಂದ ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆಯೂ ಧರಣಿ ನಿರತರು ಆಗ್ರಹಿಸಿದರು. ಡಾ. ನಟೇಶ್ ಶೇ. 50:50ರಡಿ ಕಾನೂನು ಬಾಹಿರವಾಗಿ ನಿವೇಶನ ಮಂಜೂರು ಮಾಡಿರುವ ಸಂಬಂಧ ಪೂರಕ ದಾಖಲೆಗಳೊಂದಿಗೆ ಜಾರಿ ನಿರ್ದೇಶನಾಲಯ (ಇಡಿ)ಕ್ಕೂ ದೂರು ಸಲ್ಲಿಸುವುದಾಗಿಯೂ ಗಂಗರಾಜ್ ಮತ್ತು ನಟರಾಜ್ ಧರಣಿ ವೇಳೆ ತಿಳಿಸಿದರು.

ಇಂದು ಲಲಿತ ಕಲಾ–ಕರಕುಶಲ ಉಪ ಸಮಿತಿ ಉದ್ಘಾಟನೆ

ಮೈಸೂರು,ನ.19– ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ವತಿಯಿಂದ ದಸರಾ ವಸ್ತುಪ್ರದರ್ಶನದ ಅಂಗವಾಗಿ ರಚಿಸಲಾದ ಲಲಿತಕಲಾ ಮತ್ತು ಕರಕುಶಲ ಉಪಸಮಿತಿ ಉದ್ಘಾಟನಾ ಕಾರ್ಯಕ್ರಮವನ್ನು ನವೆಂಬರ್ 20ರಂದು ಸಂಜೆ 4 ಗಂಟೆಗೆ ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಆವರಣದಲ್ಲಿ ಆಯೋಜಿಸಲಾಗಿದ್ದು, ಪೊಲೀಸ್ ಕಮಿಷನರ್ ಸೀಮಾ ಲಾಟ್ಕರ್ ಉದ್ಘಾಟಿಸುವರು. ಸಮಾರಂಭಕ್ಕೆ ಮುಖ್ಯ ಅತಿಥಿಗಳಾಗಿ ವಿಧಾನಪರಿಷತ್ ಸದಸ್ಯ ಡಿ. ತಿಮ್ಮಯ್ಯ ಅವರು ಭಾಗವಹಿಸಲಿದ್ದು, ಅಂದು ಬೆಳಗ್ಗೆ 11 ಗಂಟೆಗೆ ಕಲಾವಿದರಿಂದ "ಕಲಾಶಿಬಿರ" ಕಾರ್ಯಕ್ರಮವನ್ನು ಆಯೋಜಿಸಲಾಗಿದೆ

ದಸರಾ ವಸ್ತುಪ್ರದರ್ಶನದಲ್ಲಿ ಕನಕದಾಸರ ಜಯಂತಿ



ಮೈಸೂರು ದಸರಾ ವಸ್ತುಪ್ರದರ್ಶನದ ಪಿ.ಕಾಳಿಂಗರಾವ್ ಗಾನ ಮಂಟಪದಲ್ಲಿ ಸಾಂಸ್ಕೃತಿಕ ಉಪ ಸಮಿತಿ ವತಿಯಿಂದ ಸಂತ ಶ್ರೇಷ್ಠ ಭಕ್ತ ಕನಕದಾಸರ ಜಯಂತಿ ಆಚರಿಸಲಾಯಿತು. ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್‌ಖಾನ್, ಮಾಜಿ ಶಾಸಕ ಎಂ.ಕೆ. ಸೋಮಶೇಖರ್, ಸಾಂಸ್ಕೃತಿಕ ಉಪಸಮಿತಿ ಅಧ್ಯಕ್ಷ ರಘುರಾಜೇ ಅರಸ್, ಉಪಾಧ್ಯಕ್ಷ ಕೃಷ್ಣ, ಲತಾ ರಂಗನಾಥ್, ವಿನಯ್ ಮತ್ತಿತರರು ಉಪಸ್ಥಿತರಿದ್ದರು.

ಯುಎಇಯಲ್ಲಿ ಕೊಡಗು ಅರೆಭಾಷೆ ಗೌಡ ಕುಟುಂಬಗಳಿಂದ ಸಾಂಪ್ರದಾಯಿಕ ಕೈಲ್ ಮುಹೂರ್ತ ಹಬ್ಬ ಆಚರಣೆ

ಮೈಸೂರು: ಯುಎಇಯಲ್ಲಿ ನೆಲೆಸಿರುವ ಕೊಡಗು ಅರೆಭಾಷೆ ಗೌಡ ಕುಟುಂಬಗಳು ಸತತ 3ನೇ ವರ್ಷವೂ ಕೈಲ್ ಮುಹೂರ್ತ ಹಬ್ಬವನ್ನು ನ.9ರಂದು ಅಜ್ಮಾನ್ ಬೀಚ್ ಹೋಟೆಲ್‌ನಲ್ಲಿ ಆಚರಿಸಿದವು.

ಆಯುಧ ಪೂಜೆಯೊಂದಿಗೆ ಪ್ರಾರಂಭಿಸಿ, ಕ್ರೀಡಾ ಜ್ಯೋತಿ ಬೆಳಗುವುದರೊಂದಿಗೆ ಆಟೋಟ ಚಟುವಟಿಕೆಗಳಿಗೆ ಚಾಲನೆ ನೀಡಲಾಯಿತು.

ಮಹಿಳೆಯರು, ಚಿಕ್ಕಮಕ್ಕಳು ಹಗ್ಗಜಗ್ಗಾಟ, ಮಡಕೆ ಒಡೆಯುವುದು ಇತ್ಯಾದಿಗಳಲ್ಲಿ ಭಾಗವಹಿಸಿದರು. ಪುರುಷರು ಗುಂಡು ಎಸೆತ, ಹಗ್ಗಜಗ್ಗಾಟ, ತೆಂಗಿನಕಾಯಿ ಒಡೆಯುವುದು ಇತ್ಯಾದಿ ಸ್ಪರ್ಧೆಗಳಲ್ಲಿ ಪಾಲ್ಗೊಂಡರು. ಸಾಂಪ್ರದಾಯಿಕ ಭೋಜನದ ನಂತರ ಎಲ್ಲಾ ಸಾಂಸ್ಕೃತಿಕ ಚಟುವಟಿಕೆಗಳು ನಡೆದವು. ಪುಟಾಣಿ ಮಕ್ಕಳ ನೃತ್ಯ ಪ್ರದರ್ಶನ ಅಂದಿನ ವಿಶೇಷ ಆಕರ್ಷಣೆಯಾಗಿತ್ತು.



ಯುಎಇಯಲ್ಲಿ ನೆಲೆಸಿರುವ ಕೊಡಗು ಅರೆಭಾಷೆ ಗೌಡ ಕುಟುಂಬಗಳು ಕೈಲ್ ಮುಹೂರ್ತ ಹಬ್ಬವನ್ನು ನ.9ರಂದು ಅಜ್ಮಾನ್ ಬೀಚ್ ಹೋಟೆಲ್‌ನಲ್ಲಿ ಆಚರಿಸಿದವು.

ಕೆ.ಜಿ.ಎಸ್ ಒಕ್ಕೂಟದ ಅಧ್ಯಕ್ಷ ಸೂರ್ತಲೆ ಸೋಮಣ್ಣ, ಮಡಿಕೇರಿ ಅಧ್ಯಕ್ಷರಾದ ಪೆರಿಯನ ಜಯಾನಂದ, ಕೈಲ್ ಮುಹೂರ್ತ ಹಬ್ಬ ಆಚರಣೆಯ ಸಾಂಸ್ಕೃತಿಕ ಮಹತ್ವದ ಒಂದು ವೀಡಿಯೊ ಸಂದೇಶದ ಮೂಲಕ ಹಾರೈಸಿದರು. ಇಡೀ ಕಾರ್ಯಕ್ರಮವನ್ನು ಅಚ್ಚಾಂಡಿರ, ಆನೇರ, ಬೆಳ್ಯನ, ಕಡ್ಲೇರ, ಕಲ್ಲಂಬಿ, ಕರ್ಣಯ್ಯನ, ಕತ್ರಿಕೊಲ್ಲಿ, ಕುದುಪಜೆ, ಕೊಂಪುಳಿರ ಮತ್ತು ಮೊಟ್ಟನ ಕುಟುಂಬಗಳು ಆಯೋಜಿಸಿದ್ದವು. ಯುಎಇಯಲ್ಲಿ ನೆಲೆಸಿರುವ ಎಲ್ಲಾ ಕೊಡಗು ಅರೆಭಾಷೆ ಗೌಡ ಕುಟುಂಬಗಳು ಭಾಗವಹಿಸಿ ಕೈಲ್ ಮುಹೂರ್ತ ಹಬ್ಬವನ್ನು ಅದ್ದೂರಿಯಾಗಿ ಆಚರಿಸಲಾಯಿತು.

ಮೈಸೂರು ಮಿತ್ರ

ಬುಧವಾರ 20 ನವೆಂಬರ್ 2024

ನ.22ರಂದು ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ವೇದಿಕೆ ನಿರ್ಮಾಣಕ್ಕೆ ಭೂಮಿ ಪೂಜೆ



ಮಂಡ್ಯ,ನ.19– ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ವೇದಿಕೆ ನಿರ್ಮಾಣಕ್ಕೆ ನ.22ರಂದು ಭೂಮಿ ಪೂಜೆ ಮಾಡಲಾಗುವುದು ಎಂದು ಶಾಸಕ ಪಿ.ಎಂ.ನರೇಂದ್ರಸ್ವಾಮಿ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ವೇದಿಕೆ ಸಮಿತಿಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಎಲ್ಲಾ ಸಮಿತಿಗಳ ಕೆಲಸಕ್ಕಿಂತ ವೇದಿಕೆ ಸಮಿತಿಯ ಕೆಲಸ ಮುಖ್ಯವಾಗಿರುತ್ತದೆ. ಮುಖ್ಯ ವೇದಿಕೆ ಹಾಗೂ ಎರಡು ಸಮಾನಾಂತರ ವೇದಿಕೆ ಸೇರಿದಂತೆ ಮೂರು ಜವಾಬ್ದಾರಿಯುತ ಅಧಿಕಾರಿಗಳನ್ನು ನಿಯೋಜಿಸಬೇಕು. ವೇದಿಕೆಗಳ ನಿರ್ಮಾಣದ ಜೊತೆಗೆ ಪಾರ್ಕಿಂಗ್ ಸ್ಥಳ ನಿಗದಿಯಾಗಬೇಕು, ಮಾಧ್ಯಮ ಕೇಂದ್ರ, ವಸ್ತುಪ್ರದರ್ಶನ ಮಳಿಗೆ, ವಾಣಿಜ್ಯ ಮಳಿಗೆ, ಪುಸ್ತಕ ಮಳಿಗೆ, ಆಹಾರ ವಿತರಣೆಗೆ ಕೌಂಟರ್‌ಗಳು ಸೇರಿದಂತೆ ವಿವಿಧ ಇಲಾಖೆಗಳು ನೀಡುವ ವಸ್ತುಪ್ರದರ್ಶನ ಮಳಿಗೆಗಳ ನಿರ್ಮಾಣ ಅಚ್ಚುಕಟ್ಟಾಗಿ ನಡೆಯಬೇಕು ಎಂದು ಹೇಳಿದರು.

ಜಿಲ್ಲಾಧಿಕಾರಿ ಡಾ.ಕುಮಾರ ಮಾತನಾಡಿ, ಮೈಸೂರು ಮಾರ್ಗವಾಗಿ ಬರುವವರಿಗೆ ಸತ್ವ ಬಳಿ ಹಾಗೂ ಬೆಂಗಳೂರು ಮಾರ್ಗವಾಗಿ ಬರುವವರಿಗೆ ಪ್ರತ್ಯೇಕವಾಗಿ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ. ಪಾರ್ಕಿಂಗ್ ಸ್ಥಳದಿಂದ ಕಾರ್ಯಕ್ರಮ ನಡೆಯುವ ಸ್ಥಳಕ್ಕೆ ಉಚಿತ ಬಸ್ ವ್ಯವಸ್ಥೆ ಮಾಡಲಾಗುವುದು. ಕಾರ್ಯಕ್ರಮ ನಡೆಯುವ ಪ್ರಾರಂಭಿಕ ಸ್ಥಳದಲ್ಲಿ ಮಹಿಳೆಯರು, ವಿಕಲಚೇತನರಿಗೆ ಸಹಾಯ ಒದಗಿಸಲು ಮಾಹಿತಿ ಕೇಂದ್ರ ತೆರೆಯಲಾಗುವುದು ಹಾಗೂ ಇದೇ ಸ್ಥಳದಲ್ಲಿ ಆರೋಗ್ಯದಲ್ಲಿ ತೊಂದರೆಯಾದಲ್ಲಿ ಚಿಕಿತ್ಸೆ ನೀಡಲು ಆರೋಗ್ಯ ಕೇಂದ್ರ ತೆರೆಯಲಾಗುವುದು ಎಂದರು.

ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಮೂರು ಬೋರ್‌ವೆಲ್‌ಗಳನ್ನು ಗುರುತಿಸಲಾಗಿದೆ. ಬೋರ್‌ವೆಲ್‌ನಿಂದ ನೀರು ಪಂಪ್ ಆದ ನಂತರ ಶುದ್ಧಿಕರಿಸಿದ ನಂತರ ಟ್ಯಾಂಕ್ ಹಾಗೂ ಪೈಪ್‌ಲೈನ್ ಸಹಾಯದಿಂದ ಕುಡಿಯಲು ಹಾಗೂ ಅಡುಗೆ ತಯಾರಿಕೆಗೆ ನೀರು ಒದಗಿಸಲಾಗುವುದು. ಶೌಚಾಲಯಗಳಿಗೆ ಸ್ಥಳ ನಿಗದಿ ಮಾಡಿ, ನಿರ್ಮಾಣ ಮಾಡಿ. ಸಾರ್ವಜನಿಕರು ಹುಡುಕಾಡುವಂತಾಗಬಾರದು. ನೀರಿನ ಲಭ್ಯತೆಗೆ ಸರಿಯಾದ ವ್ಯವಸ್ಥೆ ಇರಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಜಿ.ಪಂ ಸಿಇಓ ಶೇಕ್ ತನ್ವೀರ್ ಆಸಿಫ್, ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಹೇಶ್ ಜೋಶಿ, ಕನ್ನಡ ಸಾಹಿತ್ಯ ಪರಿಷತ್ತಿನ ಸಂಚಾಲಕಿ ಡಾ.ಮೀರಾಶಿವಲಿಂಗಯ್ಯ, ಪಿಡಬ್ಲ್ಯೂಡಿ ಕಾರ್ಯಪಾಲಕ ಅಭಿಯಂತರ ಹರ್ಷ, ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಡಾ.ಕೃಷ್ಣೇಗೌಡ ಹುಸ್ಕೂರು, ಹರ್ಷ ಪಣ್ಣೆದೊಡ್ಡಿ, ಅಪ್ಪಾಜಪ್ಪ ಉಪಸ್ಥಿತರಿದ್ದರು.

ರಾಜಕಾರಣದಿಂದ ತನ್ನತನ ಕಳೆದುಕೊಂಡ ಸಹಕಾರ ಕ್ಷೇತ್ರ

ಅಕ್ಕಿ ಹೆಬ್ಬಾಳು ಅಖಿಲ ಭಾರತ ಸಹಕಾರ ಸಪ್ತಾಹದಲ್ಲಿ ಸಚಿವ ಚಲುವರಾಯಸ್ವಾಮಿ ಅಭಿಪ್ರಾಯ



71ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಚಲುವರಾಯಸ್ವಾಮಿ ಉದ್ಘಾಟಿಸಿದರು.

ಕೆ.ಆರ್.ಪೇಟೆ,ನ.19– ಸಹಕಾರಿ ಸಂಘಗಳು ಆರಂಭದಲ್ಲಿ ಕೇವಲ ಕೃಷಿಯೊಂದಿಗೆ ಸಂಬಂಧ ಹೊಂದಿದ್ದವು, ಈಗ ಇತರ ಕ್ಷೇತ್ರಗಳಿಗೆ ಇದು ವ್ಯಾಪಿಸಿದೆ. ಇದರಿಂದಾಗಿ ದೇಶದ ಆರ್ಥಿಕ ಅಭಿವೃದ್ಧಿಗೆ ಸಹಕಾರಿಗಳ ಮಹತ್ವವನ್ನು ಹೆಚ್ಚಿಸಿದೆ ಎಂದ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ, ಸಹಕಾರ ಕ್ಷೇತ್ರವು ಸಮೃದ್ಧಿಯಾಗಿ ಬೆಳೆಯಬೇಕಾದರೆ ರಾಜಕೀಯ ಮುಕ್ತವಾಗಿರಬೇಕು ಎಂದರು.

ತಾಲೂಕಿನ ಅಕ್ಕಿಹೆಬ್ಬಾಳು ಗ್ರಾಮದಲ್ಲಿ ನಡೆದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ವಜ್ರ ಮಹೋತ್ಸವ ಹಾಗೂ 71ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಹಕಾರ ಸಪ್ತಾಹ ಕಾರ್ಯಕ್ರಮವನ್ನೂ ದೇಶದ ಪ್ರಥಮ ಪ್ರಧಾನಿ ಪಂಡಿತ್ ಜವಾಹರ್‌ಲಾಲ್ ನೆಹರು ಅವರ ಹುಟ್ಟು ಹಬ್ಬದ ದಿನದಿಂದ ಒಂದು ವಾರಗಳ ಕಾಲ ಇಡೀ ದೇಶಾದ್ಯಂತ ಆಚರಣೆ ಮಾಡಲಾಗುತ್ತಿದೆ. ಏಕೆಂದರೆ ಸಹಕಾರ ಕ್ಷೇತ್ರಕ್ಕೆ ಹೆಚ್ಚು ಒತ್ತು ನೀಡಿದ ದೇಶದ ಪ್ರಥಮ ಪ್ರಧಾನಿ ನೆಹರು. ಅವರ ದೂರದೃಷ್ಟಿಯ ಪ್ರತಿಫಲವಾಗಿ ಇಂದು ಸಹಕಾರ ಕ್ಷೇತ್ರವು ಸಮೃದ್ಧಿಯಾಗಿ ಬೆಳೆದಿದೆ ಎಂದರು. ಇನ್ನೂ ಹೆಚ್ಚು ಸಮೃದ್ಧಿ ಯಾಗಿ ಬೆಳೆಯಬೇಕಾದರೆ ರಾಜಕೀಯ ಮುಕ್ತವಾಗಿರಬೇಕು ಎಂದು ಸಚಿವರು ಹೇಳಿದರು. ರಾಜಕೀಯಕ್ಕಿಂತ ಸಹಕಾರ ಕ್ಷೇತ್ರ ಬಲಿಷ್ಠವಾಗಿದೆ. ಸಹಕಾರ ಕ್ಷೇತ್ರದಲ್ಲಿ ರಾಜಕಾರಣ ಬೆರೆಸಿದ ಕಾರಣ ಸ್ವಲ್ಪ ತನ್ನತನವನ್ನು ಕಳೆದುಕೊಂಡಿದೆ. ರೈತರಿಗೆ ಹಾಗೂ ಮಹಿಳಾ ಸಂಘಗಳಿಗೆ ಶೂನ್ಯ ಬಡ್ಡಿ ದರದಲ್ಲಿ ಸರ್ಕಾರ 3ರಿಂದ 5 ಲಕ್ಷದವರೆಗೆ ಸಾಲ ನೀಡುತ್ತಿದೆ. ಮಂಡ್ಯ ಜಿಲ್ಲೆಯಲ್ಲಿ ಸುಮಾರು 1000 ಕೋಟಿಯಷ್ಟು ಸಾಲವನ್ನು ರೈತರಿಗೆ ನೀಡಲಾಗಿದೆ ಎಂದರು. ಸ್ಥಳೀಯ ರೈತರಿಗೆ ಕೃಷಿ ವಿಚಾರವಾಗಿ ಯಾವುದೇ ಸಮಸ್ಯೆ ಉಂಟಾಗದಂತೆ ಮಾಡಬೇಕು. ಈ ಸಹಕಾರ ಸಂಘವನ್ನು ಹೆಚ್ಚು ಶಕ್ತಿಯುತವಾಗಿ ಬೆಳೆಸಿಕೊಂಡು ಹೋಗಬೇಕು ಎಂದರು.

ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಶಾಸಕ ಹೆಚ್.ಟಿ.ಮಂಜು, ಭಾರತದ ಸಹಕಾರ ಚಳವಳಿಯ ಆರೋಗ್ಯಕರ ಬೆಳವಣಿಗೆಗೆ ಹಲವಾರು ನಾಯಕರು ಶ್ರಮಿಸಿದ್ದಾರೆ ತಮ್ಮ ತನು, ಮನವನ್ನು ಸಮರ್ಪಿಸಿದ್ದಾರೆ. ಅಂತಹವರಲ್ಲಿ ಸ್ವತಂತ್ರ ಭಾರತದ ಪ್ರಥಮ ಪ್ರಧಾನಿ ಪಂಡಿತ ಜವಾಹರಲಾಲ್ ನೆಹರೂ ಅವರು ಅಗ್ರಗಣ್ಯರೆನಿಸಿಕೊಂಡಿದ್ದಾರೆ ಎಂದರು.

ಅಕ್ಕಿಹೆಬ್ಬಾಳು ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಎಸ್.ಆರ್.ನವೀನ್ ಕುಮಾರ್ ಮಾತನಾಡಿದರು. ಅಕ್ಕಿಹೆಬ್ಬಾಳು ಪ್ರಾಥಮಿಕ ಕೃಷಿ ಪತ್ತಿನ ಸಹಕರ ಸಂಘದ ಅಧ್ಯಕ್ಷ ಎಸ್.ಆರ್.ನವೀನ್ ಕುಮಾರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಸಂಘದ ವಜ್ರ ಮಹೋತ್ಸವದ ಅಂಗವಾಗಿ ಮೈಸೂರಿನ ಸುಯೋಗ್, ಮಂಡ್ಯದ ಜೈನ್ ಆಸ್ಪತ್ರೆಯಿಂದ ಸಾರ್ವಜನಿಕರಿಗೆ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಗಿತ್ತು.

ಮಾಜಿ ಶಾಸಕ ಕೆ.ಬಿ.ಚಂದ್ರಶೇಖರ್, ಬಿ.ಪ್ರಕಾಶ್, ಮೈಷುಗರ್ ಕಾರ್ಖಾನೆ ಅಧ್ಯಕ್ಷ ಸಿ.ಡಿ.ಗಂಗಾಧರ್, ಮಂಡ್ಯ ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷ ಕಾಡೇನಹಳ್ಳಿ ರಾಮಚಂದ್ರು ಪಿಎಲ್‌ಡಿ ಬ್ಯಾಂಕ್ ಮಾಜಿ ನಿರ್ದೇಶಕರು ಹಾಗೂ ಹಿರಿಯ ಸಹಕಾರಿ ಧುರೀಣರಾದ ಅಕ್ಕಿಹೆಬ್ಬಾಳು ಎ.ಆರ್.ರಘು, ಅಕ್ಕಿಹೆಬ್ಬಾಳು ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಎಸ್.ಆರ್.ನವೀನ್‌ಕುಮಾರ್, ಉಪಾಧ್ಯಕ್ಷ ಎ.ಜೆ.ಕುಮಾರ್, ಎಂಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಅಶೋಕ್ ಇತರರಿದ್ದರು.

ಕಸಾಪ ಸಮ್ಮೇಳನ ಸ್ಥಳ ನಿಗದಿ ಜಿಲ್ಲಾಡಳಿತದ ತೀರ್ಮಾನ



ಸುದ್ದಿಗೋಷ್ಠಿಯಲ್ಲಿ ಮಾತನಾಡುತ್ತಿರುವ ಪ್ರೊ.ಎಚ್.ಎಚ್.ಮುದ್ದೇಗೌಡ.

ಮಂಡ್ಯ: ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಧಿಕಾರಿಗಳ ಸಲಹೆ ಹಾಗೂ ಆದೇಶದ ಮೇರೆಗೆ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ನಡೆಯುವ ಸ್ಥಳ ನಿಗದಿ ಮಾಡಲಾಗಿದೆಯೇ ಹೊರತು ಸ್ಥಳ ನಿಗದಿಗೂ ಕೇಂದ್ರ ಕಸಾಪ ಅಧ್ಯಕ್ಷ ಡಾ.ಮಹೇಶ್ ಜೋಷಿಗೂ ಯಾವುದೇ ಸಂಬಂಧವಿಲ್ಲ ಎಂದು ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯಕಾರಿ ಮಂಡಳಿಯ ಸದಸ್ಯ ಪ್ರೊ.ಎಚ್.ಎಚ್.ಮುದ್ದೇಗೌಡ ಸಮರ್ಥಿಸಿಕೊಂಡರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮ್ಮೇಳನ ನಡೆಸಲು ಬೇಕಾಗುವ ಸ್ಥಳ ನಗರದಲ್ಲಿ ದೊರೆಯಲಿಲ್ಲ, 900 ಮಳಿಗೆ, ಊಟಕ್ಕೆ ದೊಡ್ಡ ಸ್ಥಳ, ಮುಖ್ಯ ವೇದಿಕೆ, ಎರಡು ಸಮಾನಾಂತರ ವೇದಿಕೆ, ಪಾರ್ಕಿಂಗ್ ವ್ಯವಸ್ಥೆಗೆ ಒದಗಿಸುವಷ್ಟು ದೊಡ್ಡ ಸ್ಥಳ ನಗರದಲ್ಲಿ ಇರದ ಕಾರಣ ನಗರದಿಂದ ಹೊರಗಿನ ಸ್ಥಳವನ್ನು ಆಯ್ಕೆ ಮಾಡಲಾಗಿದೆಯೆಂದರು. ಗೋಷ್ಠಿಯಲ್ಲಿ ಸಮ್ಮೇಳನದ ಸಂಚಾಲಕಿ ಮೀರಾ ಶಿವಲಿಂಗಯ್ಯ, ಪದಾಧಿಕಾರಿಗಳಾದ ಹರ್ಷ ಪಣ್ಣೆದೊಡ್ಡಿ, ಕೃಷ್ಣೇಗೌಡ ಹುಸ್ಕೂರು, ಅಪ್ಪಾಜಪ್ಪ, ಚಂದ್ರಲಿಂಗು, ಸುಜಾತ ಕೃಷ್ಣ ಇದ್ದರು.

ಟಿಪ್ಪರ್ ಹರಿದು ರೈತ ಸಾವು, ಪರಿಹಾರಕ್ಕಾಗಿ ಪ್ರತಿಭಟನೆ



ಭಾರತೀನಗರ, ನ.19– ರಸ್ತೆ ಕಾಮಗಾರಿಗೆ ಜಲ್ಲಿ ಸಾಗಿಸುತ್ತಿದ್ದ ಟಿಪ್ಪರ್ ಹರಿದು ರೈತನೋರ್ವ ಮೃತಪಟ್ಟಿದ್ದು, ಪರಿಹಾರಕ್ಕೆ ಆಗ್ರಹಿಸಿ ರೈತರು ಪ್ರತಿಭಟನೆ ನಡೆಸಿದ ಘಟನೆ ಸಮೀಪದ ಕರಡಕೆರೆ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ರೈತ ನಿಂಗೇಗೌಡ(55) ಮೃತ ದುರ್ದೈವಿ. ಮಂಗಳವಾರ ಬೆಳಿಗ್ಗೆ ನಿಂಗೇಗೌಡ ಜಾನುವಾರುಗಳಿಗೆ ಟಿವಿಎಸ್ ಮೊಪೆಡ್‌ನಲ್ಲಿ ಮೇವನ್ನು ತಂದು ಮನೆಯ ಬಳಿ ಮೊಪೆಡ್ ನಿಲ್ಲಿಸಿ ಮೇವು ಇಳಿಸುವ ಸಂದರ್ಭದಲ್ಲಿ ರಸ್ತೆ ಕಾಮಗಾರಿಗೆ ಜಲ್ಲಿ ತಂದಿದ್ದ ಟಿಪ್ಪರ್ ಜಲ್ಲಿಯನ್ನು ಕೆಳಗೆ ಸುರಿಯಲು ಹಿಂಬದಿಗೆ ಚಲಿಸುವಾಗ ಚಾಲಕನ ನಿರ್ಲಕ್ಷ್ಯದಿಂದಾಗಿ ರೈತ ನಿಂಗೇಗೌಡನ ಮೇಲೆ ಹರಿದಿದೆ.

ಜಲ್ಲಿ ತುಂಬಿದ್ದ ಟಿಪ್ಪರ್ ಹರಿದ ತಕ್ಷಣ ಟಿವಿಎಸ್ ಮೊಪೆಡ್ ಸಂಪೂರ್ಣ ಜಖಂಗೊಂಡು ನಿಂಗೇಗೌಡ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ಸುದ್ದಿ ತಿಳಿದ ತಕ್ಷಣ ಕೆ.ಎಂ.ದೊಡ್ಡಿ ಪೊಲೀಸ್ ಠಾಣಾ ವ್ಯಾಪ್ತಿಯ ಕರಡಕೆರೆ ಗ್ರಾಮದಲ್ಲಿ ಈ ಘಟನೆ ನಡೆದಿರುವುದರಿಂದ ಸ್ಥಳೀಯ ಪೊಲೀಸ್ ಅಧಿಕಾರಿ ಆನಂದ್ ಅವರು ಇಲ್ಲದ ಕಾರಣ ಮದ್ದೂರು ಪೊಲೀಸ್ ಠಾಣೆಯ ಪೊಲೀಸ್ ಅಧಿಕಾರಿಗಳಾದ ವೆಂಕಟೇಗೌಡ ಹಾಗೂ ಶಶಿಕುಮಾರ್ ಅವರು ಸ್ಥಳಕ್ಕೆ ಆಗಮಿಸಿ ಸ್ಥಳ ಪರಿಶೀಲನೆ ನಡೆಸಿದ್ದಾರೆ.

ಪರಿಹಾರಕ್ಕಾಗಿ ಪ್ರತಿಭಟನೆ: ಈ ಅಪಘಾತಕ್ಕೆ ಚಾಲಕನ ನಿರ್ಲಕ್ಷ್ಯವೇ ಕಾರಣವಾಗಿದ್ದು, ರಸ್ತೆ ಕಾಮಗಾರಿ ನಡೆಸುತ್ತಿರುವ ಗುತ್ತಿಗೆದಾರರು ಹಾಗೂ ಟಿಪ್ಪರ್ ಮಾಲೀಕ ಸ್ಥಳಕ್ಕೆ ಆಗಮಿಸಬೇಕೆಂದು, ರೈತ ನಿಂಗೇಗೌಡ ಅವರ ಕುಟುಂಬಕ್ಕೆ ಸೂಕ್ತ ಪರಿಹಾರ ನೀಡಬೇಕು. ಅಲ್ಲಿಯವರೆಗೂ ಮೃತ ನಿಂಗೇಗೌಡರ ದೇಹವನ್ನು ಸ್ಥಳದಿಂದ ತೆರವುಗೊಳಿಸದಂತೆ ಗ್ರಾಮಸ್ಥರು ಪಟ್ಟು ಹಿಡಿದು ಪ್ರತಿಭಟನೆ ನಡೆಸಿದರು. ಸ್ಥಳದಲ್ಲಿದ್ದ ಪೊಲೀಸ್ ಅಧಿಕಾರಿಗಳು, ಗುತ್ತಿಗೆದಾರರು ಹಾಗೂ ಟಿಪ್ಪರ್ ಮಾಲೀಕರಿಗೆ ದೂರವಾಣಿ ಮೂಲಕ ಸ್ಥಳಕ್ಕೆ ಆಗಮಿಸುವಂತೆ ತಿಳಿಸಿದರು.

ನಂತರ ಸ್ಥಳಕ್ಕೆ ಆಗಮಿಸಿದ ಗುತ್ತಿಗೆ ಪಡೆದಿದ್ದ ಎಸ್‌ಸಿಸಿ ಕಂಪನಿ ಅಧಿಕಾರಿ ಮೃತನಿಗೆ ತಾತ್ಕಾಲಿಕವಾಗಿ 2.5 ಲಕ್ಷ ಪರಿಹಾರ ನೀಡುವುದಾಗಿ ಮತ್ತು ಉಳಿಕೆ ಹಣವನ್ನು ವಿಮೆ ಮೂಲಕ ಕೊಡಿಸಿಕೊಡುವುದಾಗಿ ಭರವಸೆ ನೀಡಿದ ಬಳಿಕ ಪ್ರತಿಭಟನೆಯನ್ನು ಹಿಂಪಡೆದರು. ನಂತರ ಮೃತ ದೇಹವನ್ನು ಸ್ಥಳದಿಂದ ತೆರವುಗೊಳಿಸಿ ಭಾರತೀನಗರ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಶವ ಪರೀಕೆ ನಡೆಸಲಾಯಿತು.

ಈ ಸಂಬಂಧ ಕೆ.ಎಂ.ದೊಡ್ಡಿ ಪೊಲೀಸ್ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು ಮುಂದಿನ ತನಿಖೆ ಕೈಗೊಂಡಿದ್ದಾರೆ.

ತಾಯಿ ಬುದ್ಧಿ ಮಾತಿಗೆ ಮನೆ ಬಿಟ್ಟು ಹೋದ ಬಾಲಕ



ಮಂಡ್ಯ: ತಾಯಿ ಬುದ್ಧಿ ಹೇಳಿದ್ದರಿಂದ ಬೇಸರಗೊಂಡ ಬಾಲಕ ನೋರ್ವ ಕಾಣೆಯಾಗಿರುವ ಪ್ರಕರಣ ವರದಿಯಾಗಿದೆ.

ನಗರದ ಹೌಸಿಂಗ್ ಬೋರ್ಡ್ ಮೊದಲನೇ ಹಂತದ ಚಿಕ್ಕ ವಾಟರ್ ಟ್ಯಾಂಕ್ ಬಳಿಯ ನಿವಾಸಿ ಚಂದ್ರಕಲಾ ಅವರ ಪುತ್ರ ಹಿತನ್ ಚಂದ್ರ (9) ನಾಪತ್ತೆಯಾಗಿರುವ ಬಾಲಕ.

ಬಾಲಕ ಗ್ರೀನ್ ವ್ಯಾಲಿ ಪಬ್ಲಿಕ್ ಶಾಲೆಯಲ್ಲಿ 4ನೇ ತರಗತಿ ವ್ಯಾಸಂಗ ಮಾಡುತ್ತಿದ್ದು, 4.5 ಅಡಿ ಎತ್ತರವಿದ್ದಾನೆ. ಗೋಧಿ ಮೈಬಣ್ಣ, ದುಂಡುಮುಖ ಹೊಂದಿರುವ ಬಾಲಕ ಮನೆಯಿಂದ ಹೊರಡುವಾಗ ಮೆರೂನ್ ಸ್ವೆಟರ್, ಗ್ರೇ ಕಲರ್ ನೈಟ್ ಪ್ಯಾಂಟ್ ಧರಿಸಿರುತ್ತಾನೆ. ತಾಯಿ ಬೈದು ಬುದ್ಧಿ ಮಾತು ಹೇಳಿದ್ದರಿಂದ ಆತ ಮನೆ ಬಿಟ್ಟು ಹೋಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಈ ಸಂಬಂಧ ಪಶ್ಚಿಮ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಮಾಹಿತಿಗಳಿದ್ದಲ್ಲಿ ಪಶ್ಚಿಮ ಪೊಲೀಸ್ ಠಾಣೆಗೆ ಅಥವಾ ಮೊಬೈಲ್ ಸಂಖ್ಯೆ: 7259622234, 9742339088 ಸಂಖ್ಯೆಗೆ ಸಂಪರ್ಕಿಸುವಂತೆ ಕೋರಲಾಗಿದೆ.

ಟಿಪ್ಪು ವಿಚಾರಗೋಷ್ಠಿ ಬೇಡ

ಮಂಡ್ಯ: ಕನ್ನಡ ಬೆಳವಣಿಗೆಗೆ ಕನ್ನಡ ಸಾಹಿತ್ಯ ಸಮ್ಮೇಳನ ಸೂಕ್ತ ವೇದಿಕೆಯಾಗಿದ್ದು, ಸಮ್ಮೇಳನದಲ್ಲಿ ಟಿಪ್ಪು ಸುಲ್ತಾನ್ ಬಗ್ಗೆ ವಿಚಾರ ಗೋಷ್ಠಿಗೆ ಆಗ್ರಹವಾಗುತ್ತಿರುವುದು ಅತ್ಯಂತ ಖಂಡನೀಯ ಎಂದು ಬಜರಂಗಸೇನೆ ಕರ್ನಾಟಕ ಸಂಘಟನೆಯ ಬಿ.ಮಂಜುನಾಥ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತನ್ನ ಆಳ್ವಿಕೆಯಲ್ಲಿ ಕನ್ನಡ ಭಾಷೆಯನ್ನು ಪಕ್ಕಕ್ಕಿಟ್ಟ ಟಿಪ್ಪು ಒಬ್ಬ ಕನ್ನಡ ದ್ವೇಷಿಯಾಗಿದ್ದು, ಭಾಷೆಗೆ ದ್ರೋಹ ಬಗೆದಿದ್ದಾನೆ. ಪರ್ಷಿಯನ್ ಭಾಷೆಯನ್ನು ಆಳ್ವಿಕೆಯಲ್ಲಿ ಆಡಳಿತ ಭಾಷೆಯನ್ನಾಗಿರಿಸಿಕೊಂಡಿದ್ದಕ್ಕೆ ಮೈಸೂರು ಅರಮನೆಯ ಪತ್ರಾಗಾರದಲ್ಲಿ ಸಾಕ್ಷ್ಯಗಳಿವೆ ಎಂದರು.

ನರೇಗಾ ಕೂಲಿ ಹಣ ನೀಡದ ಗ್ರಾ.ಪಂ.ವಿರುದ್ಧ ಪ್ರತಿಭಟನೆ



ಕೆ.ಆರ್.ಪೇಟೆ ತಾಲೂಕಿನ ಅಕ್ಕಿಹೆಬ್ಬಾಳು ಹೋಬಳಿಯ ಮಂದಗೆರೆ ಗ್ರಾಮ ಪಂಚಾಯಿತಿಯ ವ್ಯಾಪ್ತಿಯ ಕ್ಯಾತನಹಳ್ಳಿ ಗ್ರಾಮದಲ್ಲಿ ನರೇಗಾ ಯೋಜನೆಯಲ್ಲಿ ಕೆಲಸ ಮಾಡಿರುವ ಕೂಲಿ ಕಾರ್ಮಿಕರಿಗೆ ಕೂಲಿ ಹಣ ನೀಡದೆ. ಎನ್‌ಎಂಆರ್‌ನಲ್ಲೂ ಕೂಲಿ ಹಣವನ್ನು ರಿಝೀರೋ ಮಾಡಲಾಗಿದೆ ಎಂದು ಆರೋಪಿಸಿ ಕ್ಯಾತನಹಳ್ಳಿ ಗ್ರಾಮದ ಕೂಲಿ ಕಾರ್ಮಿಕರು ಕೆ.ಆರ್.ಪೇಟೆ ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು. ಪ್ರತಿಭಟನೆಯಲ್ಲಿ ಜಗದೀಶ್, ಶಿವರಾಜು, ಜವರೇಗೌಡ, ಶಿವಯ್ಯ, ಮಹಾದೇವ್, ಅವಿನಾಶ, ರಾಜಯ್ಯ,ಚಂದ್ರಚಾರಿ, ಸೋಮಶೇಖರ್, ಪುಟ್ಟರಾಜು,ಉದೇಶ, ಜಯಲಕ್ಷ್ಮಿ, ವಸಂತ, ರೇಖಾ, ಚಂದ್ರಮ್ಮ, ಕಾಳಯ್ಯ, ಹೇಮಾವತಿ, ಶಿವಕುಮಾರಿ, ಪುಟ್ಟತಾಯಿ, ಜಯಲಕ್ಷ್ಮಿ,ಮೀನಾಕ್ಷಿ, ಕಾಂತಮ್ಮ, ರಂಜಿತ, ಕೆಂಪಮ್ಮ ಪುಟಮ್ಮ, ಸುಮಿತ್ರಾ, ಕುಮಾರಿ, ತಮ್ಮಯ್ಯ, ಲಕ್ಷ್ಮಿ ಸೇರಿದಂತೆ ನೂರಾರು ಕೂಲಿ ಕಾರ್ಮಿಕರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

97 ಲಕ್ಷ ರೂ ವೆಚ್ಚದ ಕಬ್ಬು ಕಟಾವು ಯಂತ್ರ ವಿತರಣೆ



ಕಬ್ಬು ಕಟಾವು ಯಂತ್ರಗಳ ವಿತರಣಾ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಉದ್ಘಾಟಿಸಿದರು. ಶಾಸಕರಾದ ರವಿಕುಮಾರ್ ಗಣಿಗ, ಕೆ.ಎಂ.ಉದಯ್, ದಿನೇಶ್ ಗೂಳಿಗೌಡ ಇದ್ದಾರೆ.

ಮದ್ದೂರು, ನ.19– ಜಿಲ್ಲೆಯಲ್ಲಿ ಇದೇ ಮೊದಲ ಬಾರಿಗೆ ಮದ್ದೂರು ತಾಲೂಕಿನ ಜ್ಯೋತಿ ಎಂಬ ರೈತ ಮಹಿಳೆ 97 ಲಕ್ಷ ರೂ ವೆಚ್ಚದ ಕಬ್ಬು ಕಟಾವು ಯಂತ್ರವನ್ನು ಹಾರ್ವೆಸ್ಟ್ ಹಬ್ ಎಂಬ ಯೋಜನೆಯಡಿ ಖರೀದಿಸಿದ್ದು 39,86,000ರೂ ಸಬ್ಸಿಡಿ ಸರ್ಕಾರದಿಂದ ದೊರೆಯುತ್ತಿದೆ ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದರು.

ತಾಲೂಕಿನ ಬೆಳತೂರು ಗೇಟ್(ಮದ್ದೂರು–ಕೊಪ್ಪರಸ್ತೆ)ನಲ್ಲಿ ನಡೆದ ಕಬ್ಬು ಕಟಾವು ಯಂತ್ರಗಳ ವಿತರಣಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಕೃಷಿಯನ್ನು ಮಾಡಲು ಜಿಲ್ಲೆಯಲ್ಲಿ ಬಹಳ ಜನ ಆಸಕ್ತಿ ಹೊಂದಿದ್ದೀರಿ. ಬಹಳಷ್ಟು ಜನ ಕೃಷಿ ಇಲಾಖೆಯಿಂದ ದೊರೆಯುವ ಸಂಪನ್ಮೂಲ, ಸೌಲಭ್ಯಗಳನ್ನು ಪಡೆದುಕೊಳ್ಳುತ್ತಿದ್ದೀರಿ. ಜೊತೆಗೆ ಕೃಷಿ ಬಗ್ಗೆ ತರಬೇತಿ ಪಡೆಯುವುದು, ಸಂಶೋಧನ ಕೇಂದ್ರದಲ್ಲಿ ವಿಚಾರ ವಿನಿಮಯ ಮಾಡಿಕೊಳ್ಳುವ ಪ್ರಕ್ರಿಯೆಗಳು ನಡೆಯುತ್ತಿವೆ. ಅಮೇರಿಕ ಹಾಗೂ ಇನ್ನಿತರೆ ದೇಶಗಳಲ್ಲಿ ಕೃಷಿ ಪದ್ಧತಿಯು ಸಂಪೂರ್ಣವಾಗಿ ಯಂತ್ರದಿಂದ ಕೂಡಿರುವುದನ್ನು ನೋಡಿ ದಾಗ ನಮ್ಮ ದೇಶದ ರೈತರು ಕೃಷಿಯಲ್ಲಿ ಬಹಳ ಆಸಕ್ತಿಯಿಂದ ಯಂತ್ರಗಳನ್ನು ಕಡಿಮೆ ಪ್ರಮಾಣದಲ್ಲಿ ಬಳಸಿ ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದರು.

ಹಲವಾರು ಕಾರಣಗಳಿಂದ ಕೃಷಿ ಕಾರ್ಮಿಕರ ಸಂಖ್ಯೆ ಕಡಿಮೆಯಾಗುತ್ತಿದೆ. ಕೃಷಿಯಲ್ಲಿ ಯಂತ್ರೋಪಕರಣಗಳ ಬಳಕೆ ಹೆಚ್ಚಾಗಬೇಕಿದೆ. ಇದರ ಬಗ್ಗೆ ಕೃಷಿ ವಿಜ್ಞಾನ ಕೇಂದ್ರಗಳಲ್ಲಿ ನಡೆಸುವ ತರಬೇತಿಯಲ್ಲಿ ಹೆಚ್ಚು ಜನರು ಭಾಗವಹಿಸಬೇಕು. 97 ಲಕ್ಷ ರೂ ಗಳ ಕಬ್ಬು ಕಟಾವು ಯಂತ್ರವನ್ನು ಪರಿಶಿಷ್ಟ ಜಾತಿ ಪಂಗಡದವರಿಗೆ ಇದೆ ಯಂತ್ರ ನೀಡಿದರೆ 49 ಲಕ್ಷ ರೂ ಸಬ್ಸಿಡಿ ನೀಡಲಾಗುವುದು. ಇದನ್ನು ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಾಸಕರಾದ ರವಿಕುಮಾರ್ ಗಣಿಗ, ಕೆ.ಎಂ.ಉದಯ್, ವಿಧಾನ ಪರಿಷತ್ ಶಾಸಕ ದಿನೇಶ್ ಗೂಳಿಗೌಡ ಸೇರಿದಂತೆ ಇನ್ನಿತರೆ ಗಣ್ಯರು ಉಪಸ್ಥಿತರಿದ್ದರು.

ಸೋತರೂ, ಗೆದ್ದರೂ ಕ್ರೀಡೆಯಲ್ಲಿ ಧರ್ಮವಿರಬೇಕು



ಪಾಂಡವಪುರ ಪಟ್ಟಣದ ಟಿಎಪಿಸಿಎಂಎಸ್ ರೈತ ಸಭಾಂಗಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮವನ್ನು ಆದಿಚುಂಚನಗಿರಿ ಶಾಖಾ ಮಠದ ಪ್ರಧಾನ ಕಾರ್ಯದರ್ಶಿ ಪ್ರಸನ್ನನಾಥ ಸ್ವಾಮೀಜಿ ಉದ್ಘಾಟಿಸಿದರು.

ಪಾಂಡವಪುರ,ನ.19– ಬಹುಮಾನಕ್ಕಾಗಿ ಯಾವತ್ತು ಅನ್ಯಾಯ ಮತ್ತು ಅಧರ್ಮದ ಆಟ ಆಡಬಾರದು. ಸೋತರೂ ಪರವಾಗಿಲ್ಲ ಕ್ರೀಡೆಯಲ್ಲಿ ಧರ್ಮವಿರಬೇಕು ಎಂದು ಆದಿಚುಂಚನಗಿರಿ ಶಾಖಾ ಮಠದ ಪ್ರಧಾನ ಕಾರ್ಯದರ್ಶಿ ಪ್ರಸನ್ನನಾಥ ಸ್ವಾಮೀಜಿ ಕಿವಿಮಾತು ಹೇಳಿದರು.

ಪಟ್ಟಣದ ಟಿಎಪಿಸಿಎಂಎಸ್ ರೈತ ಸಭಾಂಗಣದಲ್ಲಿ ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ಮಂಡ್ಯ, ಕರ್ನಾಟಕ ರಾಜ್ಯ ದೈಹಿಕ ಶಿಕ್ಷಣ ಶಿಕ್ಷಕರ ಸಂಘ, ಬೆಂಗಳೂರು, ಜಿಲ್ಲಾ ದೈಹಿಕ ಶಿಕ್ಷಣ ಶಿಕ್ಷಕರ ಸಂಘ ಹಾಗೂ ತಾಲೂಕು ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ವತಿಯಿಂದ ಮಂಗಳವಾರ ಆಯೋಜಿಸಿದ್ದ ಜಿಲ್ಲಾ ಮಟ್ಟದ ದೈಹಿಕ ಶಿಕ್ಷಣ ಶಿಕ್ಷರ ಶೈಕ್ಷಣಿಕ ಸಮ್ಮೇಳನ ಮತ್ತು ವಿಚಾರ ಸಂಕಿರಣ ಉದ್ಘಾಟಿಸಿ ಅವರು ಮಾತನಾಡಿದರು. ದೈಹಿಕ ಶಿಕ್ಷಣ ಶಿಕ್ಷಕರು ಕ್ರೀಡೆಯಲ್ಲಿ ಅನ್ಯಾಯವಾಗದಂತೆ ನೋಡಿಕೊಳ್ಳಬೇಕು. ನಮ್ಮ ತಂಡ ಗೆಲ್ಲಬೇಕು ಎಂಬ ಉದ್ದೇಶಕ್ಕೆ ಅಧರ್ಮದ ಕಡೆ ವಾಲಬಾರದು. ಮಕ್ಕಳಿಗೂ ಇದೇ ರೀತಿಯ ಶಿಕ್ಷಣ ನೀಡಬೇಕು ಎಂದು ಹೇಳಿದರು.

ಕ್ರೀಡಾ ಕ್ಷೇತ್ರದಲ್ಲಿ ಮಾತ್ರ ಯಾವುದೇ ದೇಶದ ಕ್ರೀಡಾಪಟು ಗೆದ್ದರೂ ಆ ದೇಶದ ಧ್ವಜ ಹಾರಿಸಿ ಅಲ್ಲಿನ ರಾಷ್ಟ್ರಗೀತೆ ಹಾಡುತ್ತಾರೆ. ಕ್ರೀಡೆ ಬಿಟ್ಟರೆ ಬೇರ್‍ಯಾವ ಕ್ಷೇತ್ರದಲ್ಲೂ ಈ ರೀತಿಯ ಮನೋಭಾವ ಕಾಣಲು ಸಾಧ್ಯವಿಲ್ಲ. ಈ ಕಾರಣಕ್ಕಾಗಿ ನಾನು ಕ್ರೀಡಾ ಕ್ಷೇತ್ರವನ್ನು ಹೆಚ್ಚು ಪ್ರೀತಿಸುತ್ತೇನೆ. ಇದೊಂದು ದೊಡ್ಡ ಗೌರವದ ವಿಚಾರವಾಗಿದೆ. ದೈಹಿಕ ಶಿಕ್ಷಣ ಶಿಕ್ಷಕರು ಮಕ್ಕಳಿಗೆ ಆತ್ಮಬಲ, ಆತ್ಮಸ್ಥೈರ್ಯ ತುಂಬಬೇಕು. ಸೋಲನ್ನು ಗೆಲುವಿನಷ್ಟೇ ಸಮಾನವಾಗಿ ಸ್ವೀಕರಿಸುವಷ್ಟು ಮನೋಬಲ ತುಂಬಿದರೆ ವಿದ್ಯಾರ್ಥಿಗಳು ಕ್ರೀಡೆಯಲ್ಲಿ ಸೋತಾಗ ಕುಗ್ಗದೆ ಆತ್ಮಹತ್ಯೆಗೆ ಶರಣಾಗುವುದಿಲ್ಲ. ಇದರ ಜತೆಗೆ ಕ್ರೀಡೆಯಲ್ಲಿ ಅನ್ಯಾಯವಾಗುವುದು ಗಮನಕ್ಕೆ ಬಂದರೆ ಪ್ರಶ್ನಿಸಲು ಸಾಧ್ಯವಾಗದಿದ್ದರೂ ಅದನ್ನು ಪ್ರೋತ್ಸಾಹಿಸುವ ಕೆಲಸ ಮಾಡಬಾರದು ಎಂದು ಸಲಹೆ ನೀಡಿದರು.

ದೈಹಿಕ ಶಿಕ್ಷಣ ಕಾಲೇಜಿ ನಿವೃತ್ತ ಪ್ರಾಚಾರ್ಯ ಡಾ.ಸುಂದರ್‌ರಾಜ್ ಅರಸ್ ಮಾತನಾಡಿ, ದೈಹಿಕ ಶಿಕ್ಷಣ ಶಿಕ್ಷಕರು ಕ್ರೀಡಾಪಟುಗಳ ಹುಟ್ಟಿಗೆ ತಳಪಾಯ ಹಾಕುತ್ತಾರೆ. ಕ್ರೀಡೆ ಮನೋ ವಿಜ್ಞಾನದ ಶಾಖೆ ಇದ್ದಂತೆ. ಆರೋಗ್ಯವಂತ ಮನಸ್ಸು ಮತ್ತು ಆರೋಗ್ಯವಂತ ವಿದ್ಯಾರ್ಥಿಗಳನ್ನು ತಯಾರು ಮಾಡುವುದು ಶಿಕ್ಷಕರ ಕೆಲಸ. ಶಿಕ್ಷಕರು ಶಾಲೆಯಲ್ಲಿ ತಂದೆ, ತಾಯಿ, ಅಕ್ಕ, ತಂಗಿ, ಅಣ್ಣ, ತಮ್ಮಂದಿರಂತೆ ಮಕ್ಕಳನ್ನು ಪ್ರೀತಿಸಬೇಕು ಎಂದರು.

ಶಾಸಕ ದರ್ಶನ್ ಪುಟ್ಟಣ್ಣಯ್ಯ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಇದೇ ವೇಳೆ ನಿವೃತ್ತಗೊಂಡ ದೈಹಿಕ ಶಿಕ್ಷಣ ಶಿಕ್ಷಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ರಾಜ್ಯಾಧ್ಯಕ್ಷ ಚೌಡಪ್ಪ, ಉಪಾಧ್ಯಕ್ಷ ಕುಮಾರ್, ಖಜಾಂಚಿ ಬಾಲರಾಜ್, ಕಾರ್ಯದರ್ಶಿ ವೇದಾವತಿ, ತಾಲೂಕು ಅಧ್ಯಕ್ಷ ಯೋಗೇಶ್, ಪ್ರಧಾನ ಕಾರ್ಯದರ್ಶಿ ಕಡತನಾಳು ಶ್ರೀನಿವಾಸ್, ಉಪಾಧ್ಯಕ್ಷ ವಿಶ್ವನಾಥ್, ಎಚ್.ಎನ್.ರಘು, ಸರ್ಕಾರಿ ನೌಕರ ಸಂಘದ ಅಧ್ಯಕ್ಷಎಸ್.ಎನ್.ಕೆಂಪೇಗೌಡ, ರಾಜ್ಯ ಪರಿಷತ್ ಸದಸ್ಯ ಡಾ.ಸಿ.ಎ.ಅರವಿಂದ್ ಇತರರು ಇದ್ದರು.

ನ.24ರಂದು ಬೃಹತ್ ರೈತ ಸಮಾವೇಶ

ಮಂಡ್ಯ: ಕರ್ನಾಟಕ ರಾಜ್ಯ ರೈತ ಸಂಘದ ವತಿಯಿಂದ ರೈತ ಹುತಾತ್ಮರ 42ನೇ ವರ್ಷದ ನೆನಪಿನ ಆಚರಣೆ ಹಾಗೂ ಅಗಲಿದ ರೈತ ನಾಯಕರುಗಳ ನೆನಪಿನೊಂದಿಗೆ ತಾಲೂಕು ಮಟ್ಟದ ಬೃಹತ್ ರೈತ ಸಮಾವೇಶ ಕಾರ್ಯಕ್ರಮವನ್ನು ನ.24ರಂದು ಬೆಳಿಗ್ಗೆ 11 ಗಂಟೆಗೆ ಮದ್ದೂರು ತಾಲೂಕಿನ ಕೆ.ಎಂ.ದೊಡ್ಡಿಯ ನೀರಾವರಿ ಕಚೇರಿ ಎದುರು ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ರಾಜ್ಯ ವಿಭಾಗೀಯ ಉಪಾಧ್ಯಕ್ಷ ಬೋರಾಪುರ ಶಂಕರೇಗೌಡ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮಾವೇಶದ ಅಂಗವಾಗಿ ಶಾಸಕ ದರ್ಶನ್ ಪುಟ್ಟಣ್ಣಯ್ಯ ಧ್ವಜಾರೋಹಣ ನೆರವೇರಿಸಲಿದ್ದು, ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ಉದ್ಘಾಟಿಸುವರು, ಮುಖ್ಯ ಅತಿಥಿಗಳಾಗಿ ರೈತ ವರಿಷ್ಠರಾದ ಸುನೀತಾ ಪುಟ್ಟಣ್ಣಯ್ಯ, ಸಂಘದ ಕಾರ್ಯಾಧ್ಯಕ್ಷರಾದ ಎ.ಎಂ.ಮಹೇಶ್ ಪ್ರಭು, ಎ.ಗೋವಿಂದರಾಜು ಭಾಗವಹಿಸಲಿದ್ದಾರೆ ಎಂದರು.

ಎರಡು ದಿನಗಳ ಅಂತರರಾಷ್ಟ್ರೀಯ ಪ್ರಕೃತಿ ಸಮ್ಮೇಳನಕ್ಕೆ ಚಾಲನೆ



ನಾಗಮಂಗಲ: ತಾಲೂಕಿನ ಎಂ.ಹೊಸೂರು ಗೇಟ್ ಬಳಿ ಇರುವ ಕೇಂದ್ರೀಯ ಯೋಗ ಮತ್ತು ಪ್ರಕೃತಿ ಚಿಕಿತ್ಸೆ ಸಂಸ್ಥಾನದಲ್ಲಿ 7ನೇ ಅಂತರರಾಷ್ಟ್ರೀಯ ಪ್ರಕೃತಿ ದಿನಾಚರಣೆ ಪ್ರಯುಕ್ತ ಎರಡು ದಿನಗಳ ಕಾಲ ನಡೆಯುವ ಅಂತರರಾಷ್ಟ್ರೀಯ ಪ್ರಕೃತಿ ಸಮ್ಮೇಳನವನ್ನು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು.

ನಂತರ ಮಾತನಾಡಿದ ಸಚಿವರು, ದಕ್ಷಿಣ ಭಾರತದಲ್ಲೇ ಮೊದಲ ಯೋಗ ಹಾಗೂ ಪ್ರಕೃತಿ ಚಿಕಿತ್ಸಾ ಅನುಸಂಧಾನ ಸಂಸ್ಥಾನವು ತಾಲೂಕಿನಲ್ಲಿ ಸ್ಥಾಪಿತವಾಗಿದ್ದು. ಇದನ್ನು ತರುವಲ್ಲಿ ನಾನು ಹಾಗೂ ಎಂ.ಹೊಸೂರು ಗ್ರಾಮದ ಗಾಂಧಿವಾದಿ ಹೋರಾಟಗಾರ ಡಾ.ಓ.ಶ್ರೀನಿವಾಸ ಹಾಗೂ ಕೇಂದ್ರ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಅನುದಾನ ಪರಿಷತ್ ನಿರ್ದೇಶಕರಾಗಿದ್ದ ಡಾ.ಬಿ.ಟಿ ಚಿದಾನಂದ ಮೂರ್ತಿ ಇವರ ಪರಿಶ್ರಮದಿಂದ ಸಂಸ್ಥಾನವು ಸ್ಥಾಪಿತಗೊಂಡಿರುವುದು ರಾಜ್ಯಕ್ಕೆ ಹೆಮ್ಮೆ ತಂದಿದೆ ಎಂದರು. ಎರಡು ದಿನಗಳ ಸಮ್ಮೇಳನದಲ್ಲಿ ನಮ್ಮ ರಾಜ್ಯದವರು ಹಾಗೂ ಹೊರ ರಾಜ್ಯಗಳಿಂದ ತಜ್ಞರು ಇದ್ದಾರೆ. ದಿನಕಳದಂತೆ ಪ್ರಕೃತಿಯ ವಾತಾವರಣದಲ್ಲಿ ಹಾಗೂ ಜನರ ಆರೋಗ್ಯದ ಮೇಲೂ ವ್ಯತ್ಯಾಸ ಕಂಡು ಬರುತ್ತಿದೆ. ಇಂತಹ ಅಡ್ಡ ಪರಿಣಾಮಗಳಿಂದ ಇಂಗ್ಲಿಷ್ ಔಷಧಿಗಳಿಗಿಂತಲೂ ಪ್ರಕೃತಿ ಹಾಗೂ ಯೋಗ ಚಿಕಿತ್ಸೆ ಎಲ್ಲರಿಗೂ ಹತ್ತಿರವಾಗಬೇಕೆಂದು ತಿಳಿಸಿದರು.

ಸಮ್ಮೇಳನದಲ್ಲಿ ಕೇಂದ್ರೀಯ ಯೋಗ ಹಾಗೂ ಪ್ರಕೃತಿ ಚಿಕಿತ್ಸೆ ಅನುಸಂಧಾನ ಪರಿಷತ್ ನಿರ್ದೇಶಕ ರಾಘವೇಂದ್ರರಾವ್, ಕೇಂದ್ರೀಯ ಆಯುಷ್ ಮಂತ್ರಾಲಯ ಜಂಟಿ ಕಾರ್ಯದರ್ಶಿ ಕವಿತಾ ಗರ್ಗ, ನೋಡಲ್ ಅಧಿಕಾರಿ ವಾದಿರಾಜ್, ಡಾ.ಎಚ್.ಆರ್.ನಾಗೇಂದ್ರ ಇದ್ದರು.

ತಿಮ್ಮಮ್ಮ ನಿಧನ



ಭಾರತೀನಗರ, ನ.19– ಗ್ರಾಮ ಪಂಚಾಯಿತಿ ಸದಸ್ಯ ಕೆ.ಟಿ.ಕಾಳಿಪ್ರಸಾದ್ ಅವರ ತಾಯಿ ಮತ್ತು ದಿವಂಗತ ದಾಸೇಗೌಡ ಅಲಿಯಾಸ್ ವೆಂಕಟೇಗೌಡ ಅವರ ಧರ್ಮಪತ್ನಿ ತಿಮ್ಮಮ್ಮ(85) ಇಂದು ರಾತ್ರಿ ತಮ್ಮ ನಿವಾಸದಲ್ಲಿ ನಿಧನರಾದರು.

ದಿವಂಗತರು ಕಾಳಿಪ್ರಸಾದ್ ಸೇರಿದಂತೆ ಇಬ್ಬರು ಪುತ್ರರು ಮತ್ತು ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಬುಧವಾರ ಬೆಳಗ್ಗೆ 10 ಗಂಟೆಗೆ ಕೆ.ಎಂ.ದೊಡ್ಡಿಯಲ್ಲಿರುವ ಅವರ ಜಮೀನಿನಲ್ಲಿ ದಿವಂಗತರ ಅಂತ್ಯಕ್ರಿಯೆ ನೆರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಮಿತ್ರ
ಬುಧವಾರ 20 ನವೆಂಬರ್ 2024

ರೈಲ್ವೆ ಯೂನಿಯನ್‌ಗಳ ಮಾನ್ಯತೆಗಾಗಿ ಚುನಾವಣೆ
ಎಸ್‌ಡಬ್ಲ್ಯುಆರ್‌ಇಯು ಸ್ಪರ್ಧೆ

ಮೈಸೂರು, ನ.19(ಜಿಎ)–ದೇಶದಾದ್ಯಂತ ರೈಲ್ವೆ ಯೂನಿಯನ್‌ಗಳ ಮಾನ್ಯತೆಗಾಗಿ ಚುನಾವಣೆ ಘೋಷಣೆ ಆಗಿದ್ದು, ಡಿ.4ರಿಂದ 6ರವರೆಗೆ ಮತದಾನ ನಡೆಯಲಿದೆ. ಈ ಚುನಾವಣೆಯಲ್ಲಿ ಎಐಯುಟಿಯುಸಿ ಸಂಯೋಜಿತ ಸೌಥ್ ವೆಸ್ಟರ್ನ್ ರೈಲ್ವೆ ಎಂಪ್ಲಾಯೀಸ್ ಯೂನಿಯನ್ (ಎಸ್‌ಡಬ್ಲ್ಯುಆರ್‌ಇಯು) ನೈಋತ್ಯ ರೈಲ್ವೆ ವಿಭಾಗ ಸ್ಪರ್ಧಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಎಸ್‌ಡಬ್ಲ್ಯುಆರ್‌ಇಯು ಪ್ರಧಾನ ಕಾರ್ಯದರ್ಶಿ ಎಂ.ಪಿ.ತಾಯದಾಸ್ ಈ ವಿಷಯ ತಿಳಿಸಿ, ಇತರ ಯೂನಿಯನ್‌ಗಳು ಕೇಂದ್ರ ರೈಲ್ವೆ ಇಲಾಖೆ ವಿರೋಧೀ ನೀತಿ ಬೆಂಬಲಿಸುತ್ತಿವೆ. ಇಲ್ಲವೇ ದಲ್ಲಾಳಿಗಳಂತೆ ಕೆಲಸ ಮಾಡುತ್ತಿವೆ. ಹೀಗಾಗಿ ರೈಲ್ವೆ ಸಿಬ್ಬಂದಿಯ ಹಿತ ಕಾಯಲು ಬೆಂಬಲ ನೀಡಬೇಕೆಂದು ಮನವಿ ಮಾಡಿದರು.

ಹಳೇ ಪಿಂಚಣಿ ವ್ಯವಸ್ಥೆ ಒಪಿಎಸ್ ಪುನಃ ಜಾರಿ, ತುಟ್ಟಿಭತ್ಯೆ ಎಂಟನೇ ಸಿಪಿಸಿ ರಚನೆ, ಗ್ರೂಪ್ ಸಿ ಮತ್ತು ಡಿ ಹಿಂದೆ ಇದ್ದ ಡಿ ಹುದ್ದೆ ಭರ್ತಿ, ಹಿರಿಯ ನಾಗರಿಕರ ರಿಯಾಯಿತಿ ಮುಂದುವರಿಕೆ, ಕೋವಿಡ್ ಸಮಯದಲ್ಲಿ ತಡೆ ಹಿಡಿಯಲಾದ 18 ತಿಂಗಳ ಡಿಎ, ಡಿಆರ್ ಬಾಕಿ ವೇತನ ಕೂಡಲೇ ಬಿಡುಗಡೆ ಮೊದಲಾದ ಸೌಲಭ್ಯಕ್ಕೆ ತಮ್ಮ ಯೂನಿಯನ್ ಹೋರಾಟ ನಡೆಸಲಿದೆ. ಈಗಾಗಲೇ ಕೇಂದ್ರ ಸರ್ಕಾರ ರೈಲ್ವೆಯ ಖಾಸಗೀಕರಣ ಮಾಡುತ್ತಿರುವುದನ್ನು ತಮ್ಮ ಯೂನಿಯನ್ ವಿರೋಧಿಸಲಿದೆ. ಅದ್ದರಿಂದ ಪ್ರತಿನಿಧಿಯಾಗಿ ರೈಲ್ವೆ ಇಲಾಖೆ ಸಿಬ್ಬಂದಿ ಪರ ಹೋರಾಟ ನಡೆಸಲು ಚುನಾಯಿಸಬೇಕೆಂದು ಕೋರಿದರು. ಸುದ್ದಿಗೋಷ್ಠಿಯಲ್ಲಿ ಕಾರ್ಮಿಕ ಮುಖಂಡ ಚಂದ್ರಶೇಖರ ಮೇಟಿ, ಎಸ್.ಎಸ್.ವೀರೇಶ್, ಡಾ.ಪ್ರಮೋದ್, ಪಿ.ಎಸ್.ಸಂಧ್ಯಾ ಉಪಸ್ಥಿತರಿದ್ದರು.

ಮಹಾರಾಷ್ಟ್ರ ಚುನಾವಣೆ ನಂತರ ರಾಜ್ಯದ ಆಡಳಿತ, ಪಕ್ಷದ ಮಟ್ಟದಲ್ಲಿ ಮಹತ್ತರ ಬದಲಾವಣೆ

●ಕಾಂಗ್ರೆಸ್ ವರಿಷ್ಠರ ತೀರ್ಮಾನ ●ಕೆಪಿಸಿಸಿ ಅಧ್ಯಕ್ಷ ಸ್ಥಾನ ಬದಲಾವಣೆ ಜೊತೆಗೆ ಸಚಿವ ಸಂಪುಟ ವಿಸ್ತರಣೆ ಇಲ್ಲವೇ ಪುನರ್‌ರಚನೆ, ಕಾರ್ಯಕರ್ತರಿಗೆ ಅಧಿಕಾರ ನೀಡುವ ನಿರ್ಣಯ

ಬೆಂಗಳೂರು, ನ.19(ಕೆಎಂಶಿ)–ಮಹಾರಾಷ್ಟ್ರ ವಿಧಾನಸಭಾ ಚುನಾವಣಾ ಪ್ರಕ್ರಿಯೆ ಮುಗಿಯುತ್ತಿದ್ದಂತೆ ರಾಜ್ಯ ರಾಜಕೀಯದಲ್ಲೂ ಮಹತ್ತರ ಬದಲಾವಣೆ ಆಗಲಿದೆ. ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಗಾದಿಯೂ ಸೇರಿದಂತೆ ಆಡಳಿತದಲ್ಲೂ ಕೆಲವು ಬದಲಾವಣೆ ಮಾಡಲು ಪಕ್ಷದ ಎಐಸಿಸಿ ವರಿಷ್ಠರು ಮುಂದಾಗಿದ್ದಾರೆ. ಮುಖ್ಯಮಂತ್ರಿಗಳು ಈಗಾಗಲೇ ಹೇಳಿರುವಂತೆ ಮಂತ್ರಿಮಂಡಲ ವಿಸ್ತರಣೆ ಇಲ್ಲವೇ ಪುನರ್‌ರಚನೆ, ಕಾರ್ಯಕರ್ತರಿಗೆ ಅಧಿಕಾರ ನೀಡುವುದಕ್ಕೂ ಚಾಲನೆ ದೊರೆಯಲಿದೆ.

ಸರ್ಕಾರ ರಚನೆ ಆದ ಸಂದರ್ಭದಲ್ಲಿ ಡಿ.ಕೆ.ಶಿವಕುಮಾರ್ ಅವರಿಗೆ ಉಪಮುಖ್ಯಮಂತ್ರಿ ಜೊತೆ ಅವರು ಬಯಸಿದ ಎರಡು ಪ್ರಮುಖ ಇಲಾಖೆ ಜವಾಬ್ದಾರಿ ನೀಡಿದ್ದಲ್ಲದೆ, ಕೆಪಿಸಿಸಿ ಅಧ್ಯಕ್ಷ ಗಾದಿಯಲ್ಲೂ ಮುಂದುವರೆಯಲು ಅವಕಾಶ ನೀಡಲಾಗಿತ್ತು.

ಲೋಕಸಭಾ ಚುನಾವಣೆ ಪ್ರಕ್ರಿಯೆ ಪೂರ್ಣಗೊಂಡ ನಂತರ ಕೆಪಿಸಿಸಿ ಅಧ್ಯಕ್ಷ ಸ್ಥಾನವನ್ನು ತ್ಯಜಿಸಬೇಕೆಂಬ ನಿರ್ಧಾರವಾಗಿತ್ತು. ಈ ಚುನಾವಣೆ ಪ್ರಕ್ರಿಯೆ ಪೂರ್ಣಗೊಂಡು ಐದು ತಿಂಗಳ ನಂತರವೂ ಡಿ.ಕೆ.ಶಿವಕುಮಾರ್ ಅವರೇ ಗಾದಿಯಲ್ಲಿ ಮುಂದುವರೆದಿದ್ದಾರೆ. ಪಕ್ಷದ ವರಿಷ್ಠರಿಗೆ ಒಂದಾದ ಮೇಲೆ ಒಂದರಂತೆ ವಿವಿಧ ರಾಜ್ಯಗಳ ವಿಧಾನಸಭಾ ಚುನಾವಣೆಗಳು ಎದುರಾಗಿದ್ದರಿಂದ ಇತ್ತ ಗಮನಹರಿಸಲು ಸಾಧ್ಯವಾಗಿರಲಿಲ್ಲ. ಇದೀಗ ಕರ್ನಾಟಕದಲ್ಲಿ ಸರ್ಕಾರದ ಮಟ್ಟದಲ್ಲಿ ಮತ್ತಷ್ಟು ಬಿಗಿಗೊಳಿಸಿ, ಪಕ್ಷ ಸಂಘಟನೆ ದೃಷ್ಟಿಯಿಂದ ಎಐಸಿಸಿ ಕೆಲವು ರಾಜಕೀಯ ನಿರ್ಧಾರಗಳನ್ನು ಕೈಗೊಳ್ಳಲು ಹೊರಟಿದೆ. ಡಿ.ಕೆ.ಶಿವಕುಮಾರ್, ಬೃಹತ್ ನೀರಾವರಿ ಹಾಗೂ ಬಿಬಿಎಂಪಿ ಇಲಾಖೆ ಹೊಣೆಗಾರಿಕೆ ಹೊತ್ತಿದ್ದಾರೆ. ಇವುಗಳ ಜೊತೆಗೆ ಕೆಪಿಸಿಸಿ ಗಾದಿಯಲ್ಲಿ ಮುಂದುವರೆದರೆ, ಇಲಾಖೆಗೆ ಒತ್ತು ನೀಡಲು ಸಾಧ್ಯವಿಲ್ಲ, ಮತ್ತೊಂದೆಡೆ ಪಕ್ಷದ ವಿಚಾರಗಳಿಗೂ ಗಮನ ನೀಡಲು ಆಗುವುದಿಲ್ಲ. ಈ ಕಾರಣಕ್ಕಾಗಿ ಮತ್ತೊಂದು ಸಮುದಾಯಕ್ಕೆ ಈ ಉನ್ನತ ಹುದ್ದೆ ನೀಡಲು ವರಿಷ್ಠರು ಚಿಂತನೆ ಮಾಡಿದ್ದಾರೆ. ಕಳೆದ ಕೆಲವು ತಿಂಗಳ ಹಿಂದೆ ಕೆಪಿಸಿಸಿ ಗಾದಿ ಪಡೆಯಲು ಕೆಲವು ಸಚಿವರೂ ಸೇರಿದಂತೆ ಪಕ್ಷದ ಮುಖಂಡರು ಭಾರಿ ಕಸರತ್ತು ನಡೆಸಿದ್ದರು. ಆದರೆ, ವರಿಷ್ಠರು ಇದಾವುದೇ ಒತ್ತಡಕ್ಕೆ ಮಣಿದಿರಲಿಲ್ಲ. ಇದೀಗ ಮಹಾರಾಷ್ಟ್ರ ವಿಧಾನಸಭಾ ಚುನಾವಣೆ ಮುಗಿರುವುದರಿಂದ ಕರ್ನಾಟಕದತ್ತ ಗಮನಹರಿಸಿ ಕೆಲವು ರಾಜಕೀಯ ನಿರ್ಧಾರ ಕೈಗೊಳ್ಳಲು ಮುಂದಾಗಿದ್ದಾರೆ.

ಈಜುಕೊಳದಲ್ಲಿ ಮುಳುಗಿ ಅಸುನೀಗಿದ ಯುವತಿಯರ ಕುಟುಂಬಕ್ಕೆ ಎಂಕೆಎಸ್ ಸಾಂತ್ವನ



ಮೈಸೂರಿನ ಕುರುಬಾರಹಳ್ಳಿಯ ಎಂ.ಡಿ.ನಿಶಿತಾ ಮತ್ತು ಅಗ್ರಹಾರದ ಪಾರ್ವತಿ ಅವರ ಮನೆಗೆ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಭೇಟಿ ನೀಡಿ, ಪೋಷಕರಿಗೆ ಸಾಂತ್ವನ ಹೇಳಿ ವೈಯಕ್ತಿಕ ಧನಸಹಾಯ ಮಾಡಿದರು.

ಮೈಸೂರು,ನ.19–ಇತ್ತೀಚೆಗೆ ಮಂಗಳೂರಿನ ರೆಸಾರ್ಟ್‌ವೊಂದರ ಈಜುಕೊಳದಲ್ಲಿ ಮುಳುಗಿ ಅಸುನೀಗಿದ ಮೈಸೂರಿನ ಕುರುಬಾರಹಳ್ಳಿಯ ಎಂ.ಡಿ.ನಿಶಿತಾ ಮತ್ತು ಅಗ್ರಹಾರದ ಪಾರ್ವತಿ ಅವರ ಮನೆಗಳಿಗೆ ಕೃಷ್ಣರಾಜ ಕ್ಷೇತ್ರದ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಭೇಟಿ ನೀಡಿ, ಪೋಷಕರಿಗೆ ಸಾಂತ್ವನ ಹೇಳಿ ವೈಯಕ್ತಿಕ ಧನಸಹಾಯ ಮಾಡಿದರು. ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಪರಿಹಾರ ಕೊಡಿಸುವುದಾಗಿ ಭರವಸೆ ನೀಡಿದರು. ಈ ವೇಳೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಸೋಮಶೇಖರ್, ಅಪ್ಪುಗೌಡ, ಆಶ್ರಯ ಸಮಿತಿ ಸದಸ್ಯರಾದ ಮಹ್ಮದ್ ಫಾರೂಖ್, ಸೋಮು ಕುರುಬಾರಹಳ್ಳಿ ಮತ್ತು ಪೋಷಕರು ಉಪಸ್ಥಿತರಿದ್ದರು.

ಕನಕ ಸೇವಾ ರತ್ನ ಪ್ರಶಸ್ತಿ



ಎಸ್.ಪ್ರಕಾಶ್ ಪ್ರಿಯದರ್ಶನ್ ಸ್ನೇಹ ಬಳಗದ ವತಿಯಿಂದ ಶ್ರೀ ಭಕ್ತ ಕನಕದಾಸರ 537ನೇ ಜಯಂತ್ಯುತ್ಸವದ ಅಂಗವಾಗಿ ಶ್ರೀ ಕನಕ ಸೇವಾ ರತ್ನ ಪ್ರಶಸ್ತಿಯನ್ನು ಹಿರಿಯ ಸಮಾಜ ಸೇವಕರಾದ ಡಾ.ಬಿ.ಆರ್.ನಟರಾಜ್ ಜೋಯಿಸ್ ಅವರಿಗೆ ನೀಡಿ, ಅಭಿನಂದಿಸಲಾಯಿತು. ಮೈಸೂರು ನಗರ ಜೆಡಿಎಸ್ ಕಾರ್ಯಾಧ್ಯಕ್ಷ ಎಸ್.ಪ್ರಕಾಶ್ ಪ್ರಿಯದರ್ಶನ್, ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಹೋಮದೇವ್, ಮುಖಂಡರಾದ ವೀರಭದ್ರ ಸ್ವಾಮಿ, ಶ್ರೀಧರ್, ಅಕ್ಷಯ ಪ್ರಿಯದರ್ಶನ ಹಾಜರಿದ್ದರು.

ನಾಳೆ ಮೈಸೂರಿನ ಹಲವೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಮೈಸೂರು,ನ.19–ವಿ.ವಿ.ಮೊಹಲ್ಲಾ ವಿಭಾಗ ವ್ಯಾಪ್ತಿಯ ಕೆ.ಹೆಚ್.ಬಿ ಮತ್ತು ಡಿ.ಎಂ.ಜಿ.ಹಳ್ಳಿ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ 3ನೇ ತ್ರೈಮಾಸಿಕ ನಿರ್ವಹಣೆ ನಿಮಿತ್ತ ನ.21ರಂದು ಬೆಳಗ್ಗೆ 10ರಿಂದ ಸಂಜೆ 6 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ಕೆ.ಹೆಚ್.ಬಿ ವಿದ್ಯುತ್ ವಿತರಣಾ ಕೇಂದ್ರದ ವ್ಯಾಪ್ತಿಯ ವಿಜಯನಗರ 4ನೇ ಹಂತ, ಕೆ.ಹೆಚ್.ಬಿ ಕಾಲೋನಿ, ಹೂಟಗಳ್ಳಿ, ಬೆಳವಾಡಿ, ಬಸವನಪುರ, ಮರಟಿಕ್ಯಾತನಹಳ್ಳಿ, ಪಂಚಚಾರ್ಯ ಲೇಔಟ್, ಕೆ.ಹೆಮ್ಮನಹಳ್ಳಿ, ಲಿಂಗದೇವರಕೊಪ್ಪಲು, ಇಲವಾಲ, ಹೂಟಗಳ್ಳಿ ಕೆ.ಆರ್.ಎಸ್. ರೋಡ್, ಆದಿತ್ಯ ಬಡಾವಣೆ, ಎಸ್.ಆರ್.ಎಸ್. ಕಾಲೋನಿ, ಕೂರ್ಗಳ್ಳಿ, ಎನ್.ಹೆಚ್.ಬಿ ಕಾಲೋನಿ, ಬೆಳವಾಡಿ ಕೈಗಾರಿಕಾ ಪ್ರದೇಶ, ಶಾಹಿ ಗಾರ್ಮೆಂಟ್ಸ್, ಹೂಟಗಳ್ಳಿ ಕೈಗಾರಿಕಾ ಪ್ರದೇಶ, ಕೂರ್ಗಳ್ಳಿ ಕೈಗಾರಿಕಾ ಪ್ರದೇಶ, ಗ್ರ್ಯಾಂಡ್ ಮೌರ್ಯ ಹೋಟೆಲ್, ರಿಲಾಯನ್ಸ್, ವಾಸ್ ಫರ್ನಿಚರ್ಸ್, ಯಶಸ್ವಿನಿ ಕಲ್ಯಾಣ ಮಂಟಪ, ಸೌಪರ್ಣಿಕ ಅಪಾರ್ಟ್‌ಮೆಂಟ್ ಹಿನಕಲ್, ಎಸ್.ವಿ.ಇ.ಐ ಕಾಲೇಜು ಸುತ್ತಮುತ್ತ, ಜಟ್ಟಿಹುಂಡಿ ಹಾಗೂ ಸುತ್ತಮುತ್ತಲ ಪ್ರದೇಶಗಳು.

ಡಿ.ಎಂ.ಜಿ ಹಳ್ಳಿ ವಿದ್ಯುತ್ ವಿತರಣಾ ಕೇಂದ್ರದ ವ್ಯಾಪ್ತಿಯ ಡಿ.ಎಂ.ಜಿ. ಹಳ್ಳಿ, ಕಮರಹಳ್ಳಿ, ಮಾಣಿಕ್ಯಪುರ, ದೊಡ್ಡಹಟ್ಟಿ ಹುಂಡಿ, ಮರಿಯ್ಯನಹುಂಡಿ, ಕಟ್ಟೆಹುಂಡಿ, ಶೆಟ್ಟಿನಾಯಕನಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ವಿವಿಧ ಕ್ಷೇತ್ರದ ಸಾಧಕರಿಗೆ ಕನ್ನಡಾಂಬೆ ಸೇವಾ ರತ್ನ ಪ್ರಶಸ್ತಿ



ಮೈಸೂರಿನ ಕನ್ನಡಾಂಬೆ ರಕ್ಷಣಾ ವೇದಿಕೆ ಸಿಂಹ ಘರ್ಜನೆ ವತಿಯಿಂದ ಹೂಟಗಳ್ಳಿಯ ಕೆಹೆಚ್‌ಬಿ ಕಾಲೋನಿಯ ಶ್ರೀ ಅನಂತೇಶ್ವರ ಭವನದಲ್ಲಿ ಕನ್ನಡ ರಾಜ್ಯೋತ್ಸವದ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಸಾಧಕರಿಗೆ ಕನ್ನಡಾಂಬೆ ಸೇವಾ ರತ್ನ ಪ್ರಶಸ್ತಿ ಮಕ್ಕಳಿಗೆ ನೋಟ್‌ಬುಕ್ ವಿತರಣೆ, ಪ್ರತಿಭಾ ಪುರಸ್ಕಾರ ಹಾಗೂ ಕೂಲಿಕಾರ್ಮಿಕರಿಗೆ ರೇಷನ್ ವಿತರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ಒಕ್ಕಲಿಗ ಯುವ ಬ್ರಿಗೇಡ್ ಅಧ್ಯಕ್ಷ ನಂಜೇಗೌಡ, ನಂಜುಂಡ, ಡಾ.ಎಂ.ಕೃಷ್ಣಪ್ಪ ಆನೇಕಲ್, ಪಿ. ಮಂಜುನಾಥ, ಶ್ರೀಮತಿ ಕೀರ್ತನ ಮಂಜು, ಮೈಸೂರಿನ ಜಿಲ್ಲಾಧ್ಯಕ್ಷೆ ರೇಖಾ ಗೌಡ, ಪದ್ಮನಾಭ ಮತ್ತಿತರರು ಉಪಸ್ಥಿತರಿದ್ದರು.

ಮನೆ ಮನೆಗೆ ಕರಪತ್ರ ವಿತರಿಸಿ ಶ್ರೀ ವೈಷ್ಣವ ಸಮಾವೇಶಕ್ಕೆ ಆಹ್ವಾನ



ನ.24ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಲಿರುವ ಬೃಹತ್ ಶ್ರೀ ವೈಷ್ಣವ ಸಮಾವೇಶಕ್ಕೆ ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆ ವತಿಯಿಂದ ಮನೆ ಮನೆಗೆ ಭೇಟಿ ನೀಡಿ, ಕರಪತ್ರ ಹಂಚಿ ಆಹ್ವಾನಿಸಲಾಯಿತು.

ಮೈಸೂರು,ನ.19–ಯತಿರಾಜ ಮಠದ ಜಗತ್ ಗುರುಗಳಾದ ಶ್ರೀ ಯದುಗಿರಿ ಯತಿರಾಜ ನಾರಾಯಣ ರಾಮಾನುಜ ಜೀಯರ್ ಅವರ ಆಶಯ ಹಾಗೂ ಸಂಕಲ್ಪದಂತೆ ಶ್ರೀ ಯತಿರಾಜ ಮಠ ಹಾಗೂ ಅಖಿಲ ಕರ್ನಾಟಕ ಶ್ರೀ ವೈಷ್ಣವ ಮಹಾಸಭಾದ ವತಿಯಿಂದ ನ.24ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯುತ್ತಿರುವ ಶ್ರೀ ರಾಮಾನುಜ ವಿಶ್ವ ವಿಜಯೋತ್ಸವ ನಮ್ಮ ನಡೆ ರಾಮಾನುಜರ ಕಡೆಗೆ ಬೃಹತ್ ಶ್ರೀ ವೈಷ್ಣವ ಸಮಾವೇಶಕ್ಕೆ ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆ ವತಿಯಿಂದ ಚಾಮುಂಡಿಪುರಂ, ಕೃಷ್ಣಮೂರ್ತಿಪುರಂ ಸೇರಿದಂತೆ ಇನ್ನಿತರ ನಿವಾಸಿಗಳಿಗೆ ಹಾಗೂ ಮುಖಂಡರನ್ನು ಭೇಟಿ ಮಾಡಿ ಕರಪತ್ರ ನೀಡಿ ಬೃಹತ್ ಶ್ರೀ ವೈಷ್ಣವ ಸಮಾವೇಶಕ್ಕೆ ಆಹ್ವಾನಿಸಲಾಯಿತು. ಈ ಸಂದರ್ಭದಲ್ಲಿ ವೆಂಗೀಪುರ ಮಠದ ಇಳೈ ಆಳ್ವಾರ್ ಸ್ವಾಮೀಜಿ, ಪಾಲಿಕೆ ಮಾಜಿ ಸದಸ್ಯ ಎಂ.ಡಿ. ಪಾರ್ಥಸಾರಥಿ, ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆಯ ಪ್ರಧಾನ ಕಾರ್ಯದರ್ಶಿ ವಿಕ್ರಮ ಅಯ್ಯಂಗಾರ್, ಅಜಯ್ ಶಾಸ್ತ್ರಿ, ಎಂ.ಆರ್.ಕೇಶವ್ ಪ್ರಸಾದ್, ಮಾಧವರಾವ್ ಇನ್ನಿತರರು ಹಾಜರಿದ್ದರು.

ಸಿಎಂ ಸಿದ್ದರಾಮಯ್ಯ ವಿರುದ್ಧ ವೃಥಾ ಆರೋಪ, ಕಿರುಕುಳ ಖಂಡಿಸಿ
ಸ್ನೇಹಮಯಿ ಕೃಷ್ಣ, ಬಿಜೆಪಿ, ಜೆಡಿಎಸ್ ವಿರುದ್ಧ ಪ್ರತಿಭಟನೆ

ಮೈಸೂರು,ನ.19(ಜಿಎ)–ಸಿಎಂ ಸಿದ್ದರಾಮಯ್ಯ ಅವರ ವಿರುದ್ಧ ದೂರುದಾರ ಸ್ನೇಹಮಯಿ ಕೃಷ್ಣ, ಬಿಜೆಪಿ, ಜೆಡಿಎಸ್ ನಾಯಕರು ದಿನನಿತ್ಯ ವೃಥಾ ಆರೋಪ ಮಾಡುತ್ತ ಕಿರುಕುಳ ನೀಡುತ್ತಿರುವುದರನ್ನು ಖಂಡಿಸಿ ನ.22ರಂದು ಬೆಳಗ್ಗೆ 10.30ಕ್ಕೆ ರಾಮಸ್ವಾಮಿ ವೃತ್ತದ ಬಳಿ ಸಿದ್ದರಾಮಯ್ಯ ಅವರ ಅಭಿಮಾನಿಗಳು, ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ನೂರಾರು ಸಂಖ್ಯೆಯಲ್ಲಿ ಪ್ರತಿಭಟನೆ ನಡೆಸಲಿದ್ದಾರೆ ಎಂದು ಯುವ ಕಾಂಗ್ರೆಸ್ ಮುಖಂಡ ಎಂ.ಎಸ್.ಶಶಾಂಕ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರ ಕುಟುಂಬ ಮುಡಾದ ಆಸ್ತಿ ಲೂಟಿ ಹೊಡೆದಿದೆ ಎಂದು ವೃಥಾ ಆರೋಪಿಸುತ್ತಿದ್ದಾರೆ. ಆದರೆ ಅವರು ತಾವು ನೀಡಿದ ಜಮೀನಿಗೆ ಬದಲಾಗಿ ಮಾತ್ರ ನಿವೇಶನ ಪಡೆದಿದ್ದಾರೆ. ಜೊತೆಗೆ ಲೋಕಾಯುಕ್ತ, ಇಡಿ ಸಂಸ್ಥೆಗಳ ತನಿಖೆಗೆ ಸಹಕರಿಸುತ್ತಿದ್ದಾರೆ. ಇದೇ ವೇಳೆ ದೂರು ನೀಡಿದವರು ವರದಿ ಬರುವವರೆಗೂ ಕಾಯದೇ ವೃಥಾ ಆರೋಪ ಮಾಡುವುದು ಸರಿಯಲ್ಲ. ಇದು ಸಿದ್ದರಾಮಯ್ಯ ಅವರನ್ನು ಸಿಎಂ ಸ್ಥಾನದಿಂದ ಕೆಳಗಿಳಿಸುವ ಷಡ್ಯಂತ್ರವಾಗಿದೆ ಎಂದು ಕಿಡಿಕಾರಿದರು.

ಒಂದು ವೇಳೆ ಸಿದ್ದರಾಮಯ್ಯ ಅವರು ಅಧಿಕಾರದಿಂದ ಕೆಳಗಿಳಿದಲ್ಲಿ ರಾಜ್ಯದ ಬಡಜನತೆ ಅತಂತ್ರರಾಗಬೇಕಾಗುತ್ತದೆ. ಶಾಂತಿ ಸುವ್ಯವಸ್ಥೆ ಹಾಳಾಗುತ್ತದೆ. ಹೀಗಾಗಿ ಅವರ ಬೆಂಬಲಕ್ಕೆ ನಿಲ್ಲಲು ಎಲ್ಲರೂ ಪ್ರತಿಭಟನೆಯಲ್ಲಿ ಪಾಲ್ಗೊಳ್ಳಬೇಕೆಂದು ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ಆರ್.ವಿಜಯ್, ಎಂ.ಕುಮಾರ್, ಎಸ್.ಮದನ್‌ಕುಮಾರ್, ಜಿ.ಅರ್ಜುನ್. ಎಸ್.ಪುಟ್ಟಸ್ವಾಮಿ, ದಿಲೀಪ್‌ಕುಮಾರ್, ಹಿದಾಯತ್ ಖಾನ್, ಅಭಿಷೇಕ್ ಉಪಸ್ಥಿತರಿದ್ದರು.

ವೈದ್ಯಕೀಯ ಸ್ನಾತಕೋತ್ತರ ಶುಲ್ಕ ಹೆಚ್ಚಳಕ್ಕೆ ಖಂಡನೆ

ಮೈಸೂರು, ನ.19(ಎಸ್‌ಪಿಎನ್)– 2024–25 ಶೈಕ್ಷಣಿಕ ವರ್ಷದ ವೈದ್ಯಕೀಯ ಸ್ನಾತಕೋತ್ತರ ಕೋರ್ಸ್ ಗಳಾದ ಕ್ಲಿನಿಕಲ್, ಪ್ಯಾರಾ ಮೆಡಿಕಲ್ ಕೋರ್ಸ್ ಗಳ ಶುಲ್ಕವನ್ನು ಹೆಚ್ಚಿಸಿರುವ ರಾಜ್ಯ ಸರ್ಕಾರದ ನಿರ್ಧಾರವನ್ನು ಎಐಡಿಎಸ್‌ಓ ಸಂಘಟನೆ ಖಂಡಿಸಿದೆ. ಖಾಸಗಿ ವೈದ್ಯಕೀಯ ಲಾಬಿಗೆ ಸಂಪೂರ್ಣವಾಗಿ ಶರಣಾಗಿರುವ ರಾಜ್ಯ ಸರ್ಕಾರ, ಪ್ರತಿ ವರ್ಷ ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ಶಿಕ್ಷಣದ ಶುಲ್ಕವನ್ನು ಏರಿಸುತ್ತಲೇ ಇದೆ. ಖಾಸಗಿ ಕಾಲೇಜುಗಳಲ್ಲಿರುವ ಸರ್ಕಾರಿ ಕೋಟಾದ ಶುಲ್ಕವನ್ನು ಒಂದು ಲಕ್ಷದಷ್ಟು ಹೆಚ್ಚಿಸಿರುವುದನ್ನು ನೋಡಿದರೆ ಸರ್ಕಾರ, ವೈದ್ಯಕೀಯ ಶಿಕ್ಷಣವನ್ನು ವ್ಯಾಪಾರೀ ದೃಷ್ಟಿಕೋನದಲ್ಲಿ ನೋಡುತ್ತಿದೆ ಎಂಬುದು ಅರಿವಾಗುತ್ತಿದೆ. ಬಡ ಮಾಧ್ಯಮ ವರ್ಗದ ಮಕ್ಕಳಿಗೆ ವೈದ್ಯಕೀಯ ಪಿಜಿ ವ್ಯಾಸಂಗ ದುಬಾರಿಯಾಗುತ್ತಿದೆ ಎಂದು ಎಐಡಿಎಸ್‌ಓ ಜಿಲ್ಲಾ ಸಮಿತಿಯ ಕಾರ್ಯದರ್ಶಿ ನಿತಿನ್ ಪ್ರಕಟಣೆಯಲ್ಲಿ ಆರೋಪಿಸಿದ್ದಾರೆ.

ಕನ್ನೇಗೌಡನಕೊಪ್ಪಲಿನ ಶ್ರೀ ಸಿದ್ದಪ್ಪಾಜಿ ದೇವಸ್ಥಾನದಲ್ಲಿ ಇಂದು ಅನ್ನಸಂತರ್ಪಣೆ

ಮೈಸೂರು,ನ.19(ಪಿಎಂ)– ಕನ್ನೇಗೌಡನಕೊಪ್ಪಲಿನ (ಕೆಜಿ ಕೊಪ್ಪಲು) ಪೈಲ್ವಾನ್ ಬಸವಯ್ಯನವರ ವೃತ್ತದಲ್ಲಿರುವ ಶ್ರೀ ಸಿದ್ದಪ್ಪಾಜಿ ದೇವಸ್ಥಾನದ 14ನೇ ವರ್ಷದ ಕುಂಭಾಭಿಷೇಕ ಮಹೋತ್ಸವ ಪ್ರಯುಕ್ತ ನ.20ರಂದು ದೇವಸ್ಥಾನದ ಆವರಣದಲ್ಲಿ ಅನ್ನಸಂತರ್ಪಣೆ ಏರ್ಪಡಿಸಲಾಗಿದೆ. ಅಂದು ಬೆಳಗ್ಗೆ ಪ್ರಧಾನ ಹೋಮ ನಡೆಯಲಿದ್ದು, ಬೆಳಗ್ಗೆ 9.30 ಗಂಟೆಯಿಂದ ಪೂರ್ಣಾಹುತಿ, 10ಕ್ಕೆ ಧನಸ್ಸು ಲಗ್ನದಲ್ಲಿ ಕುಂಭಾಭಿಷೇಕ ಅಲಂಕಾರ ಮಹಾಮಂಗಳಾರತಿ, ಮಧ್ಯಾಹ್ನ 12.30ಕ್ಕೆ ತೀರ್ಥ ಪ್ರಸಾದ ವಿನಿಯೋಗ ಮತ್ತು ಅನ್ನ ಸಂತರ್ಪಣೆ ನಡೆಯಲಿವೆ.

ನವೆಂಬರ್ 25ರಿಂದ ಸಂಸತ್ ಚಳಿಗಾಲದ ಅಧಿವೇಶನ

ಭಾನುವಾರ ಸರ್ವಪಕ್ಷ ಸಭೆ

ನವದೆಹಲಿ, ನ.19– ಸಂಸತ್ ಚಳಿಗಾಲದ ಅಧಿವೇಶನ ನವೆಂಬರ್ 25 ರಿಂದ ಡಿಸೆಂಬರ್ 20ರವರೆಗೆ ನಡೆಯಲಿದೆ. ಹೀಗಾಗಿ ನವೆಂಬರ್ 24, ಭಾನುವಾರದಂದು ಸರ್ವಪಕ್ಷಗಳ ಸಭೆ ಕರೆಯಲಾಗಿದೆ. ಈ ಕುರಿತು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಮಾಹಿತಿ ನೀಡಿದ್ದಾರೆ. ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ರಿಜಿಜು, ಸಂಸತ್ತಿನ ಚಳಿಗಾಲದ ಅಧಿವೇಶನಕ್ಕೂ ಮುನ್ನ ನವೆಂಬರ್ 24ರಂದು ಬೆಳಿಗ್ಗೆ 11ಕ್ಕೆ ಸರ್ವಪಕ್ಷಗಳ ಸಭೆಯನ್ನು ಕರೆಯಲಾಗಿದೆ ಎಂದು ತಿಳಿಸಿದ್ದಾರೆ.

ಸಂವಿಧಾನ ಅಂಗೀಕರಿಸಿ 75ನೇ ವರ್ಷದ ಸಂಭ್ರಮದ ಹಿನ್ನೆಲೆಯಲ್ಲಿ ನವೆಂಬರ್ 26ಕ್ಕೆ ಸೆಂಟ್ರಲ್ ಹಾಲ್‌ನ ಸಂವಿಧಾನ ಸದನ ಅಥವಾ ಹಳೆಯ ಸಂಸತ್ತಿನ ಕಟ್ಟಡದಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಅವರು ತಿಳಿಸಿದರು. ಅಧಿವೇಶನ ಆರಂಭಕ್ಕೂ ಮುನ್ನ ಸರ್ವಪಕ್ಷಗಳ ಸಭೆ ಕರೆದು ಸಮಸ್ಯೆಗಳ ಕುರಿತು ಚರ್ಚಿಸಿ ಒಮ್ಮತ ಮೂಡಿಸುವುದು ವಾಡಿಕೆಯಾಗಿದೆ. ಈ ಸಂದರ್ಭದಲ್ಲಿ ಸರ್ಕಾರವು ತನ್ನ ಕಾರ್ಯಸೂಚಿಯನ್ನು ಮುಂದಿಡಲಿದೆ. ವಿವಿಧ ವಿಷಯಗಳ ಚರ್ಚೆಗೆ ಪ್ರತಿಪಕ್ಷಗಳು ಒತ್ತಾಯಿಸುವ ನಿರೀಕ್ಷೆಯಿದೆ.

ಶಿವ ಸನ್ನಿಧಿ ಗೆಳೆಯರ ಬಳಗದ ಪದಾಧಿಕಾರಿಗಳಿಗೆ ಅಭಿನಂದನೆ



ಶಿವ ಸನ್ನಿಧಿ ಗೆಳೆಯರ ಬಳಗದ ವತಿಯಿಂದ ಚುನಾಯಿತ ಸರ್ಕಾರಿ ನೌಕರರನ್ನು ಸನ್ಮಾನಿಸಲಾಯಿತು.

ಮೈಸೂರು,ನ.19–ಮೈಸೂರಿನ ಅಗ್ರಹಾರದ ನೂರೊಂದು ಗಣಪತಿ ದೇವಸ್ಥಾನದ ಹತ್ತಿರದ ಶಿವ ಸನ್ನಿಧಿ ಗೆಳೆಯರ ಬಳಗದ ವತಿಯಿಂದ ನಡೆದ ಸರ್ಕಾರಿ ನೌಕರರ ಸಂಘದ ಚುನಾವಣೆಯಲ್ಲಿ ವಿಜೇತರಾದ ಸಮುದಾಯದ ನೌಕರರನ್ನು ಅಭಿನಂದಿಸಲಾಯಿತು.

ವಿಶ್ವ ಗುರು ಬಸವೇಶ್ವರರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಚಾಲನೆ ನೀಡಿ ಮಾತನಾಡಿದ ಬಳಗದ ಸಂಸ್ಥಾಪಕ ಕಲ್ಮಳ್ಳಿ ನಟರಾಜು, ಇದೊಂದು ಸಮುದಾಯದ ಐತಿಹಾಸಿಕ ಗೆಲುವಾಗಿದ್ದು, ರಾಜ್ಯಾಧ್ಯಕ್ಷರಾದ ಷಡಕ್ಷರಿ ಅವರು ನೌಕರರ ಪರ ಮಾಡಿದ ನ್ಯಾಯಯುತ ಹೋರಾಟದಿಂದ ಸುದೀರ್ಘ ಕಾಲದ ಸಮಸ್ಯೆಗಳು ಬಗೆಹರಿದು ನೌಕರರು ನೆಮ್ಮದಿ ಬದುಕನ್ನು ಸಾಗಿಸಲು ಸಾಧ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.


ಶಿವ ಸನ್ನಿಧಿ ಗೆಳೆಯರ ಬಳಗದ ಅಧ್ಯಕ್ಷ ಪರಮೇಶ್ ಸ್ವಾಗತಿಸಿದರು. ಕನ್ನಡ ಸಾಹಿತ್ಯ ಪರಿಷತ್‌ನ ನಿಕಟಪೂರ್ವ ಅಧ್ಯಕ್ಷ ಎಂ.ಚಂದ್ರಶೇಖರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಗರಪಾಲಿಕೆ ಮಾಜಿ ಸದಸ್ಯ ಕೆ.ವಿ.ಮಲ್ಲೇಶ್ ವಹಿಸಿದ್ದರು.

ನೂತನ ನಿರ್ದೇಶಕ ಮಾಲಂಗಿ ಸುರೇಶ್, ಜಿಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆ ಅಧೀಕ್ಷಕ ಗಣೇಶ್, ಸರ್ವೆ ಇಲಾಖೆ ಜಯಪ್ಪ, ಕೆ.ಆರ್.ನಗರದ ನಗರದ ನಿರ್ದೇಶಕ ರಾಜಶೇಖರ್, ಹೆಚ್.ಡಿ.ಕೋಟೆ ರಾಜ್ಯ ಪರಿಷತ್ ನೂತನ ಸದಸ್ಯ ಮಂಜುನಾಥ್, ನೋಂದಣಿ ಮತ್ತು ಮುದ್ರಾಂಕ ಇಲಾಖೆ ನೂತನ ನಿರ್ದೇಶಕ ನವೀನ್ ಹಾಗೂ ಕೆ.ಆರ್ ಬ್ಯಾಂಕ್ ಮಾಜಿ ಅಧ್ಯಕ್ಷರು ಹಾಲಿ ನಿರ್ದೇಶಕ ಪ್ರತಿಧ್ವನಿ ಪ್ರಸಾದ್ ಅವರನ್ನು ಅಭಿನಂದಿಸಲಾಯಿತು.

ಕಾರ್ಯಕ್ರಮದಲ್ಲಿ ರೋಟರಿ ಅಧ್ಯಕ್ಷ ವಿರೂಪಾಕ್ಷ ಅಯರಹಳ್ಳಿ, ಮೈಸೂರು ಜಿಲ್ಲಾ ವೀರಶೈವ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಪ್ರಭುಸ್ವಾಮಿ, ಜೆ.ಎಸ್.ಎಸ್, ಶಿಕ್ಷಣ ಸಂಸ್ಥೆಯ ಮುಖ್ಯ ಶಿಕ್ಷಕ ಶಿವಸ್ವಾಮಿ, ಮಹದೇವಪ್ಪ, ಬಸವಣ್ಣ, ಪುಟ್ಟಸುಬ್ರಹ್ಮಣ್ಯ, ಯೋಗ ಶಿಕ್ಷಕ ಬಸವಣ್ಣ, ಮರಿಮಲ್ಲಪ್ಪ ಶಿಕ್ಷಣ ಸಂಸ್ಥೆಯ ಶಿವಕುಮಾರ್, ಶಿಕ್ಷಕ ಸುನೀಲ್ ಕಲ್ಮರುಡಪ್ಪ, ಅನಿಲ್ ಕುಮಾರ್, ಮೈಸೂರು ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾ ಘಟಕದ ಸಮಿತಿ ಸದಸ್ಯರಾದ ದಾರಿಪುರ ಡಿ.ಚಂದ್ರಶೇಖರ್, ರವೀಶ್ ಬಿಡುಗಲು ಮತ್ತಿತರರು ಹಾಜರಿದ್ದರು

ದೇಶ - ವಿದೇಶ


ಲಂಡನ್‌ನಲ್ಲಿ ಭಾರತೀಯ ಮೂಲದ ಮಹಿಳೆ ಕೊಲೆ, ಪತಿಗಾಗಿ ಹುಡುಕಾಟ



ಲಂಡನ್: ಇತ್ತೀಚೆಗೆ ಲಂಡನ್‌ನಲ್ಲಿ ಭಾರತೀಯ ಮೂಲದ ಮಹಿಳೆಯೊಬ್ಬರು ಕೊಲೆಯಾದ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ನಾರ್ಥಾಂಪ್ಟನ್‌ಶೈರ್ ಪೊಲೀಸರು ಈ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಹಿಳೆ ಪತಿಗಾಗಿ ಹುಡುಕಾಟ ನಡೆಸುತ್ತಿದ್ದಾರೆ.

ನ.14ರಂದು ಕೊಲೆಯಾದ ಮಹಿಳೆಯನ್ನು 24 ವರ್ಷದ ಹರ್ಷಿತಾ ಬ್ರೆಲ್ಲಾ ಎಂದು ಗುರುತಿಸಲಾಗಿದೆ ಎಂದು ನಾರ್ಥಾಂಪ್ಟನ್‌ಶೈರ್ ಪೊಲೀಸರು ತಿಳಿಸಿದ್ದಾರೆ. ಈ ವಾರದ ಆರಂಭದಲ್ಲಿ ಪೂರ್ವ ಲಂಡನ್‌ನಲ್ಲಿ ಬಿಟ್ಟು ಹೋಗಿದ್ದ ಕಾರಿನ ಬೂಟಿನಲ್ಲಿ ಹರ್ಷಿತಾ ಬ್ರೆಲ್ಲಾ ಮೃತದೇಹ ಪತ್ತೆಯಾಗಿದ್ದು, ಪತಿ ಪಂಕಜ್ ಲಂಬಾ ಅವರೇ ಪತ್ನಿಯನ್ನು ಕೊಲೆ ಮಾಡಿರುವ ಶಂಕೆ ವ್ಯಕ್ತವಾಗಿದೆ. ಈ ಹಿಂದೆಯೂ ಮಹಿಳೆ ಕೌಟುಂಬಿಕ ಹಿಂಸಾಚಾರಕ್ಕೆ ಒಳಗಾಗಿದ್ದು, ಸೆಪ್ಟೆಂಬರ್ ಆರಂಭದಲ್ಲಿ ನಾರ್ಥಾಂಪ್ಟನ್ ಮ್ಯಾಜಿಸ್ಟ್ರೇಟ್ ನ್ಯಾಯಾಲಯದಿಂದ ಕೌಟುಂಬಿಕ ಹಿಂಸಾಚಾರದಿಂದ ರಕ್ಷಣೆ ಆದೇಶ ತಂದಿದ್ದರು. ಪೊಲೀಸರು ಹರ್ಷಿತಾ ಎಂಬ ಹೆಸರಿಸಿರುವ ಮಹಿಳೆಯ ಶವ ಪೂರ್ವ ಲಂಡನ್‌ನಲ್ಲಿ ಕಾರಿನಲ್ಲಿ ಪತ್ತೆಯಾದ ನಂತರ ಕೊಲೆ ತನಿಖೆ ಪ್ರಾರಂಭಿಸಿದ್ದು, ಪತಿ ಪಂಕಜ್ ಲಂಬಾ ದೇಶ ಬಿಟ್ಟು ಪರಾರಿಯಾಗಿರಬಹುದು ಎಂದು ಬ್ರಿಟನ್ ಪೊಲೀಸರು ಶಂಕಿಸಿದ್ದಾರೆ.


ಅನಿಲ್ ದೇಶಮುಖ್ ಮೇಲೆ ದಾಳಿ: ಹಲ್ಲೆ; ನಾಲ್ವರ ಮೇಲೆ ಪ್ರಕರಣ



ನಾಗ್ಪುರ: ನಾಗ್ಪುರದಲ್ಲಿ ಎನ್‌ಸಿಪಿ (ಎಸ್‌ಪಿ) ನಾಯಕ, ಮಹಾರಾಷ್ಟ್ರದ ಮಾಜಿ ಗೃಹ ಸಚಿವ ಅನಿಲ್ ದೇಶಮುಖ್ ಅವರ ಮೇಲೆ ನಡೆದ ದಾಳಿಗೆ ಸಂಬಂಧಿಸಿದಂತೆ ನಾಲ್ವರು ಅಪರಿಚಿತ ವ್ಯಕ್ತಿಗಳ ಮೇಲೆ ಕೊಲೆ ಯತ್ನದ ಆರೋಪದಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಅನಿಲ್ ದೇಶಮುಖ್ ಅವರು ಸಂಚರಿಸುತ್ತಿದ್ದ ಕಾರಿನ ಮೇಲೆ ಸೋಮವಾರ ರಾತ್ರಿ ದುಷ್ಕರ್ಮಿಗಳು ಕಲ್ಲು ತೂರಾಟ ನಡೆಸಿದ್ದರು. ಘಟನೆಯಲ್ಲಿ ಗಂಭೀರವಾಗಿ ಗಾಯಗೊಂಡಿದ್ದ ದೇಶಮುಖ್ ಅವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.


ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯ ಪ್ರಚಾರದ ಕೊನೆಯ ದಿನ ಈ ಘಟನೆ ನಡೆದಿದೆ. ಈ ಸಂಬಂಧ ಉನ್ನತ ಮಟ್ಟದ ತನಿಖೆಗೆ ಎನ್‌ಸಿಪಿ (ಎಸ್‌ಪಿ) ಒತ್ತಾಯಿಸಿದೆ. ನಾಗ್ಪುರ ಜಿಲ್ಲೆಯ ನಾರ್ಖೆಡ್ ಗ್ರಾಮದಲ್ಲಿ ನಡೆದ ಸಭೆಯಲ್ಲಿ ಭಾಗವಹಿಸಿದ ಬಳಿಕ ದೇಶಮುಖ್ ಅವರು ಕಟೋಲ್‌ಗೆ ಹಿಂತಿರುಗುತ್ತಿದ್ದರು. ಈ ವೇಳೆ ಜಲಾಲ್‌ಖೇಡಾ ರಸ್ತೆಯ ಬೆಲ್‌ಪತ್ರ್ ಬಳಿ ದುಷ್ಕರ್ಮಿಗಳು ಅವರ ಕಾರಿಗೆ ಕಲ್ಲು ತೂರಾಟ ನಡೆಸಿದ್ದಾರೆ. 'ಘಟನಾ ಸ್ಥಳಕ್ಕೆ ವಿಧಿ ವಿಜ್ಞಾನ ತಂಡ ಭೇಟಿ ನೀಡಿ, ಸಾಕ್ಷ್ಯಗಳನ್ನು ಸಂಗ್ರಹಿಸಿದೆ' ಎಂದು ನಾಗ್ಪುರ ಗ್ರಾಮಾಂತರ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ಹರ್ಷ್ ಪೊದ್ದಾರ್ ತಿಳಿಸಿದ್ದಾರೆ.

ಪಾಕಿಸ್ತಾನದಲ್ಲಿ ಮೂರು ದಿನ ಸಂಪೂರ್ಣ ಲಾಕ್‌ಡೌನ್



ಇಸ್ಲಾಮಾಬಾದ್: ರಾಷ್ಟ್ರ ರಾಜಧಾನಿ ದಿಲ್ಲಿಯಲ್ಲಿ ವಾಯುಮಾಲಿನ್ಯ ತೀವ್ರ ಹೆಚ್ಚಳವಾಗಿದ್ದು, ಮನುಷ್ಯರ ಆರೋಗ್ಯಕ್ಕೆ ಹಾನಿಕಾರಕ ಎಂದು ಎಚ್ಚರಿಕೆ ನೀಡಿದೆ. ಆದರೆ ಪಾಕಿಸ್ತಾನದ ಸ್ಥಿತಿ ಇನ್ನೂ ಗಂಭೀರವಾಗಿದೆ. ಹೌದು ಪಾಕಿಸ್ತಾನದಲ್ಲಿ ವಾಯುಮಾಲಿನ್ಯದ ಗುಣಮಟ್ಟ ಅನಾಹುತಕಾರಿ ಮಟ್ಟಕ್ಕೆ ತಲುಪಿರುವುದಾಗಿ ವರದಿ ತಿಳಿಸಿದೆ. ಪಾಕಿಸ್ತಾನದ ಲಾಹೋರ್ ಮತ್ತು ಮುಲ್ತಾನ್‌ನಲ್ಲಿ ವಾಯು ಗುಣಮಟ್ಟ ಸೂಚ್ಯಂಕ 2,000ಕ್ಕೆ ತಲುಪಿದ್ದು, ಇದು ಅತ್ಯಂತ ಕಳಪೆ ಮಟ್ಟದ ವಾಯುಗುಣ ಮಟ್ಟವಾಗಿದೆ ಎಂದು ವರದಿ ವಿವರಿಸಿದೆ. ಕಳಪೆ ವಾಯು ಗುಣಮಟ್ಟದಿಂದ ಕಂಗಾಲಾಗಿರುವ ಪಾಕ್ ಪ್ರಾಂತೀಯ ಸರ್ಕಾರ ಲಾಕ್‌ಡೌನ್ ಸೇರಿದಂತೆ ಹಲವು ಕಟ್ಟುನಿಟ್ಟಿನ ಕ್ರಮ ತೆಗೆದುಕೊಂಡಿರುವುದಾಗಿ ವರದಿ ತಿಳಿಸಿದೆ. ಮನುಷ್ಯನ ಆರೋಗ್ಯಕ್ಕೆ ವಿಷಕಾರಿಯಾಗಿರುವ ವಾಯುಗುಣಮಟ್ಟ ನಿಯಂತ್ರಿಸುವ ನಿಟ್ಟಿನಲ್ಲಿ ಪಾಕ್‌ನ ಪಂಜಾಬ್ ಸರ್ಕಾರ ಲಾಹೋರ್ ಮತ್ತು ಮುಲ್ತಾನ್ ನಗರಗಳಲ್ಲಿ ಶುಕ್ರವಾರ, ಶನಿವಾರ ಮತ್ತು ಭಾನುವಾರ ಸಂಪೂರ್ಣ ಲಾಕ್‌ಡೌನ್ ಘೋಷಿಸಿದೆ.

ಶಬರಿಮಲೆಗೆ ತೆರಳಿದ್ದ ಭಕ್ತರಿದ್ದ ಬಸ್ ಅಪಘಾತ: 27 ಮಂದಿಗೆ ಗಾಯ



ವಯನಾಡ್: ಶಬರಿಮಲೆ ದೇವಸ್ಥಾನಕ್ಕೆ ತೆರಳಿದ್ದ ಕರ್ನಾಟಕದ ಅಯ್ಯಪ್ಪ ಭಕ್ತರಿದ್ದ ಬಸ್ ಕೇರಳದ ವಯನಾಡ್ ಬಳಿಯ ತಿರುನೆಲ್ಲಿ ಎನ್ನುವಲ್ಲಿ ಅಪಘಾತಕ್ಕೀಡಾಗಿದ್ದು 27 ಜನ ಗಾಯಗೊಂಡಿದ್ದಾರೆ.

ಬಸ್ ಮೈಸೂರಿನ ಹುಣಸೂರಿಗೆ ತೆರಳುತ್ತಿತ್ತು. ಮಂಗಳವಾರ ಬೆಳಿಗ್ಗೆ 6 ಗಂಟೆಗೆ ಘಟನೆ ಸಂಭವಿಸಿದೆ. ಬಸ್‌ನಲ್ಲಿ 45 ಮಂದಿ ಭಕ್ತರಿದ್ದರು. ಗಾಯಾಳುಗಳಲ್ಲಿ ಇಬ್ಬರು ಮಕ್ಕಳೂ ಸೇರಿದ್ದಾರೆ. ಗಾಯಗೊಂಡವರನ್ನು ವಯನಾಡ್‌ನ ಆಸ್ಪತ್ರೆಗೆ ದಾಖಲಿಸಲಾಗಿದೆ. ಕೆಲವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಭಕ್ತರು ನ.15ರಿಂದ ಆರಂಭವಾದ ಶಬರಿಮಲೆ ದೇವಸ್ಥಾನದ ವಾರ್ಷಿಕ ಮಂಡಲ–ಮಕರವಿಳಕ್ಕು ಉತ್ಸವದಲ್ಲಿ ಭಾಗಿಯಾಗಿದ್ದರು. ಅಪಘಾತದ ಬಗ್ಗೆ ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ಫೇಸ್‌ಬುಕ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿದ್ದು, 'ಶಬರಿಮಲೆಗೆ ತೆರಳಿದ್ದ ಕರ್ನಾಟಕದ ಭಕ್ತರಿದ್ದ ವಾಹನ ವಯನಾಡ್‌ನಲ್ಲಿ ಅಪಘಾತಕ್ಕೀಡಾಗಿರುವುದು ನೋವುಂಟು ಮಾಡಿದೆ. ಗಾಯಾಳುಗಳು ಬೇಗನೆ ಚೇತರಿಸಿಕೊಳ್ಳಲಿ' ಎಂದು ಬರೆದುಕೊಂಡಿದ್ದಾರೆ.

ಇಸ್ರೋದ ಜಿಸ್ಯಾಟ್–ಎನ್2 ಸಂವಹನ ಉಪಗ್ರಹವನ್ನು ಕಕ್ಷೆಗೆ ಸೇರಿಸಿದ ಸ್ಪೇಸ್‌ಎಕ್ಸ್

ಬೆಂಗಳೂರು: ದೇಶದ ಇತ್ತೀಚಿನ ಸಂವಹನ ಉಪಗ್ರಹ ಜಿಸ್ಯಾಟ್–ಎನ್2 ಅನ್ನು ಬಿಲಿಯನೇರ್ ಎಲೋನ್ ಮಸ್ಕ್ ಒಡೆತನದ ಸ್ಪೇಸ್‌ಎಕ್ಸ್ ಅಮೆರಿಕದ ಕೇಪ್ ಕೆನವೆರಲ್‌ನಿಂದ ಯಶಸ್ವಿಯಾಗಿ ಉಡಾವಣೆ ಮಾಡಿದೆ ಎಂದು ಇಸ್ರೋದ ವಾಣಿಜ್ಯ ವಿಭಾಗ ಎನ್‌ಎಸ್‌ಐಎಲ್ ತಿಳಿಸಿದೆ.

ಫಾಲ್ಕನ್ 9 ರಾಕೆಟ್ ನೆರವಿನಿಂದ 4,700 ಕೆಜಿ ತೂಕದ ಜಿಸ್ಯಾಟ್–ಎನ್2 ಹೈ–ಥ್ರೂಪುಟ್ ಉಪಗ್ರಹವನ್ನು ನಿಗದಿತ ಜಿಯೋ–ಸಿಂಕ್ರೊನಸ್ ಟ್ರಾನ್ಸ್ ಫರ್ ಕಕ್ಷೆಗೆ ಯಶಸ್ವಿಯಾಗಿ ಸೇರಿಸಲಾಯಿತು ಎಂದು ನ್ಯೂಸ್ಪೇಸ್ ಇಂಡಿಯಾ ಲಿಮಿಟೆಡ್ ತಿಳಿಸಿದೆ. ಜಿಸ್ಯಾಟ್–ಎನ್2 ಹೈ–ಥ್ರೂಪುಟ್ ಸಂವಹನ ಉಪಗ್ರಹವನ್ನು ನವೆಂಬರ್ 19, 2024 ರಂದು ಅಮೆರಿಕದ ಕೇಪ್ ಕ್ಯಾನವೆರಲ್‌ನಿಂದ ಯಶಸ್ವಿಯಾಗಿ ಉಡಾವಣೆ ಮಾಡಲಾಯಿತು. 4700 ಕೆಜಿ ತೂಕದ ಜಿಸ್ಯಾಟ್–ಎನ್2 ಅನ್ನು ನಿಗದಿತ ಜಿಯೋ–ಸಿಂಕ್ರೊನಸ್ ಟ್ರಾನ್ಸ್‌ಫರ್ ಕಕ್ಷೆಗೆ ಯಶಸ್ವಿಯಾಗಿ ಸೇರಿಸಲಾಯಿತು. ಉಪಗ್ರಹ ಉತ್ತಮ ಸ್ಥಿತಿಯಲ್ಲಿದ್ದು, ಇಸ್ರೋದ ಮಾಸ್ಟರ್ ಕಂಟ್ರೋಲ್ ಫೆಸಿಲಿಟಿ(ಎಂಸಿಎಫ್) ನಿಯಂತ್ರಣಕ್ಕೆ ತೆಗೆದುಕೊಂಡಿದೆ ಎಂದು ಪ್ರಾಥಮಿಕ ಮಾಹಿತಿಯು ಸೂಚಿಸುತ್ತದೆ" ಎಂದು NSIL 'ಫಿ' ನಲ್ಲಿ ಪೋಸ್ಟ್ ಮಾಡಿದೆ.

ಕುಶಾಲನಗರದಲ್ಲಿ ವಿಜೃಂಭಣೆಯ ಗಣಪತಿ ರಥೋತ್ಸವ

● ಸಹಸ್ರಾರು ಭಕ್ತರು ಭಾಗಿ ● ಅಯ್ಯಪ್ಪ ಮಾಲಾಧಾರಿಗಳಿಂದ ಭಜನೆ



ಕುಶಾಲನಗರದಲ್ಲಿ ಗಣಪತಿ ರಥೋತ್ಸವ ಸಹಸ್ರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನಡೆಯಿತು.

ಕುಶಾಲನಗರ, ನ.19–ಪಟ್ಟಣದ ಶ್ರೀ ಗಣಪತಿ ದೇವಾಲಯದ ವಾರ್ಷಿಕ ರಥೋತ್ಸವ ಮಂಗಳವಾರ ಸಹಸ್ರಾರು ಭಕ್ತರ ನಡುವೆ ವಿಜೃಂಭಣೆಯಿಂದ ನಡೆಯಿತು.

ದೇವಾಲಯದಲ್ಲಿ ಸಾಂಪ್ರದಾಯಿಕ ಪೂಜಾ ಕಾರ್ಯ ನೆರವೇರಿಸಿ, ಉತ್ಸವ ಮೂರ್ತಿಯನ್ನು ಮಂಗಳವಾದ್ಯದೊಂದಿಗೆ ದೇವಾಲಯದಿಂದ ಹೊರತಂದು ಭಕ್ತರ ಜಯಘೋಷಗಳ ನಡುವೆ ರಥದಲ್ಲಿ ಪ್ರತಿಷ್ಠಾಪಿಸಲಾಯಿತು. ಗಣಪತಿ ದೇವಾಲಯ ಸೇವಾ ಸಮಿತಿ ವತಿಯಿಂದ ಕಾರ್ತಿಕ ಕೃಷ್ಣ ಪಕ್ಷದಲ್ಲಿ ಸಲ್ಲುವ ಅಭಿಜಿನ್ ಶುಭ ಲಗ್ನದಲ್ಲಿ ಮಧ್ಯಾಹ್ನ 1 ಗಂಟೆಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಪಂಚಾಮೃತ, ರುದ್ರಾಭಿಷೇಕ, ಏಕವಾರ, ಪುಷ್ಪಾ ಲಂಕಾರ, ರಥ ಬಲಿ, ಪೂಜೆ ಹಾಗೂ ಮಹಾಮಂಗಳಾರತಿ ಬಳಿಕ ರಥೋತ್ಸವಕ್ಕೆ ಚಾಲನೆ ನೀಡಲಾಯಿತು.

ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸಿದ್ದ ಸಹಸ್ರಾರು ಭಕ್ತರು ರಥವನ್ನು ದೇವಾಲಯದಿಂದ ರಥ ಬೀದಿ ಮೂಲಕ ಆಂಜನೇಯಸ್ವಾಮಿ ದೇವಸ್ಥಾನ ವರೆಗೆ ಎಳೆಯುವ ಮೂಲಕ ಭಕ್ತಿ ಸಮರ್ಪಿಸಿದರು. ದೇವಸ್ಥಾನ ಸಮಿತಿ ಅಧ್ಯಕ್ಷ ಎಂ.ಕೆ.ದಿನೇಶ್ ಹಾಗೂ ಪ್ರಧಾನ ಅರ್ಚಕ ಆರ್.ಕೆ.ನಾಗೇಂದ್ರ ಬಾಬು ನೇತೃತ್ವದಲ್ಲಿ ವಿವಿಧ ಪೂಜಾ ಕೈಂಕರ್ಯ ನೆರವೇರಿದವು.

ಪಕ್ಕದ ಬೇಣಗಾಲು ಮತ್ತು ಆವರ್ತಿ ಗ್ರಾಮದಿಂದ ಬಂದಿದ್ದ ಗೋವುಗಳಿಗೆ ಪೂಜೆ ನೆರವೇರಿಸಲಾಯಿತು. ಇದೇ ವೇಳೆ ಅಯ್ಯಪ್ಪ ಮಾಲಾಧಾರಿಗಳು ಗಣಪತಿ ದೇವಾಲಯ ಎದುರು ಕರ್ಪೂರ ಹಚ್ಚಿ ಪ್ರಾರ್ಥನೆ ಸಲ್ಲಿಸಿದರು. ಮಾಲಾಧಾರಿಗಳ ಲಯಬದ್ಧ ಭಜನೆ ಗಮನ ಸೆಳೆಯಿತು. ಹೆಚ್ಚಿನ ಸಂಖ್ಯೆಯಲ್ಲಿ ಸೇರಿದ್ದ ಭಕ್ತರು ರಥದ ಮುಂದೆ ಹಣ್ಣು–ಕಾಯಿ ಪೂಜೆ ಸಲ್ಲಿಸಲು ಮುಗಿಬಿದ್ದರು. ನವದಂಪತಿಗಳು ಹಾಗೂ ಹರಕೆ ಹೊತ್ತ ಅವಿವಾಹಿತರು ರಥಕ್ಕೆ ಹಣ್ಣು ಜವನ ಎಸೆದು ತಮ್ಮ ಇಷ್ಟಾರ್ಥ ಸಿದ್ಧಿಗಾಗಿ ದೇವರ ಪ್ರಾರ್ಥಿಸಿದರು.

ಗಣಪತಿ ದೇವಸ್ಥಾನ ಸೇವಾ ಸಮಿತಿ ವತಿಯಿಂದ ಅನೇಕ ವರ್ಷಗಳಿಂದ ನಡೆಯುತ್ತಿರುವ ಪ್ರಸಿದ್ಧ ಈ ಜಾತ್ರೆಗೆ ಮೈಸೂರು ಹಾಗೂ ಹಾಸನ ಜಿಲ್ಲೆಗಳ ಗಡಿ ಭಾಗ ಸೇರಿದಂತೆ ಕೊಡಗು ಜಿಲ್ಲೆಯ ಸಾವಿರಾರು ಜನರು ಪಾಲ್ಗೊಂಡಿದ್ದರು. ರಥೋತ್ಸವದ ಅಂಗವಾಗಿ ದೇವಸ್ಥಾನವನ್ನು ವಿದ್ಯುತ್ ದೀಪದಿಂದ ಶೃಂಗರಿಸಲಾಗಿತ್ತು. ಗಾಯತ್ರಿ ಕಲ್ಯಾಣ ಮಂಟಪದಲ್ಲಿ ಅನ್ನದಾನದ ವ್ಯವಸ್ಥೆ ಹಾಗೂ ರಥೋತ್ಸವಕ್ಕೆ ಪೊಲೀಸ್ ಬಿಗಿಬಂದೋಬಸ್ತ್ ಕಲ್ಪಿಸಲಾಗಿತ್ತು ಜಾತ್ರೋತ್ಸವ ಅಂಗವಾಗಿ ಇನ್ನು ಒಂದು ವಾರ ಇಲ್ಲಿನ ಗುಂಡೂರಾವ್ ಬಡಾವಣೆಯ ಜಾತ್ರಾ ಮೈದಾನದಲ್ಲಿ ವಿವಿಧ ಮನೋರಂಜನಾ ಕಾರ್ಯಕ್ರಮ ನಡೆಯಲಿವೆ.

ಶಾಸಕರ ಭೇಟಿ: ಶಾಸಕ ಡಾ.ಮಂತರ್ ಗೌಡ ಗಣಪತಿ ದೇವಸ್ಥಾನಕ್ಕೆ ಆಗಮಿಸಿ ದೇವರ ದರ್ಶನ ಪಡೆದು, ಆರತಿ ಹಾಗೂ ಪ್ರಸಾದ ಸ್ವೀಕರಿಸಿದರು. ನಂತರ ಗುಂಡೂರಾವ್ ಜಾತ್ರಾ ಮೈದಾನದಲ್ಲಿ ಗೆಳೆಯರ ಬಳಗದ ನೇತೃತ್ವದಲ್ಲಿ ಆಯೋಜಿಸಿರುವ ಅಮ್ಯೂಸ್‌ಮೆಂಟ್ ಪಾರ್ಕ್ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಶಾಸಕರು ಚಾಲನೆ ನೀಡಿದರು.

ದೇವಸ್ಥಾನ ಸಮಿತಿ ಉಪಾಧ್ಯಕ್ಷ ಆರ್.ಬಾಬು, ಕಾರ್ಯದರ್ಶಿ ಬಿ.ಕೆ.ಮುತ್ತಣ್ಣ, ಖಜಾಂಚಿ ಎಸ್.ಕೆ.ಸತೀಶ್, ಸಹ ಕಾರ್ಯದರ್ಶಿ ಕೆ.ಎನ್.ದೇವರಾಜ್, ನಿರ್ದೇಶಕರಾದ ವಿ.ಡಿ.ಪುಂಡರೀಕಾಕ್ಷ, ವಿ.ಪಿ.ಶಶಿಧರ್, ಟಿ.ಆರ್.ಶರವಣ ಕುಮಾರ್, ಎಚ್.ಎಂ.ಚಂದ್ರು, ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ವಿ.ಪಿ.ಶಶಿಧರ್, ನಗರ ಯೋಜನಾ ಪ್ರಾಧಿಕಾರ ಅಧ್ಯಕ್ಷ ಪ್ರಮೋದ್ ಮುತ್ತಪ್ಪ, ಪುರಸಭೆ ಸದಸ್ಯ ದಿನೇಶ್, ಜಯಲಕ್ಷ್ಮಿ ನಂಜುಂಡಸ್ವಾಮಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಟಿ.ಆರ್.ಶರವಣ ಕುಮಾರ್, ಕೆಪಿಸಿಸಿ ಕಾರ್ಯದರ್ಶಿ ಕೆ.ಪಿ.ಚಂದ್ರಕಲಾ, ಕಾಂಗ್ರೆಸ್ ನಗರಾಧ್ಯಕ್ಷ ಜೋಸೆಫ್ ವಿಕ್ಟರ್ ಸೋನ್ಸ್, ಗೆಳೆಯರ ಬಳಗದ ಮುಖಂಡ ವಿ.ಎಸ್.ಆನಂದ್ ಕುಮಾರ್, ರಘು, ಎಚ್.ಟಿ.ವಸಂತ, ಚಂದ್ರು ಇದ್ದರು.

ವಿರಾಜಪೇಟೆಯಲ್ಲಿ ಬೈಕ್ ರ್‍ಯಾಲಿಗೆ ಸ್ವಾಗತ



ಕೇರಳದ ಕಣ್ಣನೂರಿನಿಂದ ಬೈಕ್ ರ್‍ಯಾಲಿಯಲ್ಲಿ ವಿರಾಜಪೇಟೆಗೆ ಆಗಮಿಸಿದ ಯೋಧರನ್ನು ಸ್ವಾಗತಿಸಲಾಯಿತು.

ವಿರಾಜಪೇಟೆ, ನ.19–ಸೈನಿಕರು ನಿವೃತ್ತಿ ಬಳಿಕವೂ ಸೈನಿಕರಾಗಿಯೇ ಗುರುತಿಸಿಕೊಳ್ಳುವ ವಿಶಿಷ್ಟತೆಯ ಗೌರವ ಸೇನೆಯಲ್ಲಿ ಮಾತ್ರ ಕಾಣಬಹುದು ಎಂದು ಮೇಜರ್ ಸೀತಾಸೈಲ್ಕ್ ಹೇಳಿದರು.

ಪಟ್ಟಣದಲ್ಲಿ ಮದರಾಸ್ ಇಂಜಿನಿಯರ್ ಎಂಇಜಿ ವತಿಯಿಂದ ಮದರಾಸ್ ರೆಜಿಮೆಂಟ್ 244ನೇ ಸಂಸ್ಥಾಪನ ದಿನದ ಪ್ರಯುಕ್ತ ಆಯೋಜಿಸಿದ್ದ ಬೈಕ್ ರ್‍ಯಾಲಿಯನ್ನು ಸ್ವಾಗತಿಸಿ ಮಾತನಾಡಿದ ಅವರು, ಇತ್ತೀಚೆಗೆ ಕೇರಳದ ವೈನಾಡಿನಲ್ಲಿ ನಡೆದ ಗುಡ್ಡ ಕುಸಿತ ದುರಂತದಲ್ಲಿ ಜನರ ರಕ್ಷಣೆಗಾಗಿ ಸೇನಾ ತುಕಡಿ ಹಗಲಿರುಳು ಸೇತುವೆ ನಿರ್ಮಾಣ ಕಾರ್ಯದಲ್ಲಿ ಶ್ರಮಿಸಿದೆ. ಕೊಡಗು ದೇಶಕ್ಕೆ ಅನೇಕ ಯೋಧರನ್ನು ನೀಡಿದೆ. ಮೇಜರ್ ಜನರಲ್ ಕಾರ್ಯಪ್ಪ ಅವರ ಉತ್ಸಾಹ ಎಲ್ಲರಿಗೂ ಸ್ಫೂರ್ತಿ ಎಂದರು.

ವಿದ್ಯಾರ್ಥಿಗಳು ಎನ್‌ಸಿಸಿ ಮತ್ತು ಸ್ಕೌಟ್ ಅಂಡ್ ಗೈಡ್ಸ್ ಸಂಸ್ಥೆ ಮೂಲಕ ದೇಶ ಸೇವೆಯಲ್ಲಿ ತೊಡಗಿಸಿಕೊಳ್ಳಬೇಕು. ಕಾರ್ಗಿಲ್ ವಿಜಯೋತ್ಸವ ಪ್ರಯುಕ್ತ ಬೈಕ್ ರ್‍ಯಾಲಿ ನಡೆಸುತ್ತಿದೆ ಎಂದು ತಿಳಿಸಿದರು.

ಮೇಜರ್ ಜನರಲ್ ಬಿ.ಎ.ಕಾರ್ಯಪ್ಪ ಮಾತನಾಡಿ, ಬೈಕ್ ರ್‍ಯಾಲಿಯೊಂದಿಗೆ ಮಾಜಿ ಸೈನಿಕರ ಪಿಂಚಣಿ ಸಮಸ್ಯೆ ಪರಿಹರಿಸುವ ಅದಾಲತ್ ಏರ್ಪಡಿಸಲಾಗಿದೆ. ವಿದ್ಯಾರ್ಥಿಗಳು ದೇಶಾಭಿಮಾನ ಬೆಳೆಸಿಕೊಂಡು ದೇಶ ರಕ್ಷಣೆಯಲ್ಲಿ ತೊಡಗಿಸಿಕೊಳ್ಳುವ ಸಂಕಲ್ಪ ಮಾಡಬೇಕು. ಪೋಷಕರು ಸೇನೆ ಸೇರಲು ಪ್ರೋತ್ಸಾಹ ನೀಡುವ ಮೂಲಕ ಮಕ್ಕಳ ಭವಿಷ್ಯ ರೂಪಿಸಬೇಕು ಎಂದರು.

ತಹಸೀಲ್ದಾರ್ ರಾಮಚಂದ್ರ ಮಾತನಾಡಿ, ಮಕ್ಕಳಲ್ಲಿ ದೇಶಾಭಿಮಾನ ಮೂಡಿಸಲು ಈ ರೀತಿ ಕಾರ್ಯಕ್ರಮ ಏರ್ಪಡಿಸಿರುವುದು ಉತ್ತಮ. ಪ್ರತಿಯೊಬ್ಬರು ದೇಶಾಭಿಮಾನ ಬೆಳಸಿಕೊಳ್ಳಬೇಕು ಎಂದು ಹೇಳಿದರು.

ಕೇರಳದ ಕಣ್ಣನೂರಿನಿಂದ ವಿರಾಜಪೇಟೆ ವರೆಗೆ ಬೈಕ್ ರ್‍ಯಾಲಿ ನಡೆಸಲಾಯಿತು. ಇದೇ ವೇಳೆ ಮಾಜಿ ಸೈನಿಕರ ಸಂಘದ ಅಧ್ಯಕ್ಷ ಚಪ್ಪಂಡ ಹರೀಶ್, ಖಜಾಂಚಿ ತೋರೆರ ಪೂವಯ್ಯ, ಕಾರ್ಯದರ್ಶಿ ಪುಗ್ಗೇರ ನಂದ, ಯೋಧರಾದ ವಿಷ್ಣು, ಶ್ರೀಮತ್, ಶ್ರೀರಾಜು, ನಿಧಿನ್, ಹೆಚ್.ಡಿ.ಪಿಳ್ಳೈ, ರೋಟರಿ ವಿದ್ಯಾಸಂಸ್ಥೆ ಅಧ್ಯಕ್ಷ ಬಿ.ಬಿ. ಮಾದಪ್ಪ, ಪೊಲೀಸ್ ಠಾಣಾಧಿಕಾರಿಗಳಾದ ಕಾವೇರಪ್ಪ ಮತ್ತು ವಾಣಿ, ಸ್ಕೌಟ್ ಅಂಡ್ ಗೈಡ್ಸ್ ಅಧಿಕಾರಿ ಮೈಥಿಲಿರಾವ್, ರೋಟರಿ, ಸಂತಅನ್ನಮ್ಮ, ಅರಮೆರಿ ಎಸ್‌ಎಂಎಸ್ ವಿದ್ಯಾರ್ಥಿಗಳು ಇದ್ದರು.

ಗರ್ಭಿಣಿಯರಿಗೆ ಸೀಮಂತ ಕಾರ್ಯ...



ಮಡಿಕೇರಿ ಗಾಂಧಿನಗರ ಅಂಗನವಾಡಿ ಕೇಂದ್ರದಲ್ಲಿ ನಡೆದ ಬಾಲಮೇಳ, ಛದ್ಮವೇಷ ಮತ್ತು ಸಮವಸ್ತ್ರ ವಿತರಣಾ ಕಾರ್ಯಕ್ರಮದಲ್ಲಿ ಪೋಷಣ್ ಅಭಿಯಾನ ಯೋಜನೆಯಡಿ ಗರ್ಭಿಣಿಯರಿಗೆ ಸೀಮಂತ ಕಾರ್ಯ ಮಾಡಲಾಯಿತು. ಪ್ರಭಾರ ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮೇಪಾಡಾಂಡ ಸವಿತಾ ಕೀರ್ತನ್, ಮೂರ್ನಾಡು ಗ್ರಾಪಂ ಅಧ್ಯಕ್ಷ ಕುಶನ್‌ರೈ, ಸದಸ್ಯ ಯಶ್ವಿನ್, ಪಶು ವೈದ್ಯಾಧಿಕಾರಿ ಶಿಲ್ಪ, ಜಸ್ಮಿನ್, ಗಣೇಶ್, ಅಂಗನವಾಡಿ ಕಾರ್ಯಕರ್ತೆಯರಿದ್ದರು.

ಡಿ.4ರಿಂದ ಕೊಡವ ಕುಟುಂಬಗಳ ಹಾಕಿ

ಮಡಿಕೇರಿ, ನ.19–ವಿ.ಬಾಡಗ ಹೈ ಫ್ಲೆಯರ್ಸ್ ವತಿಯಿಂದ ಡಿ.4ರಿಂದ 8 ರವರೆಗೆ 3ನೇ ವರ್ಷದ ಕೊಡವ ಕುಟುಂಬಗಳ ಹಾಕಿ 'ಹೈ ಫ್ಲೆಯರ್ಸ್ ಕಪ್–2024' ಪಂದ್ಯಾವಳಿ ನಡೆಯಲಿದೆ ಎಂದು ಹೈ ಫ್ಲೆಯರ್ಸ್‌ನ ಅಧ್ಯಕ್ಷ ಅಮ್ಮಣಿಚಂಡ ರಂಜು ಪೂಣಚ್ಚ ತಿಳಿಸಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿ.ಬಾಡಗ ಸರ್ಕಾರಿ ಪ್ರಾಥಮಿಕ ಶಾಲಾ ಮೈದಾನದಲ್ಲಿ ಪಂದ್ಯಾವಳಿ ನಡೆಯಲಿದ್ದು, ಆಸಕ್ತ ತಂಡಗಳು ನ.22ರೊಳಗೆ ಹೆಸರು ನೋಂದಾಯಿಸಿಕೊಳ್ಳುವಂತೆ ತಿಳಿಸಿದರು.



ಸುದ್ದಿಗೋಷ್ಠಿಯಲ್ಲಿ ಹೈ ಫ್ಲೆಯರ್ಸ್‌ನ ಅಧ್ಯಕ್ಷ ಅಮ್ಮಣಿಚಂಡ ರಂಜು ಪೂಣಚ್ಚ ಮಾತನಾಡಿದರು.

ಕಳೆದ 2 ವರ್ಷದಲ್ಲಿ ನಡೆದ ಪಂದ್ಯಾವಳಿಯಲ್ಲಿ ಬೇರಳೆನಾಡು ಮತ್ತು ಕತ್ತುನಾಡಿನಲ್ಲಿ ಐನ್‌ಮನೆ ಹೊಂದಿರುವ ಕೊಡವ ಕುಟುಂಬಗಳಿಗೆ ಭಾಗವಹಿಸಲು ಅವಕಾಶ ಕಲ್ಪಿಸಿದ್ದು, ಈ ಬಾರಿ ಬಿಟ್ಟಂಗಾಲ–ಬಿ.ಶೆಟ್ಟಿಗೇರಿ–ಹಾಕತ್ತೂರು ಗ್ರಾಪಂ ವ್ಯಾಪ್ತಿಯ ಐನ್‌ಮನೆ ಹೊಂದಿರುವ ಕೊಡವ ಕುಟುಂಬಗಳ ನಡುವೆ ಪಂದ್ಯಾವಳಿ ನಡೆಯಲಿವೆ. ಪ್ರತಿ ತಂಡಗಳಿಗೆ 4 ಕೊಡವ ಅತಿಥಿ ಆಟಗಾರರನ್ನು ಸೇರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದು ಮಾಹಿತಿ ನೀಡಿದರು. ಕಾರ್ಯದರ್ಶಿ ಪ್ರವೀಣ್ ತಿಮ್ಮಯ್ಯ ಮಾತನಾಡಿ, 30 ತಂಡಗಳು ನೋಂದಾಯಿಸಿಕೊಳ್ಳುವ ನಿರೀಕ್ಷೆ ಇದೆ. ವಿಜೇತ ತಂಡಗಳಿಗೆ ಆಕರ್ಷಕ ಬೆಳ್ಳಿ ಟ್ರೋಫಿ ಮತ್ತು ನಗದು ಬಹುಮಾನ ನೀಡಲಾಗುವುದು. ನೋಂದಾಣಿಗೆ ಕಪ್ಪಂಡ ದಿಲನ್ ಮೊ.ಸಂ: 9481883738, ಪೂವಣ್ಣ ಮೊ.ಸಂ: 9480904999 ಅನ್ನು ಸಂಪರ್ಕಿಸಬಹುದು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಹೈ ಫ್ಲೆಯರ್ಸ್‌ನ ಸಲಹಾ ಸಮಿತಿ ಅಧ್ಯಕ್ಷ ಮಳವಂಡ ಗಿರೀಶ್ ಮುದ್ದಯ್ಯ, ಕ್ರೀಡಾ ಕಾರ್ಯದರ್ಶಿ ಕುಪ್ಪಂಡ ದಿಲನ್ ಬೋಪಣ್ಣ, ಸಲಹಾ ಸಮಿತಿ ಸದಸ್ಯ ಚೇಮಿರ ಪ್ರಭು ಪೂವಯ್ಯ, ಉಪಾಧ್ಯಕ್ಷ ಕಂಜಿತಂಡ ಪೂವಣ್ಣ ಉಪಸ್ಥಿತರಿದ್ದರು.

100 ರೂ. ಬಿಡದ ಕಳ್ಳರು

ಮಡಿಕೇರಿ, ನ.19–ಪೊನ್ನಂಪೇಟೆ ತಾಲೂಕಿನ ಶ್ರೀಮಂಗಲ ಗ್ರಾಪಂ ವ್ಯಾಪ್ತಿಯ ಕಾಕೂರು ಗ್ರಾಮದ ಕುಟ್ಟ ಶ್ರೀಮಂಗಲ ಮುಖ್ಯ ರಸ್ತೆ ಪಕ್ಕದ ಅಂಚೆ ಕಚೇರಿ ಬೀಗ ಒಡೆದು 100 ರೂ. ಕಳವು ಮಾಡಲಾಗಿದೆ.

ಬೀಗ ಮುರಿದು ಒಳ ನುಸುಳಿದ ಇಬ್ಬರು ಕಳ್ಳರು ಕಚೇರಿಯ ಡ್ರಾಯರ್‌ನಲ್ಲಿದ್ದ 100 ರೂ. ಅನ್ನು ಕಳವು ಮಾಡಿದ್ದಾರೆ. ಈ ದೃಶ್ಯ ಸಮೀಪದ ಅಂಗಡಿಯ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದೆ. ಓರ್ವ ಮುಖಕ್ಕೆ ಮಾಸ್ಕ್ ಧರಿಸಿದ್ದರೆ, ಮತ್ತೋರ್ವನ ಮುಖ ಸಿಸಿ ಕ್ಯಾಮರಾದಲ್ಲಿ ಸ್ಪಷ್ಟವಾಗಿ ಕಂಡು ಬಂದಿದೆ. ಈ ಸಂಬಂಧ ಅಂಚೆ ಕಚೇರಿ ಸಿಬ್ಬಂದಿ ಸತ್ಯ ಶ್ರೀಮಂಗಲ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಉಪಟಳ ನೀಡುತ್ತಿದ್ದ ಚಿರತೆ ಸೆರೆ

ಚಾಮರಾಜನಗರ, ನ.19–ತಿಂಗಳಿಂದ ಉಪಟಳ ನೀಡುತ್ತಿದ್ದ ಚಿರತೆ ತಾಲೂಕಿನ ಬ್ಯಾಡಮೂಡ್ಲು ಗ್ರಾಮದ ಬಳಿ ಅರಣ್ಯ ಇಲಾಖೆ ಇರಿಸಿದ್ದ ಬೋನಿನಲ್ಲಿ ಸೋಮವಾರ ತಡರಾತ್ರಿ ಸೆರೆಯಾಗಿದೆ.

ಬ್ಯಾಡಮೂಡ್ಲು ಗ್ರಾಮ ಸೇರಿದಂತೆ ಸುತ್ತಮುತ್ತಲಿನ ಪ್ರದೇಶದಲ್ಲಿ ಸುಮಾರು 6 ವರ್ಷದ ಗಂಡು ಚಿರತೆ ಕಳೆದ ಒಂದು ತಿಂಗಳಿಂದ ಆಗಾಗ್ಗೆ ಕಾಣಿಸಿಕೊಂಡು ಭೀತಿ ಉಂಟು ಮಾಡಿತ್ತು. ಇದರಿಂದ ಭಯಗೊಂಡಿದ್ದ ಗ್ರಾಮಸ್ಥರು ಅರಣ್ಯ ಅಧಿಕಾರಿಗಳಿಗೆ ಚಿರತೆ ಸೆರೆ ಹಿಡಿಯುವಂತೆ ಮನವಿ ಮಾಡಿದ್ದರು. ಗ್ರಾಮಸ್ಥರ ಮನವಿ ಮೇರೆಗೆ ಅರಣ್ಯ ಅಧಿಕಾರಿಗಳು ಬ್ಯಾಡಮೂಡ್ಲು ಬಳಿಯ ನಂಜಾಗ್ರ ಗ್ರಾಮದ ಕರಿಕಲ್ಲು ಕೋರೆಯಲ್ಲಿ ಬೋನ್ ಇರಿಸಿದರು.



ಬ್ಯಾಡಮೂಡ್ಲು ಗ್ರಾಮದ ಬಳಿ ಬೋನಿಗೆ ಬಿದ್ದ ಚಿರತೆ.

ನಾಲ್ವರು ಕಳ್ಳರ ಬಂಧನ; 41.69 ಲಕ್ಷ ರೂ. ಮೌಲ್ಯದ ಚಿನ್ನ ವಶ



ಅಂತಾರಾಜ್ಯ ಕಳ್ಳರಿಂದ ವಶಪಡಿಸಿಕೊಂಡ ಚಿನ್ನಾಭರಣ.

ಚಾಮರಾಜನಗರ, ನ.19–ಜಿಲ್ಲೆ ಸೇರಿದಂತೆ ಹೊರ ಜಿಲ್ಲೆಗಳಲ್ಲಿ ಮನೆಗಳ್ಳತನ ಮಾಡುತ್ತಿದ್ದ ನಾಲ್ವರು ಅಂತಾರಾಜ್ಯ ಕಳ್ಳರನ್ನು ಬಂಧಿಸಿರುವ ಪೊಲೀಸರು, 41.69 ಲಕ್ಷ ರೂ. ಮೌಲ್ಯದ 504 ಗ್ರಾಂ ಚಿನ್ನಾಭರಣ, 3 ಕೆಜಿ ಬೆಳ್ಳಿ, 4400 ರೂ. ನಗದು, ಕಾರು ಹಾಗೂ ಬೈಕ್ ಅನ್ನು ವಶಪಡಿಸಿಕೊಂಡಿದ್ದಾರೆ.

ತಮಿಳುನಾಡು ಮೂಲದ ಕೊಡಂಗುಸ್ವಾಮಿ (58), ಇಂದಿರಾ ರಾಜ್ ಅಲಿಯಾಸ್ ಇಂದ್ರರಾಜ್ (35), ಕೇರಳ ಮೂಲದ ಜೇಸುದಾಸ್.ಡಿ ಅಲಿಯಾಸ್ ಯೇಸುದಾಸ್ (39) ಹಾಗೂ ಅಜಿತ್ (23) ಬಂಧಿತರು.

ಈ ನಾಲ್ವರು ಕಳ್ಳತನ ಹಾಗೂ ಕಳುವು ಮಾಲುಗಳನ್ನು ಮಾರಾಟ ಮಾಡಲು ಮಹದೇಶ್ವರಬೆಟ್ಟ ಮತ್ತು ಕೊಳ್ಳೇಗಾಲಕ್ಕೆ ಬಂದಿದ್ದರು. ಈ ವೇಳೆ ಪೊಲೀಸರು ಬಂಧಿಸಿ, ವಿಚಾರಣೆಗೆ ಒಳಪಡಿಸಿದಾಗ ಹನೂರು ದೊಡ್ಡಿಂದುವಾಡಿ, ಗುಂಡೇಗಾಲ, ಕೊಳ್ಳೇಗಾಲ, ಚಾಮರಾಜನಗರ, ಗುಂಡ್ಲುಪೇಟೆ ಮತ್ತು ಬೇಗೂರು ಕಡೆಗಳಲ್ಲಿ ಕಳ್ಳತನ ಮಾಡಿರುವುದಾಗಿ ತಪ್ಪೊಪ್ಪಿಕೊಂಡಿದ್ದಾರೆ.

ಬಂಧಿತರು ಚಾಮರಾಜನಗರ ಜಿಲ್ಲೆಯ ಒಟ್ಟು 13 ಹಾಗೂ ಕೋಲಾರ ಜಿಲ್ಲೆಯ ಒಂದು ಕಳವು ಪ್ರಕರಣಗಳಲ್ಲಿ ಭಾಗಿಯಾಗಿರುವುದು ಪತ್ತೆಯಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ. ಕವಿತಾ ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ 6 ಹೊಸ ವಿದ್ಯುತ್ ಉಪಕೇಂದ್ರ ಸ್ಥಾಪನೆ

● ಜೋತು ಬಿದ್ದ ವಿದ್ಯುತ್ ತಂತಿ ನಿರ್ವಹಣೆಗೆ ಅನುದಾನ ● ಇಂಧನ ಸಚಿವ ಕೆ.ಜೆ. ಜಾರ್ಜ್ ಮಾಹಿತಿ

ಚಾಮರಾಜನಗರ, ನ.19–ಜಿಲ್ಲೆಯಲ್ಲಿ 6 ಹೊಸ ವಿದ್ಯುತ್ ಉಪಕೇಂದ್ರಗಳ ಸ್ಥಾಪನೆಗೆ ಕ್ರಮ ವಹಿಸಲಾಗಿದೆ ಎಂದು ಇಂಧನ ಸಚಿವ ಕೆಜೆಜಾರ್ಜ್ ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿ ನೂತನ ಕೆಡಿಪಿ ಸಭಾಂಗಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲಾಧಿಕಾರಿ, ಚುಡಾ ಅಧ್ಯಕ್ಷರ ಮನವಿ ಮೇರೆಗೆ ಚಾಮರಾಜನಗರ ವ್ಯಾಪ್ತಿಯ ಜೋಡಿರಸ್ತೆಗೆ ಕೆಪಿಟಿಸಿಎಲ್‌ನ ಸಿಎಸ್‌ಆರ್ ಫಂಡ್‌ನಿಂದ ಎಲ್‌ಇಡಿ–ಬಲ್‌ಗಳನ್ನು ಅಳವಡಿಸಲು ಕ್ರಮವಹಿಸಲಾಗಿದೆ. ವಿದ್ಯುತ್ ತಂತಿಗಳು ಜೋತು ಬಿದ್ದು ಅನಾಹುತಗಳು ಸಂಭವಿಸುತ್ತಿರುವ ಹಿನ್ನೆಲೆಯಲ್ಲಿ ಅವುಗಳನ್ನು ನಿರ್ವಹಣೆ ಮಾಡಲು ಅಗತ್ಯ ಅನುದಾನ ನೀಡಲಾಗುವುದು ಎಂದು ತಿಳಿಸಿದರು.



ಚಾಮರಾಜನಗರದ ಜಿಪಂ ನೂತನ ಕೆಡಿಪಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಇಂಧನ ಸಚಿವ ಕೆ.ಜೆ.ಜಾರ್ಜ್ ಮಾತನಾಡಿದರು.

> **ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರದಲ್ಲಿ ಇರುವವರೆಗೂ ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣ ಮಾಡುವುದಿಲ್ಲ. ವಿದ್ಯುತ್ ಕಳ್ಳತನ ತಪ್ಪಿಸಲು ಕೃಷಿ ಪಂಪ್‌ಸೆಟ್‌ಗಳಿಗೆ ಆಧಾರ್ ಲಿಂಕ್ ಕಡ್ಡಾಯ ಮಾಡಲಾಗುವುದು. ಇದರಿಂದ ರೈತರಿಗೆ ಅನುಕೂಲವಾಗಲಿದೆ.**
> **-ಕೆ.ಜೆ.ಜಾರ್ಜ್, ಇಂಧನ ಸಚಿವ**

ಅಕ್ರಮ–ಸಕ್ರಮ ಪಂಪ್‌ಸೆಟ್ ಯೋಜನೆಯಡಿ ಜಿಲ್ಲೆಯಲ್ಲಿ ಸಲ್ಲಿಕೆಯಾಗಿರುವ ಅರ್ಜಿಗಳನ್ನು ಮುಂದಿನ 2 ವರ್ಷಗಳವರೆಗೆ ಪೂರ್ಣಗೊಳಿಸಲಾಗುವುದು. ಈ ವರ್ಷ 1500 ಅರ್ಜಿಗಳ ವಿಲೇವಾರಿಗೆ ಕ್ರಮವಹಿಸಲಾಗುವುದು. ಕುಸುಮ್ ಬಿ ಯೋಜನೆಯಡಿ ಸೋಲಾರ್ ಪಂಪ್‌ಸೆಟ್‌ಗಳಿಗೆ ಶೇ.80ರಷ್ಟು ಸಬ್ಸಿಡಿ ನೀಡಲಾಗುತ್ತಿದೆ. ಈಗಾಗಲೇ ಜಿಲ್ಲೆಯಲ್ಲಿ 350 ಅರ್ಜಿಗಳು ಬಂದಿದ್ದು, ಇದರೊಂದಿಗೆ ಕುಸುಮ್ 'ಸಿ' ಯೋಜನೆಯಡಿ 5.5 ಮೆಗಾ ವ್ಯಾಟ್ ಆಯ್ಕೆ ಮಾಡಿಕೊಳ್ಳಲಾಗಿದೆ ಎಂದರು.

ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಕಲ್ಪಿಸಲು ಕ್ರಮ: ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಸೌಲಭ್ಯ ಕಲ್ಪಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಬೇರೆ ರಾಜ್ಯಗಳಿಂದ ವಿದ್ಯುತ್ ಖರೀದಿಸಿ ರೈತರ ಕೃಷಿಪಂಪ್ ಸೆಟ್‌ಗಳಿಗೆ ಉಚಿತವಾಗಿ ನೀಡಲು ಕ್ರಮ ಕೈಗೊಳ್ಳಲಾಗುವುದು. ಕೃಷಿ ಪಂಪ್‌ಸೆಟ್‌ಗಳಿಗೆ ಆಧಾರ್ ಲಿಂಕ್ ಮಾಡುವುದರಲ್ಲಿ ಯಾವುದೇ ತೊಂದರೆ ಇಲ್ಲ. ಈಗಾಗಲೇ ಶೇ.98ರಷ್ಟು ಲಿಂಕ್ ಆಗಿದೆ. ಇದರಿಂದಾಗಿ ಯಾರು ಎಷ್ಟು ವಿದ್ಯುತ್ ಬಳಕೆ ಮಾಡುತ್ತಿದ್ದಾರೆ ಎಂಬುದು ತಿಳಿಯಲಿದೆ ಎಂದರು.

ಕುಸುಮ್ ಬಿ ಹಾಗೂ ಕುಸುಮ್ ಸಿ ಯೋಜನೆಯಡಿ ಸೋಲಾರ್ ಮೂಲಕ ವಿದ್ಯುತ್ ಉತ್ಪಾದನೆಗೆ ಕ್ರಮವಹಿಸಲಾಗಿದೆ. 3 ಸಾವಿರ ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸಿ ಪಂಪ್‌ಸೆಟ್‌ಗಳಿಗೆ ಪೂರೈಕೆ ಮಾಡಲಾಗುವುದು. ರಾಜ್ಯದಲ್ಲಿ 2500 ಲೈನ್‌ಮಾನ್‌ಗಳನ್ನು ನೇಕಮ ಮಾಡಿಕೊಳ್ಳಲು ಕ್ರಮವಹಿಸಲಾಗಿದೆ. ರಾಜ್ಯದಲ್ಲಿ ಒಂದೇ ದಿನ ಸಂದರ್ಶನ ಮೂಲಕ ನೇಮಕ ಮಾಡಿಕೊಳ್ಳಲಾಗುವುದು. ಅಲ್ಲದೆ, 400 ಜೆಇ, 1000 ಎಇ ಹುದ್ದೆಗಳ ನೇಮಕಕ್ಕೂ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ದಕ್ಷರಾಗಿದ್ದು, ಪ್ರಾಮಾಣಿಕವಾಗಿ ಒಳ್ಳೆಯ ಕೆಲಸ ಮಾಡುತ್ತಿದ್ದಾರೆ. ಹೀಗಾಗಿ ಅವರೇ ಅಧಿಕಾರದಲ್ಲಿ ಮುಂದುವರೆ ಯುತ್ತಾರೆ. ನಾವು ಬಿ.ವೈ.ವಿಜಯೇಂದ್ರ ಅಥವಾ ಬಿಜೆಪಿಯವರನ್ನು ಕೇಳಿ ಮುಖ್ಯಮಂತ್ರಿ ಅಭ್ಯರ್ಥಿಯನ್ನು ಆಯ್ಕೆ ಮಾಡಿಲ್ಲ. ಕಾಂಗ್ರೆಸ್ ಹೈಕಮಾಂಡ್ ಆಯ್ಕೆ ಮಾಡಿರುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ಶಾಸಕರಾದ ಸಿ.ಪುಟ್ಟರಂಗಶೆಟ್ಟಿ, ಎ.ಆರ್. ಕೃಷ್ಣಮೂರ್ತಿ, ಹೆಚ್.ಎಂ.ಗಣೇಶ್ ಪ್ರಸಾದ್, ಎಂ.ಆರ್. ಮಂಜುನಾಥ್, ಕೆಪಿಟಿಸಿಎಲ್‌ನ ವ್ಯವಸ್ಥಾಪಕ ನಿರ್ದೇಶಕ ಪಂಕಜ್ ಕುಮಾರ್ ಪಾಂಡೆ, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಶೀಲಾ, ಜಿಲ್ಲಾಧಿಕಾರಿ ಶಿಲ್ಪಾನಾಗ್ ಇದ್ದರು.

ಹಸಗೂಲಿ ಗ್ರಾಮದಲ್ಲಿ ಪಾರ್ವತಾಂಬ ರಥೋತ್ಸವ



ಬೇಗೂರು ಸಮೀಪದ ಹಸಗೂಲಿ ಪಾರ್ವತಾಂಬ ರಥೋತ್ಸವ.

ಬೇಗೂರು, ನ.19–ಗುಂಡ್ಲುಪೇಟೆ ತಾಲೂಕಿನ ಬೇಗೂರು ಸಮೀಪದ ಹಸಗೂಲಿ ಗ್ರಾಮದಲ್ಲಿ ಮಂಗಳವಾರ ಶ್ರೀ ಪಾರ್ವತಾಂಬ ರಥೋತ್ಸವ ವಿಜೃಂಭಣೆಯಿಂದ ನಡೆಯಿತು. ಉತ್ಸವ ಮೂರ್ತಿಯನ್ನು ಅರಳಿ ಮರದ ಬಳಿ ಮಧ್ಯಾಹ್ನ 2 ಗಂಟೆವರೆಗೆ ಪೂಜೆ ಸಲ್ಲಿಸಿ, 3 ಗಂಟೆ ನಂತರ ರಥೋತ್ಸವಕ್ಕೆ ಜೈ ಕಾರದೊಂದಿಗೆ ಚಾಲನೆ ನೀಡಲಾಯಿತು. ಸುತ್ತ ಮುತ್ತಲ ಗ್ರಾಮಗಳ ರೈತರು ಜಾನುವಾರುಗಳನ್ನು ಎತ್ತಿನಗಾಡಿಗಳ ಸಮೇತ ಕರೆತಂದು ಪೂಜೆ ಸಲ್ಲಿಸಿ, ಪಂಜಿನ ಸೇವೆ ನಡೆಸಿದರು.

ಮಹಿಳೆಯರ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಿದ ಇಂದಿರಾ ಗಾಂಧಿ

ಚಾಮರಾಜನಗರ, ನ.19–ಇಂದಿರಾ ಗಾಂಧಿ ಪ್ರಧಾನಿಯಾಗಿದ್ದಾಗ ದೀನದಲಿತರು, ಹಿಂದುಳಿದ ವರ್ಗಗಳ ಮಹಿಳೆಯರ ಸರ್ವತೋಮುಖ ಅಭಿವೃದ್ಧಿ ಗಮನದಲ್ಲಿಟ್ಟುಕೊಂಡು 20 ಅಂಶಗಳ ಕಾರ್ಯಕ್ರಮ ಜಾರಿಗೊಳಿಸಿದ್ದರು ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಮಂಗಳವಾರ ನಡೆದ ಮಾಜಿ ಪ್ರಧಾನಿ ಇಂದಿರಾ ಗಾಂಧಿ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಉಕ್ಕಿನ ಮಹಿಳೆ ಎಂದೇ ಖ್ಯಾತಿ ಪಡೆದಿದ್ದ ಇಂದಿರಾ ಗಾಂಧಿ ಅವರ ಜನಪರ ಕಾರ್ಯಕ್ರಮಗಳು ಇಂದಿಗೂ ಜನಮಾನಸದಲ್ಲಿ ಉಳಿದಿದೆ. ಬಡತನ ನಿರ್ಮೂಲನೆ ಮೂಲಕ ಜನರನ್ನು ಆರ್ಥಿಕವಾಗಿ ಮೇಲೆತ್ತುವ ಕೆಲಸ ಮಾಡಿದರು ಎಂದರು.

ಇಂದಿರಾ ಗಾಂಧಿ ಪ್ರಧಾನಿಯಾಗಿದ್ದ ವೇಳೆ ಮುಖ್ಯಮಂತ್ರಿಯಾಗಿದ್ದ ದಿ.ದೇವರಾಜ ಅರಸು ಕರ್ನಾಟಕದಲ್ಲಿ 20 ಅಂಶಗಳ ಯೋಜನೆ ಜಾರಿಗೆ ತಂದರು. ಅವರ ಹಾದಿಯಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಬಡವರಿಗಾಗಿ 5 ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ಯಶಸ್ವಿಯಾಗಿದ್ದಾರೆ. ಆದರೆ, ಪ್ರತಿಪಕ್ಷದವರು ಅಭಿವೃದ್ಧಿ ಕಾರ್ಯ ಸಹಿಸದೇ ಮುಡಾ ಹಗರಣ ಮುಂದಿಟ್ಟು, ಸಿದ್ದರಾಮಯ್ಯ ಅವರನ್ನು ಇಕ್ಕಟ್ಟಿಗೆ ಸಿಲುಕಿಸಿದ್ದಾರೆ ಎಂದು ತಿಳಿಸಿದರು.



ಚಾಮರಾಜನಗರ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಇಂದಿರಾ ಗಾಂಧಿ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಸಚಿವ ಕೆ.ಜೆ.ಜಾರ್ಜ್ ಮಾತನಾಡಿದರು.

ಇದೇ ವೇಳೆ ಸಚಿವ ಕೆ.ಜೆ.ಜಾರ್ಜ್ ಅವರನ್ನು ಶಾಸಕ ಸಿ.ಪುಟ್ಟರಂಗಶೆಟ್ಟಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪಿ.ಮರಿಸ್ವಾಮಿ ಸನ್ಮಾನಿಸಿದರು. ಚುಡಾ ಅಧ್ಯಕ್ಷ ಮಹಮದ್ ಅಸ್ಗರ್, ಕಾಂಗ್ರೆಸ್ ಜಿಲ್ಲಾ ಉಪಾಧ್ಯಕ್ಷ ಬಿ.ಕೆ.ರವಿಕುಮಾರ್, ಪ್ರಧಾನ ಕಾರ್ಯದರ್ಶಿಗಳಾದ ಚಿಕ್ಕಮಹದೇವು, ಆರ್.ಮಹದೇವ್, ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎ.ಎಸ್.ಗುರುಸ್ವಾಮಿ, ಮಹಿಳಾ ಕಾಂಗ್ರೆಸ್ ಜಿಲ್ಲಾಧ್ಯಕ್ಷೆ ಲತಾರಾಜಶೇಖರ್ ಜತ್ತಿ, ಜಿಪಂ ಮಾಜಿ ಸದಸ್ಯ ಸದಾಶಿವಮೂರ್ತಿ, ನಗರಸಭೆ ಸದಸ್ಯರಾದ ಚಿನ್ನಮ್ಮ, ಕಲಾವತಿ, ಗ್ರಾಪಂ ಅಧ್ಯಕ್ಷ ರೂಪೇಶ್, ಕಾವೇರಿ ಶಿವಕುಮಾರ್, ಪದ್ಮ ಪುರುಷೋತ್ತಮ್, ಕಾಗಲವಾಡಿ ಚಂದ್ರು, ನಸ್ರುಲ್ಲಾಖಾನ್, ಬಗರ್‌ಹುಕುಂ ಸಾಗುವಳಿ ಸಮಿತಿ ಸದಸ್ಯ ರವಿ, ಆಯೂಬ್ ಖಾನ್, ಆರ್.ಉಮೇಶ್, ನಗರಸಭೆ ಮಾಜಿ ಸದಸ್ಯರಾದ ನಾಗರಾಜು, ಪುಟ್ಟಸ್ವಾಮಿ, ಅಫ್ಸರ್ ಅಹಮದ್, ಮರಿಯಾಲಹುಂಡಿ ಕುಮಾರ್, ಮಹದೇವಸ್ವಾಮಿ, ಸೇವಾದಳ ನಾಗರಾಜು, ಶೇಷಣ್ಣ, ಕರಿನಂಜನಪುರ ಸ್ವಾಮಿ, ದ್ವಾರ್ಕಿ, ರವಿಗೌಡ, ಶ್ರೀನಿವಾಸ್‌ಮೂರ್ತಿ ಇದ್ದರು.

ಕನಕದಾಸರ ಕೀರ್ತನೆಗಳು ಸರ್ವಕಾಲಿಕ

ಕೊಳ್ಳೇಗಾಲ, ನ.19– ಕನಕದಾಸರ ಕೀರ್ತನೆಗಳು ಸರ್ವಕಾಲಿಕವಾಗಿದ್ದು, ಯುವ ಪೀಳಿಗೆ ಅವರ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಪಟ್ಟಣ ಠಾಣೆ ಸಬ್‌ಇನ್ಸ್‌ಪೆಕ್ಟರ್ ವರ್ಷಾ ಹೇಳಿದರು.

ಪಟ್ಟಣದ ಹೊಸ ಮತ್ತು ಹಳೇ ಕುರುಬರ ಬೀದಿಯ ಸಿದ್ದರಾಮಯ್ಯ ಅಭಿಮಾನಿ ಬಳಗ ಮತ್ತು ಹಾಲುಮತ ಮಹಾಸಭಾ ವತಿಯಿಂದ ಆಯೋಜಿಸಿದ್ದ ಕನಕದಾಸರ ಜಯಂತಿ ಸಮಾರಂಭದಲ್ಲಿ ಮಾತನಾಡಿದ ಅವರು, ಕನಕದಾಸರು ಯಾವುದೇ ಒಂದು ಜಾತಿಗೆ ಸೀಮಿತರಾದವರಲ್ಲ. ಅವರು ಜಾತಿ ಪದ್ಧತಿ ಹೋಗಲಾಡಿಸಲು ಶ್ರಮಿಸಿದ್ದರು. ಅವರ ತತ್ವ–ಸಿದ್ಧಾಂತಗಳನ್ನು ಎಲ್ಲರೂ ಜೀವನದಲ್ಲಿ ಮೈಗೂಡಿಸಿಕೊಳ್ಳಬೇಕು. ಅವರ ಸಂದೇಶಗಳು ಸರ್ವಕಾಲಿಕವಾದವು ಎಂದರು.

ಸಂಘದ ಜಿಲ್ಲಾಧ್ಯಕ್ಷ ನಂಜೇಗೌಡ, ಹಿರಿಯ ವೈದ್ಯ ಡಾ.ನಾಗೇಶ್ ಮಾತನಾಡಿದರು. ಇದೇ ವೇಳೆ 50ಕ್ಕೂ ಹೆಚ್ಚು ಬಡಮಕ್ಕಳಿಗೆ ಕಾಳಿದಾಸ ಸಂಗೊಳ್ಳಿ ರಾಯಣ್ಣ ಹಳೇ ವಿದ್ಯಾರ್ಥಿ ಸಂಘದ ಕಾರ್ಯದರ್ಶಿ ನಟರಾಜು ಪುಸ್ತಕ ನೀಡಿದರು. ಮಕ್ಕಳ ತಜ್ಞೆ ಡಾ.ಸೌಮ್ಯಶ್ರೀ, ನಗರಸಭೆ ಮಾಜಿ ಸದಸ್ಯರಾದ ಅಕ್ಮಲ್ ಪಾಷಾ, ಶಿವಮಲ್ಲು, ಯಜಮಾನರಾದ ದೊಳ್ಳೇಗೌಡ, ತಾಲೂಕು ಕುರುಬರ ಸಂಘದ ಖಜಾಂಚಿ ವೆಂಕಟೇಗೌಡ, ಹಾಲುಮತ ಮಹಾಸಭಾ ರಾಜ್ಯ ಸಂಚಾಲಕ ವೆಂಕಟೇಶಮೂರ್ತಿ, ಕನಕ ಕೇಬಲ್ ನೆಟ್ ವರ್ಕ್ ಮಾಲೀಕ ಕೆ.ಪಿ.ಪ್ರಕಾಶ್, ತರಕಾರಿ ಮಹೇಶ್, ಸಂಜು, ಶಿವಣ್ಣ, ಸಣ್ಣಯ್ಯ ಇದ್ದರು.



ಕೊಳ್ಳೇಗಾಲದ ಕುರುಬರ ಬೀದಿಯಲ್ಲಿ ಕನಕದಾಸರ ಜಯಂತಿ ಆಚರಿಸಲಾಯಿತು.

ಒಂದನೇ ಪುಟದಿಂದ

ಡಾ.ಡಿ.ಬಿ.ನಟೇಶ್ ತೀವ್ರ ವಿಚಾರಣೆ

ಒಳಗೆ ಹೋದ ಡಾ.ನಟೇಶ್ ಅವರನ್ನು ಲೋಕಾಯುಕ್ತ ಎಸ್‌ಪಿ ಟಿ.ಜೆ.ಉದೇಶ್, ಅಧಿಕಾರಿಗಳೊಂದಿಗೆ ಸುದೀರ್ಘ ವಿಚಾರಣೆ ನಡೆಸಿದರು. ಮಧ್ಯಾಹ್ನ ಸುಮಾರು 1.45 ಗಂಟೆ ವೇಳೆಗೆ ಲೋಕಾಯುಕ್ತ ಕಚೇರಿಯಿಂದ ಹೊರಬಂದ ಡಾ. ನಟೇಶ್, ತಮ್ಮ ಭೇಟಿಯಾದ ಪತ್ರಕರ್ತರಿಗೆ ಪ್ರತಿಕ್ರಿಯೆ ನೀಡಿ, ಊಟದ ವಿರಾಮ ಇದೆ. ಅದಕ್ಕಾಗಿ ನಾನು ಹೊರಬಂದಿದ್ದೇನೆ. ವಿಚಾರಣೆ ನಡೆಯುತ್ತಿರುವಾಗ ನಾನು ನಿಮ್ಮ ಎಲ್ಲಾ ಪ್ರಶ್ನೆಗಳಿಗೆ ಉತ್ತರ ಕೊಡಲು ಸಾಧ್ಯವಿಲ್ಲ. ಯಾವುದು ಕಾನೂನಾತ್ಮಕ, ಯಾವುದು ಕಾನೂನಾತ್ಮಕವಲ್ಲ ಅನ್ನೋದು ವಿಚಾರಣೆ ಬಳಿಕ ಗೊತ್ತಾಗುತ್ತದೆ. ನಾನು ಒಂದು ಕಾಯ್ದೆ ಪ್ರಕಾರ, ಪಾರ್ವತಿ ಅವರಿಗೆ ನಿವೇಶನಗಳನ್ನು ಕೊಟ್ಟಿದ್ದು ಸರಿ ಎನ್ನುತ್ತೇನೆ. ಬೇರೆಯವರು ಇನ್ನೊಂದು ಕಾಯ್ದೆ ಪ್ರಕಾರ ಬೇರೆ ಬೇರೆ ರೀತಿಯಲ್ಲಿ ಅರ್ಥೈಸುತ್ತಾರೆ. ವಿಚಾರಣೆ ಪೂರ್ಣಗೊಂಡು ಯಾವುದು ಸತ್ಯ ಎಂಬುದು ಗೊತ್ತಾಗಬೇಕಿದೆ.

ಈ ವೇಳೆ ಪತ್ರಕರ್ತರ ಮೇಲೆ ಸಿಡಿಮಿಡಿಗೊಂಡ ಡಾ.ನಟೇಶ್ ಅವರನ್ನು ಮಾಧ್ಯಮದವರು ತರಾಟೆಗೆ ತೆಗೆದುಕೊಂಡರು. ನಾವು ಕೇಳುವ ಪ್ರಶ್ನೆಗೆ ಸಮಂಜಸ ಉತ್ತರ ಹೇಳಬೇಕೇ ಹೊರತು ಕೋಪಿಸಿಕೊಳ್ಳುವುದು ತರವಲ್ಲ. ಹತಾಶರಾಗಿ, ಮನಬಂದಂತೆ ಮಾತನಾಡಬೇಡಿ ಎಂದು ತಾಕೀತು ಮಾಡಿದರು. ಈ ವೇಳೆ ಸ್ವಲ್ಪ ಹೊತ್ತು ಮೌನವಾಗಿ ನಿಂತಿದ್ದ ಅವರು, ನಾನು ಅಧಿಕಾರಿ. ನನಗೂ ಒಂದು ಕುಟುಂಬವಿದೆ. ಹಲವು ದಿನಗಳಿಂದ ನನ್ನನ್ನೇ ಪ್ರತಿದಿನ ತೋರಿಸಿಕೊಂಡು ಸುದ್ದಿ ಮಾಡುತ್ತಿದ್ದರೆ ಅದರ ನೋವು ಎಂತಹುದು ಎಂಬುದು ಅನುಭವಿಸಿದವರಿಗೇ ಗೊತ್ತಾಗುತ್ತದೆ. ನಾನು ಬರುವುದು–ಹೋಗುವುದನ್ನೇ ತೋರಿಸುತ್ತಿದ್ದರಿಂದ ಇದೆಲ್ಲಾ ನಡೆದು ಹೋಯಿತು ಅಷ್ಟೆ, ಹೋಗಲಿ ಬಿಡಿ ಸಾರ್ ಎಂದು ಮೌನವಾಗೇ ಸ್ಥಳದಿಂದ ಹೊರಟು ಹೋದರು.

ಮಧ್ಯಾಹ್ನದ ನಂತರ ಮತ್ತೆ ವಿಚಾರಣೆಗೆ ಹಾಜರಾದ ಅವರು ಸಂಜೆ 4 ಗಂಟೆವರೆಗೂ ಲೋಕಾಯುಕ್ತ ಪೊಲೀಸರು ಕೇಳಿದ ಪ್ರಶ್ನೆಗಳಿಗೆ ಉತ್ತರಿಸಿ ಸಂಜೆ ಬೆಂಗಳೂರಿಗೆ ಪ್ರಯಾಣ ಬೆಳೆಸಿದರು. ಸಿಎಂ ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರ ಕೆಸರೆಯ ಸರ್ವೆ ನಂ. 464ರಲ್ಲಿ 3.16 ಎಕರೆ ಕೃಷಿ ಭೂಮಿಯನ್ನು ದೇವನೂರು 1ನೇ ಹಂತದ ವಸತಿ ಬಡಾವಣೆಗಾಗಿ ಬಳಸಿಕೊಂಡಿದ್ದರಿಂದ ಅದಕ್ಕೆ ಪರಿಹಾರವಾಗಿ ವಿಜಯನಗರ 3 ಮತ್ತು 4ನೇ ಹಂತದಲ್ಲಿ ಒಟ್ಟು 14 ನಿವೇಶನಗಳನ್ನು ಹಂಚಿಕೆ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಅವರು ರಾಜ್ಯಪಾಲರಿಗೆ ಸಲ್ಲಿಸಿದ್ದರು. ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅವಕಾಶ ಕಲ್ಪಿಸಿದ್ದರು. ಇದನ್ನು ಕೋರ್ಟ್‌ನಲ್ಲಿ ಪ್ರಶ್ನಿಸಲಾಯಿತು. ಆದರೆ ಜನಪ್ರತಿನಿಧಿಗಳ ವಿಶೇಷ ಕೋರ್ಟ್ ಹಾಗೂ ಹೈಕೋರ್ಟ್ ನಲ್ಲಿ ವಿಚಾರಣೆ ನಡೆದು, ರಾಜ್ಯಪಾಲರು ನೀಡಿರುವ ಅನುಮತಿಯಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಇತರರ ವಿರುದ್ಧ ಮೈಸೂರು ಲೋಕಾಯುಕ್ತ ಎಸ್‌ಪಿ ಉದೇಶ್ ಅವರು ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದೆ. ಈಗಾಗಲೇ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಅವರ ಪತ್ನಿ ಪಾರ್ವತಿ ಹಾಗೂ ಇತರರನ್ನು ವಿಚಾರಣೆಗೊಳಪಡಿಸಿರುವ ಲೋಕಾಯುಕ್ತ ಅಧಿಕಾರಿಗಳು ಈಗ ಮುಡಾ ಮಾಜಿ ಆಯುಕ್ತ ಡಾ.ಡಿ.ಬಿ.ನಟೇಶ್ ಅವರಿಗೆ ಸಮನ್ಸ್ ನೀಡಿ, ಇಂದು ವಿಚಾರಣೆ ನಡೆಸಿದರು.

ರಾಜ್ಯ ಹೈಕೋರ್ಟ್ ಆದೇಶದಂತೆ ಲೋಕಾಯುಕ್ತ ಪೊಲೀಸರು ನ.25 ರೊಳಗೆ ಮಧ್ಯಂತರ ವರದಿಯನ್ನು ಸಲ್ಲಿಸಬೇಕಾಗಿದೆ. ನಂತರ ಅಂತಿಮ ವರದಿ ಸಲ್ಲಿಸಲಿದ್ದು, ಅದಕ್ಕಾಗಿ ಲೋಕಾಯುಕ್ತ ಪೊಲೀಸರು ವಿಚಾರಣೆಯನ್ನು ತೀವ್ರಗೊಳಿಸಿದ್ದಾರೆ.

ಮಾಧ್ಯಮದವರ ಮೇಲೆ ಹರಿಹಾಯ್ದ ಡಾ.ಡಿ.ಬಿ.ನಟೇಶ್

ಎಲ್ಲಿ ಬಂದರೂ ನನ್ನ ಚಿತ್ರವನ್ನೇ ತೋರಿಸ್ತೀರಾ... ಎಂದು ಸಿಡಿಮಿಡಿಗೊಂಡು, ಎಸ್‌ಪಿ ಕಚೇರಿ ಒಳಗೆ ಭರಭರನೆ ಸಾಗಿದರು. ಮತ್ತೆ ಮಧ್ಯಾಹ್ನ ಊಟದ ಬಿಡುವಿನಲ್ಲಿ ಕಚೇರಿಯಿಂದ ಹೊರಬಂದಾಗಲೂ ಅಲ್ಲಿಯೇ ಇದ್ದ ಮಾಧ್ಯಮದವರ ಕಂಡು ಮತ್ತೆ ಸಿಡಿಮಿಡಿಗೊಂಡರು. ಆದರೆ ಮಾಧ್ಯಮದವರು ಅವರಿಗೆ ಪ್ರಶ್ನೆಗಳ ಮೇಲೆ ಪ್ರಶ್ನೆ ಕೇಳುವುದರೊಂದಿಗೆ ಅವರನ್ನು ತರಾಟೆಗೆ ತೆಗೆದುಕೊಂಡರು.

ಕೆಲವು ಕ್ಷಣ ಮೌನವಾಗಿನಿಂತ ಡಾ. ನಟೇಶ್, ನಂತರ ಮಾತನಾಡಿ 'ನಾನೊಬ್ಬ ಅಧಿಕಾರಿ. ನನಗೂ ಒಂದು ಕುಟುಂಬವಿದೆ. ಹಲವು ದಿನಗಳಿಂದ ನನ್ನನ್ನೇ ತೋರಿಸುತ್ತಿದ್ದರೆ ಅದರಿಂದಾಗುವ ನೋವು ಎಂಥದ್ದು ಎಂಬುದು ಅನುಭವಿಸಿದವರಿಗೇ ಗೊತ್ತು. ಹೀಗಾಗಿ ಇದೆಲ್ಲಾ ನಡೆದು ಹೋಯಿತು. ಹೋಗಲಿ ಬಿಡಿ ಸಾರ್...' ಎಂದು ಮೌನವಾಗೇ ಅಲ್ಲಿಂದ ಹೊರಟು ಹೋದರು.

ನಿವೇಶನ ಕೊಡುವ ತೀರ್ಮಾನ ಒಪ್ಪಿರಲಿಲ್ಲ

ಪತ್ನಿಯವರೂ ಈ ಬಗ್ಗೆ ಯಾವುದೇ ಪತ್ರವನ್ನು ನಾನಿದ್ದಾಗ ಬರೆದಿರಲಿಲ್ಲ. ನನಗೆ ಫೋನ್ ಸಹ ಮಾಡಿರಲಿಲ್ಲ. ಮಲ್ಲಿಕಾರ್ಜುನಸ್ವಾಮಿ ಸಹ ನನ್ನ ಭೇಟಿ ಮಾಡುವುದಾಗಲೀ, ಮನವಿಯನ್ನೂ ಮಾಡಿರಲಿಲ್ಲ ಎಂದರು. ಲೋಕಾಯುಕ್ತ ಎಸ್‌ಪಿ ಕಚೇರಿಯಿಂದ ನೋಟಿಸ್ ಬಂದ ಹಿನ್ನೆಲೆಯಲ್ಲಿ ನಾನು ಒಂದು ದಿನ ಮುಂಚಿತವಾಗಿ ವಿಚಾರಣೆಗೆ ಹಾಜರಾ ಗಿದ್ದೇನೆ. ಆದರೆ, ಇಡಿಯಿಂದ ನನಗೆ ಯಾವುದೇ ಸಮನ್ಸ್ ಬಂದಿಲ್ಲ. ಒಂದು ವೇಳೆ ಯಾವುದೇ ಸಂಸ್ಥೆ ತನಿಖೆಗೆ ಕರೆದರೂ ನಾನು ಸಹಕರಿಸುತ್ತೇನೆ. ಈ ವಿಚಾರದಲ್ಲಿ ನಾನು ಹಿಂದೆ–ಮುಂದೆ ನೋಡುವ ಅವಶ್ಯಕತೆಯೇ ಇಲ್ಲ. ನಾನು ಸರಿ ಇದ್ದ ಮೇಲೆ ನಾನೇಕೆ ಹೆದರಲಿ ಎಂದು ಸ್ಪಷ್ಟಪಡಿಸಿದರು.

ವಿಚಾರಣೆಗೆ ಮತ್ತೆ ಲೋಕಾಯುಕ್ತ ಸಮನ್ಸ್

ಹಿನ್ನೆಲೆಯಲ್ಲಿ ಪರಿಹಾರಾತ್ಮಕವಾಗಿ ಶೇ.50:50ರ ಅನುಪಾತದಡಿ ವಿಜಯನಗರ 3 ಮತ್ತು 4ನೇ ಹಂತದಲ್ಲಿ ಅಭಿವೃದ್ಧಿಪಡಿಸಿರುವ ಒಟ್ಟು 14 ನಿವೇಶನಗಳನ್ನು ಪರಿಹಾರವಾಗಿ ಮಂಜೂರು ಮಾಡಿರುವುದು ವಿವಾದಕ್ಕೆ ಪ್ರಮುಖ ಕಾರಣವಾಗಿದೆ.

ಪ್ರಕರಣ ಸಂಬಂಧ ಈ ಹಿಂದೆ 2024ರ ಅಕ್ಟೋಬರ್ 10ರಂದು ದೇವರಾಜು ಲೋಕಾಯುಕ್ತ ಪೊಲೀಸರ ಮುಂದೆ ವಿಚಾರಣೆಗೆ ಹಾಜರಾಗಿದ್ದರು. ಇದೀಗ ಮತ್ತೆ ಎರಡನೇ ಬಾರಿಗೆ ವಿಚಾರಣೆಗೆ ಹಾಜರಾಗುವಂತೆ ಲೋಕಾಯುಕ್ತ ಪೊಲೀಸರು ದೇವರಾಜು ಅವರಿಗೆ ಸಮನ್ಸ್ ನೀಡಿದ್ದಾರೆ ಎಂದು ತಿಳಿದುಬಂದಿದೆ.

ಬೇಕಿರುವ ಬಡವರು ಅರ್ಜಿ ಹಾಕಿ

ರಾಜ್ಯದಲ್ಲಿ ಉದ್ಯೋಗ ಸೃಷ್ಟಿ ಮಾಡುವುದಾಗಿ ಹೇಳಿದ್ದಾರಲ್ಲ, ಅವರಿಗೆ ಎಷ್ಟು ಜಮೀನು ಬೇಕು ಪತ್ರ ಬರೆಯಲಿ, ಯಾವ ಕೈಗಾರಿಕೆ ತರುತ್ತಾರೆ ಎಂಬ ಬಗ್ಗೆ ಯೋಜನಾ ವರದಿ ಸಲ್ಲಿಸಲಿ, ನಾನೇ ನಿಂತು ಅಗತ್ಯ ಜಮೀನು ಕೊಡಿಸುತ್ತೇನೆ ಎಂದು ತಿರುಗೇಟು ನೀಡಿದರು.

ಆದಾಯ ತೆರಿಗೆ ಪಾವತಿಸುವವರಿಗೆ ಬಿಪಿಎಲ್ ಇಲ್ಲ: ಕೆಲವು ಸರ್ಕಾರಿ ನೌಕರರು, ಆದಾಯ ತೆರಿಗೆ ಪಾವತಿದಾರರು, ಆರ್ಥಿಕವಾಗಿ ಅನುಕೂಲವಾಗಿರುವವರು ಬಿಪಿಎಲ್ ಕಾರ್ಡ್ ಹೊಂದಿದ್ದಾರೆ, ಅಂತಹವರನ್ನು ಪರಿಶೀಲಿಸಲು ನಾವು ಮುಂದಾಗಿದ್ದೇವೆ, ಬಡವರೆಂದು ನಿರ್ಧರಿಸಲು ಕೇಂದ್ರ ಸರ್ಕಾರದ ಮಾನದಂಡವಿದೆ, ಅದರ ಆಧಾರದ ಮೇಲೆ ತೀರ್ಮಾನ ಮಾಡುತ್ತೇವೆ. ಬಡವರ ಬಿಪಿಎಲ್ ಕಾರ್ಡ್ ರದ್ದಾಗಿದ್ದರೆ, ಅದನ್ನು ಸರಿಪಡಿಸಿ ಮತ್ತೆ ಅವರಿಗೆ ಅದೇ ಕಾರ್ಡ್ ನೀಡಲು ಮುಖ್ಯಮಂತ್ರಿ ಹಾಗೂ ನಮ್ಮ ಸರ್ಕಾರ ತೀರ್ಮಾನಿಸಿದೆ ಎಂದರು. ಅಭಿವೃದ್ಧಿ ಯೋಜನೆಗಳಿಗೆ ಶಾಸಕರಿಗೆ ಅನುದಾನ ಸಿಗುತ್ತಿಲ್ಲ ಎಂಬುದಾಗಿ ಕಾಂಗ್ರೆಸ್‌ನ ಕೆಲವು ಶಾಸಕರು ತಮ್ಮದೇ ಲೆಕ್ಕಾಚಾರದಲ್ಲಿ ಹೇಳುತ್ತಿದ್ದು, ಕೆಲವರು ತಮ್ಮ ಕ್ಷೇತ್ರಕ್ಕೆ 100 ಕೋಟಿ ರೂ. ಅನುದಾನ ಬೇಕು ಎನ್ನುತ್ತಾರೆ. ಅವರು ಕೇಳಿದಾಕ್ಷಣ ಕೊಡಲು ಆಗುವುದಿಲ್ಲ. ಆಯಾ ಕ್ಷೇತ್ರಕ್ಕೆ ಎಷ್ಟು ಕೊಡಬೇಕು ಎಂಬ ಮಾನದಂಡ ಇರುತ್ತದೆ, ಅದರ ಆಧಾರದಲ್ಲಿ ನೀಡುತ್ತೇವೆ.

ನಕ್ಸಲ್ ನಾಯಕ ವಿಕ್ರಂಗೌಡ ಬಲಿ

ಬೇಕಾಗಿರುವ ವಿಕ್ರಂಗೌಡ ಕಳೆದ 20 ವರ್ಷಗಳಿಂದ ನಕ್ಸಲ್ ಚಟುವಟಿಕೆ ಯಲ್ಲಿ ಭಾಗಿಯಾಗಿದ್ದ. ಕಾರ್ಮಿಕ ಸಂಘಟನೆಯಿಂದ ಬಂದಿದ್ದ ವಿಕ್ರಂಗೌಡ 3 ಬಾರಿ ಕರ್ನಾಟಕ ಪೊಲೀಸರ ಕೈಯಿಂದ ಪರಾರಿಯಾಗಿದ್ದ. 2016ರಲ್ಲಿ ಕೇರಳ ಪೊಲೀಸರಿಗೂ ಚಳ್ಳೆಹಣ್ಣು ತಿನ್ನಿಸಿದ್ದ. ಈ ಮಧ್ಯೆ ವಿಕ್ರಂಗೌಡನ ವಿರುದ್ಧ ರಾಜ್ಯದಲ್ಲಿ 61 ಹಾಗೂ ಕೇರಳದಲ್ಲಿ 19 ಕೇಸ್‌ಗಳಿವೆ. 2001ರಲ್ಲಿ ರಾಜ್ಯದಲ್ಲಿ ನಕ್ಸಲ್ ನೇತೃತ್ವವನ್ನು ಸಾಕೇತ್ ರಾಜನ್ ನಿರ್ವಹಿಸುತ್ತಿದ್ದ. ಫೆಬ್ರವರಿ 6, 2005ರಂದು ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ತಾಲೂಕಿನ ಮೆಣಸಿನಹಾಡ್ಯ ಎಂಬಲ್ಲಿ ಪೊಲೀಸರು ಈತನನ್ನು ಎನ್‌ಕೌಂಟರ್ ಮಾಡಿದ್ದರು. ನಂತರ ನೆಲಗುಳಿ ಪದ್ಮನಾಭ ನೇತೃತ್ವ ವಹಿಸಿದ್ದ. ಬರ್ಕಾನ ಬಳಿ ಪೊಲೀಸ್ ಗುಂಡೇಟಿಗೆ ಈತ ತನ್ನ ಕಾಲು ಗಳನ್ನು ಕಳೆದುಕೊಂಡಿದ್ದ. ನಂತರ 2006 ರಿಂದ 2011ರವರೆಗೆ ಬಿ.ಜಿ.ಕೃಷ್ಣಮೂರ್ತಿ ರಾಜ್ಯದಲ್ಲಿ ನಕ್ಸಲೀಯರನ್ನು ಮುನ್ನಡೆಸುತ್ತಿದ್ದ. ಈ ನಡುವೆ ಈತನ ಪತ್ನಿಯ ಆರೋಗ್ಯ ಹದಗೆಟ್ಟ ಹಿನ್ನೆಲೆಯಲ್ಲಿ ಈತನ ಗಮನ ಪತ್ನಿಯತ್ತ ಹೊರಳಲು ಆರಂಭವಾಗಿತ್ತು. ಹಾಗಾಗಿ 2011ರಲ್ಲಿ ವಿಕ್ರಂಗೌಡ ಇದರ ಜವಾಬ್ದಾರಿ ವಹಿಸಿಕೊಂಡಿದ್ದ.

ಎನ್‌ಕೌಂಟರ್ ಅನಿವಾರ್ಯವಾಗಿತ್ತು

ಆತನ ಚಲನ–ವಲನಗಳನ್ನು ಪೊಲೀಸರು ಗಮನಿಸುತ್ತಿದ್ದರು. ಆತನ ಚಲನವಲನಗಳ ಮೇಲೆ ನಿಗಾ ಇಟ್ಟಿದ್ದರು. ಸೋಮವಾರ ರಾತ್ರಿ ಖಚಿತ ಮಾಹಿತಿ ಮೇರೆಗೆ ಕಾರ್ಯಾಚರಣೆ ಮಾಡಿದ್ದಾರೆಂದು ಹೇಳಿದರು.

ಮೊದಲಿಗೆ ವಿಕ್ರಂಗೌಡ ತಂಡ ಪೊಲೀಸರ ಮೇಲೆ ದಾಳಿ ನಡೆಸಿದ್ದು, ಪೊಲೀಸರು ಪ್ರತಿ ದಾಳಿ ನಡೆಸಿದ್ದಾರೆ. ಜೊತೆಯಲ್ಲಿದ್ದ ಇಬ್ಬರು–ಮೂವರು ಪರಾರಿಯಾಗಿದ್ದಾರೆ. ಇದೀಗ ಸ್ಥಳದಲ್ಲಿ ಕಾರ್ಯಾಚರಣೆ ಮುಂದುವರೆದಿದೆ ಎಂದು ಮಾಹಿತಿ ನೀಡಿದರು. ರಾಜ್ಯದಲ್ಲಿ ನಕ್ಸಲರನ್ನು ಮುಖ್ಯ ವೇದಿಕೆಗೆ ಕರೆತರುವ ಪ್ರಯತ್ನಗಳು ನಡೆಯುತ್ತಿವೆ. ಹಿಂದೆ ಪಾವಗಡ ಭಾಗದಲ್ಲಿ ನಕ್ಸಲರನ್ನು ಮಾತನಾಡಿ ಮುಖ್ಯವೇದಿಕೆಗೆ ಕರೆತರಲಾಗಿತ್ತು. ಈಗಲೂ ಈ ಪ್ರಯತ್ನ ನಡೆಯುತ್ತಿದೆ. ಶರಣಾಗಲು ಬಯಸುವ ನಕ್ಸಲರಿಗೆ ಸಾಮಾನ್ಯ ಬದುಕು ನಡೆಸಲು ಸರ್ಕಾರ ಅವಕಾಶ ಮಾಡಿಕೊಡಲಿದೆ. ಅದು ಇದ್ದಿದ್ದೇ. ಆದರೆ ಅರಣ್ಯ ಭಾಗದಲ್ಲಿದ್ದು, ಪೊಲೀಸರ ಮೇಲೆ ತಪ್ಪಿಸಿಕೊಂಡು ಹೋಗಲು ಪ್ರಯತ್ನ ಮಾಡಿದರೇ ಇಂತಹ ಘಟನೆ ಆಗೋದು ಸಹಜ ಎಂದು ಹೇಳಿದರು.

ದಸರಾ ವಸ್ತುಪ್ರದರ್ಶನ ಆವರಣದಲ್ಲಿ ಅನಧಿಕೃತ ವ್ಯಾಪಾರಸ್ಥರ ಹಾವಳಿ ತಪ್ಪಿಸುವಂತೆ ಗ್ರಾಹಕರ ಪರವಾಗಿ ಪ್ರಾಧಿಕಾರದ ಅಧ್ಯಕ್ಷರಿಗೆ ಮನವಿ

ಮೈಸೂರು, ನ19(ಎಸ್‌ಪಿಎನ್)– ಮೈಸೂರು ದಸರಾ ವಸ್ತುಪ್ರದರ್ಶನ ಆವರಣದಲ್ಲಿ ಅನಧಿಕೃತ ವ್ಯಾಪಾರಿಗಳಿಂದ ಗ್ರಾಹಕರಿಗೆ ಆಗುತ್ತಿರುವ ಅನಗತ್ಯ ಕಿರುಕುಳವನ್ನು ತಪ್ಪಿಸುವಂತೆ ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷರಾದ ಅಯೂಬ್ ಖಾನ್ ಅವರಿಗೆ ಅಖಿಲ ಭಾರತೀಯ ಗ್ರಾಹಕ ಪಂಚಾಯತ್ ಮನವಿ ಮಾಡಿದೆ.

ಮೈಸೂರು ದಸರಾ ವಸ್ತುಪ್ರದರ್ಶನಕ್ಕೆ ತನ್ನದೇ ಆದ ಐತಿಹಾಸಿಕ ಹಿನ್ನೆಲೆ ಇದೆ. ಮೈಸೂರು ದಸರಾ ಪ್ರಯುಕ್ತ ಆಯೋಜಿಸುವ ಕಾರ್ಯಕ್ರಮಗಳನ್ನು ವೀಕ್ಷಿಸಲು ದೇಶ–ವಿದೇಶಗಳಿಂದ ಲಕ್ಷಾಂತರ ಪ್ರವಾಸಿಗರು, ಮಹಿಳೆಯರು, ಹಿರಿಯ ನಾಗರಿಕರು ಆಗಮಿಸಿ, ಇಲ್ಲಿನ ಸುಂದರ ಪ್ರವಾಸಿ ತಾಣಗಳನ್ನು ವೀಕ್ಷಿಸಿ ಅಂತಿಮವಾಗಿ ಮೈಸೂರು ದಸರಾ ವಸ್ತುಪ್ರದರ್ಶನಕ್ಕೂ ಒಮ್ಮೆ ಭೇಟಿ ಕೊಡುತ್ತಾರೆ.

ವಸ್ತುಪ್ರದರ್ಶನದ ಮಳಿಗೆಗಳ ವ್ಯಾಪಾರಸ್ಥರು ಕೂಡ ಲಕ್ಷಾಂತರ ಹಣ ಹೂಡಿ ದಸರಾ ಆರಂಭಕ್ಕೂ ಮೂರು ತಿಂಗಳು ಮೊದಲೇ ವ್ಯಾಪಾರ ವಹಿವಾಟು ನಡೆಸಲು ತೀವ್ರ ಕಸರತ್ತು ನಡೆಸಿರುತ್ತಾರೆ. ಆದರೆ ಕರ್ನಾಟಕ ವಸ್ತುಪ್ರದರ್ಶನದ ಪ್ರಾಧಿಕಾರದ ಸಿಇಓ ಮತ್ತು ಇತರೆ ಅಧಿಕಾರಿಗಳು, ಆವರಣದಲ್ಲಿ ಗ್ರಾಹಕರಿಗೆ ಆಗುತ್ತಿರುವ ತೊಂದರೆ, ವ್ಯಾಪಾರಿಗಳಿಗಾಗುತ್ತಿರುವ ತೊಂದರೆಯತ್ತ ಗಮನಹರಿಸುತ್ತಿಲ್ಲ. ಇಲ್ಲಿನ ಅಧಿಕಾರಿಗಳು ಬೆಳಗ್ಗೆಯಿಂದ ಸಂಜೆಯವರೆಗೆ ಕಚೇರಿಯಲ್ಲಿ ಕೂತು ಕೆಲಸ ನಿರ್ವಹಣೆಗೆ ಸೀಮಿತವಾಗಿದ್ದಾರೆಯೇ ಹೊರತು ಪ್ರತಿನಿತ್ಯ ಪ್ರವಾಸಿಗರಿಗೆ, ಸಾರ್ವಜನಿಕರಿಗೆ, ಗ್ರಾಹಕರಿಗೆ ಆಗುತ್ತಿರುವ ತೊಂದರೆ ನಿವಾರಿಸುವಲ್ಲಿ ವಿಫಲರಾಗಿದ್ದಾರೆ.



ಅನಧಿಕೃತ ವ್ಯಾಪಾರಿಗಳಿಂದ ಗ್ರಾಹಕರಿಗೆ ಆಗುತ್ತಿರುವ ಕಿರುಕುಳವನ್ನು ತಪ್ಪಿಸುವಂತೆ ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ಅವರಿಗೆ ಅಖಿಲ ಭಾರತೀಯ ಗ್ರಾಹಕ ಪಂಚಾಯತ್ ಪದಾಧಿಕಾರಿಗಳು ಮನವಿ ಸಲ್ಲಿಸಿದರು.

ಅಧಿಕಾರಿಗಳ ನಿರ್ಲಕ್ಷ್ಯದಿಂದ ವಸ್ತುಪ್ರದರ್ಶನ ಪ್ರಾಧಿಕಾರದ ಆವರಣದ 'ಎ' ಬ್ಲಾಕ್, ಚಾಮುಂಡಿ ಬ್ಲಾಕ್ ಮುಖ್ಯದ್ವಾರದ ಮುಂಭಾಗ ಸೇರಿದಂತೆ ಆವರಣದ ಬಹುತೇಕ ಅನಧಿಕೃತ ವ್ಯಾಪಾರಸ್ಥರು, ಗ್ರಾಹಕರನ್ನು ಸುತ್ತುವರೆದು ಅವರು ಸರಾಗವಾಗಿ ಹಾದು ಹೋಗಲು ದಾರಿ ಬಿಡುತ್ತಿಲ್ಲ. ಇದನ್ನು ಪ್ರಶ್ನಿಸಿದರೆ ಗ್ರಾಹಕರ ಮೇಲೆಯೇ ದಬ್ಬಾಳಿಕೆ ಮಾಡುತ್ತಿದ್ದಾರೆ. ಈ ಜನಸಂದಣಿಯಲ್ಲಿ ಕಳ್ಳರ ಕೈಚಳಕವೂ ತಪ್ಪಿದ್ದಲ್ಲ.

ಇಂತಹ ಅನಾಗರಿಕ ಘಟನೆಗಳು ಹಿರಿಯ ನಾಗರಿಕರು, ಮಹಿಳೆಯರು, ಮಕ್ಕಳಿಗೆ ಮುಜುಗರ ತರುವ ವಿಷಯವಾಗಿದೆ. ಅಲ್ಲದೆ, ಖಾಸಗಿ ಟೆಂಡರ್ ಪಡೆದಿರುವ ಗುತ್ತಿಗೆದಾರರು ಅಕ್ರಮವಾಗಿ ಇಂತಹ ವ್ಯಾಪಾರಿಗಳ ಹೆಸರಲ್ಲಿ ವಸೂಲಿಗೆ ನಿಂತಿದ್ದಾರೆಯೇ? ಈ ವಿಷಯ ಗೊತ್ತಿದ್ದರೂ ಕಂಡು ಕಾಣದಂತೆ ಪ್ರಾಧಿಕಾರದ ಅಧಿಕಾರಿಗಳು ಮೌನವಹಿಸಿರುವುದೇಕೆ ಎಂದು ಪ್ರಶ್ನಿಸಿದೆ.


ಪ್ರಾಧಿಕಾರ ಆವರಣದ ಸುತ್ತಲು ಸಿಸಿ ಕ್ಯಾಮೆರಾ ಅಳವಡಿಸಿದ್ದು, ಅನಧಿಕೃತ ವ್ಯಾಪಾರಸ್ಥರನ್ನು ತೆರವುಗೊಳಿಸಿ, ಮುಗ್ಧ ಪ್ರವಾಸಿಗರಿಗೆ ಆಗುತ್ತಿರುವ ಶೋಷಣೆ ತಪ್ಪಿಸಬೇಕು. ಜೊತೆಗೆ ಪೊಲೀಸ್ ಗಸ್ತು ಹೆಚ್ಚಿಸುವಂತೆ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ಅವರಿಗೆ ಸಲ್ಲಿಸಿರುವ ಮನವಿಯಲ್ಲಿ ಉಲ್ಲೇಖಿಸಿದ್ದಾರೆ.

ಈ ವೇಳೆ ಅಖಿಲ ಭಾರತೀಯ ಗ್ರಾಹಕ ಪಂಚಾಯತ್ ಮೈಸೂರು ಘಟಕದ ಅಧ್ಯಕ್ಷರಾದ ಸಿ.ಎಸ್.ಚಂದ್ರಶೇಖರ್, ಕಾರ್ಯದರ್ಶಿ ವಿಕ್ರಮ ಅಯ್ಯಂಗಾರ್, ಮಹಿಳಾ ಪ್ರಮುಖ್ ನಾಗಮಣಿ, ಚಕ್ರಪಾಣಿ, ದಯಾನಂದ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

'ಸತ್ಯವನ್ನೇ ಹೇಳುತ್ತೇನೆ' ; ಮತ್ತೆ ಯಶಸ್ವಿ ಪ್ರದರ್ಶನ

ಮೈಸೂರು,ನ.19(ಪಿಎಂ)– ಮೈಸೂರಿನ ಕೃಷ್ಣಮೂರ್ತಿಪುರಂನಲ್ಲಿರುವ ಶಾರದಾವಿಲಾಸ ಶತಮಾನೋತ್ಸವ ಭವನದಲ್ಲಿ ಮಂಗಳವಾರ ಅಡ್ಡಂಡ ಸಿ.ಕಾರ್ಯಪ್ಪನವರ 'ಸತ್ಯವನ್ನೇ ಹೇಳುತ್ತೇನೆ' ನಾಟಕದ 8ನೇ ಪ್ರದರ್ಶನ ಯಶಸ್ವಿಯಾಗಿ ನಡೆಯಿತು. ರಂಗಭೂಮಿ ಟ್ರಸ್ಟ್ ಕೊಡಗು ಪ್ರಸ್ತುತಿಯ ಈ ನಾಟಕದ 7 ಪ್ರದರ್ಶನಗಳು ಈಗಾಗಲೇ ಮೈಸೂರಿನ ಕಲಾಮಂದಿರ ಆವರಣದ ಕಿರುರಂಗ ಮಂದಿರದಲ್ಲಿ ಯಶಸ್ವಿಯಾಗಿ ನಡೆದಿದ್ದು, ಈ ಎಲ್ಲಾ ಪ್ರದರ್ಶನಗಳಲ್ಲಿ ಇಡೀ ಸಭಾಂಗಣ ಪ್ರೇಕ್ಷಕರಿಂದ ತುಂಬಿ ಹೋಗಿತ್ತು.

ಕಿರುರಂಗಮಂದಿರ 230 ಆಸನ ಸಾಮರ್ಥ್ಯ ಹೊಂದಿದ್ದು, ಪ್ಲಾಸ್ಟಿಕ್ ಕುರ್ಚಿಗಳ ವ್ಯವಸ್ಥೆಯ ಮೂಲಕ ಹೆಚ್ಚುವರಿ ಆಸನಗಳನ್ನು ಸಹ ಕಲ್ಪಿಸಲಾಗಿತ್ತು ಇದೀಗ 520 ಆಸನ ಸಾಮರ್ಥ್ಯ ಹೊಂದಿರುವ ಶಾರದಾ ವಿಲಾಸ ಶತಮಾನೋತ್ಸವ ಭವನದಲ್ಲಿಯೂ ಪ್ರದರ್ಶನ ಯಶಸ್ವಿಯಾಗಿದ್ದು, ಬಹುತೇಕ ಎಲ್ಲಾ ಆಸನಗಳು ಪ್ರೇಕ್ಷಕರಿಂದ ಭರ್ತಿಯಾಗಿದ್ದವು. ಮೈಸೂರು ರಂಗಾಯಣದ ಮಾಜಿ ನಿರ್ದೇಶಕ ಅಡ್ಡಂಡ ಸಿ.ಕಾರ್ಯಪ್ಪ ಅವರು ರಚಿಸಿ, ನಿರ್ದೇಶಿಸಿರುವ ನಾಟಕ ಇದಾಗಿದೆ. ನ.20ರ ಸಂಜೆ 6.30ಕ್ಕೆ ಶಾರದಾ ವಿಲಾಸ ಶತಮಾನೋತ್ಸವ ಭವನದಲ್ಲಿ ಮತ್ತೊಂದು ಪ್ರದರ್ಶನ ಇದ್ದು, ಟಿಕೆಟ್ ದರ 200 ರೂ. ಆಗಿದೆ. ಹೆಚ್ಚಿನ ಮಾಹಿತಿಗಾಗಿ ಮೊಸಂ. 94484 22343 ಅನ್ನು ಸಂಪರ್ಕಿಸಬಹುದು.


ಮೈಸೂರಿನ ಶಾರದಾವಿಲಾಸ ಶತಮಾನೋತ್ಸವ ಭವನದಲ್ಲಿ ಮಂಗಳವಾರ ಪ್ರದರ್ಶನ ಕಂಡ 'ಸತ್ಯವನ್ನೇ ಹೇಳುತ್ತೇನೆ' ನಾಟಕದ ಒಂದು ದೃಶ್ಯ


ಕೇಂದ್ರ ಸರ್ಕಾರಿ ನೌಕರರಿಗೆ ಗುಡ್ ನ್ಯೂಸ್ ನಿವೃತ್ತಿ ವಯಸ್ಸು 62ಕ್ಕೆ ಹೆಚ್ಚಳ?

ನವದೆಹಲಿ: ಕೇಂದ್ರ ಸರ್ಕಾರಿ ನೌಕರರ ನಿವೃತ್ತಿ ವಯಸ್ಸನ್ನು ಹೆಚ್ಚಿಸಲು ನಿರ್ಧರಿಸಲಾಗಿದೆ ಎಂದು ಹೇಳಲಾಗುತ್ತಿದೆ.

ನೌಕರರ ಒತ್ತಾಯಕ್ಕೆ ಪ್ರಧಾನಿ ಮೋದಿ ಅವರು ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಸರ್ಕಾರಿ ನೌಕರರ ನಿವೃತ್ತಿ ವಯಸ್ಸನ್ನು 60ರಿಂದ 62 ವರ್ಷಕ್ಕೆ ಹೆಚ್ಚಿಸುವ ಮಹತ್ವದ ನಿರ್ಧಾರವನ್ನ ಕೇಂದ್ರ ಸಚಿವ ಸಂಪುಟ ಕೈಗೊಂಡಿದೆ ಎನ್ನಲಾಗಿದೆ.

ಮಹಾರಾಷ್ಟ್ರ ಮತ್ತು ಜಾರ್ಖಂಡ್ ಚುನಾವಣೆಗೂ ಮುನ್ನ ನೌಕರರ ನಿವೃತ್ತಿ ವಯೋಮಿತಿ ಹೆಚ್ಚಳಕ್ಕೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದ್ದು, ಮುಂದಿನ ವರ್ಷ ಏಪ್ರಿಲ್‌ನಿಂದ ಅನ್ವಯವಾಗಲಿದೆ ಎಂದು ತಿಳಿದುಬಂದಿದೆ. ನಿರುದ್ಯೋಗ ಸಮಸ್ಯೆ ಹೆಚ್ಚಿದ್ದರೂ ನೇಮಕಾತಿ ಬದಲು ನಿವೃತ್ತಿ ವಯಸ್ಸು ಹೆಚ್ಚಳಕ್ಕೆ ಚಿಂತನೆ ನಡೆಸಿರುವುದು ಯುವ ಸಮುದಾಯದ ಆಕ್ಷೇಪಕ್ಕೆ ಗುರಿಯಾಗಿದೆ.

ಸರ್ಕಾರಿ ಶಾಲೆಗಾಗಿ ನಾವು–ನೀವು ವಾಟ್ಸಾಪ್ ಗ್ರೂಪ್‌ನಿಂದ ನೆರವು


'ಸರ್ಕಾರಿ ಶಾಲೆಗಾಗಿ ನಾವು ನೀವು' ವಾಟ್ಸಾಪ್ ಗ್ರೂಪ್ ಸದಸ್ಯರಿಂದ ಮೈಸೂರು ವಸಂತ ಮಹಲ್‌ನ ಸರ್ಕಾರಿ ಶಿಕ್ಷಕ ಶಿಕ್ಷಣ ಮಹಾವಿದ್ಯಾಲಯದ ಮಹಿಳಾ ಪ್ರಶಿಕ್ಷಣಾರ್ಥಿಗಳ ಅನುಕೂಲಕ್ಕಾಗಿ ಕೊಡುಗೆಯಾಗಿ ನೀಡಿದ ಸ್ಯಾನಿಟರಿ ಪ್ಯಾಡ್ ಬರ್ನಿಂಗ್ ಮಿಷನ್ ಹಾಗೂ ಪ್ಯಾಡ್ ವೈಡಿಂಗ್ ಮಿಷನ್ ಅನ್ನು ಶಾಸಕ ಟಿ.ಎಸ್.ಶ್ರೀವತ್ಸ ಅವರು ಸಂಸ್ಥೆಯ ಪ್ರಾಂಶುಪಾಲೆ ಗೀತಾಂಬಾ ಅವರಿಗೆ ಹಸ್ತಾಂತರಿಸಿದರು.

ಇಂದು ಮಹಾರಾಷ್ಟ್ರ ವಿಧಾನಸಭೆ ಚುನಾವಣೆ ಮತದಾನ

ಜಾರ್ಖಂಡ್‌ನಲ್ಲಿ ಎರಡನೇ ಹಂತದ ವೋಟಿಂಗ್

ನವದೆಹಲಿ: ಭಾರಿ ಕುತೂಹಲ ಮೂಡಿಸಿರುವ ಮಹಾರಾಷ್ಟ್ರ ವಿಧಾನಸಭಾ ಚುನಾವಣೆ ಕ್ಲೈಮ್ಯಾಕ್ಸ್ ಹಂತ ತಲುಪಿದೆ. ರಾಜ್ಯದ ಎಲ್ಲ 288 ವಿಧಾನಸಭಾ ಸ್ಥಾನಗಳಿಗೆ ನಾಳೆ (ನ. 20) ಮತದಾನ ನಡೆಯಲಿದೆ. ಇದರ ಜೊತೆಗೆ, ಜಾರ್ಖಂಡ್ ವಿಧಾನಸಭೆಯ 38 ಸ್ಥಾನಗಳಿಗೆ ಎರಡನೇ ಹಂತದ ಮತದಾನವಾಗಲಿದೆ.

ಮತದಾನಕ್ಕೆ ಎಲ್ಲವೂ ಸಿದ್ಧ: ಮಹಾರಾಷ್ಟ್ರ ವಿಧಾನಸಭೆಗೆ ಒಂದೇ ಹಂತದಲ್ಲಿ ಮತದಾನ ನಡೆಯಲಿದ್ದು, ಒಟ್ಟು 4,136 ಮಂದಿ ಸ್ಪರ್ಧಿಸಿದ್ದಾರೆ. ಇವರಲ್ಲಿ 2,086 ಸ್ವತಂತ್ರ ಅಭ್ಯರ್ಥಿಗಳು. 9,63,69,410 ನೋಂದಾಯಿತ ಮತದಾರರಿದ್ದಾರೆ. ಕೇಂದ್ರ ಚುನಾವಣಾ ಆಯೋಗ 1,00,186 ಮತಗಟ್ಟೆಗಳನ್ನು ಸ್ಥಾಪಿಸಿದೆ. ಚುನಾವಣಾ ಆಯೋಗದ ಪ್ರಕಾರ ಸುಮಾರು 6 ಲಕ್ಷ ಸರ್ಕಾರಿ ನೌಕರರು ಚುನಾವಣಾ ಕರ್ತವ್ಯದಲ್ಲಿ ಭಾಗವಹಿಸುತ್ತಿದ್ದಾರೆ. ನವೆಂಬರ್ 23 ರಂದು ಮತ ಎಣಿಕೆ ನಡೆಯಲಿದೆ.

'ಮಹಾ' ಮೈತ್ರಿಗಳ ಯುದ್ಧ: ಮಹಾರಾಷ್ಟ್ರದಲ್ಲಿ ಬಿಜೆಪಿ, ಅಜಿತ್ ಪವಾರ್ ನೇತೃತ್ವದ ಎನ್‌ಸಿಪಿ ಮತ್ತು ಏಕನಾಥ್ ಶಿಂಧೆ ನೇತೃತ್ವದ ಶಿವಸೇನೆಯ 'ಮಹಾಯುತಿ' ಮೈತ್ರಿಯು ಕಣಕ್ಕಿಳಿದಿದೆ. ಇದಕ್ಕೆ ಪೈಪೋಟಿ ನೀಡಲು ಕಾಂಗ್ರೆಸ್, ಶಿವಸೇನೆ (ಯುಬಿಟಿ) ಮತ್ತು ಎನ್‌ಸಿಪಿ (ಶರದ್ ಪವಾರ್)ಯ 'ಮಹಾವಿಕಾಸ್ ಅಘಾಡಿ'ಯು ಸಜ್ಜಾಗಿದೆ.

ಆಡಳಿತಾರೂಢ ಮಹಾಯುತಿಯ ಭಾಗವಾಗಿರುವ ಬಿಜೆಪಿ 149 ಸ್ಥಾನಗಳಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ ಮುಖ್ಯಮಂತ್ರಿ ಏಕನಾಥ್ ಶಿಂಧೆ ನೇತೃತ್ವದ ಶಿವಸೇನೆ 81 ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ಉಪಮುಖ್ಯಮಂತ್ರಿ ಅಜಿತ್ ಪವಾರ್ ನೇತೃತ್ವದ ಎನ್‌ಸಿಪಿ 59 ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ಮಹಾವಿಕಾಸ್ ಅಘಾಡಿಯಲ್ಲಿರುವ ಕಾಂಗ್ರೆಸ್ 101 ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ಶಿವಸೇನೆಯ ಯುಬಿಟಿ 95 ಅಭ್ಯರ್ಥಿಗಳನ್ನು ಮತ್ತು ಶರದ್ ಪವಾರ್ ಅವರ ಎನ್‌ಸಿಪಿಯಿಂದ 86 ಅಭ್ಯರ್ಥಿಗಳಿದ್ದಾರೆ.

ಜಾರ್ಖಂಡ್‌ನಲ್ಲಿ ಎರಡನೇ ಸುತ್ತಿನ ಮತದಾನ: ಜಾರ್ಖಂಡ್‌ನಲ್ಲಿ ನ. 20 ರಂದು ಎರಡನೇ ಹಂತದ ಮತದಾನವೂ ನಡೆಯಲಿದೆ. ಬಿಜೆಪಿ ನೇತೃತ್ವದ ಎನ್‌ಡಿಎ 2019 ರಲ್ಲಿ ಕಳೆದುಕೊಂಡ ಅಧಿಕಾರವನ್ನು ಮರಳಿ ಪಡೆಯಲು ಪ್ರಯತ್ನಿಸುತ್ತಿದ್ದರೆ, ಜಾರ್ಖಂಡ್ ಮುಕ್ತಿ ಮೋರ್ಚಾ (ಜೆಎಂಎಂ)–ಕಾಂಗ್ರೆಸ್ ಮೈತ್ರಿಕೂಟವು ಮತ್ತೆ ಅಧಿಕಾರಕ್ಕೆ ಬರಲು ಹವಣಿಸುತ್ತಿದೆ.

ಜಾರ್ಖಂಡ್‌ನಲ್ಲಿ 81 ವಿಧಾನಸಭಾ ಕ್ಷೇತ್ರಗಳಿದ್ದು, ಮೊದಲ ಹಂತದಲ್ಲಿ 43 ಕ್ಷೇತ್ರಗಳಿಗೆ ನ. 13 ರಂದು ಮತದಾನ ನಡೆದಿದೆ. ನವೆಂಬರ್ 23 ರಂದು ಮತ ಎಣಿಕೆ ನಡೆಯಲಿದೆ.

ತಿರುಪತಿಯಲ್ಲಿ ಹಿಂದೂಯೇತರ ಸಿಬ್ಬಂದಿಗೆ ಕೊಕ್: ಮಹತ್ವದ ನಿರ್ಧಾರ

ತಿರುಮಲ, ನ.19– ಹೊಸದಾಗಿ ರಚನೆಯಾಗಿರುವ ತಿರುಮಲ ತಿರುಪತಿ ದೇವಸ್ಥಾನಂ(ಟಿಟಿಡಿ) ಟ್ರಸ್ಟ್ ಬೋರ್ಡ್ ಸೋಮವಾರ ಮೊದಲ ಬಾರಿಗೆ ಸಭೆ ಸೇರಿ ಹಲವು ಮಹತ್ವದ ನಿರ್ಧಾರಗಳನ್ನು ತೆಗೆದುಕೊಂಡಿದ್ದು, ದೇವಸ್ಥಾನದಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದೂಯೇತರ ಸಿಬ್ಬಂದಿ ಸ್ವಯಂ ನಿವೃತ್ತಿ (ವಿಆರ್‌ಎಸ್) ತೆಗೆದುಕೊಳ್ಳಬೇಕು ಅಥವಾ ಆಂಧ್ರಪ್ರದೇಶದ ಇತರ ಸರ್ಕಾರಿ ಇಲಾಖೆಗಳಿಗೆ ವರ್ಗಾವಣೆಯಾಗಬೇಕು ಎಂಬ ನಿರ್ಣಯವನ್ನು ಅಂಗೀಕರಿಸಿದೆ.

ವಿಶಾಖ ಶಾರದಾ ಪೀಠಕ್ಕೆ ನೀಡಿರುವ ಜಮೀನಿನ ಗುತ್ತಿಗೆಯನ್ನು ರದ್ದುಪಡಿಸುವುದು ಮತ್ತು ಪ್ರತಿ ತಿಂಗಳ ಮೊದಲ ಮಂಗಳವಾರದಂದು ಸ್ಥಳೀಯ ಜನರಿಗೆ ದರ್ಶನ ನೀಡುವುದು ಸೇರಿದಂತೆ ಹಲವು ನಿರ್ಧಾರಗಳನ್ನು ಸಭೆಯಲ್ಲಿ ತೆಗೆದುಕೊಳ್ಳಲಾಗಿದೆ.

ಮಾಧ್ಯಮ ಪ್ರತಿನಿಧಿಗಳಿಗೆ ಸಭೆಯ ವಿವರಗಳನ್ನು ತಿಳಿಸಿದ ಟಿಟಿಡಿ ಟ್ರಸ್ಟ್ ಬೋರ್ಡ್ ಅಧ್ಯಕ್ಷ ಬಿಆರ್ ನಾಯ್ಡು, ಟಿಟಿಡಿಯೊಂದಿಗೆ ಕೆಲಸ ಮಾಡುವ ಇತರ ಧರ್ಮದ ನೌಕರರೊಂದಿಗೆ ಸಮಾಲೋಚನೆ ನಡೆಸಲು ಮಂಡಳಿಯು ನಿರ್ಧಾರ ತೆಗೆದುಕೊಂಡಿದೆ ಎಂದು ಹೇಳಿದರು.

ಸ್ವಯಂ ನಿವೃತ್ತಿ ಪಡೆಯುವ ಅಥವಾ

2–3 ಗಂಟೆಯಲ್ಲಿ ದರ್ಶನ

ಬೇರೆ ಯಾವುದೇ ಸರ್ಕಾರಿ ಇಲಾಖೆಗೆ ಸೇರುವ ಆಯ್ಕೆಯನ್ನು ಅವರಿಗೆ ನೀಡಲಾಗುವುದು ಎಂದು ಅವರು ತಿಳಿಸಿದರು.

ತಿರುಮಲದಲ್ಲಿ ಕೆಲಸ ಮಾಡುತ್ತಿರುವ ಹಿಂದೂಯೇತರರ ಬಗ್ಗೆ ಸೂಕ್ತ ನಿರ್ಧಾರ ತೆಗೆದುಕೊಳ್ಳುವಂತೆ ರಾಜ್ಯ ಸರ್ಕಾರಕ್ಕೆ ಪತ್ರ ಬರೆಯುತ್ತೇವೆ. ಟಿಟಿಡಿ ಹಿಂದೂ ಧಾರ್ಮಿಕ ಸಂಸ್ಥೆಯಾಗಿದ್ದು, ದೇವಸ್ಥಾನದಲ್ಲಿ ಕೆಲಸ ಮಾಡಲು ಹಿಂದೂಯೇತರರನ್ನು ನೇಮಿಸಿಕೊಳ್ಳಬಾರದು ಎಂದು ಮಂಡಳಿ ಅಭಿಪ್ರಾಯಪಟ್ಟಿದೆ ಅವರನ್ನು ಬೇರೆ ಬೇರೆ ಇಲಾಖೆಗಳಲ್ಲಿ ಸೇರಿಸಿಕೊಳ್ಳಲು ಅಥವಾ ಅವರಿಗೆ ಸ್ವಯಂ ನಿವೃತ್ತಿ ಯೋಜನೆ ನೀಡಲು ನಾವು ಸರ್ಕಾರಕ್ಕೆ ಪತ್ರ ಬರೆಯುತ್ತೇವೆ ಎಂದು ಬಿ.ಆರ್ ನಾಯ್ಡು ಹೇಳಿದ್ದಾರೆ.

ಟಿಟಿಡಿಯಿಂದ ಭೂಮಿಯನ್ನು ಗುತ್ತಿಗೆಗೆ ಪಡೆದಿರುವ ವಿಶಾಖ ಶಾರದಾ ಪೀಠವು ಹಲವಾರು ಉಲ್ಲಂಘನೆಗಳನ್ನು ಮಾಡಿದೆ ಎಂದು ಪ್ರತಿಪಾದಿಸಿದ ಅವರು, ಜಮೀನು ಗುತ್ತಿಗೆಯನ್ನು ರದ್ದುಗೊಳಿಸಲಾಗುವುದು ಮತ್ತು ಭೂಮಿಯಲ್ಲಿ ನಿರ್ಮಿಸಲಾದ ಕಟ್ಟಡವನ್ನು ನೆಲಸಮಗೊಳಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

ಇನ್ನು ಕೇವಲ 2 ರಿಂದ 3 ಗಂಟೆಯೊಳಗೆ ಸಾಮಾನ್ಯ ಭಕ್ತರು ದೇವರ ದರ್ಶನ ಪಡೆಯುವಂತೆ ಬದಲಾವಣೆ ತರಲು ಎಐ ಮತ್ತು ಆಧುನಿಕ ತಂತ್ರಜ್ಞಾನ ಬಳಸಲು ಕ್ರಮಕೈಗೊಳ್ಳಲಾಗಿದೆ. ಕಂಪಾರ್ಟ್‌ಮೆಂಟ್‌ಗಳಲ್ಲಿ ಭಕ್ತರಿಗೆ ತೊಂದರೆ, ಕಿರಿಕಿರಿ ಉಂಟಾಗದಂತೆ ದರ್ಶನ ಲಭ್ಯವಾಗಲು ಈ ಯೋಜನೆ ರೂಪಿಸಲಾಗಿದೆ ಎಂದು ನಾಯ್ಡು ಹೇಳಿದ್ದಾರೆ.

ಸಂಗೀತ ಮಾಂತ್ರಿಕ ಎ.ಆರ್.ರೆಹಮಾನ್ ದಾಂಪತ್ಯದಲ್ಲಿ ಬಿರುಕು

ಬೇರ್ಪಡುತ್ತಿರುವುದಾಗಿ ಪತ್ನಿ ಸೈರಾ ಘೋಷಣೆ

ನವದೆಹಲಿ: ಎ.ಆರ್.ರೆಹಮಾನ್ ಪತ್ನಿ ಸೈರಾ ಪತಿಯಿಂದ ಬೇರ್ಪಡುವುದಾಗಿ ಘೋಷಿಸಿದ್ದಾರೆ. ಈ ಮೂಲಕ ಖ್ಯಾತ ಸಂಗೀತ ನಿರ್ದೇಶಕ ಎ.ಆರ್.ರೆಹಮಾನ್ ಹಾಗೂ ಪತ್ನಿ ಸೈರಾ ದೂರವಾಗುವ ವಿಷಯ ಬಹಿರಂಗೊಂಡಿದೆ

ಎ.ಆರ್.ರೆಹಮಾನ್ ಮತ್ತು ಅವರ ಪತ್ನಿ ಸೈರಾ ತಮ್ಮ ಪ್ರತ್ಯೇಕತೆಯನ್ನು ಘೋಷಿಸಿದ್ದಾರೆ. ವಂದನಾ ಶಾ ಮತ್ತು ಅಸೋಸಿಯೇಟ್ಸ್, ದಂಪತಿಗಳ ಪ್ರತ್ಯೇಕತೆಯ ನಿರ್ಧಾರದ ಬಗ್ಗೆ ಅಧಿಕೃತ ಹೇಳಿಕೆಯನ್ನು ಬಿಡುಗಡೆ ಮಾಡಿದೆ.

"ಮದುವೆಯಾದ ಹಲವು ವರ್ಷಗಳ ನಂತರ, ಶ್ರೀಮತಿ ಸೈರಾ ತನ್ನ ಪತಿ ಎ.ಆರ್. ರೆಹಮಾನ್ ಅವರಿಂದ ಬೇರ್ಪಡುವ ಕಠಿಣ ನಿರ್ಧಾರವನ್ನು ತೆಗೆದುಕೊಂಡಿದ್ದಾರೆ. ಅವರ ಸಂಬಂಧದಲ್ಲಿ ಗಮನಾರ್ಹ ಭಾವನಾತ್ಮಕ ಒತ್ತಡದ ನಂತರ ಈ ನಿರ್ಧಾರ ಬಂದಿದೆ. ಪರಸ್ಪರರ ಬಗ್ಗೆ ಆಳವಾದ ಪ್ರೀತಿಯ ಹೊರತಾಗಿಯೂ, ದಂಪತಿಗಳು ಉದ್ವಿಗ್ನತೆ ಮತ್ತು ತೊಂದರೆಗಳು ತಮ್ಮ ನಡುವೆ ಪರಿ ಹರಿಸಲಾಗದ ಅಂತರವನ್ನು ಸೃಷ್ಟಿಸಿವೆ ಎಂದು ಕಂಡುಕೊಂಡಿದ್ದಾರೆ.



ಈ ಸಮಯದಲ್ಲಿ ಎರಡೂ ಪಕ್ಷಗಳು ಅದನ್ನು ನಿವಾರಿಸಲು ಸಾಧ್ಯ ವಾಗುವುದಿಲ್ಲ ಶ್ರೀಮತಿ ಸೈರಾ ಅವರು ನೋವು ಮತ್ತು ಯಾತನೆಯಿಂದ ಈ ನಿರ್ಧಾರವನ್ನು ತೆಗೆದುಕೊಂಡಿದ್ದಾರೆ ಎಂದು ಒತ್ತಿ ಹೇಳಿದರು. ಶ್ರೀಮತಿ ಸೈರಾ ಈ ಸವಾಲಿನ ಸಮಯದಲ್ಲಿ ಸಾರ್ವಜನಿಕರಿಂದ ಗೌಪ್ಯತೆ ಮತ್ತು ತಿಳುವಳಿಕೆಯನ್ನು ವಿನಂತಿಸುತ್ತಾರೆ. ಏಕೆಂದರೆ ಅವರು ತಮ್ಮ ಜೀವನದ ಈ ಕಷ್ಟಕರ ಅಧ್ಯಾಯವನ್ನು ನ್ಯಾವಿಗೇಟ್ ಮಾಡುತ್ತಾರೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ.

ಕನಕದಾಸರ ಜಯಂತ್ಯುತ್ಸವ; ಸಂಗೀತ ಕಾರ್ಯಕ್ರಮ





ಶ್ರೀ ಕನಕದಾಸರ ಜಯಂತ್ಯುತ್ಸವ ಅಂಗವಾಗಿ ಕಲಾಮಂದಿರದಲ್ಲಿ ಸೋಮವಾರ ವಿದ್ವಾನ್ ಅನಂತ ಕುಲಕರ್ಣಿ ಹಾಗೂ ವಿದುಷಿ ಸಂಗೀತಾ ಬಾಲಚಂದ್ರ, ಶ್ರೀ ಕನಕದಾಸರ ಕೀರ್ತನೆಗಳ ಗಾಯನ ಪ್ರಸ್ತುತಪಡಿಸಿದರು. ಈ ವೇಳೆ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್ ಪದಾಧಿಕಾರಿಗಳು ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರನ್ನು ಅಭಿನಂದಿಸಿದ್ದನ್ನು ಮತ್ತೊಂದು ಚಿತ್ರದಲ್ಲಿ ಕಾಣಬಹುದು.

ಮೈಸೂರು, ನ.19(ಎಸ್‌ಬಿಡಿ)– ಮೈಸೂರಿನ ಸಂತ ಶ್ರೇಷ್ಠ ಭಕ್ತ ಕನಕದಾಸರ ಜಯಂತ್ಯುತ್ಸವ ಸಮಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಶ್ರೀ ಕನಕದಾಸರ ಜಯಂತ್ಯುತ್ಸವ ಅಂಗವಾಗಿ ಕಲಾಮಂದಿರದಲ್ಲಿ ಸೋಮವಾರ ಸಂಗೀತ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಹೆಸರಾಂತ ಗಾಯಕರಾದ ವಿದ್ವಾನ್ ಅನಂತ ಕುಲಕರ್ಣಿ ಬಾಗಲಕೋಟೆ ಹಾಗೂ ವಿದುಷಿ ಸಂಗೀತಾ ಬಾಲಚಂದ್ರ ಉಡುಪಿ ಅವರು ಶ್ರೀ ಕನಕದಾಸರ ಕೀರ್ತನೆಗಳ ಗಾಯನ ಹಾಗೂ ಜುಗಲ್‌ಬಂದಿ ಕಾರ್ಯಕ್ರಮವನ್ನು ನಡೆಸಿಕೊಟ್ಟರು.

ಇದೇ ವೇಳೆ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್‌ನ ನೂತನ ಅಧ್ಯಕ್ಷ ಬಸವ ರಾಜು (ಬಸಪ್ಪ), ಮಾಜಿ ಅಧ್ಯಕ್ಷರಾದ ನಂ.ಸಿದ್ದಪ್ಪ, ಪ್ರತಿಧ್ವನಿ ಪ್ರಸಾದ್, ಮಾಜಿ ಉಪಾಧ್ಯಕ್ಷರಾದ ಹೆಚ್.ವಿ.ಭಾಸ್ಕರ್, ಎಂ.ಎನ್.ನವೀನ್ ಕುಮಾರ್, ನಿರ್ದೇಶಕರಾದ ನಾಗಜ್ಯೋತಿ ಪ್ರಸಾದ್, ಅರುಣ್ ಸಿದ್ದಪ್ಪ, ಶಿವಪ್ರಕಾಶ್, ತಾಯೂರು ಗಣೇಶ್‌ಮೂರ್ತಿ, ಮಾಜಿ ನಿರ್ದೇಶಕ ಎಂ.ಡಿ.ಪಾರ್ಥಸಾರಥಿ ಅವರನ್ನು ಅಭಿನಂದಿಸಲಾಯಿತು. ಇದೇ ವೇಳೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ರಂಗಭೂಮಿ ಕಲಾವಿದರಾದ ಸರಸ್ವತಿ ಜುಲೇಖಾ ಬೇಗಂ ಹಾಗೂ ಡಿ.ರಾಮು ಅವರನ್ನೂ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸಮಿತಿಯ ಅಧ್ಯಕ್ಷರಾದ ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಮೈಲ್ಯಾಕ್ ಮಾಜಿ ಅಧ್ಯಕ್ಷ ಹೆಚ್.ಎ.ವೆಂಕಟೇಶ್, ಪಾಲಿಕೆ ಮಾಜಿ ಸದಸ್ಯ ಜೆ.ಗೋಪಿ, ಸಮಿತಿ ಸಂಚಾಲಕರಾದ ಎಂ.ಶಿವಣ್ಣ, ನಾಗರಾಜು, ಸಿದ್ದನಾಗೇಂದ್ರ, ಮಹದೇವೇಗೌಡ, ಮಾಜಿ ಮೇಯರ್ ಟಿ.ಬಿ.ಚಿಕ್ಕಣ್ಣ, ವಿಶ್ವನಾಥ್ (ವಿಶ್ವ), ಕಾ.ರಾಮೇಶ್ವರಪ್ಪ, ಹರಿದಾಸ ರವಿಕುಮಾರ್, ಸೋಮು, ಧರ್ಮೇಂದ್ರ ದೀಪಕ್ ಪುಟ್ಟಸ್ವಾಮಿ, ರಮೇಶ್ ರಾಮಪ್ಪ, ಪುರುಷೋತ್ತಮ್, ಜಿ.ಸೋಮ ಶೇಖರ್, ಶ್ರೀಧರ್, ರವಿಶಂಕರ್, ಗಣೇಶ್, ರಾಕೇಶ್, ಮೈಸೂರು ಬಸಣ್ಣ ಮತ್ತಿತರು ಉಪಸ್ಥಿತರಿದ್ದರು.

ಮೈಸೂರು ಮಿತ್ರ

ಬುಧವಾರ 20 ನವೆಂಬರ್ 2024

ನಂ.ಗೂಡು: ವಿಜೃಂಭಣೆಯ ಶ್ರೀಕಂಠೇಶ್ವರಸ್ವಾಮಿ ತೆಪ್ಪೋತ್ಸವ



ನಂಜನಗೂಡು, ನ.19– ದಕ್ಷಿಣ ಕಾಶಿ ನಂಜನಗೂಡಿನ ಶ್ರೀಕಂಠೇಶ್ವರಸ್ವಾಮಿ ಅವರ ಚಿಕ್ಕಜಾತ್ರಾ ಮಹೋತ್ಸವದ ಪ್ರಯುಕ್ತ ಮಂಗಳವಾರ ರಾತ್ರಿ ಕಪಿಲಾ ನದಿಯ ತೇಲುವ ದೇವಾಲಯದಲ್ಲಿ ತೆಪ್ಪೋತ್ಸವ ವಿಜೃಂಭಣೆಯಿಂದ ನಡೆಯಿತು.

ರಾತ್ರಿ 6.50ರ ವೇಳೆಗೆ ದೇವಾಲಯ ದಿಂದ ಉತ್ಸವ ಮೂರ್ತಿಯನ್ನು ಮಂಗಳ ವಾದ್ಯಗಳೊಂದಿಗೆ ಪಲ್ಲಕ್ಕಿಯಲ್ಲಿ ಮೆರವಣಿಗೆ ಮೂಲಕ ಕಪಿಲಾ ನದಿ ದಡದಲ್ಲಿನ ಶಾಸ್ತ ಮಂಟಪಕ್ಕೆ ತರಲಾಯಿತು. ಈ ವೇಳೆ ಪ್ರಧಾನ ಅರ್ಚಕ ನಾಗಚಂದ್ರ ದೀಕ್ಷಿತ್ ಹಾಗೂ ಅರ್ಚಕ ವೃಂದ ಶ್ರೀಕಂಠೇಶ್ವರ ಸ್ವಾಮಿಯವರ ಉತ್ಸವ ಮೂರ್ತಿಗೆ ವಿವಿಧ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಿದ ನಂತರ ವಿದ್ಯುತ್ ದೀಪಾಲಂಕೃತ ತೇಲುವ ದೇವಾಲಯದಲ್ಲಿ ಶ್ರೀಯವರನ್ನು ಪ್ರತಿಷ್ಠಾಪಿಸಿ ರಾತ್ರಿ 7 ಗಂಟೆಗೆ ತೆಪ್ಪೋತ್ಸವಕ್ಕೆ ಚಾಲನೆ ನೀಡಲಾಯಿತು.

ಶ್ರೀಕಂಠೇಶ್ವರಸ್ವಾಮಿಯವರ ಉತ್ಸವ ಮೂರ್ತಿಯನ್ನು ವಿಶೇಷವಾಗಿ ವಜ್ರ ವೈಢೂರ್ಯ, ಮುತ್ತು ಹವಳ, ನವರತ್ನಗಳಿಂದ ಸಿಂಗರಿಸಲಾಗಿತ್ತು. ಅಲ್ಲದೇ ಬಗೆ ಬಗೆಯ ವಿಶೇಷ ಹೂಗಳಿಂದ ತೇಲುವ ದೇವಾಲಯವನ್ನು ಅಲಂಕೃತಗೊಳಿಸಲಾಗಿತ್ತು. ಉತ್ಸವ ಮೂರ್ತಿ ಹೊತ್ತ ವಿದ್ಯುತ್ ದೀಪಾಲಂಕೃತ ತೇಲುವ ದೇವಾಲಯದಲ್ಲಿ ಶ್ರೀಯವರನ್ನು 3 ಪ್ರದಕ್ಷಿಣೆ ಹಾಕಲಾಯಿತು. ನದಿಯ ಎರಡೂ ದಡದಲ್ಲಿ ನೆರದಿದ್ದ ಸಾವಿರಾರು ಭಕ್ತರು ಈ ಮನಮೋಹಕ ದೃಶ್ಯ ಕಣ್ತುಂಬಿಕೊಂಡು ಕರತಾಡನ, ಜೈಕಾರ ಹಾಕಿ ಭಾವ ಪರವಶರಾದರು ಹಾಗೂ ಇಷ್ಟಾರ್ಥಗಳನ್ನು ನೆರವೇರಿಸುವಂತೆ ಹರಕೆ ಕಟ್ಟಿ ಭಕ್ತಿ ಮೆರೆದರು.

ತೆಪ್ಪೋತ್ಸವ ಅಂಗವಾಗಿ ಮುಂಜಾನೆ 4 ಗಂಟೆಯಿಂದಲೇ ಶ್ರೀಕಂಠೇಶ್ವರಸ್ವಾಮಿ ಅವರಿಗೆ ಧಾರ್ಮಿಕ ಪೂಜಾ ಕೈಂಕರ್ಯಗಳನ್ನು ನೆರವೇರಿಸಲಾಯಿತು. ಭಕ್ತರು ಹಗಲು ಚೂರ್ಣೋತ್ಸವ ಪೂರ್ವಕ ಅವಭೃತ ತೀರ್ಥ ಸ್ನಾನ ಅಂಗವಾಗಿ ಕಪಿಲಾ ನದಿಯಲ್ಲಿ ಮಿಂದು ದೇವರ ದರ್ಶನಕ್ಕೆ ಸರದಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದರು.

ತೆಪ್ಪೋತ್ಸವ ಅಂಗವಾಗಿ ಪೊಲೀಸ್ ಬಂದೋಬಸ್ತ್ ನಿಯೋಜಿಸಲಾಗಿತ್ತು. ಅಲ್ಲದೆ ವಿವಿಧ ಸಂಘ–ಸಂಸ್ಥೆಗಳವರು ಪ್ರಸಾದ ವಿನಿಯೋಗ ನಡೆಸಿದರು. ಇದೇ ಸಂದರ್ಭ ದೇವಾಲಯದ ಇಓ ಜಗದೀಶ್ ಕುಮಾರ್, ಎಇಓ ಸತೀಶ್, ಪ್ರಧಾನ ಅರ್ಚಕ ನಾಗಚಂದ್ರ ದೀಕ್ಷಿತ್ ಸೇರಿದಂತೆ ದೇವಾಲಯದ ಅರ್ಚಕ ವೃಂದದವರು ಹಾಗೂ ಪ್ರಮುಖರು ಇದ್ದರು.

ಕೊಂಗಳ್ಳಿಬೆಟ್ಟದಲ್ಲಿ ಅದ್ಧೂರಿ ಮಲ್ಲಿಕಾರ್ಜುನಸ್ವಾಮಿ ಉತ್ಸವ



ತಿ.ನರಸೀಪುರ, ನ.19– ತಮಿಳುನಾಡು ಗಡಿಯಲ್ಲಿರುವ ಚಾಮರಾಜನಗರ ಜಿಲ್ಲೆಯ ಇತಿಹಾಸ ಪ್ರಸಿದ್ಧ ಕೊಂಗಳ್ಳಿ ಬೆಟ್ಟದಲ್ಲಿ ಮಲ್ಲಿಕಾರ್ಜುನಸ್ವಾಮಿಯವರ ಉತ್ಸವ ಅದ್ದೂರಿಯಾಗಿ ನೆರವೇರಿತು.



ಪ್ರತಿ ವರ್ಷದಂತೆ ಈ ವರ್ಷವು ಶನಿವಾರ ಕಾಲ್ನಡಿಗೆಯಲ್ಲಿ ತೆರಳಿದ ತಾಲೂಕಿನ ಹೆಳವರಹುಂಡಿ ಗ್ರಾಮಸ್ಥರು ಕಾರ್ತಿಕ ಮಾಸದ 3ನೇ ಸೋಮವಾರ ಕೊಂಗಳ್ಳಿ ಬೆಟ್ಟ ತಲುಪಿದರು. ಬಳಿಕ ಸಾವಿರಾರು ಮಂದಿ ಸಮ್ಮುಖದಲ್ಲಿ ಮೆರವಣಿಗೆ ಮೂಲಕ ಬಸವ ಮೂರ್ತಿಯೊಂದಿಗೆ ಶ್ರೀಮಲ್ಲಿಕಾರ್ಜುನನ ಹುಲಿ ವಾಹನೋತ್ಸವ ನೆರವೇರಿಸಿ, ಇಷ್ಟಾರ್ಥ ಸಿದ್ಧಿಗಾಗಿ ಪ್ರಾರ್ಥಿಸಿ ದೇವರ ಕೃಪೆಗೆ ಪಾತ್ರರಾದರು. ಸೋಮವಾರ ಅಲ್ಲೇ ನೆರೆದಿದ್ದ ಗ್ರಾಮಸ್ಥರು ಮಂಗಳವಾರ 20 ಸಾವಿರ ಮಂದಿಗೆ ಕಡ್ಲೆಹುಳಿ, ಪಾಯಸ ಸೇರಿದಂತೆ ಅನ್ನದಾಸೋಹ ಏರ್ಪಡಿಸಿದ್ದರು. ಗ್ರಾಮದ ಮುಖಂಡರು ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವೂ ಗ್ರಾಮದಿಂದ ಕಾಲ್ನಡಿಗೆಯಲ್ಲಿ ಬಂದು ಮಲ್ಲಿಕಾರ್ಜುನಸ್ವಾಮಿ ಅವರ ಸೇವೆ ನಡೆಸಲಾಗಿದೆ. ಕಳೆದ ವರ್ಷ 10 ಸಾವಿರ ಮಂದಿಗೆ ಪ್ರಸಾದದ ವ್ಯವಸ್ಥೆ ಮಾಡಿದ್ದೇವು. ಈ ಬಾರಿ ನಿರೀಕ್ಷೆಗೂ ಮೀರಿ ಭಕ್ತರು ಆಗಮಿಸಿದ್ದರಿಂದ 20 ಸಾವಿರ ಮಂದಿಗೆ ಪ್ರಸಾದದ ವ್ಯವಸ್ಥೆ ಮಾಡಲಾಗಿದೆ.

ಭಕ್ತರ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಿದ್ದು, ದೇವರ ಸೇವೆ ಮಾಡುವ ಶಕ್ತಿಯನ್ನು ಮಲ್ಲಿಕಾರ್ಜುನ ಸ್ವಾಮಿ ನೀಡಲಿ ಎಂದು ಪ್ರಾರ್ಥಿಸಿದರು.

1.5 ಕೋಟಿ ವೆಚ್ಚದ ಕಾಮಗಾರಿಗಳಿಗೆ ಭೂಮಿಪೂಜೆ

ನಂಜನಗೂಡು/ಮಲ್ಕುಂಡಿ, ನ.19– ಮುಖ್ಯಮಂತ್ರಿ ಸಿದ್ದರಾಮಯ್ಯ ನಮ್ಮ ಕ್ಷೇತ್ರಕ್ಕೆ 25 ಕೋಟಿ ರೂ. ವಿಶೇಷ ಅನುದಾನ ಮಂಜೂರು ಮಾಡಿದ್ದು, ತಾಲೂಕಿನ ಎಲ್ಲಾ ಗ್ರಾಮಗಳಲ್ಲಿ ರಸ್ತೆ, ಚರಂಡಿ ಸೇರಿದಂತೆ ಮೂಲ ಸೌಲಭ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಶಾಸಕ ದರ್ಶನ್ ತಿಳಿಸಿದರು.

ತಾಲೂಕಿನ ಕಣೇನೂರು, ಹರದನಹಳ್ಳಿ, ಹುಚ್ಚಗಣಿ, ಇಬ್ಜಾಲ, ಕಾಟೂರು ಗ್ರಾಮಗಳಲ್ಲಿ 1.5 ಕೋಟಿ ವೆಚ್ಚದಲ್ಲಿ ಕನಕ ಸಮುದಾಯ ಭವನ, ಸಿ.ಸಿ.ರಸ್ತೆ, ಬಸ್ ಶೆಲ್ಟರ್ ನಿರ್ಮಾಣ ಕಾಮಗಾರಿಗಳಿಗೆ ಭೂಮಿಪೂಜೆ ನಡೆಸಿ ಅವರು ಮಾತನಾಡಿದರು.

ಚುನಾವಣೆ ನಂತರ ಗ್ರಾಮಗಳಿಗೆ ಭೇಟಿ ನೀಡಿದ ಸಂದರ್ಭ ಎಲ್ಲಾ ಗ್ರಾಮಗಳಿಗೂ ಮೂಲ ಸೌಕರ್ಯ ಕಲ್ಪಿಸುವ ಸಲುವಾಗಿ ಗ್ರಾಮಸ್ಥರ ಬೇಡಿಕೆಯನ್ನು ಪರಿಗಣಿಸಿ ಮುಖ್ಯಮಂತ್ರಿಗಳ ಮನವೊಲಿಸಿ 25 ಕೋಟಿ ರೂ. ಮಂಜೂರು ಮಾಡಿಸಿ ವಿಶೇಷ ಅನುದಾನದಡಿ ಮೂಲ ಸೌಲಭ್ಯ ಕಲ್ಪಿಸಲು ಕಾಮಗಾರಿ ನಡೆಸಲಾಗುತ್ತಿದೆ. ಮುಂದುವರೆದ ಕಾಮಗಾರಿಗೆ ಶಾಸಕರ ಅನುದಾನ ಬಳಸಿ ಹೆಚ್ಚಿನ ಸೌಲಭ್ಯ ಕಲ್ಪಿಸಲಾಗುವುದು ಎಂದರು.



ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ದರ್ಶನ್ ಚಾಲನೆ ನೀಡಿದರು.

ತಾಲೂಕಿನ ಕಣೇನೂರು ಗ್ರಾಮದಲ್ಲಿ ಮಂಗಳವಾರ 35 ಲಕ್ಷ ವೆಚ್ಚದ ಸಿಸಿ ರಸ್ತೆ, 5 ಲಕ್ಷ ವೆಚ್ಚದಲ್ಲಿ ಕನಕ ಭವನ ನಿರ್ಮಾಣ, ಹುಚ್ಚಗಣಿ ಗ್ರಾಮದಲ್ಲಿ 25 ಲಕ್ಷ ವೆಚ್ಚದ ಸಿ.ಸಿ.ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿ, ಕೆಂಪೇಗೌಡ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ 10 ಲಕ್ಷ ನೀಡಲಾಗಿದೆ. ಹುಚ್ಚಗಣಿ ಗ್ರಾಮವನ್ನು ಕಂದಾಯ ಗ್ರಾಮವನ್ನಾಗಿ ಮಾಡಲು ಗ್ರಾಮದ ಗಡಿ ಗುರುತು ಮಾಡಲಾಗಿದೆ. ಜಿಲ್ಲಾಧಿಕಾರಿಗಳ ಗಮನಕ್ಕೆ ತಂದು ಶೀಘ್ರ ಕಂದಾಯ ಗ್ರಾಮವನ್ನಾಗಿ ಘೋಷಿಸಲಾಗುವುದು. ನಮ್ಮ ಸರ್ಕಾರ 5 ಗ್ಯಾರಂಟಿಗಳ ಜೊತೆಗೆ ಅಭಿವೃದ್ಧಿಗೂ ಹೆಚ್ಚು ಒತ್ತು ನೀಡುತ್ತಿದೆ ಎಂದರು.

ಮಾಜಿ ಶಾಸಕ ಕಳಲೆ ಕೇಶವಮೂರ್ತಿ ಮಾತನಾಡಿ, ತಾಲೂಕಿನ ಗಡಿ ಭಾಗದ ಗ್ರಾಮಗಳ 800 ಎಕರೆ ಪ್ರದೇಶಕ್ಕೆ ಕಬಿನಿ ಬಲದಂಡೆ ಕಾಲುವೆ ಮೂಲಕ ನೀರಿನ ಸಂಪರ್ಕ ಒದಗಿಸುವಂತೆ ಗ್ರಾಮಸ್ಥರು ಬೇಡಿಕೆ ಇಟ್ಟಿದ್ದಾರೆ. ಅವರ ಬೇಡಿಕೆ ಮನ್ನಿಸಿ ಸಣ್ಣ ನೀರಾವರಿ ಯೋಜನೆಯಡಿ ಕಾಮಗಾರಿ ಕೈಗೊಂಡು ನೀರಿನ ಸಂಪರ್ಕ ನೀಡಲು ಕ್ರಮ ವಹಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಕೆ. ಮಾರುತಿ, ಹುಲ್ಲಹಳ್ಳಿ ಬ್ಲಾಕ್ ಅಧ್ಯಕ್ಷ ಶ್ರೀಕಂಠ ನಾಯಕ, ಕಾಂಗ್ರೆಸ್ ಉಸ್ತುವಾರಿ ಸೋಮೇಶ್, ಮುಖಂಡರಾದ ರಾಜಣ್ಣ ಸೂರ್ಯಕುಮಾರ್, ಬಾಲರಾಜ್, ನರಸಿಂಹೇಗೌಡ ಅಭಿನಂದನ್ ಪಟೇಲ್, ಬಸಪ್ಪ, ಸೂರ್ಯನಾರಾಯಣ, ಕೆಂಚೇಗೌಡ, ರಂಗಸ್ವಾಮಿ, ರಾಜೇಂದ್ರ, ಸಾದಿಕ್ ಪಾಷ, ಬಸಮ್ಮ, ಬಸವರಾಜು ಗ್ರಾಪಂ ಅಧ್ಯಕ್ಷ ಮಂಜುನಾಥ್, ಸದಸ್ಯ ಜಗದೀಶ್, ಭೂ ಸೇನೆ ನಿಗಮದ ಎಇ ಶರಣ್, ಪುರುಷೋತ್ತಮ್, ಮಂಜು ಉಪಸ್ಥಿತರಿದ್ದರು.

ಕ್ಯಾಷ್ ಹಾಕ್ ಸ್ಕೇಟಿಂಗ್: 8 ವಿದ್ಯಾರ್ಥಿಗಳಿಗೆ ಚಿನ್ನದ ಪದಕ



ವಿಜೇತ ವಿದ್ಯಾರ್ಥಿಗಳನ್ನು ಕಾಣಬಹುದು.

ಹುಣಸೂರು, ನ.19– ಗೋವಾದಲ್ಲಿ ನಡೆದ ಕ್ಯಾಷ್ ಹಾಕ್ ಸ್ಕೇಟಿಂಗ್ ಪಂದ್ಯಾವಳಿಯಲ್ಲಿ 8 ವಿದ್ಯಾರ್ಥಿಗಳು ಚಿನ್ನದ ಪದಕ ಪಡೆದು ರಾಜ್ಯಕ್ಕೆ ಎರಡನೇ ಸ್ಥಾನ ಗಳಿಸಿದ್ದಾರೆ ಎಂದು ಅಂತಾರಾಷ್ಟ್ರೀಯ ತರಬೇತುದಾರ ಮುಸಾವೀರ್ ಪಾಷ ತಿಳಿಸಿದ್ದಾರೆ.

ಕ್ಯಾಷ್ ಹಾಕ್ ಪಂದ್ಯಾವಳಿಯಲ್ಲಿ ಹುಣಸೂರಿನ ಕಿಂಗ್ಸ್ ಸ್ಕೇಟಿಂಗ್ ಅಕಾಡೆಮಿಯ 6 ವಿದ್ಯಾರ್ಥಿಗಳು ಚಿನ್ನದ ಪದಕ ಪಡೆದರೆ ಇನ್ನಿಬ್ಬರು ಬೆಳ್ಳಿ ಪದಕ ಪಡೆದು ಡಿ.13 ರಂದು ಮಹಾರಾಷ್ಟ್ರದ ಔರಂಗಾಬಾದ್‌ನಲ್ಲಿ ನಡೆಯುವ ಸ್ಕೇಟಿಂಗ್‌ಗೆ ಆಯ್ಕೆಯಾಗಿದ್ದಾರೆ. ಅಲ್ಲೂ ಜಯಗಳಿಸಿದರೆ ಮುಂಬೈಯಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದ್ದಾರೆ.

ಈ ವೇಳೆ ಮಕ್ಕಳಾದ ಚಾರ್ವಿ.ವಿ, ನಿರೀಕ್ಷಾ ಎಸ್, ದಿಶಾ, ಡಿ.ಆದ್ಯಾ, ಬಿ.ಮನನ್ ಪ್ರಿನ್ಸ್, ಲಕ್ಷಿತ್ ಗೌಡ, ಸನ್ಮಿತ್ ರೀತು, ಪ್ರಿಯಾಂಶ್ ಹಾಗೂ ಅಂತರಾಷ್ಟ್ರೀಯ ತರಬೇತುದಾರರು ಇದ್ದರು.

ಓಟಿಗೋಸ್ಕರ ವಕ್ಫ್ ಬೋರ್ಡ್ ಸ್ಥಾಪನೆ

ಬಿಜೆಪಿ ರೈತ ಮೋರ್ಚಾ ಜಿಲ್ಲಾಧ್ಯಕ್ಷ ಶ್ರೀನಿವಾಸಗೌಡ

ಹೆಚ್.ಡಿ.ಕೋಟೆ, ನ.19– ಕಾಂಗ್ರೆಸ್ ಸರ್ಕಾರ ಓಟಿಗೋಸ್ಕರ ವಕ್ಫ್ ಬೋರ್ಡ್ ಹುಟ್ಟು ಹಾಕಿದೆ ಎಂದು ಬಿಜೆಪಿ ರೈತ ಮೋರ್ಚಾ ಜಿಲ್ಲಾಧ್ಯಕ್ಷ ಶ್ರೀನಿವಾಸಗೌಡ ತಿಳಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆದ ತಾಲೂಕು ಬಿಜೆಪಿ ಘಟಕದ ಸಭೆಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಮುಸ್ಲಿಮರ ಓಲೈಸಿ ಅವರ ಮತಗಳನ್ನು ಸೆಳೆಯುವ ಉದ್ದೇಶದಿಂದ ವಕ್ಫ್ ಬೋರ್ಡ್ ಹುಟ್ಟು ಹಾಕಿದ್ದು, ಇದೀಗ ರಾಜ್ಯದ ರೈತರ ಭೂಮಿ ಕಬಳಿಸುವ ಮೂಲಕ ಅವರನ್ನು ಕಾಡುತ್ತಿದೆ. ಆದ್ದರಿಂದ ಹೆಚ್.ಡಿ.ಕೋಟೆ, ಸರಗೂರು ತಾಲೂಕಿನ ರೈತರು ನಿಮ್ಮ ಆರ್‌ಟಿಸಿಗಳನ್ನು ಸರಿಯಾಗಿದೆಯಾ ನೋಡಿಕೊಳ್ಳಿ. ನಿಮ್ಮ ಆಸ್ತಿಗಳು ವಕ್ಫ್ ಬೋರ್ಡ್‌ಗೆ ಸೇರಿರುವುದು ನಿಮಗೆ ತಿಳಿದಿರುವುದಿಲ್ಲ. ಅಕಸ್ಮಾತ್ ಸೇರಿದ್ದರೇ ನಮ್ಮ ಗಮನಕ್ಕೆ ತನ್ನಿ ಎಂದರು.

ತಾಲೂಕು ಬಿಜೆಪಿ ಅಧ್ಯಕ್ಷ ಶಂಭೇಗೌಡ ಮಾತನಾಡಿ, ತಾಲೂಕಿನ ಕಸಬಾ ಹೋಬಳಿಯಲ್ಲಿ 9 ಪ್ರಕರಣಗಳ ಪೈಕಿ 5 ವಕ್ಫ್ ಬೋರ್ಡ್‌ಗೆ ಖಾತೆಯಾಗಿದೆ. 4 ಪ್ರಕರಣ ಪರಿಶೀಲನೆ ಹಂತದಲ್ಲಿದೆ. ಆದ್ದರಿಂದ ರೈತರು ತಮ್ಮ ದಾಖಲೆಗಳನ್ನು ಪರಿಶೀಲಿಸಿಕೊಳ್ಳಿ ಎಂದು ಮನವಿ ಮಾಡಿದರು.

ಈ ವೇಳೆ ಅಲ್ಪ ಸಂಖ್ಯಾತರ ಮೋರ್ಚಾ ರಾಜ್ಯ ಕಾರ್ಯದರ್ಶಿ ಪ್ರಭಾಕರ್ ಜೈನ್, ಜಿಲ್ಲಾ ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಮಹೇಶ್ ಬಾಬು, ಪ್ರಧಾನ ಕಾರ್ಯದರ್ಶಿ ಟಿ.ವೆಂಕಟೇಶ್, ಕಾರ್ಯದರ್ಶಿ ರಾಜು, ಪ್ರಧಾನ ಕಾರ್ಯದರ್ಶಿ ಗುರುಸ್ವಾಮಿ, ಉಪಾಧ್ಯಕ್ಷ ಚಂದ್ರಮೌಳಿ, ವೀರಶೈವ ರಾಜ್ಯ ನಿರ್ದೇಶಕ ಬಸವರಾಜಪ್ಪ ರೈತ ಮೋರ್ಚಾ ತಾಲೂಕು ಅಧ್ಯಕ್ಷ ಕೆಂಡಗಣ್ಣಸ್ವಾಮಿ, ಜಿಲ್ಲಾ ಉಪಾಧ್ಯಕ್ಷ ಚಂದ್ರಶೇಖರ್, ಮಾಜಿ ಅಧ್ಯಕ್ಷರಾದ ಯೋಗೇಶ್, ಶಿವರಾಜಪ್ಪ, ಮುಖಂಡರಾದ ಬಸವರಾಜು, ಪೃಥ್ವಿ, ಶಿವಶಂಕರ್, ವಿವೇಕಾನಂದ, ಸೋಮಾಚಾರಿ, ರಾಜಣ್ಣ, ಗುರುಮಲ್ಲಪ್ಪ, ಇತರರಿದ್ದರು.

ನ.22ಕ್ಕೆ, ನಮ್ಮ ಭೂಮಿ ನಮ್ಮ ಹಕ್ಕು ಹೋರಾಟ



ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷ ಮಿರ್ಲೆ ಶ್ರೀನಿವಾಸಗೌಡ ಮಾತನಾಡಿದರು.

ಪಿರಿಯಾಪಟ್ಟಣ, ನ.19– ಅಲ್ಪಸಂಖ್ಯಾತ ವಕ್ಫ್ ಬೋರ್ಡ್ ವಿರುದ್ಧ ನಮ್ಮ ಭೂಮಿ ನಮ್ಮ ಹಕ್ಕು ಹೋರಾಟ ಹಮ್ಮಿಕೊಳ್ಳಲಾಗಿದೆ ಎಂದು ಬಿಜೆಪಿ ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷ ಮಿರ್ಲೆ ಶ್ರೀನಿವಾಸಗೌಡ ತಿಳಿಸಿದರು.

ಪಟ್ಟಣದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯಾದ್ಯಂತ ಸರ್ಕಾರಿ ಜಾಗ ಗೋಮಾಳ, ದೇವಸ್ಥಾನ, ರೈತರ ಜಮೀನುಗಳನ್ನು ವಕ್ಫ್ ಬೋರ್ಡ್ ತನ್ನ ಆಸ್ತಿ ಎಂದು ಘೋಷಿಸಿಕೊಂಡು ಸಾರ್ವಜನಿಕರನ್ನು ಸಂಕಷ್ಟಕ್ಕೀಡು ಮಾಡಿದೆ. ವಕ್ಫ್ ಬೋರ್ಡ್ ಕಾನೂನನ್ನು ಯಾರೂ ಕೂಡ ಪ್ರಶ್ನಿಸಲು ಸಾಧ್ಯವಾಗುತ್ತಿಲ್ಲ. ಕಾಂಗ್ರೆಸ್ ಸರ್ಕಾರ ಕೂಡ ವಕ್ಫ್ ಬೋರ್ಡ್‌ನ ದುರ್ವತನೆಗೆ ಸಹಕಾರ ನೀಡುತ್ತಿದ್ದು, ಅಲ್ಪಸಂಖ್ಯಾತರ ಮತಗಳಿಕೆ ಓಲೈಕೆಯ ಆಡಳಿತ ಮಾಡುತ್ತಿದೆ ಎಂದು ಆರೋಪಿಸಿದರು.

ವಕ್ಫ್ ಬೋರ್ಡ್ ನಡವಳಿಕೆಯಿಂದ ಸಾರ್ವಜನಿಕರಿಗೆ ಮತ್ತು ಹಿಂದೂಗಳಿಗೆ ಆಗುತ್ತಿರುವ ಅನ್ಯಾಯ ತಡೆಗಟ್ಟಲು ಕೇಂದ್ರ ಸರ್ಕಾರ ತಿದ್ದುಪಡಿ ತರುತ್ತಿದ್ದು, ಇದಕ್ಕೆ ಸಾರ್ವಜನಿಕರು ಸಹಕರಿಸಿ ಪ್ರಧಾನಿ ಮೋದಿ ಪರವಾಗಿ ನಿಲ್ಲಬೇಕು ಎಂದು ಮನವಿ ಮಾಡಿದರು.

ಹೀಗಾಗಿ ರಾಜ್ಯಾದ್ಯಂತ ಬಿಜೆಪಿ ವತಿಯಿಂದ ನಮ್ಮ ಭೂಮಿ ನಮ್ಮ ಹಕ್ಕು ಘೋಷಣೆ ಅಡಿ ಪ್ರತಿ ಜಿಲ್ಲಾ ಕೇಂದ್ರಗಳಲ್ಲಿ ಜಿಲ್ಲಾಧಿಕಾರಿ ಕಚೇರಿ ಎದುರು ನ.22ರಂದು ಪ್ರತಿಭಟನಾ ಧರಣಿ ಹಮ್ಮಿಕೊಳ್ಳಲಾಗಿದೆ. ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಮತ್ತು ಎಂಎಲ್‌ಸಿ ಸಿ.ಟಿ.ರವಿ ಧರಣಿಯ ನೇತೃತ್ವ ವಹಿಸುವರು ಎಂದರು.

ತಾಲೂಕು ಬಿಜೆಪಿ ಅಧ್ಯಕ್ಷ ರಾಜೇಂದ್ರ ಮಾತನಾಡಿ, ವಕ್ಫ್ ಬೋರ್ಡ್ ಲ್ಯಾಂಡ್ ಜಿಹಾದ್ ಮಾಡುತ್ತಿದ್ದು, ಇವರಿಗೆ ಇಂಡಿಯಾ ಒಕ್ಕೂಟ ಸಹಕಾರ ನೀಡುತ್ತಿದೆ. ಪ್ರಧಾನಿ ಮೋದಿಯವರು ವಕ್ಫ್ ಬೋರ್ಡ್ ಕಾಯ್ದೆಗಳ ವಿರುದ್ಧ ತಿದ್ದುಪಡಿ ತಂದಾಗ ಇಂಡಿಯಾ ಒಕ್ಕೂಟ ಪಕ್ಷಗಳು ಇದನ್ನು ವಿರೋಧಿಸಿದ್ದವು. ಇಂದು ದೇಶಾದ್ಯಂತ 9.46 ಲಕ್ಷ ಹೆಕ್ಟೇರ್ ಆಸ್ತಿ ವಕ್ಫ್ ಬೋರ್ಡ್‌ಗೆ ಸೇರಬೇಕಾಗಿದೆ ಎಂದು ವಾದ ಮಂಡಿಸುತ್ತಿದ್ದಾರೆ. ಇಂದಿರಾ ಗಾಂಧಿ ಅವರು ಪ್ರಧಾನಿಯಾಗಿದ್ದ ವೇಳೆ ಉಳುವವನೇ ಭೂಮಿ ಒಡೆಯ ಎಂಬ ಕಾಯ್ದೆ ಅಡಿ ಪ್ರತಿಯೊಬ್ಬರಿಗೂ ಜಮೀನು ನೀಡಿದ್ದರು. ಆದರೆ ಇಂದು ಕಾಂಗ್ರೆಸ್ ಸರ್ಕಾರ ಅವರ ಆದೇಶಗಳಿಗೆ ವಿರುದ್ಧವಾಗಿ ಅಲ್ಪಸಂಖ್ಯಾತರ ಮತ ಓಲೈಸುವ ಸಲುವಾಗಿ ಆಸ್ತಿಗಳನ್ನು ಮಾರಾಟ ಮಾಡುತ್ತಿದೆ ಎಂದು ದೂರಿದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಮುಖಂಡ ಮಹೇಶ್ ಬಾಬು, ಮುಖಂಡರಾದ ಚಂದ್ರಶೇಖರ, ಪ್ರಭಾಕರ್, ಮಹೇಶ್, ಚನ್ನಬಸವರಾಜ್, ನಿತ್ಯಾನಂದ, ಶಿವರಾಮ್, ಅನಿಲ್ ಕುಮಾರ್, ರವಿಕುಮಾರ್ ಸೇರಿದಂತೆ ಇತರರಿದ್ದರು.

ನ.24, ಕಂಪಲಾಪುರ ಡೇರಿ ಚುನಾವಣೆ

ಕಂಪಲಾಪುರ, ನ.19– ಗ್ರಾಮದ ಹಾಲಿನ ಡೈರಿ ಆಡಳಿತ ಮಂಡಳಿಗೆ ನ.24 ರಂದು ಚುನಾವಣೆ ನಡೆಯಲಿದೆ. ಇಲ್ಲಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಬೆಳಗ್ಗೆ 9 ರಿಂದ ಸಂಜೆ 4 ರವರೆಗೆ ಮತದಾನ ನಡೆಯಲಿದ್ದು ಅಂದೇ ಫಲಿತಾಂಶ ಪ್ರಕಟವಾಗಲಿದೆ. ಸಂಘದಲ್ಲಿ ಒಟ್ಟು 260 ಮತದಾರರಿದ್ದು ಅಂದು ತಮ್ಮ ಹಕ್ಕು ಚಲಾಯಿಸಲಿದ್ದಾರೆ ಎಂದು ಚುನಾವಣಾಧಿಕಾರಿ ಜೆ.ಹಿತೇಂದ್ರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾರ್ಗಳ್ಳಿ ಬಸವೇಶ್ವರ ಅದ್ಧೂರಿ ಜಾತ್ರಾ ಮಹೋತ್ಸವ



ಕಾರ್ಗಳ್ಳಿ ಬಸವೇಶ್ವರ ಜಾತ್ರಾ ಮಹೋತ್ಸವ ಅದ್ಧೂರಿಯಾಗಿ ನೆರವೇರಿತು.

ಹೆಚ್.ಡಿ.ಕೋಟೆ, ನ.19– ತಾಲೂಕಿನ ಕಣಿಯನಹುಂಡಿ ಹೊಸೂರು ಗ್ರಾಮದ ಕಾರ್ಗಳ್ಳಿ ಬಸವೇಶ್ವರ ದೇವಸ್ಥಾನದಲ್ಲಿ 8ನೇ ವರ್ಷದ ಕಾರ್ತಿಕ ಮಾಸದ ಜಾತ್ರಾ ಮಹೋತ್ಸವ ಅದ್ಧೂರಿಯಾಗಿ ನಡೆಯಿತು.

ಸೋಮವಾರ ಮುಂಜಾನೆಯೇ ಗಣಪತಿ ಹೋಮ ಸೇರಿದಂತೆ ವಿವಿಧ ಧಾರ್ಮಿಕ ಪೂಜಾ ಕೈಂಕರ್ಯಗಳನ್ನು ನೆರವೇರಿಸಲಾಯಿತು. ಜಾತ್ರೆ ಅಂಗವಾಗಿ ಗ್ರಾಮವನ್ನು ತಳಿರು ತೋರಣಗಳಿಂದ ಸಿಂಗರಿಸಲಾಗಿತ್ತು. ಅಲ್ಲದೇ ದೇವಾಲಯವನ್ನು ಬಗೆ ಬಗೆಯ ಹೂ ಹಾಗೂ ಬಣ್ಣ ಬಣ್ಣದ ವಿದ್ಯುತ್ ದೀಪಗಳಿಂದ ಅಲಂಕಾರ ಮಾಡಲಾಗಿತ್ತು. ಗ್ರಾಮದ ಪ್ರತಿ ಮನೆ ಮುಂದೆ ಗುಡಿಸಿ ತಾರಸಿ ರಂಗೋಲಿ ಬಿಡಲಾಗಿತ್ತು. ವಿನೋದ್ ಮತ್ತು ತಂಡದವರಿಂದ ರಸಮಂಜರಿ ಸಂಗೀತ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಬೆಳಗ್ಗೆ 10 ಗಂಟೆಗೆ ಆರಂಭವಾದ ಅನ್ನದಾನ ರಾತ್ರಿವರೆಗೂ ನಡೆಯಿತು.

ಈ ವೇಳೆ ಜಿಪಂ ಮಾಜಿ ಸದಸ್ಯ ಕೃಷ್ಣ, ಬಿಜೆಪಿ ಮುಖಂಡ ಕೆ.ಎಂ. ಅನುರಾಜು, ಇ.ಈರೇಗೌಡ, ಇಂದ್ರೇಶ್ ಗೌಡ, ಪುಟ್ಟೇಗೌಡ, ಜಯರಾಮೇಗೌಡ, ಕುಶಲ್ ಕುಮಾರ್, ಲವ ಕುಮಾರ್, ಕೆದಿನೇಶ್, ಜವರನಾಯಕ ಪೂಜಾರಿ, ಸುನೀಲ್ ಕುಮಾರ್, ವೀರೇಗೌಡ, ಪಟೇಲ್ ವಿರಣ್ಣ, ಶಿವರಾಜು, ಬಸವರಾಜು, ಶಿವಣ್ಣೇಗೌಡ, ಶಂಕರೇಗೌಡರು ಸೇರಿದಂತೆ ಗ್ರಾಮದ ಮುಖಂಡರು ಮತ್ತು ಯಜಮಾನರು ಇದ್ದರು.

ಸಹಕಾರ ಆಂದೋಲನಕ್ಕೆ ಪಂಚವಾರ್ಷಿಕ ಯೋಜನೆಗಳ ಮೂಲಕ ಬಲ ತುಂಬಿದ ನೆಹರು

ಮೈಮುಲ್ ಅಧ್ಯಕ್ಷ ಆರ್.ಚೆಲುವರಾಜು ಅಭಿಪ್ರಾಯ

ತಿ.ನರಸೀಪುರ, ನ.19– ಸ್ವಾತಂತ್ರ್ಯ ಪೂರ್ವದಿಂದಲೂ ಇದ್ದ ಸಹಕಾರ ಆಂದೋಲನಕ್ಕೆ ಸ್ವಾತಂತ್ರ್ಯೋತ್ತರ ಕಾಲದಲ್ಲಿ ಪಂಚವಾರ್ಷಿಕ ಯೋಜನೆಗಳ ಮೂಲಕ ಮಾಜಿ ಪ್ರಧಾನಿ ಜವಾಹರಲಾಲ್ ನೆಹರು ಬಲ ತುಂಬಿದರು. ಇದು ಸಹಕಾರ ಕ್ಷೇತ್ರಕ್ಕೆ ದೊರೆತಿರುವ ದೊಡ್ಡ ಬಲ ಎಂದು ಮೈಮುಲ್ ಅಧ್ಯಕ್ಷ ಆರ್.ಚೆಲುವರಾಜು ಹೇಳಿದರು.

ಪಟ್ಟಣದ ಮೈಮುಲ್ ಉಪಕಚೇರಿಯಲ್ಲಿ ಮೈಸೂರು–ಚಾಮರಾಜನಗರ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಮೈಸೂರು, ಮೈಸೂರಿನ ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ, ತಿ.ನರಸೀಪುರ ತಾಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘ, ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ತಾಲೂಕಿನ ಎಲ್ಲಾ ಸಹಕಾರ ಸಂಘಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ 71ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಸಹಕಾರ ಕ್ಷೇತ್ರದಿಂದ ಗ್ರಾಮೀಣ ಜನರು ಸ್ವಾಭಿಮಾನದ ಬದುಕು ನಡೆಸಲು ಸಾಧ್ಯವಾಗಿದೆ. ಹಿರಿಯರ ತ್ಯಾಗ, ನಿಸ್ವಾರ್ಥ ಸೇವೆಯಿಂದ ಸಹಕಾರ ಕ್ಷೇತ್ರ ಎತ್ತರಕ್ಕೆ ಬೆಳೆದು ನಿಂತಿದೆ. ಸಮಾಜದ ಆರ್ಥಿಕ ಸಬಲೀಕರಣಕ್ಕೆ ಕಾರಣವಾಗಿರುವ ಸಹಕಾರ ಕ್ಷೇತ್ರದಲ್ಲಿ ದುಡಿಯುವವರ ಸಮಸ್ಯೆಗೂ ಸ್ಪಂದಿಸಬೇಕಾಗಿದೆ. ಸಹಕಾರ ಸಂಘಗಳ ನೌಕರರ ಪ್ರೋತ್ಸಾಹ ಧನ, ಹಾಲಿನ ಡೈರಿಗಳಲ್ಲಿ ಪ್ರೋತ್ಸಾಹಧನದ ಮೊತ್ತ ಹೆಚ್ಚಿಸಬೇಕಾದ ಅನಿವಾರ್ಯತೆ ಸಹ ಇದೆ ಎಂದರು.



ತಿ.ನರಸೀಪುರದಲ್ಲಿ ನಡೆದ 71ನೇ ಅಖಿಲ ಭಾರತ ಸಹಕಾರ ಸಪ್ತಾಹದಲ್ಲಿ ಸಾಧಕರನ್ನು ಸನ್ಮಾನಿಸಲಾಯಿತು.

ಮಾಜಿ ಶಾಸಕಿ ಜೆ.ಸುನೀತಾ ವೀರಪ್ಪಗೌಡ ಮಾತನಾಡಿ, ಸಮಾಜ ಬದಲಿಸುವ ಶಕ್ತಿ ಸಹಕಾರ ಕ್ಷೇತ್ರಕ್ಕಿದೆ. ಸಹಕಾರದಿಂದ ಮಹಿಳಾ ಸಶಕ್ತೀಕರಣ ಸಾಧ್ಯವಾಗಿದೆ. ಸಹಕಾರದಂತೆ ಎಲ್ಲ ಕ್ಷೇತ್ರಗಳಲ್ಲೂ ದ್ವೇಷ ಮೀರಿ, ಪ್ರೀತಿ, ವಿಶ್ವಾಸದ ಅಲೆ ಮೂಡಬೇಕು. ಸಮಾಜದಲ್ಲಿ ಪ್ರಚೋದನಾತ್ಮಕ ಕ್ರಿಯೆಗಳಿಗೆ ಸಹಕಾರ ಉತ್ತರವಾಗಬೇಕು ಎಂದರು.

ಹಿರಿಯ ಸಹಕಾರಿ ವೈ.ಎನ್.ಶಂಕರೇಗೌಡ ಮಾತನಾಡಿ, ಕ್ಷೇತ್ರಕ್ಕೆ ಸಚಿವಾಲಯ ಬೇಕೆಂಬ ಬಹುವರ್ಷಗಳ ಬೇಡಿಕೆ ಈಡೇರಿಸಲು ಕೇಂದ್ರ ಸಚಿವ ಅಮಿತ್ ಶಾ ಕಾರಣರಾದರು. ಸ್ವತಃ ಸಹಕಾರಿಯಾಗಿರುವ ಅವರು, ಪ್ರತ್ಯೇಕ ತಂತ್ರಾಂಶ ಪರಿಚಯಿಸುವ ಮೂಲಕ ಹಳ್ಳಿಗಾಡಿನಿಂದ ರಾಷ್ಟ್ರ ಮಟ್ಟದವರೆಗೆ ಎಲ್ಲಾ ಸಹಕಾರ ಸಂಸ್ಥೆಗಳು ಕಂಪ್ಯೂಟರೀಕೃತ ವ್ಯವಸ್ಥೆ ಅಡಿ ಬರಲು ನೆರವಾದರು ಎಂದರು. ಮೈಸೂರಿನ ಕೆಐಸಿಎಂ ಉಪನ್ಯಾಸಕಿ ಪಿ.ಗೀತಾ ಸಹಕಾರ ಸಂಸ್ಥೆಗಳ ನಡುವೆ ಸಹಕಾರ ಬಲಪಡಿಸುವುದು ವಿಷಯ ಮಂಡಿಸಿದರು.

ಕಾರ್ಯಕ್ರಮದಲ್ಲಿ ಮೈಮುಲ್ ಮಾಜಿ ಅಧ್ಯಕ್ಷ ಸಿ.ಓಂಪ್ರಕಾಶ್, ಮೈಮುಲ್ ಉಪಾಧ್ಯಕ್ಷ ಬಿ.ಎನ್.ಸದಾನಂದ, ನಿರ್ದೇಶಕ ಟಿ.ಪಿ.ಬೋರೇಗೌಡ, ಸಿದ್ದೇಗೌಡ, ಟಿಎಪಿಸಿಎಂಎಸ್ ಅಧ್ಯಕ್ಷ ಟಿ.ಪಿ.ಸುಬ್ರಹ್ಮಣ್ಯ, ಸಹಕಾರ ಅಭಿವೃದ್ಧಿ ಅಧಿಕಾರಿ ಎ.ಹಸೀನಾ, ಪಾಂಶುಪಾಲರು ಹಾಗೂ ಪ್ರ.ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಡಾ.ಎಂ.ವಿಶ್ವೇಶ್ವರಯ್ಯ, ವ್ಯವಸ್ಥಾಪಕ ಪಿ.ಹರೀಶ್, ಡಾ.ಸಣ್ಣ ತಮ್ಮೇಗೌಡ, ಹನುಮನಾಳು ಸಿದ್ದೇಗೌಡ, ಕರಿಬಸವರಾಜು, ರಾಜಪ್ಪ, ಮಾರ್ಗ ವಿಸ್ತರಣಾಧಿಕಾರಿ ಆರ್.ಪ್ರಮೋದ್, ದಿವ್ಯಶ್ರೀ, ಅನಿತಾ ಸೇರಿದಂತೆ ಆಡಳಿತ ಮಂಡಳಿ ಸದಸ್ಯರು ಹಾಜರಿದ್ದರು.

ಜ.17ಕ್ಕೆ, ಸರಗೂರಲ್ಲಿ ಪ್ರಥಮ ಕನ್ನಡ ಸಾಹಿತ್ಯ ಸಮ್ಮೇಳನ

ಸರಗೂರು, ನ.19– ನೂತನ ತಾಲೂಕು ರಚನೆಯಾದ ಬಳಿಕ ಇದೇ ಪ್ರಥಮ ಬಾರಿಗೆ ಸರಗೂರಲ್ಲಿ ಜ.17ರಂದು ಪ್ರಥಮ ಕನ್ನಡ ಸಾಹಿತ್ಯ ಸಮ್ಮೇಳನ ಆಯೋಜಿಸಲು ತೀರ್ಮಾನಿಸಲಾಗಿದೆ ಎಂದು ಶಾಸಕ ಅನಿಲ್ ತಿಳಿಸಿದರು.

ಹೆಚ್.ಡಿ.ಕೋಟೆ ಆಡಳಿತಸೌಧದಲ್ಲಿ ನಡೆದ ಸರಗೂರು ತಾಲೂಕಿನ ಕನ್ನಡಪರ ಸಂಘಟನೆಗಳ ಮುಖಂಡರು ಹಾಗೂ ತಾಲೂಕು ಮಟ್ಟದ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕನ್ನಡ ಸಾಹಿತ್ಯ ಸಮ್ಮೇಳನ ಸೇರಿದಂತೆ ಎಲ್ಲಾ ಮಹನೀಯರ ಜಯಂತಿ ಕಾರ್ಯಕ್ರಮ, ಸರ್ಕಾರದ ಅಭಿವೃದ್ಧಿ ಕಾರ್ಯಗಳನ್ನು ಜನರಿಗೆ ತಲುಪಿಸುವಲ್ಲಿ ಪ್ರಾಮಾಣಿಕವಾಗಿ ಕಾರ್ಯ ನಿರ್ವಹಿಸಿದ್ದೇನೆ. ಜನಪರ ಆಡಳಿತ ನನ್ನ ಪರಿಕಲ್ಪನೆ ಆಗಿದೆ. ಈ ಹಿಂದೆಯೂ ತಾಲೂಕು ಹಾಗೂ ಜಿಲ್ಲಾ ಮಟ್ಟದ ಕನ್ನಡ ಸಾಹಿತ್ಯ ಸಮ್ಮೇಳನ ಯಶಸ್ವಿಯಾಗಿ ನಡೆಸಿದ್ದೇವೆ. ವಿವಿಧ ಸಮಿತಿ ರಚನೆ ಮಾಡಿ ಎಲ್ಲರ ಸಹಕಾರದಲ್ಲಿ ತಾಲೂಕು ಅಧ್ಯಕ್ಷರು ಸಮ್ಮೇಳನ ಸಂಘಟಿಸಲಿ. ತಾವು ಅಗತ್ಯ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಮೈಸೂರು ಜಿಲ್ಲೆ ನಿಕಟಪೂರ್ವ ಕಸಾಪ ಅಧ್ಯಕ್ಷ ಡಾ.ವೈ.ಡಿ.ರಾಜಣ್ಣ ಮಾತನಾಡಿ, ಸಮಾಜದ ಅಭಿವೃದ್ಧಿ ಅಂದರೆ ರಸ್ತೆ, ಕಟ್ಟಡ, ಕಾರ್ಖಾನೆ ಅಷ್ಟೇ ಅಲ್ಲ. ಅದರಾಚೆಗೆ ಅಲ್ಲಿನ ಜನರಿಗೆ ಸಾಹಿತ್ಯ, ಸಂಸ್ಕೃತಿಯ ಅಭಿರುಚಿ ಜಾಗೃತಗೊಳಿಸುವುದು. ಇದು ನಮ್ಮ ನಾಡು ನಮ್ಮ ದೇಶ ಎನ್ನುವ ಭಾವನೆ ನಮ್ಮ ಮಕ್ಕಳಲ್ಲಿ ಬಿತ್ತುವುದರ ಮೂಲಕ ಕನ್ನಡ ಪ್ರೀತಿ, ನಾಡಿನ ಬಗ್ಗೆ ಅಭಿಮಾನ ಮೂಡಿಸುವ ಪ್ರಜ್ಞೆ ಜಾಗೃತಗೊಳಿಸುವುದು ಸಮ್ಮೇಳನ ಆಯೋಜನೆಯ ಹಿನ್ನೆಲೆ ಆಗಿದೆ. ಅಲ್ಲಿನ ಪ್ರತಿಭಾನ್ವೇಷಣೆ, ತಾಲೂಕಿನ ವಿಶೇಷತೆ ಬಗ್ಗೆ ಬೆಳಕು ಚೆಲ್ಲುವ ಪ್ರಯತ್ನ ಆಗಲಿದೆ. ಸಮ್ಮೇಳನಾಧ್ಯಕ್ಷರ ಆಯ್ಕೆ ಸರಗೂರು ತಾಲೂಕಿಗೆ ಸಂಬಂಧಿಸಿದ ಚಾರಿತ್ರಿಕ ಜಾನಪದ ಸಾಹಿತ್ಯ ಸಂಸ್ಕೃತಿ ಹಾಗೂ ಸಾಧಕರ ಪರಿಚಯ ಹಾಗೂ ಅಭಿನಂದನೆ ಹಾಗೂ ಕನ್ನಡ ನಾಡು ನುಡಿಗೆ ಸಂಬಂಧಿಸಿದ ಮೆರವಣಿಗೆ ಮೂಲಕ ಸಮ್ಮೇಳನದ ಉದ್ದೇಶದ ಬಗ್ಗೆ ಮನವರಿಕೆ ಮಾಡಿಕೊಟ್ಟರು.



ಸಭೆಯಲ್ಲಿ ಶಾಸಕ ಅನಿಲ್ ಮಾತನಾಡಿದರು.

ತಹಸೀಲ್ದಾರ್ ಮೋಹನ್ ಕುಮಾರಿ, ಸಾಹಿತ್ಯ ಸಮ್ಮೇಳನದ ಸಿದ್ಧತೆಗಳ ರೂಪುರೇಷೆಗಳ ಕುರಿತು ಮಾಹಿತಿ ನೀಡಿದರು. ಸರಗೂರು ಕಸಾಪ ಅಧ್ಯಕ್ಷ ಕೆಂಡಗಣ್ಣಸ್ವಾಮಿ, ಕೋಟೆ ಕಸಾಪ ಅಧ್ಯಕ್ಷ ಕನ್ನಡ ಪ್ರಮೋದ್ ಮಾತನಾಡಿದರು.


ತಾಲೂಕು ಕಸಾಪ ಗೌರವ ಕಾರ್ಯದರ್ಶಿ ನಿಂಗರಾಜು, ತಾಪಂ ಇಓ ಪ್ರೇಮ್ ಕುಮಾರ್, ಪಪಂ ಮುಖ್ಯಾಧಿಕಾರಿ ಸಂತೋಷ್ ಕುಮಾರ್, ಅಧ್ಯಕ್ಷೆ ರಾಧಿಕಾ, ಉಪಾಧ್ಯಕ್ಷ ಶಿವಕುಮಾರ್, ಸದಸ್ಯರಾದ ಶ್ರೀನಿವಾಸ್, ನೂರಾಳಸ್ವಾಮಿ, ಚೆಲುವಕೃಷ್ಣ, ಜಿಪಂ ಮಾಜಿ ಸದಸ್ಯರಾದ ಚಿಕ್ಕವೀರ ನಾಯಕ, ಮಹೇಶ್, ಪುಟ್ಟಣ್ಣ ಹಾಗೂ ಕನ್ನಡ ಪರ ಸಂಘಟನೆಗಳ ಮುಖಂಡರು, ಇಲಾಖಾಧಿಕಾರಿಗಳು, ಇದ್ದರು.

ಮೈಸೂರು ಜಿಲ್ಲೆ ಬಯಲು ಶೌಚ ಮುಕ್ತಗೊಳಿಸಲು ಪಣ ತೊಡಿ

● ಅಧಿಕಾರಿಗಳಿಗೆ ಜಿಪಂ ಸಿಇಒ ಗಾಯತ್ರಿ ಸಲಹೆ ● ಬಯಲು ಶೌಚದಿಂದ ಆಗುವ ದುಷ್ಪರಿಣಾಮದ ಜಾಗೃತಿಗೂ ಕರೆ

ಮೈಸೂರು, ನ.19(ಎಂಟಿವೈ)– ಮೈಸೂರು ಜಿಲ್ಲೆಯನ್ನು ಬಯಲು ಶೌಚ ಮುಕ್ತ ಜಿಲ್ಲೆಯಾಗಿಸುವ ನಿಟ್ಟಿನಲ್ಲಿ ಸಾರ್ವಜನಿಕರು ಸಹಕರಿಸಬೇಕು ಎಂದು ಜಿ.ಪಂ. ಸಿಇಓ ಕೆ.ಎಂ.ಗಾಯತ್ರಿ ಮನವಿ ಮಾಡಿದ್ದಾರೆ.

ಮೈಸೂರು ಜಿ.ಪಂ ಸಭಾಂಗಣದಲ್ಲಿ ಸ್ವಚ್ಛ ಭಾರತ್ ಮಿಷನ್, ಜಿಪಂ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಸಹಯೋಗದೊಂದಿಗೆ ಮಂಗಳವಾರ 'ವಿಶ್ವ ಶೌಚಾಲಯ ದಿನಾಚರಣೆ' ಅಂಗವಾಗಿ ಆಯೋಜಿಸಿದ್ದ ಶೌಚಾಲಯ ಬಳಸುವ ಜಾಗೃತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಶೌಚಾಲಯ ಬಳಕೆ ಮಹತ್ವದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಬೇಕಾಗಿದೆ. ಅಗತ್ಯವಿರುವ ಕಡೆ ಹೊಸದಾಗಿ ಶೌಚಾಲಯ ನಿರ್ಮಿಸಲು ಕ್ರಮ ಕೈಗೊಳ್ಳಬೇಕು. ಗ್ರಾಮೀಣ ಪ್ರದೇಶದಲ್ಲಿ ಹಲವೆಡೆ ಇನ್ನು ಬಯಲು ಶೌಚ ವ್ಯವಸ್ಥೆ ಇರುವುದು ತಿಳಿದು ಬಂದಿದೆ. ಬಯಲು ಶೌಚ ಮುಕ್ತ ಜಿಲ್ಲೆಯಾಗಿಸುವ ಸವಾಲು ಜಿಲ್ಲಾಡಳಿತದ ಮುಂದೆ ಇದೆ. ಅದನ್ನು ಪರಿಹರಿಸಲು ವಿವಿಧ ಇಲಾಖೆಗಳು ಪಣ ತೊಡಬೇಕು. ಇದರೊಂದಿಗೆ ಶಿಕ್ಷಣ, ಆರೋಗ್ಯ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ವಿವಿಧ ಕಾರ್ಯಕ್ರಮದ ಮೂಲಕ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದು ಸಲಹೆ ನೀಡಿದರು.



ಮೈಸೂರಿನ ಜಿಪಂ ಸಭಾಂಗಣದಲ್ಲಿ ಮಂಗಳವಾರ ವಿಶ್ವ ಶೌಚಾಲಯ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಶೌಚಾಲಯ ಬಳಕೆ ಕುರಿತ ಜಾಗೃತಿ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ಗಿಡಕ್ಕೆ ನೀರೆರೆಯುವ ಮೂಲಕ ಉದ್ಘಾಟಿಸಿದರು.

ಅಗತ್ಯವಿರುವೆಡೆ ಶೌಚಾಲಯ: ನೈರ್ಮಲ್ಯ ಕಾಪಾಡಲು ಎಲ್ಲರೂ ಶೌಚಾಲಯ ಬಳಸುವುದು ಅನಿವಾರ್ಯ. ಜಾಗತಿಕ ತಾಪಮಾನದ ಬದಲಾವಣೆಯಲ್ಲಿ ಶೌಚಾಲಯ ಬಳಕೆಯೂ ಮುಖ್ಯವಾಗಿದೆ. ಶೌಚಾಲಯ ಬಳಕೆ ಮಾಡುವುದು ಗೌರವದ ಪ್ರಶ್ನೆಯೂ ಆಗಿದೆ. ಹೀಗಾಗಿ ಜಿಲ್ಲೆ, ತಾಲೂಕು ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕಾರ್ಯಕ್ರಮ ನಡೆಸುವ ಮೂಲಕ ಅರಿವು ಮೂಡಿಸಲಾಗುತ್ತದೆ. ಶೌಚಾಲಯ ನಿರ್ಮಾಣಕ್ಕೆ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದ್ದು, ಬಳಿಕ ಪಿಡಿಒಗಳು ಮನೆಗಳಿಗೆ ತೆರಳಿ ಪರಿಶೀಲಿಸಿ, ಅರ್ಹರಿಗೆ ಶೌಚಾಲಯ ನಿರ್ಮಿಸಿಕೊಡಲು ಕ್ರಮ ಕೈಗೊಳ್ಳಲಿದ್ದಾರೆ ಎಂದರು.

ಗ್ರಾಮೀಣ ಪ್ರದೇಶಗಳಲ್ಲಿ ಶೌಚಾಲಯ ಇದ್ದರೂ ಅದನ್ನು ಬಳಸುತ್ತಿಲ್ಲ. ಇದಕ್ಕೆ ನೀರಿನ ಸಮಸ್ಯೆ ಕಾರಣ ಎಂದು ತಿಳಿದು ಬಂದಿದೆ. ಇದನ್ನು ಪರಿಹರಿಸಿದರೆ ಶೌಚಾಲಯ ಬಳಕೆ ಹೆಚ್ಚಾಗಲಿದೆ. ಮನ್ರೇಗಾ ಯೋಜನೆ ಮೂಲಕ ಶಾಲೆಗಳಲ್ಲಿ ಶೌಚಾಲಯ ನಿರ್ಮಿಸಲಾಗುತ್ತಿದೆ. ಬಿಇಒಗಳು ವರದಿ ನೀಡಿದರೆ ಶೌಚಾಲಯ ನಿರ್ಮಾಣಕ್ಕೆ ಕ್ರಮಕೈಗೊಳ್ಳಲಾಗುವುದು. ಆರೋಗ್ಯ ಇಲಾಖೆ ಮೂಲಕ ಬಯಲು ಶೌಚಾಲಯದಿಂದ ಆಗುವ ದುಷ್ಪರಿಣಾಮದ ಬಗ್ಗೆ ಅರಿವು ಮೂಡಿಸಬೇಕು. ಶೌಚಾಲಯದ ಸ್ವಚ್ಛತೆ ಕಾಪಾಡುವ ಬಗ್ಗೆ ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರು ಅರಿವು ಮೂಡಿಸಬೇಕು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಮೂಲಕ ಮಹಿಳೆಯರಲ್ಲಿ ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ಇದಕ್ಕೂ ಮುನ್ನ ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಎಲ್ಲರೂ ಶೌಚಾಲಯ ಬಳಸುವುದರಿಂದ ತಮ್ಮ ಆರೋಗ್ಯದೊಂದಿಗೆ ಪರಿಸರ ನೈರ್ಮಲ್ಯ ಕಾಪಾಡಿಕೊಳ್ಳಬಹುದಾಗಿದೆ. ಬಯಲು ಶೌಚದಿಂದಾಗಿ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರಲಿದೆ. ಈ ಹಿನ್ನೆಲೆಯಲ್ಲಿ ಕಡ್ಡಾಯವಾಗಿ ಶೌಚಾಲಯ ಬಳಸುವ ಮನಸ್ಥಿತಿ ಎಲ್ಲರಲ್ಲೂ ಮೂಡಬೇಕು. ಗ್ರಾಮೀಣ ಪ್ರದೇಶದ ಶಾಲಾ–ಕಾಲೇಜು ವಿದ್ಯಾರ್ಥಿಗಳು ತಮ್ಮ ಮನೆಯಲ್ಲಿ ಶೌಚಾಲಯ ಬಳಕೆ ಬಗ್ಗೆ ಜಾಗೃತಿ ಮೂಡಿಸಬೇಕು ಎಂದರು.

ಇದೇ ವೇಳೆ ಶೌಚಾಲಯದ ಬಳಕೆ, ಸ್ವಚ್ಛತೆ ಹಾಗೂ ಪರಿಸರ ಸಂರಕ್ಷಣೆ ಕುರಿತಂತೆ ಪ್ರತಿಜ್ಞಾವಿಧಿ ಬೋಧಿಸಲಾಯಿತು. ಕಾರ್ಯಕ್ರಮದಲ್ಲಿ ಜಿ.ಪಂ ಉಪ ಕಾರ್ಯದರ್ಶಿ ಕೃಷ್ಣರಾಜು, ಹಿರಿಯ ಪತ್ರಕರ್ತ ಸಿ.ಕೆ.ಮಹೇಂದ್ರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ವಿವಿಧ ಶಾಲೆಗಳ ವಿದ್ಯಾರ್ಥಿಗಳು, ಶಿಕ್ಷಕರು ಪಾಲ್ಗೊಂಡಿದ್ದರು.

ರಾಜ್ಯ ವಿಧಿ ವಿಜ್ಞಾನ ಪ್ರಯೋಗಾಲಯಕ್ಕೆ ಮೈಸೂರು ಜೆಎಸ್‌ಎಸ್ ಕಾನೂನು ವಿದ್ಯಾರ್ಥಿಗಳ ಭೇಟಿ

ಮೈಸೂರು, ನ.19(ಜಿಎ)–ಮೈಸೂರಿನ ಜೆಎಸ್‌ಎಸ್ ಕಾನೂನು ಕಾಲೇಜಿನ ಅಂತಿಮ ವರ್ಷದ ಕಾನೂನು ವಿದ್ಯಾರ್ಥಿಗಳು ಪ್ರೊ.ಜಿ.ಅಸ್ಮತುನ್ನಿಸಾ ಅವರ ನೇತೃತ್ವದಲ್ಲಿ ಸೋಮವಾರ ಬೆಂಗಳೂರಿನ ರಾಜ್ಯ ವಿಧಿವಿಜ್ಞಾನ ಪ್ರಯೋಗಾಲಯಕ್ಕೆ (SFSL) ಭೇಟಿ ನೀಡಿ, ಮಾಹಿತಿ ಪಡೆದುಕೊಂಡರು.

ವಿದ್ಯಾರ್ಥಿಗಳು ಪ್ರಯೋಗಾಲಯದಲ್ಲಿ ವಿಷ ಶಾಸ್ತ್ರ, ಸಾಕ್ಷ್ಯ ಸಂಗ್ರಹಣೆಯ ಕಾರ್ಯ ವಿಧಾನಗಳ ಬಗ್ಗೆ ಮಾಹಿತಿ ಪಡೆದು ನಂತರ ಡಿಎನ್‌ಎ ಪ್ರೊಫೈಲಿಂಗ್ ಮತ್ತು ಪಿತೃತ್ವ ಪರೀಕ್ಷೆ, ಜೀವಶಾಸ್ತ್ರ, ರಸಾಯನಶಾಸ್ತ್ರ ಮತ್ತು ಭೌತಶಾಸ್ತ್ರ ವಿಭಾಗಗಳು ವಿಧಿ ವಿಜ್ಞಾನ ತನಿಖೆಗಳಲ್ಲಿ ತಮ್ಮ ಪಾತ್ರಗಳನ್ನು ಹೇಗೆ ನಿರ್ವಹಿಸುತ್ತದೆ ಎಂದು ಅರಿತುಕೊಂಡರು.

ಹಾಗೇ ಕಂಪ್ಯೂಟರ್ ಮತ್ತು ಆಡಿಯೋ –ವಿಡಿಯೋ ಫೋರೆನ್ಸಿಕ್ಸ್ ತಂಡವನ್ನು ಭೇಟಿ ಮಾಡಿ ಕಾರ್ಯ ಚಟುವಟಿಕೆಗಳ ಬಗ್ಗೆ ಮಾಹಿತಿ ಕಲೆ ಹಾಕಿದರು. ಈ ವೇಳೆ ಪ್ರಯೋಗಾಲಯದಲ್ಲಿ ಡಿಜಿಟಲ್ ಸಾಕ್ಷ್ಯವನ್ನು ವಿಶ್ಲೇಷಿಸಲು ಸುಧಾರಿತ ವಿಧಾನಗಳನ್ನು ಪ್ರದರ್ಶಿಸಿದರು. ವಿದ್ಯಾರ್ಥಿಗಳಿಗೆ ಭೇಟಿಯು ಫೋರೆನ್ಸಿಕ್ ವಿಜ್ಞಾನದ ಪ್ರಾಯೋಗಿಕ ತಿಳುವಳಿಕೆಯನ್ನು ಒದಗಿಸಿ, ಅವರ ಕಾನೂನು ಅಧ್ಯಯನಗಳೊಂದಿಗೆ ಹೊಂದಾಣಿಕೆ ಮತ್ತು ನ್ಯಾಯಶಾಸ್ತ್ರದ ತನಿಖೆಗಳಿಗೆ ಆಧಾರವಾಗಿರುವ ಸಹಯೋಗದ ಪ್ರಯತ್ನಗಳ ಬಗ್ಗೆ ಅವರ ಅರಿವನ್ನು ಹೆಚ್ಚಿಸಿತು.

ಇಂದು ಬಾರ್ ಬಂದ್ ಇಲ್ಲ

ಬೆಂಗಳೂರು, ನ.19– ನಾಳೆ ರಾಜ್ಯಾದ್ಯಂತ ಬಾರ್ ಬಂದ್ ಇಲ್ಲ. ಬಂದ್ ನಿರ್ಧಾರವನ್ನು ಬಾರ್ ಅಸೋಸಿಯೇಷನ್ ವಾಪಾಸ್ ಪಡೆದುಕೊಂಡಿದೆ. ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಬಾರ್ ಮಾಲೀಕರ ಸಂಘ ನಾಳೆ (ನ.20) ರಾಜ್ಯಾದ್ಯಂತ ಬಾರ್ ಬಂದ್ ಮಾಡಿ ಪ್ರತಿಭಟನೆಗೆ ಕರೆ ನೀಡಿತ್ತು.

ಆದರೆ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಬಾರ್ ಮಾಲೀಕರ ಸಂಘದ ಪದಾಧಿಕಾರಿಗಳ ಸಂಧಾನ ಸಭೆ ಯಶಸ್ವಿಯಾಗಿದ್ದು, ಬಾರ್ ಬಂದ್ ನಿರ್ಧಾರ ಹಿಂತೆಗೆದುಕೊಳ್ಳಲಾಗಿದೆ.

ಬಾರ್ ಅಸೋಸಿಯೇಷನ್ ವಿಭಾಗೀಯ ಅಧ್ಯಕ್ಷ ಕರುಣಾಕರ ಹೆಗಡೆ ನೇತೃತ್ವದ ನಿಯೋಗ ಇಂದು ಗೃಹ ಕಚೇರಿ ಕೃಷ್ಣಾದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದು, ಮಾತುಕತೆ ಬಳಿಕ ನಾಳೆ ಮದ್ಯಮಾರಾಟ ಬಂದ್, ಬಾರ್ ಬಂದ್ ಇಲ್ಲ ಎಂದು ಅಧಿಕೃತವಾಗಿ ಮಾಹಿತಿ ಹೊರಬಿದ್ದಿದೆ.

ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ

ಮೈಸೂರು, ನ 19–ಮೈಸೂರಿನ ಲಕ್ಷ್ಮೀಪುರಂನ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ನ.21ರಂದು ಬೆಳಗ್ಗೆ 10ರಿಂದ ರಾತ್ರಿ 8 ಗಂಟೆಯವರೆಗೆ ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ದೂ. 0821–4259259 ಸಂಪರ್ಕಿಸಬಹುದು.

ನಟ ದರ್ಶನ್‌ಗೆ ಜಾಮೀನು ಪ್ರಶ್ನಿಸಿ ಸುಪ್ರೀಂಕೋರ್ಟ್‌ಗೆ ಶೀಘ್ರ ಮೇಲ್ಮನವಿ

ಪೊಲೀಸ್ ಆಯುಕ್ತ ದಯಾನಂದ ಮಾಹಿತಿ

ಬೆಂಗಳೂರು, ನ.19– ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಮಧ್ಯಂತರ ಜಾಮೀನು ಪಡೆದಿರುವ ನಟ ದರ್ಶನ್ ತೂಗುದೀಪ ಅವರಿಗೆ ಬಿಗ್ ಶಾಕ್ ನೀಡಲು ಬೆಂಗಳೂರು ಪೊಲೀಸರು ಸಿದ್ಧತೆ ನಡೆಸಿದ್ದಾರೆ.

ದರ್ಶನ್‌ಗೆ ಮಧ್ಯಂತರ ಜಾಮೀನು ಪ್ರಶ್ನಿಸಿ ಸುಪ್ರೀಂಕೋರ್ಟ್‌ನಲ್ಲಿ ಶೀಘ್ರವೇ ಮೇಲ್ಮನವಿ ಸಲ್ಲಿಸಲಾಗುವುದು ಎಂದು ಬೆಂಗಳೂರು ಪೊಲೀಸ್ ಆಯುಕ್ತ ಬಿ. ದಯಾನಂದ ಅವರು ಮಂಗಳವಾರ ತಿಳಿಸಿದ್ದಾರೆ.

ಬೆನ್ನುಮೂಳೆಯ ಶಸ್ತ್ರಚಿಕಿತ್ಸೆಗೆ ಒಳಗಾಗಲು ಹೈಕೋರ್ಟ್‌ನಿಂದ ವೈದ್ಯಕೀಯ ಕಾರಣಗಳಿಗಾಗಿ ಆರು ವಾರಗಳವರೆಗೆ ಮಧ್ಯಂತರ ಜಾಮೀನು ಪಡೆದಿರುವ 47 ವರ್ಷದ ನಟ ದರ್ಶನ್, ಅಕ್ಟೋಬರ್ 30ರಂದು ಬಳ್ಳಾರಿ ಜೈಲಿನಿಂದ ಬಿಡುಗಡೆಯಾಗಿದ್ದರು.

ಆದಷ್ಟು ಬೇಗ ನಾವು ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸುತ್ತೇವೆ ಎಂದು ಬಿ ದಯಾನಂದ ಅವರು ಸುದ್ದಿಗಾರರ ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ನಟ ದರ್ಶನ್ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲು ಅಗತ್ಯ ದಾಖಲೆ ಕಾಗದ ಪತ್ರಗಳನ್ನು ಸಿದ್ಧಪಡಿಸಿಕೊಳ್ಳಲಾಗುತ್ತಿದೆ. ಮುಖ್ಯವಾಗಿ ಚಾರ್ಜ್‌ಶೀಟ್ ಅನ್ನು ಭಾಷಾಂತರ ಮಾಡುವ ಕೆಲಸ ನಡೆದಿದೆ. ಶೀಘ್ರದಲ್ಲಿಯೇ ಮೇಲ್ಮನವಿ ಸಲ್ಲಿಸಲಾಗುತ್ತದೆ ಎಂದು ಆಯುಕ್ತರು ತಿಳಿಸಿದ್ದಾರೆ.

ಕನಕದಾಸರ ಆದರ್ಶ ನಮ್ಮೆಲ್ಲರಿಗೂ ದಾರಿದೀಪ

ಕುರುಬರ ಸಂಘದ ಮಾಜಿ ರಾಜ್ಯಾಧ್ಯಕ್ಷ ಸುಬ್ರಹ್ಮಣ್ಯ ಅಭಿಮತ



ಮೈಸೂರು, ನ.19– ಸಮಾಜದ ಮೇಲು, ಕೀಳು, ಜಾತಿ, ಮತ ಸಿದ್ಧಾಂತದ ವಿರುದ್ಧ ಪ್ರತಿಭಟನಾ ನೆಲೆಗಟ್ಟಿನಲ್ಲಿ ದಾಸ ಸಾಹಿತ್ಯಕ್ಕೆ ವೈಚಾರಿಕ ಪ್ರಭೆ ತಂದವರು ಕನಕದಾಸರು. ಅವರು ಸಾರಿದ ತತ್ವಾದರ್ಶಗಳು ಇಂದಿಗೂ ಪ್ರಸ್ತುತ. ಅವರ ಆದರ್ಶ ನಮಗೆಲ್ಲರಿಗೂ ದಾರಿದೀಪವಾಗಲಿ ಎಂದು ಕರ್ನಾಟಕ ಪ್ರದೇಶ ಕುರುಬರ ಸಂಘದ ಮಾಜಿ ಅಧ್ಯಕ್ಷ ಬಿ. ಸುಬ್ರಹ್ಮಣ್ಯ ಅಭಿಪ್ರಾಯಪಟ್ಟರು.

ಮೈಸೂರು ಜಿಲ್ಲೆ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕಮರಹಳ್ಳಿ ಗ್ರಾಮದಲ್ಲಿ ನಡೆದ ಶ್ರೀ ಭಕ್ತ ಕನಕದಾಸರ 537ನೇ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಇದೇ ವೇಳೆ ಕನಕದಾಸರ ಕಿರುಹೊತ್ತಿಗೆಯನ್ನೂ ಬಿಡುಗಡೆಗೊಳಿಸಲಾಯಿತು.

ಕನಕದಾಸರು ಕನ್ನಡ ಸಾಂಸ್ಕೃತಿಕ ಲೋಕದಲ್ಲಿ ಮಹತ್ವದ ಸ್ಥಾನ ಪಡೆದಿದ್ದಾರೆ. ಅನುಭಾವಿ, ತತ್ವಜ್ಞಾನಿ, ಜ್ಞಾನಿ, ಸಂಸ್ಕೃತಿ ಚಿಂತಕರು, ಸಾಮಾಜಿಕ ಕಾಳಜಿಯುಳ್ಳವರು ಹೌದು. ಕನ್ನಡ ಸಂಸ್ಕೃತಿಗೆ ತಮ್ಮದೇ ಆದ ವಿಶಿಷ್ಟ ಕೊಡುಗೆ ನೀಡಿರುವ ಕನಕದಾಸರು ಎಲ್ಲರಿಗಿಂತ ಭಿನ್ನವಾದ ಸಾಂಸ್ಕೃತಿಕ ಚಿಂತನೆಗಳನ್ನು, ತಾತ್ವಿಕ ವಿಚಾರಗಳನ್ನು ಕನ್ನಡಿಗರಿಗೆ ನೀಡಿದ್ದಾರೆ. ಬೀರಪ್ಪ–ಬಚ್ಚಮ್ಮ ದಂಪತಿ ಪುತ್ರನಾಗಿ ಬಾಡ ಗ್ರಾಮ ದಲ್ಲಿ ಜನಿಸಿದ ಇವರು ತಮ್ಮ ಕೀರ್ತನೆಗಳಿಂದಲೇ ಸಮ ಸಮಾಜದ ನಿರ್ಮಾಣಕ್ಕಾಗಿ ಶ್ರಮಿಸಿದರು. ಕುಲ ಕುಲ ಕುಲವೆಂದು ಹೊಡೆದಾಡದಿರಿ ನಿಮ್ಮ ಕುಲದ ನೆಲೆಯನೇನಾದರೂ ಬಲ್ಲಿರಾ ಬಲ್ಲಿರಾ ಎಂಬ ಕೀರ್ತನೆಯೇ ಇದಕ್ಕೆ ಸಾಕ್ಷಿ ಎಂದು ಹೇಳಿದರು.

ಆದರೆ ಇತ್ತೀಚಿನ ದಿನಗಳಲ್ಲಿ ಮಾನವೀಯ ಮೌಲ್ಯಗಳು ಕಡಿಮೆಯಾಗುತ್ತಿವೆ. ಮೇಲು–ಕೀಳು, ಬಡವ ಬಲ್ಲಿದ, ಜಾತಿ ಹೆಸರಿನಲ್ಲಿ ಮನುಷ್ಯ–ಮನುಷ್ಯನ ನಡುವೆ ದ್ವೇಷ ಸಾಧಿಸುವುದನ್ನು ನೋಡುತ್ತಿದ್ದೇವೆ. ಇಂತಹ ಕಾಲಘಟ್ಟದಲ್ಲಿ ಕನಕರ ಕೀರ್ತನೆ ಮತ್ತು ಸಾಹಿತ್ಯಗಳು ನಮಗೆ ಮಾರ್ಗದರ್ಶನವಾಗಬೇಕು. ಪರಸ್ಪರ ವ್ಯಕ್ತಿ ಗೌರವ ನೀಡುವುದರ ಮೂಲಕ ಸಮ ಸಮಾಜ ನಿರ್ಮಾಣ ಮಾಡುವ ನಿಲುವು ನಮ್ಮದಾಗಬೇಕು, ಅದಕ್ಕಾಗಿ ಮೊದಲು ಮಾನವರಾಗಬೇಕು ಎಂದು ಸಲಹೆ ನೀಡಿದರು.

ಇದೇ ವೇಳೆ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರಾದ ಬೀರಿಹುಂಡಿ ಬಸವಣ್ಣ ಮಾತನಾಡಿ, ಐದುನೂರು ವರ್ಷಗಳ ಹಿಂದೆಯೇ ಕುಲ ಕುಲ ಎಂದು ಹೊಡೆದಾಡದಿರಿ... ಎಂದು ವರ್ಣಾಶ್ರಮ ವ್ಯವಸ್ಥೆ ಸೃಷ್ಟಿಸಿರುವ ಜಾತಿ ನರಕವನ್ನು ದಿಟ್ಟತನದಿಂದ ಪ್ರಶ್ನಿಸಿ ಆತ್ಮಾವಲೋಕನಕ್ಕೆ ಕರೆಕೊಟ್ಟ ಸಂತ ಕನಕದಾಸರನ್ನು ಇಂದು ನೆನೆಯೋಣ. ಅವರು ತೋರಿದ ದಾರಿಯಲ್ಲಿ ಸಾಗೋಣ ಎಂದರು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಹಾಲಿ ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

ಬೆಳಗಾವಿಯಲ್ಲಿ ಡಿ.9ರಿಂದ ಚಳಿಗಾಲದ ಅಧಿವೇಶನ



ಬೆಂಗಳೂರು, ನ.19– ರಾಜ್ಯ ವಿಧಾನಮಂಡಲದ ಚಳಿಗಾಲದ ಅಧಿವೇಶನವು ಡಿ.9 ರಿಂದ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಸಲು ಸರಕಾರ ನಿರ್ಧರಿಸಿದೆ.

ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಇಲಾಖೆಯು ಅಧಿವೇಶನ ಕರೆಯುವ ಸಂಬಂಧ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರಿಗೆ ಕಡತ ರವಾನಿಸಿದ್ದು, ರಾಜ್ಯಪಾಲರು ಒಪ್ಪಿಗೆ ಸೂಚಿಸಿದ್ದಾರೆ.

ಈ ಹಿಂದಿನ ಸಚಿವ ಸಂಪುಟ ಸಭೆಯಲ್ಲಿ ಅಧಿವೇಶನದ ದಿನಾಂಕ, ಸ್ಥಳ ನಿಗದಿ ಮಾಡಿ ರಾಜ್ಯಪಾಲರಿಗೆ ಶಿಫಾರಸ್ಸು ಮಾಡುವ ಅಧಿಕಾರವನ್ನು ಮುಖ್ಯಮಂತ್ರಿಗೆ ನೀಡಲಾಗಿತ್ತು.

ಅದರಂತೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆಯಂತೆ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಇಲಾಖೆಯು ಡಿ.9 ರಿಂದ 20ರವರೆಗೆ ವಿಧಾನಮಂಡಲದ ಉಭಯ ಸದನಗಳ ಅಧಿವೇಶನವನ್ನು ಕರೆಯುವಂತೆ ರಾಜ್ಯಪಾಲರಿಗೆ ಕಡತ ಕಳುಹಿಸಿಕೊಟ್ಟಿದ್ದರು. ಇದೀಗ ಕಡತಕ್ಕೆ ಗೆಹ್ಲೋಟ್ ಅವರು ಸಹಿ ಮಾಡಿದ್ದಾರೆನ್ನಲಾಗಿದ್ದು, ಡಿಸೆಂಬರ್ 9ರಂದು ಬೆಳಿಗ್ಗೆ 11 ಗಂಟೆಗೆ ಅಧಿವೇಶನ ಆರಂಭವಾಗುತ್ತಿದೆ.

ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನಕ್ಕೆ ಅಂತಿಮ ದಿನಾಂಕ ನಿಗದಿಯಾಗುತ್ತಿದ್ದಂತೆ ಕನಿಷ್ಠ ಬೆಂಬಲ ಬೆಲೆ ನಿಗದಿ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರೈತರು ಸಜ್ಜಾಗುತ್ತಿದ್ದಾರೆ. ಪ್ರತಿಭಟನೆಯಲ್ಲಿ 1 ಲಕ್ಷಕ್ಕೂ ಹೆಚ್ಚು ರೈತರು ಭಾಗವಹಿಸುವ ನಿರೀಕ್ಷೆ ಇದೆ.

ಮಂಡ್ಯದಿಂದ 10 ಸಾವಿರಕ್ಕೂ ಹೆಚ್ಚು ರೈತರು ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಏಕೀಕೃತ ಕರ್ನಾಟಕ ರಾಜ್ಯ ರೈತಸಂಘದ ಸಂಸ್ಥಾಪಕ ಅಧ್ಯಕ್ಷ ಪಚ್ಚೆ ನಂಜುಂಡಸ್ವಾಮಿ ತಿಳಿಸಿದ್ದಾರೆ.

ವಕ್ಫ್ ಆಸ್ತಿ ವಿವಾದ: ನ.21, 22ರಂದು ರಾಜ್ಯಾದ್ಯಂತ ಬಿಜೆಪಿ ಪ್ರತಿಭಟನೆ

ಬೆಂಗಳೂರು, ನ.19– ವಕ್ಫ್ ಮಂಡಳಿಯಿಂದ ರೈತರ ಭೂಮಿ ಒತ್ತುವರಿ ವಿರೋಧಿಸಿ ನವೆಂಬರ್ 21 ಮತ್ತು 22 ರಂದು ಬಿಜೆಪಿ 'ನಮ್ಮ ಭೂಮಿ, ನಮ್ಮ ಹಕ್ಕು' ಘೋಷಣೆಯಡಿ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿ ಹಾಗೂ ತಹಸೀಲ್ದಾರ್ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಮಾಜಿ ಉಪ ಮುಖ್ಯಮಂತ್ರಿ ಡಾ. ಸಿ.ಎನ್.ಅಶ್ವತ್ಥನಾರಾಯಣ ಸುದ್ದಿಗಾರರಿಗೆ ತಿಳಿಸಿದರು.

ಪ್ರತಿಭಟನೆ ವೇಳೆಯಲ್ಲಿ ತೊಂದರೆಗೀಡಾದ ರೈತರಿಂದ ದೂರು ಹಾಗೂ ಮಾಹಿತಿಯನ್ನು ಸ್ವೀಕರಿಸಲಾಗುವುದು. ಅಹವಾಲು ಸ್ವೀಕಾರಕ್ಕಾಗಿ ರೈತರು, ವಕೀಲರು ಮತ್ತು ಪ್ರಮುಖ ಪ್ರತಿನಿಧಿಗಳನ್ನೊಳಗೊಂಡ ಐವರು ಸದಸ್ಯರ ತಂಡವೊಂದನ್ನು ಎಲ್ಲಾ ಜಿಲ್ಲೆಗಳಲ್ಲಿ ರಚಿಸಲಾಗಿದೆ. ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಪ್ರತಿಭಟನೆ ನಡೆಯಲಿದೆ ಎಂದು ತಿಳಿಸಿದರು..

ಮೇಲುಸ್ತುವಾರಿಗಾಗಿ ಕೇಂದ್ರ ಸಚಿವರು, ಮಾಜಿ ಮುಖ್ಯಮಂತ್ರಿ, ಹಿರಿಯ ನಾಯಕರು ಮತ್ತಿತರನ್ನೊಳಗೊಂಡ ಮೂರು ತಂಡವನ್ನು ರಚಿಸಲಾಗಿದೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಪಕ್ಷ ನಾಯಕ ಆರ್.ಅಶೋಕ್ ಮತ್ತು ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ನೇತೃತ್ವದ ತಂಡ ಡಿಸೆಂಬರ್ ಆರಂಭದಲ್ಲಿ ರಾಜ್ಯಾದ್ಯಂತ ಪ್ರವಾಸ ಕೈಗೊಳ್ಳಲಿದ್ದು, ರೈತರು, ಧಾರ್ಮಿಕ ಮುಖಂಡರು ಮತ್ತಿತರ ಮಾಹಿತಿ ಸಂಗ್ರಹಿಸಲಿದೆ.

ಪ್ರಾಮಾಣಿಕವಾಗಿ ರೈತರ ಸಮಸ್ಯೆ ಬಗೆಹರಿಸುವ ನಿಟ್ಟಿನಲ್ಲಿ ವರದಿಯನ್ನು ಬೆಳಗಾವಿ ಚಳಿಗಾಲದ ಅಧಿವೇಶನದಲ್ಲಿ ಮಂಡಿಸಲಾಗುವುದು ಎಂದು ಅಶ್ವತ್ಥನಾರಾಯಣ ತಿಳಿಸಿದರು. ವಕ್ಫ್ ಆಸ್ತಿ ವಿವಾದ ಹಿನ್ನೆಲೆಯಲ್ಲಿ ಬೆಳಗಾವಿ ಅಧಿವೇಶನದ ವೇಳೆಯಲ್ಲಿ ಬೃಹತ್ ಹೋರಾಟ ನಡೆಸಲಾಗುವುದು ಎಂದು ಅವರು ಹೇಳಿದರು.

ಯುವಕರ ವ್ಯಕ್ತಿತ್ವ ವಿಕಾಸಕ್ಕೆ ಸಾಂಸ್ಕೃತಿಕ ಚಟುವಟಿಕೆಗಳು ಸಹಕಾರಿ

ಮುಕ್ತ ವಿವಿ ಡೀನ್ ಪ್ರೊ.ಎನ್.ಲಕ್ಷ್ಮೀ ಅಭಿಮತ

ಮೈಸೂರು, ನ.19(ಎಸ್‌ಪಿಎನ್)– ಯುವಕರು ತಮ್ಮ ವ್ಯಕ್ತಿತ್ವ ವಿಕಾಸಕ್ಕೆ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದು ಉತ್ತಮ ಎಂದು ಕರ್ನಾಟಕ ರಾಜ್ಯ ಮುಕ್ತ ವಿವಿ ಡೀನ್ (ಶೈಕ್ಷಣಿಕ) ಪ್ರೊ.ಎನ್.ಲಕ್ಷ್ಮಿ ಅಭಿಪ್ರಾಯಪಟ್ಟರು.

ಮೈಸೂರು ಕಲಾಮಂದಿರ ಆವರಣದ ಕಿರು ರಂಗಮಂದಿರದಲ್ಲಿ ರಂಗಜಗಲಿ ಸಾಂಸ್ಕೃತಿಕ ಟ್ರಸ್ಟ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ಸಹಯೋಗದೊಂದಿಗೆ ನಡೆದ 'ರಂಗ ಸಿರಿ ಉತ್ಸವ'ವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಯುವಕರು ಮೊಬೈಲ್ ಗೀಳಿಗೆ ಬೀಳುತ್ತಿದ್ದಾರೆ. ಇದು ಯುವಕರ ಬೆಳವಣಿಗೆ, ಆರೋಗ್ಯ ದೃಷ್ಟಿಯಿಂದ ಒಳ್ಳೆಯ ಬೆಳವಣಿಗೆಯಲ್ಲ. ಹಾಗಾಗಿ, ಇಂತಹ ರಂಗತರಬೇತಿ ಶಿಬಿರದಲ್ಲಿ ತೊಡಗಿಸಿಕೊಂಡು ತಮ್ಮ ವ್ಯಕ್ತಿತ್ವ ರೂಪಿಸಿಕೊಳ್ಳುವಂತೆ ಸಲಹೆ ನೀಡಿದರು.

ಜಾನಪದ ಮೈಸೂರು ವಿಭಾಗದಲ್ಲಿ ಸಮೃದ್ಧವಾಗಿದೆ. ಈ ಕಲೆಯನ್ನು ದೇಶದೆಲ್ಲೆಡೆ ಪ್ರದರ್ಶನ ನೀಡಿ, ಜಾನಪದವನ್ನು ಮತ್ತಷ್ಟು ಮುನ್ನೆಲೆಗೆ ತರಬೇಕು. ಕಂಸಾಳೆ, ದೇವರ ಕುಣಿತ, ಡೊಳ್ಳು, ನಗಾರಿ, ತಮಟೆ ಸೇರಿದಂತೆ ಜಾನಪದ ನೃತ್ಯಗಳ ಕಲಿಕೆಗೆ ಯುವಕ–ಯುವತಿಯರು ಹೆಚ್ಚಿನ ಆದ್ಯತೆ ನೀಡುವಂತೆ ಸಲಹೆ ನೀಡಿದರು.

ನಿವೃತ್ತ ಪ್ರಾಧ್ಯಾಪಕ ಪ್ರೊ.ಪಿ.ವಿ.ನಂಜರಾಜ ಅರಸು ಮಾತನಾಡಿ, ಮೈಸೂರಿನಲ್ಲಿ ಎಲ್ಲಾ ಪ್ರಾಕಾರಗಳ ಕಲೆಗಳಿಗೂ ಪ್ರೇಕ್ಷಕರ ಪ್ರೋತ್ಸಾಹವಿದೆ. ಕಲೆ, ಸಾಹಿತ್ಯ, ಜಾನಪದ, ನಾಟಕ , ಸಂಗೀತ ಸೇರಿದಂತೆ ಇತರೆ ಕಲೆಗಳಿಗೆ ಭದ್ರಬುನಾದಿ ಹಾಕಿದವರಲ್ಲಿ ಮೈಸೂರು ಸಂಸ್ಥಾನದ ಕೊಡುಗೆ ಅಪಾರ. ಇದೀಗ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕನ್ನಡದ ನಾಡು–ನುಡಿ, ಕಲೆಗಳಿಗೆ ಹೆಚ್ಚಿನ ಆದ್ಯತೆ ನೀಡಿರುವುದು ಸಂತೋಷ ಸಂಗತಿ ಎಂದರು.



'ರಂಗ ಸಿರಿ ಉತ್ಸವ'ವನ್ನು ಮುಕ್ತ ವಿವಿ ಡೀನ್ (ಶೈಕ್ಷಣಿಕ) ಪ್ರೊ.ಎನ್.ಲಕ್ಷ್ಮಿ ಉದ್ಘಾಟಿಸಿದರು. ಈ ವೇಳೆ ನಿವೃತ್ತ ಪ್ರಾಧ್ಯಾಪಕ ಪ್ರೊ.ನಂಜರಾಜ ಅರಸು ಸೇರಿದಂತೆ ಇತರರಿದ್ದರು.

ಸನ್ಮಾನ: ಜಿ.ಬಿ.ಸರಗೂರು ಕಾಶಿವಿಶ್ವನಾಥ ಸ್ವಾಮಿ ದೇವಸ್ಥಾನದ ಅಧ್ಯಕ್ಷ ಜಿಬಿಎಸ್ ಸಿದ್ದೇಗೌಡ, ಜಾನಪದ ಸಂಘಟಕ ಆರ್.ಕೆ.ಸ್ವಾಮಿ ಅವರನ್ನು ಈ ವೇಳೆ ಸನ್ಮಾನಿಸಲಾಯಿತು. ವೇದಿಕೆಯಲ್ಲಿ ರಂಗ ಜಗಲಿ ಸಾಂಸ್ಕೃತಿಕ ಟ್ರಸ್ಟ್ ಅಧ್ಯಕ್ಷ ಎಸ್.ಡಿ.ದಯಾನಂದ ಉಪಸ್ಥಿತರಿದ್ದರು.

ಗುಂಡ್ಲುಪೇಟೆ ತಾಲೂಕಿನ ಮಹದೇವಸ್ವಾಮಿ, ಪೂರಿಗಾಲಿ ಮಾದೇವು ಹಾಗೂ ಆರ್.ಕೆ.ಸ್ವಾಮಿ ತಂಡದಿಂದ ನೀಲಗಾರರ ಪದಗಳ ಗಾಯನ, ತಮಟೆ ಕಲಾ ಪ್ರದರ್ಶಿಸಲಾಯಿತು. ನಂತರ ಮೈಸೂರು ಸಂಜೆ ರಂಗತಂಡ ಅಭಿನಯದ, ಡಾ.ಎಚ್.ಎಸ್. ವೆಂಕಟೇಶ್ ಮೂರ್ತಿ ರಚಿತ, ರೂಬಿನ್ ಸಂಜಯ್ ನಿರ್ದೇಶನದ, ವಿಶ್ವನಾಥ್, ಸಿದ್ದೇಶ್ ಬದನವಾಳು ಸಂಗೀತ ನೀಡಿರುವ 'ಮಂಥರಾ' ನಾಟಕ ಪ್ರೇಕ್ಷಕರ ಮನಗೆದ್ದಿತು.

ಕುಕ್ಕೆ ಸುಬ್ರಹ್ಮಣ್ಯದಲ್ಲಿ ಕ್ರಿಕೆಟಿಗ ಸೂರ್ಯಕುಮಾರ್ ಯಾದವ್ ವಿಶೇಷ ಪೂಜೆ ಸಲ್ಲಿಕೆ!



ಮಂಗಳೂರು, ನ.19– ಭಾರತ ಟಿ20 ಕ್ರಿಕೆಟ್ ತಂಡದ ನಾಯಕ ಸೂರ್ಯಕುಮಾರ್ ಯಾದವ್ ಇಂದು ಕುಟುಂಬ ಸಮೇತ ಮಂಗಳವಾರ ಕುಕ್ಕೆ ಸುಬ್ರಹ್ಮಣ್ಯ ದೇವಸ್ಥಾನಕ್ಕೆ ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸಿದರು.

ಸೂರ್ಯಕುಮಾರ್ ಯಾದವ್ ದಂಪತಿ ಇಲ್ಲಿನ ಶ್ರೀಸಂಪುಟ ನರಸಿಂಹ ಸ್ವಾಮಿ ಸುಬ್ರಹ್ಮಣ್ಯ ಮಠದಲ್ಲಿ ಆಶ್ಲೇಷ ಬಲಿ ಸೇವೆ, ಹಾಗೂ ನಾಗ ಪ್ರತಿಷ್ಠಾಪನ ಪೂಜೆಯನ್ನು ನೆರವೇರಿಸಿದರು.

ಈ ವೇಳೆ ಕುಕ್ಕೆ ಸುಬ್ರಹ್ಮಣ್ಯ ದೇವರ ದರ್ಶನ ಪಡೆದ ದಂಪತಿಯನ್ನು ದೇವಸ್ಥಾನದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅರವಿಂದ ಅಯ್ಯಪ್ಪ ಸುತಗುಂಡಿ, ಶಾಲು ಹೊದಿಸಿ ಗೌರವಿಸಿದರು. ಸಹಾಯಕ ಕಾರ್ಯನಿರ್ವಹಣಾಧಿಕಾರಿ ಯೇಸುರಾಜ್ ಹಾಗೂ ದೇವಸ್ಥಾನದ ಸಿಬ್ಬಂದಿ ಜೊತೆಯಲ್ಲಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	**(ದೂ: 2521923)**
ಕಂಗುವಾ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	**(ದೂ: 2422871)**
ಕಂಗುವಾ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	**(ದೂ: 2497199)**
ಕಂಗುವಾ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	**(ಮೊ:9900820093)**
ಅಮರನ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಭೈರತಿ ರಣಗಲ್ (ಕ)	4 ಪ್ರದರ್ಶನಗಳು
ರಾಜಕಮಲ್	
ಅಮರನ್ (ತ)	4 ಪ್ರದರ್ಶನಗಳು
ಸಂಗಂ	
ಭೈರತಿ ರಣಗಲ್ (ಕ)	4 ಪ್ರದರ್ಶನಗಳು
ಲಿಡೋ	
ತಾರಕೇಶ್ವರ(ಕ)+ ಯಲಾಕುನ್ನಿ (ಕ)	2+2 ಪ್ರದರ್ಶನಗಳು
ತಿಬ್ಬಾದೇವಿ	
ಅಮರನ್ (ತ)	4 ಪ್ರದರ್ಶನಗಳು
ಪ್ರಭಾ	
ಬಘೀರಾ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಕಂಗುವಾ (3ಡಿ) (ತ): ಬೆ.10ಕ್ಕೆ, ಮ.1ಕ್ಕೆ, ರಾ.7.15ಕ್ಕೆ, ಅಮರನ್ (ತ): ಸಂ.4ಕ್ಕೆ, ಆನಂದ್ ಶ್ರೀಬಾಲ (ಮ): ರಾ.10.20ಕ್ಕೆ.
ಸ್ಕ್ರೀನ್ 2	ಅಮರನ್ (ತ): ಬೆ.9.40ಕ್ಕೆ, ಮ.1ಕ್ಕೆ, ಬಘೀರ (ಕ): ಸಂ.4.15ಕ್ಕೆ, ಗ್ಲಾಡಿಯೇಟರ್ 2 (ಇಂ): ರಾ.7.20ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 3	ದಿ ಸಬರ್‌ಮತಿ ರಿಪೋರ್ಟ್ (ಹಿಂ): ಬೆ.10.35ಕ್ಕೆ, ರಾ.7.15ಕ್ಕೆ, ಬಘೀರ (ಕ): ಮ.1.10ಕ್ಕೆ, ಲಕ್ಕಿ ಭಾಸ್ಕರ್ (ಮ): ಸಂ.4.15ಕ್ಕೆ, ಮಟ್ಕಾ (ತೆ): ರಾ.9.55ಕ್ಕೆ.
ಸ್ಕ್ರೀನ್ 4	ಭೈರತಿ ರಣಗಲ್ (ಕ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಬಘೀರ (ಕ): ಬೆ.10ಕ್ಕೆ, ಮ.3.55ಕ್ಕೆ, ಕಂಗುವಾ (ಕ): ಮ.1ಕ್ಕೆ, ಕಂಗುವಾ (ತ): ಸಂ.6.55ಕ್ಕೆ, ಅಮರನ್ (ತ): ರಾ.9.50ಕ್ಕೆ.
ಸ್ಕ್ರೀನ್ 2	ಅಮರನ್ (ಕ): ಬೆ.10.30ಕ್ಕೆ, ಭೈರತಿ ರಣಗಲ್ (ಕ): ಮ.1.45ಕ್ಕೆ, ಸಂ.4.25ಕ್ಕೆ, ರಾ.7.05ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಭೈರತಿ ರಣಗಲ್ (ಕ): ಬೆ.10ಕ್ಕೆ, ಸಂ.6.30ಕ್ಕೆ, ಅಮರನ್ (ಕ): ಮ.12.40ಕ್ಕೆ, ಕಂಗುವಾ (3ಡಿ)(ತ): ಮ.3.55ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಕಂಗುವಾ (ತ): ಬೆ.10.30ಕ್ಕೆ, ಸಂ.5.20ಕ್ಕೆ, ಅಮರನ್ (ತ): ಮ.2.10ಕ್ಕೆ, ಅಮರನ್ (ಕ): ರಾ.8.15ಕ್ಕೆ.

ಪಿವಿಆರ್ ಸಿನಿಮಾಸ್

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮೈಸೂರು ರೇಸ್

2ನೇ ದಿನ, ಬುಧವಾರ, 20–11–2024

ಇಂದಿನ ರೇಸ್‌ಗೆ ನಮ್ಮ ಆಯ್ಕೆ

ಮೊದಲನೇ ರೇಸ್ ಮಧ್ಯಾಹ್ನ 1.30 ಗಂಟೆಗೆ

I. ಗೋಣಿಕೊಪ್ಪ ಪ್ಲೇಟ್–1600 ಮೀ. ರೇಟೆಡ್ 00 ರಿಂದ 25. ಮಧ್ಯಾಹ್ನ 1.30ಕ್ಕೆ
1. ಸ್ಕ್ವಾಂಟೋ 2. ಫೆಲಿಸಿಟಾ 3. ಆಂಟಿನೋರಿ

II. ಟ್ರೆಷರ್ ನೆಸ್ಟ್ ಪ್ಲೇಟ್ ಡಿII–1400 ಮೀ. ರೇಟೆಡ್ 20 ರಿಂದ 45. ಮ.2.00ಕ್ಕೆ
1. ಸುಲ್ತಾನ್ ಸೋರ್ಡ್ 2. ರಿಯಲ್ ಲೆಜೆಂಡ್ 3. ಗೋಲ್ಡನ್ ಥ್ರೋನ್

III ಪಾಂಡವಪುರ ಪ್ಲೇಟ್ –1200 ಮೀ. ರೇಟೆಡ್ 20 ರಿಂದ 45. ಮ.2.30ಕ್ಕೆ
1. ಡಿ ಲಾರ್ಡ್ 2. ಬ್ಯೂಟಿಫುಲ್ ಓಬ್ಲಿವಿಯಾನ್ 3. ಗೋಲ್ಡ್ ಕ್ರೆಸ್ಟ್

IV. ಟ್ರೆಷರ್ ನೆಸ್ಟ್ ಪ್ಲೇಟ್ ಡಿI–1400 ಮೀ. ರೇಟೆಡ್ 20 ರಿಂದ 45. ಮ.3.00ಕ್ಕೆ
1. ಶಿ ಈಸ್ ಅನ್ ಸ್ಟಾಪಬಲ್ 2. ಎ ಫಿಲ್ ಟವರ್ 3. ಒನ್ ಡೈಮಂಡ್

V. ಡಾ. ಎಂ.ಎನ್.ದೊರೆಸ್ವಾಮಿ ಮೆಮೋರಿಯಲ್ ಟ್ರೋಫಿ–1200 ಮೀ. ರೇಟೆಡ್ 80 ಮತ್ತು ಮೇಲ್ವರ್ಗ. ಮ.3.30ಕ್ಕೆ
1. ಜ಼ಾರಾ 2. ಸಗೇರಾ 3. ಒಹಾಂಸಿನಿ

VI. ಕಾಕನಕೋಟೆ ಪ್ಲೇಟ್ –1400 ಮೀ. ರೇಟೆಡ್ 40 ರಿಂದ 65. ಸಂಜೆ 4.00ಕ್ಕೆ
1. ತರೇಕಾ 2. ಇನ್ ಎಕ್ಸಾಸ್ಟಿಬಲ್ 3. ಮಿಸ್ಟಿಕ್ ಡಿವೈನ್

VII. ಮಾನಸ ಗಂಗೋತ್ರಿ ಪ್ಲೇಟ್ –1200 ಮೀ. ರೇಟೆಡ್ 40 ರಿಂದ 65. ಸಂ.4.30ಕ್ಕೆ
1. ಸ್ಮಾರ್ಟ್ ಕ್ಯಾಡಿಲಕಾ 2. ಇಂಡಿಯನ್ ಗ್ಲೋರಿ 3. ಸಿಲ್ವರ್ ಡೇಸ್ ಅಗೇನ್

ದಿನದ ಅತ್ಯುತ್ತಮ	ತರೇಕಾ
ಡಬ್ಬಲ್	ಶಿ ಈಸ್ ಅನ್‌ಸ್ಟಾಪಬಲ್, ಸ್ಮಾರ್ಟ್ ಕ್ಯಾಡಿಲಕಾ
ಜಾಕ್‌ಪಾಟ್	3, 4, 5, 6 ಮತ್ತು 7
ಮಿನಿ ಜಾಕ್‌ಪಾಟ್	4, 5, 6 ಮತ್ತು 7
I ಟ್ರಿಬಲ್	2, 3 ಮತ್ತು 4
II ಟ್ರಿಬಲ್	5, 6 ಮತ್ತು 7
ಎಕ್ಸ್‌ಆಕ್ಟ್	1 ರಿಂದ 7

ಟಿಪ್‌ಸ್ಟರ್ ಪಿಜೆಸಿ

ಅಣ್ವಸ್ತ್ರ ರಹಿತ ರಾಷ್ಟ್ರಗಳ ಮೇಲೆ 'ಅಣ್ವಸ್ತ್ರ ದಾಳಿ'ಗೆ ಅನುಮತಿ ಆದೇಶಕ್ಕೆ 'ಪುಟಿನ್' ಸಹಿ

ಮಾಸ್ಕೊ, ನ.19–ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮಂಗಳವಾರ (ನವೆಂಬರ್ 19) ಪರಮಾಣು ಶಕ್ತಿಗಳ ಬೆಂಬಲವನ್ನು ಪಡೆಯುವ ಪರಮಾಣು ಅಲ್ಲದ ರಾಷ್ಟ್ರದ ವಿರುದ್ಧ ಪರಮಾಣು ಶಸ್ತ್ರಾಸ್ತ್ರಗಳನ್ನು ಬಳಸಲು ಮಾಸ್ಕೋಗೆ ಅನುಮತಿ ನೀಡುವ ಆದೇಶಕ್ಕೆ ಸಹಿ ಹಾಕಿದರು. ರಷ್ಯಾ–ಉಕ್ರೇನ್ ಸಂಘರ್ಷವು 1000 ದಿನಗಳ ಯುದ್ಧದ ಕಠೋರ ಮೈಲಿಗಲ್ಲನ್ನು ತಲುಪುತ್ತಿದ್ದಂತೆ ಮತ್ತು ರಷ್ಯಾದೊಳಗಿನ ಮಿಲಿಟರಿ ಗುರಿಗಳನ್ನು ಹೊಡೆಯಲು ದೀರ್ಘ–ಶ್ರೇಣಿಯ ಕ್ಷಿಪಣಿಗಳನ್ನು ಬಳಸಲು ಯುನೈಟೆಡ್ ಸ್ಟೇಟ್ಸ್ ಕೈವ್ಗೆ ಅನುಮತಿ ನೀಡಿದ ನಂತರ ಈ ವಿವಾದಾತ್ಮಕ ಆದೇಶ ಬಂದಿದೆ. ನಿರ್ಧಾರವನ್ನು ಕ್ರೆಮ್ಲಿನ್ ಸಮರ್ಥಿಸಿಕೊಂಡಿದ್ದು, ಹೇಳಿಕೆಯಲ್ಲಿ ಇದನ್ನು 'ಅಗತ್ಯ' ಎಂದು ಲೇಬಲ್ ಮಾಡಿದೆ.

ಬಿಪಿಎಲ್ ಎಂದರೆ ದಟ್ಟ ದರಿದ್ರರು: ವಿವಾದಾತ್ಮಕ ಪದ ಬಳಸಿದ ಜೆಡಿಎಸ್ ಶಾಸಕ


ಗೋವಿಂದರಾಜು

ಕೋಲಾರ, ನ.19– ಏಕಾಏಕಿ ರಾಜ್ಯದಲ್ಲಿ ಬಿಪಿಎಲ್ ಕಾರ್ಡ್ ರದ್ದಾಗುತ್ತಿರುವ ಕುರಿತು ರಾಜ್ಯ ರಾಜಕೀಯದಲ್ಲಿ ಪರ–ವಿರೋಧ ಚರ್ಚೆಯಾಗುತ್ತಿದೆ. ಈ ನಡುವೆ ರಾಜ್ಯದಲ್ಲಿ ಶೀಘ್ರವೇ 14 ಲಕ್ಷ ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡಲು ಉದ್ದೇಶಿಸಲಾಗಿದೆ. ಇದುವರೆಗೆ 3.63 ಲಕ್ಷ ಕಾರ್ಡ್ ರದ್ದಾಗಿದೆ ಎಂದು ಆಹಾರ ಇಲಾಖೆ ಸಚಿವ ಕೆ.ಹೆಚ್. ಮುನಿಯಪ್ಪ ತಿಳಿಸಿದರೆ, ಇತ್ತ ಬಿಪಿಎಲ್ ಎಂದರೆ ದಟ್ಟ ದರಿದ್ರರು ಎಂದು ವಿವಾದಾತ್ಮಕ ಹೇಳಿಕೆಯನ್ನು ವಿಧಾನಪರಿಷತ್ ಸದಸ್ಯ ಗೋವಿಂದರಾಜು ನೀಡಿದ್ದಾರೆ.

ಈ ಕುರಿತು ಕೋಲಾರದಲ್ಲಿ ಮಾತನಾಡಿರುವ ಗೋವಿಂದರಾಜು, ಬಿಲೋ ಪಾವರ್ಟಿ ಲೈನ್ ಎಂದರೆ ದಟ್ಟ ದರಿದ್ರರು, ಪಾವರ್ಟಿ ಲೈನ್ ಗಿಂತ ಕೆಳಗಿರುವವರು ಅಂತಾ ವಿವಾದಿತ ಪದ ಬಳಕೆ ಮಾಡಿದ್ದಾರೆ. ದಟ್ಟ ದರಿದ್ರರು ಎಂದರೆ ಕಷ್ಟದಲ್ಲಿರುವವರು, ನಾವು ಒಂದು ಕಾಲದಲ್ಲಿ ದರಿದ್ರರೆ ಎನ್ನುವ ಮೂಲಕ ತಮ್ಮ ಮಾತನ್ನು ಸಮರ್ಥನೆ ಮಾಡಿಕೊಂಡಿದ್ದಾರೆ.

ರಾಜ್ಯದಲ್ಲಿ 4 ಕೋಟಿ 80 ಲಕ್ಷ ಜನ ಬಿಲೋ ಪಾವರ್ಟಿ ಲೈನ್‌ನಲ್ಲಿ ಇದ್ದಾರೆ ಅಂದರೆ ಅರ್ಥವೇ ಇಲ್ಲ. ಅಂದರೆ ಸರ್ಕಾರದ ಯೋಜನೆ ದುರುಪಯೋಗವಾಗುತ್ತಿದೆ ಎಂದರ್ಥ. ಈ ಹಿಂದೆ ಉಮೇಶ್ ಕತ್ತಿಯವರೇ ಈ ವಿಚಾರವನ್ನು ಪ್ರಸ್ತಾಪ ಮಾಡಿದ್ದರು. ಆಗ ಇದು ರಾಜಕೀಯ ವಿಚಾರವಾಗಿತ್ತು. ಇವತ್ತು ಕೂಲಿ ಮಾಡುವವನು ಸಹ ಒಂದಷ್ಟು ಹಣ ಸಂಪಾದನೆ ಮಾಡುತ್ತಿದ್ದಾರೆ. ಅವರು ಸಹ ಸಮೃದ್ಧಿಯಾದ ಜೀವನ ನಡೆಸುತ್ತಿದ್ದಾರೆ ಎಂದು ಜೆಡಿಎಸ್ ವಿಧಾನ ಪರಿಷತ್ ಸದಸ್ಯ ಇಂಚರ ಗೋವಿಂದರಾಜು ತಿಳಿಸಿದ್ದಾರೆ. ಕೋಲಾರದಲ್ಲಿ ಭಾನುವಾರ ಕೇಂದ್ರ ಸಚಿವ ಕುಮಾರಸ್ವಾಮಿ ಅವರು ಹೇಳಿದ್ದು ಬೇರೆ ಅರ್ಥದಲ್ಲಿ. ರಾಜ್ಯದ ಜನರಿಗೆ ಅವಶ್ಯಕತೆ ಇದೆ ಎಂದು ಹೇಳಿದ್ದಾರೆ, ಬಿಪಿಎಲ್‌ನಿಂದ ಎಪಿಎಲ್ ಮಾಡಬೇಕಾದರೆ ಸರಿಯಾದ ನೀತಿ–ನಿಯಮಗಳ ಪಾಲಿಸುವಂತೆ ಹೇಳಿದ್ದಾರೆ. ಹಾಗಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ನಿಲುವೇ ಬೇರೆ. ನಾನು ರಾಜಕೀಯ ಮಾತನಾಡಲ್ಲ ಎಂದು ಹೇಳಿದರು. ರಾಜ್ಯದ ಚನ್ನಪಟ್ಟಣ ಉಪ ಚುನಾವಣೆ ಕುರಿತು ಮಾತನಾಡಿದ ಗೋವಿಂದರಾಜು ಅವರು, ಒಟ್ಟಿಗೆ ಕೆಲಸ ಮಾಡಿದ್ದೇವೆ, ನಿಖಿಲ್ ಕುಮಾರಸ್ವಾಮಿ ಗೆಲ್ಲುತ್ತಾರೆ.

ಎಲೆಕ್ಟ್ರಿಕ್ ಸ್ಕೂಟರ್ ಶೋರೂಂನಲ್ಲಿ ಅಗ್ನಿ ಅವಘಡ: ಯುವತಿ ಸಜೀವ ದಹನ



ಬೆಂಗಳೂರು: ಬೆಂಗಳೂರಿನ ಎಲೆಕ್ಟ್ರಿಕ್ ವಾಹನ ಶೋರೂಂ ಒಂದರಲ್ಲಿ ಭಾರೀ ಅಗ್ನಿ ದುರಂತ ಸಂಭವಿಸಿದ್ದು, ಯುವತಿಯೊಬ್ಬಳು ಸಜೀವ ದಹನವಾಗಿದ್ದಾರೆ. ಇಲ್ಲಿನ ರಾಜಾಜಿನಗರದ ರಾಜ್‌ಕುಮಾರ್ ರಸ್ತೆಯ ನವರಂಗ್ ಬಾರ್ ಬಳಿಯ ಎಲೆಕ್ಟ್ರಿಕ್ ಸ್ಕೂಟರ್ ಶೋರೂಂ ಇವಿಟ್ರಿಕ್ ಮೋಟಾರ್ ಪ್ರೈ. ಲಿ.ನಲ್ಲಿ ಮಂಗಳವಾರ ಸಂಜೆ ಈ ಅವಘಡ ಸಂಭವಿಸಿದೆ.

ಈ ಎಲೆಕ್ಟ್ರಿಕ್ ವಾಹನ ಶೋರೂಂನಲ್ಲಿ ಹಠಾತ್ತನೇ ಕಾಣಿಸಿಕೊಂಡ ಬೆಂಕಿ, ನೋಡನೋಡುತ್ತಲೇ ಇಡೀ ಶೋರೂಂ ಆವರಿಸಿದ್ದು, ಧಗಧಗನೆ ಹೊತ್ತಿ ಉರಿದಿದೆ. ಈ ವೇಳೆ ಶೋರೂಂನೊಳಗಿದ್ದ ಸೇಲ್ಸ್ ಎಕ್ಸಿಕ್ಯುಟಿವ್ ಪ್ರಿಯಾ (20) ಹೊರಗೆ ಬರಲು ಸಾಧ್ಯವಾಗದೆ ಬೆಂಕಿಗಾಹುತಿಯಾಗಿದ್ದಾರೆ. ಸ್ಥಳಕ್ಕೆ ಧಾವಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ ಪ್ರಿಯಾ ಮೃತದೇಹವನ್ನು ಹೊರಗೆ ತಂದು, ಬೆಂಕಿ ನಂದಿಸುವ ಕಾರ್ಯ ನಡೆಸಿದರು. ಘಟನೆಗೆ ಶಾರ್ಟ್ ಸರ್ಕ್ಯೂಟ್ ಕಾರಣವಿರಬಹುದು ಎಂದು ಶಂಕಿಸಲಾಗಿದೆ. ಭೀಕರ ಬೆಂಕಿಗೆ ಇಡೀ ಶೋರೂಂ ಭಸ್ಮವಾಗಿದ್ದು, ಎಲೆಕ್ಟ್ರಿಕ್ ಸ್ಕೂಟರ್‌ಗಳು ಅಗ್ನಿಗೆ ಆಹುತಿಯಾಗಿವೆ. ಈ ವೇಳೆ ಶೋರೂಂನಲ್ಲಿ 45ರಷ್ಟು ಎಲೆಕ್ಟ್ರಿಕ್ ಸ್ಕೂಟರ್‌ಗಳಿದ್ದವು ಎಂದು ತಿಳಿದು ಬಂದಿದೆ. ರಾಜಾಜಿನಗರ ಠಾಣೆ ಪೊಲೀಸರು ಪರಿಶೀಲನೆ ನಡೆಸಿದ್ದಾರೆ.

ಗುತ್ತಿಗೆ, ಟೆಂಡರ್‌ಗಳಲ್ಲಿನ ಮಧ್ಯಸ್ಥಿಕೆ ಕಲಂ ರದ್ದು

ಬೆಂಗಳೂರು: ರಾಜ್ಯ ಸರ್ಕಾರದ ಗುತ್ತಿಗೆ ಮತ್ತು ಟೆಂಡರ್‌ಗಳಲ್ಲಿ ಮಧ್ಯಸ್ಥಿಕೆ ಕಲಂ ಅನ್ನು ರದ್ದುಪಡಿಸಲು ತೀರ್ಮಾನಿಸಲಾಗಿದೆ ಎಂದು ಕಾನೂನು ಮತ್ತು ಸಂಸದೀಯ ಸಚಿವ ಎಚ್.ಕೆ.ಪಾಟೀಲ ತಿಳಿಸಿದ್ದಾರೆ.

ಮಧ್ಯಸ್ತಿಕೆ ಕಲಂನಿಂದ ರಾಜ್ಯ ಸರ್ಕಾರಕ್ಕೆ ಆರ್ಥಿಕವಾಗಿ ಹೊರೆ ಆಗುತ್ತಿರುವುದು ಕಾನೂನು ಇಲಾಖೆಯು ಗಮನಕ್ಕೆ ಬಂದಿದ್ದು, ಆದ್ದರಿಂದ ಈ ಕಲಂ ಅನ್ನು ಕೈಬಿಡಲು ತೀರ್ಮಾನಿಸಲಾಗಿದೆ. ಈ ಸಂಬಂಧ ಸುತ್ತೋಲೆ ಹೊರಡಿಸಲಾಗಿದೆ. ಇಲ್ಲಿಯವರೆಗೆ ಮಧ್ಯಸ್ಥಿಕೆ ಕಲಂ ಕಡ್ಡಾಯವಾಗಿತ್ತು ಎಂದು ಅವರು ಮಂಗಳವಾರ ಸುದ್ದಿಗೋಷ್ಠಿಯಲ್ಲಿ ವಿವರಿಸಿದರು.

ಈ ಕಲಂ ರದ್ದು ಪಡಿಸಿರುವುದರಿಂದ ಗುತ್ತಿಗೆದಾರರು ಮತ್ತು ಟೆಂಡರ್ ಪಡೆದವರು ಮೇಲ್ಮನವಿ ಸಲ್ಲಿಸಲು ಅವಕಾಶ ಇರುವುದಿಲ್ಲ. ಹಲವು ಪ್ರಕರಣಗಳಲ್ಲಿ ಈ ಕಲಂ ಅನ್ನು ಬಳಸಿಕೊಂಡು ನ್ಯಾಯಾಲಯಗಳ ಮೆಟ್ಟಿಲು ಏರಿದ ಕಾರಣ ಸರ್ಕಾರ ಆರ್ಥಿಕವಾಗಿ ನಷ್ಟ ಅನುಭವಿಸಿತ್ತು. ಅತ್ಯಂತ ಪ್ರಮುಖ ಎನಿಸುವ ಒಂದೆರಡು ಪ್ರಕರಣಗಳಲ್ಲಿ ಮಧ್ಯಸ್ಥಿಕೆಯ ಅಗತ್ಯ ಇದೆ ಎಂದು ಕಂಡುಬಂದರೆ ಕಾನೂನು ಇಲಾಖೆ ಅದನ್ನು ಪರಿಶೀಲಿಸಿ ಕ್ರಮ ತೆಗೆದುಕೊಳ್ಳಲು ನಿರ್ಣಯಿಸಲಾಗಿದೆ ಎಂದು ಪಾಟೀಲ ಹೇಳಿದರು.

ಈ ಕಲಂನಿಂದ ಖಾಸಗಿ ವ್ಯಕ್ತಿಗಳ ಜತೆ ಸರ್ಕಾರ ಇತ್ಯರ್ಥಮಾಡಿಕೊಳ್ಳುವ ವ್ಯವಸ್ಥೆ ಸರಿಯಲ್ಲ. ಇಂತಹ ನೂರಾರು ಪ್ರಕರಣಗಳು ಮುಂದಿನ ದಿನಗಳಲ್ಲಿ ಬರುವ ಸಾಧ್ಯತೆ ಇರುವುದರಿಂದ, ಮುಂದುವರೆಸುವುದು ಸರಿಯಲ್ಲ ಎಂಬ ತೀರ್ಮಾನಕ್ಕೆ ಬರಲಾಯಿತು. ಇದು ವ್ಯವಸ್ಥೆಯ ಕತ್ತು ಹಿಸುಕುವ ಕೆಲಸ ಮಾಡುತ್ತಿದೆ. ಕೆಲವು ದಿನಗಳ ಹಿಂದೆಯಷ್ಟೇ ಮಧ್ಯಸ್ಥಿಕೆ ಪ್ರಕರಣವೊಂದು ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ಆಗಿ, ಸುಪ್ರೀಂಕೋರ್ಟ್ ಮೆಟ್ಟಿಲು ಹತ್ತಲು ನಿರ್ಧರಿಸಲಾಯಿತು ಎಂದು ಅವರು ತಿಳಿಸಿದರು. ಮಧ್ಯಸ್ಥಿಕೆ ಕಲಂ ರದ್ದುಗೊಳಿಸಿರುವ ಸಂಬಂಧ ಇದೇ 16 ರಂದು ಸುತ್ತೋಲೆ ಹೊರಡಿಸಲಾಗಿದೆ ಎಂದು ಅವರು ಹೇಳಿದರು.


ಸಚಿವ ಎಚ್.ಕೆ.ಪಾಟೀಲ

ಕ್ರಿಮಿನಲ್ ನ್ಯಾಯಾಂಗ ನಿಂದನೆ ಪ್ರಕರಣ ತಗ್ಗಿಸಲು ಕ್ರಮ: ರಾಜ್ಯದಲ್ಲಿ ಒಟ್ಟು 1,006 ಕ್ರಿಮಿನಲ್ ನ್ಯಾಯಾಂಗ ನಿಂದನೆ ಪ್ರಕರಣಗಳು ಬಾಕಿ ಉಳಿದಿದ್ದು, ಮುಂದಿನ ಮಾರ್ಚ್ 31 ರೊಳಗೆ ಆ ಸಂಖ್ಯೆಯನ್ನು ಎರಡು ಅಂಕಿಗೆ ಇಳಿಸಲು ತೀರ್ಮಾನಿಸಲಾಗಿದೆ ಎಂದು ಸಚಿವ ಎಚ್.ಕೆ.ಪಾಟೀಲ ತಿಳಿಸಿದರು. ನ್ಯಾಯಾಲಯಗಳ ಆದೇಶ ಮತ್ತು ಸೂಚನೆಗಳನ್ನು ಅಧಿಕಾರಿಗಳು ಪಾಲಿಸದ ಕಾರಣ ಹಿಂದೆ 2,500 ಕ್ಕೂ ಹೆಚ್ಚು ಕ್ರಿಮಿನಲ್ ನ್ಯಾಯಾಂಗ ನಿಂದನೆ ಪ್ರಕರಣಗಳು ಇದ್ದವು. ಈಗ ಆ ಸಂಖ್ಯೆ 1,006ಕ್ಕೆ ಇಳಿದಿದೆ ಎಂದು ವಿವರಿಸಿದರು.

ಇತ್ತೀಚೆಗೆ ನಡೆದ ಕಾನೂನು ಇಲಾಖೆ ಅಧಿಕಾರಿಗಳ ಸಭೆಯಲ್ಲಿ ಈ ಕುರಿತು ವಿವರವಾಗಿ ಚರ್ಚಿಸಲಾಯಿತು. 10 ವರ್ಷಗಳಲ್ಲಿ ಕ್ರಿಮಿನಲ್ ನ್ಯಾಯಾಂಗ ನಿಂದನೆ ಪ್ರಕರಣ ಆರೋಗ್ಯಕರವಲ್ಲದ ರೀತಿಯಲ್ಲಿ ಏರಿಕೆ ಆಗುತ್ತಿರುವುದು ಆರೋಗ್ಯಕರ ಲಕ್ಷಣವಲ್ಲ. ನ್ಯಾಯಾಲಯಗಳು ಕೊಟ್ಟ ಆದೇಶ ಮತ್ತು ಸೂಚನೆಗಳ ಬಗ್ಗೆ ಗೌರವ ಕಡಿಮೆ ಆಗುತ್ತಿದೆ ಎಂಬುದರ ಸೂಚಕವಿದು. ಅಧಿಕಾರಿಗಳು ಕಟ್ಟುನಿಟ್ಟಾಗಿ ನ್ಯಾಯಾಲಯದ ಆದೇಶಗಳನ್ನು ಪಾಲಿಸಬೇಕು ಮತ್ತು ಸ್ಪಂದನಶೀಲರಾಗಬೇಕು ಎಂದು ಅವರು ಹೇಳಿದರು. ಆದ್ದರಿಂದ ನ್ಯಾಯಾಂಗ ನಿಂದನೆ ಪ್ರಕರಣ ಸಂಖ್ಯೆಯನ್ನು ಗಣನೀಯವಾಗಿ ತಗ್ಗಿಸಲು ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಮಾ.31 ಗುರಿ ನಿಗದಿ ಮಾಡಲಾಗಿದೆ. ಶೇ.99ರಷ್ಟು ಪ್ರಕರಣಗಳನ್ನು ಇತ್ಯರ್ಥ ಮಾಡಲು ಸೂಚನೆ ನೀಡಿದ್ದೇವೆ ಎಂದು ತಿಳಿಸಿದರು.

ಬೆಂಗಳೂರು ಟೆಕ್ ಶೃಂಗಸಭೆ 2024ಕ್ಕೆ ಚಾಲನೆ

ತಂತ್ರಜ್ಞಾನದ ಪ್ರಗತಿ, ಜಾಗತಿಕ ಸಹಯೋಗಕ್ಕೆ ವಿಶಿಷ್ಟ ವೇದಿಕೆ





ಬೆಂಗಳೂರು, ನ.19– ಏಷ್ಯಾದ ಅತೀ ದೊಡ್ಡ ತಂತ್ರಜ್ಞಾನ ಶೃಂಗ ಎನಿಸಿರುವ 'ಬೆಂಗಳೂರು ಟೆಕ್ ಶೃಂಗ 2024'ಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಗಳವಾರ ಚಾಲನೆ ನೀಡಿದರು.

ಕರ್ನಾಟಕ ಸರ್ಕಾರದ ಎಲೆಕ್ಟ್ರಾನಿಕ್ಸ್, ಐಟಿ, ಬಿಟಿ ಇಲಾಖೆ ಮತ್ತು ಭಾರತ ಸಾಫ್ಟ್‌ವೇರ್ ಟೆಕ್ನಾಲಜಿ ಪಾರ್ಕ್ ಸಂಯುಕ್ತಾಶ್ರಯದಲ್ಲಿ ಬೆಂಗಳೂರಿನ ಅರಮನೆ ಮೈದಾನದಲ್ಲಿ 'ಬೆಂಗಳೂರು ಟೆಕ್ ಶೃಂಗಸಭೆ 2024ರ 27ನೇ ಆವೃತ್ತಿಯನ್ನು ಆಯೋಜಿಸಲಾಗಿದೆ. ಟೆಕ್ ಅನ್ ಬೌಂಡ್ ಥೀಮ್ ನಡಿ ಆಯೋಜಿಸಲಾಗಿರುವ ಬೆಂಗಳೂರು ಟೆಕ್ ಶೃಂಗಸಭೆ 2024ಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಿದರು,

ಈ ಸಂದರ್ಭದಲ್ಲಿ ಮಾತನಾಡಿದ ಅವರು, ನಾವೀನ್ಯತೆ, ತಂತ್ರಜ್ಞಾನದ ಪ್ರಗತಿ ಮತ್ತು ಜಾಗತಿಕ ಸಹಯೋಗಕ್ಕಾಗಿ ಈ ಸಮ್ಮಿಟ್ ವಿಶಿಷ್ಟ ವೇದಿಕೆಯಾಗಿದೆ. ಭಾರತದ ತಂತ್ರಜ್ಞಾನ ಪರಿವರ್ತನೆಯಲ್ಲಿ ಮುಂಚೂಣಿಯಲ್ಲಿರುವ ರಾಜ್ಯ ಕರ್ನಾಟಕವನ್ನು ಪ್ರತಿನಿಧಿಸುತ್ತಿರುವುದು ನನಗೆ ಅತ್ಯಂತ ಹೆಮ್ಮೆಯ ಸಂಗತಿಯಾಗಿದೆ ಎಂದು ಹೇಳಿದರು.

20ನೇ ಶತಮಾನದ ಆರಂಭದಲ್ಲಿ ಬೆಂಗಳೂರು ಏರೋಸ್ಪೇಸ್ ಮತ್ತು ರಕ್ಷಣಾ ಉತ್ಪಾದನೆಯ ಕೇಂದ್ರವಾಗಿ ಬೆಳೆಯಿತು. ತನ್ಮೂಲಕ ಕೈಗಾರಿಕಾ ಬೆಳವಣಿಗೆಗೆ ಇಂಬು ನೀಡಿತು. 2000 ಇಸವಿಯ ಆರಂಭದಲ್ಲಿ ಎಸ್.ಎಂ.ಕೃಷ್ಣಾ ಅವರ ದೂರದೃಷ್ಟಿಯ ನಾಯಕತ್ವದಲ್ಲಿ, ಎಲೆಕ್ಟ್ರಾನಿಕ್ ಸಿಟಿ ಮತ್ತು ಐಟಿ ಪಾರ್ಕ್ ಪ್ರಾರಂಭಿಸುವ ಮೂಲಕ ಬೆಂಗಳೂರು ಪರಿವರ್ತನೆಯ ಕಡೆಗೆ ಹೊರಳಿಕೊಂಡಿತು. ಈ ಮೂಲಕ ನಗರದ ಜಾಗತಿಕ ಟೆಕ್ ಎಂಬ ಪ್ರಖ್ಯಾತಿ ಪಡೆಯಲು ತಳಪಾಯ ಹಾಕಲಾಯಿತು. ಸಾಫ್ಟ್ ವೇರ್, ಬಯೋ ಟೆಕ್ನಾಲಜಿ, ಏರೋಸ್ಪೇಸ್ ಹಾಗು ಅಭಿವೃದ್ಧಿಗೊಂಡ ಉತ್ಪಾದನೆಯಲ್ಲಿ ತನ್ನ ಪ್ರಭಾವಕ್ಕಾಗಿ ಬೆಂಗಳೂರು ಅಂತರರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಲ್ಪಟ್ಟಿದೆ. ವಿಶ್ವದಾದ್ಯಂತ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ನಗರವೆಂದು ತನ್ನನ್ನು ಸ್ಥಾಪಿಸಿಕೊಂಡಿದೆ.

ಐ.ಟಿ, ಡೀಪ್ ಟೆಕ್, ಬಯೋ ಟೆಕ್ನಾಲಜಿ ಮತ್ತು ಜೀವ ವಿಜ್ಞಾನ ಕ್ಷೇತ್ರಗಳಲ್ಲಿ ಪ್ರಗತಿಯನ್ನು ರಾಜ್ಯದ ವ್ಯಾಪಕ ಪ್ರತಿಭೆ, ಪ್ರವರ್ಧಮಾನಕ್ಕೆ ಬರುತ್ತಿರುವ ಸ್ಟಾರ್ಟ್ ಅಪ್ ಪರಿಸರ ಮತ್ತು ಸದೃಢವಾದ ಮೂಲಸೌಕರ್ಯ ವ್ಯವಸ್ಥೆ ಉತ್ತೇಜಿಸಿದೆ. ಈ ಹೆಮ್ಮೆಯ ಪರಂಪರೆಯನ್ನು ಆಧರಿಸಿ ನಾವೀನ್ಯತೆ, ಸುಸ್ಥಿರತೆ ಮತ್ತು ಒಳಗೊಂಡ ಬೆಳವಣಿಗೆಗೆ ನಮ್ಮ ಬದ್ಧತೆ ಅಚಲವಾಗಿದೆ.

ಭಾರತದ ಮೊದಲ ಗ್ಲೋಬಲ್ ಕೆಪೆಬಿಲಿಟಿ ಸೆಂಟರ್ ನೀತಿಯನ್ನು ಕರ್ನಾಟಕ ಜಾರಿಗೆ ತಂದಿದ್ದು, ಈ ಕೇಂದ್ರಗಳನ್ನು ಸಶಕ್ತಗೊಳಿಸಲು ಹಾಗೂ ಬೆಂಬಲಿಸಲು ಉದ್ದೇಶಿಸಿದೆ. ಇದರ ಮುಂದುವರೆದ ಭಾಗವಾಗಿ ಬೆಂಗಳೂರು, ಮೈಸೂರು ಹಾಗೂ ಬೆಳಗಾವಿಯಲ್ಲಿ ಮೂರು ಜಾಗತಿಕ ನಾವೀನ್ಯತಾ ಜಿಲ್ಲೆಗಳನ್ನು ಸ್ಥಾಪಿಸಲಾಗುವುದು ಎಂದು ಘೋಷಿಸಲು ನನಗೆ ಹೆಮ್ಮೆ ಎನಿಸಿದೆ. ರಾಜ್ಯದಲ್ಲಿ ಜಿಸಿಸಿಗಳನ್ನು ಸ್ಥಾಪಿಸಲು ಈ



ಪಾರ್ಕ್ ಗಳು ಮೀಸಲಾಗಿರುತ್ತದೆ. ಬೆಂಗಳೂರು ಜಾಗತಿಕ ನಾವೀನ್ಯತಾ ಜಿಲ್ಲೆಯು ಜ್ಞಾನ, ಆರೋಗ್ಯ ಮತ್ತು ನಾವೀನ್ಯತೆಯ ನಗರದ ಭಾಗವಾಗಿರಲಿದೆ(ಕ್ವಿನ್ ಸಿಟಿ). ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಕೇವಲ 45 ನಿಮಿಷಗಳ ಅಂತರದಲ್ಲಿದ್ದು, ನಾವೀನ್ಯತೆ ಮತ್ತು ಸಂಶೋಧನೆಗೆ ಜಾಗತಿಕ ಕೇಂದ್ರವಾಗಿ ಪರಿಣಮಿಸಲಿದೆ ಎಂದರು.

ಇಂಜಿನಿಯರಿಂಗ್ ಪ್ರತಿಭೆ ಮತ್ತು ಜಾಗತಿಕವಾಗಿ ಅತ್ಯಧಿಕ ಎ.ಐ ವೃತ್ತಿಪರರನ್ನು ಹೊಂದಿರುವ ಕರ್ನಾಟಕ ಜಿಸಿಸಿಗಳಿಗೆ ಅತಿ ಪ್ರಿಯವಾದ ಗಮ್ಯವಾಗಿದೆ. ಎನ್‌ಐಪಿಯುಎನ್‌ಎ ಕರ್ನಾಟಕದಡಿಯಲ್ಲಿ ಕೈಗಾರಿಕೆಗಳಲ್ಲಿ ಕಾರ್ಯನಿರ್ವಹಿಸಲು ಸಿದ್ದರಿರುವ ಕಾರ್ಮಿಕಪಡೆಯನ್ನು ತಯಾರು ಮಾಡಲು ನಾವು ಕೈಗೊಂಡ ಯೋಜನೆಗಳು ಇನ್ನಷ್ಟು ಬಲಪಡಿಸಲಿವೆ. ಈಗ ತಾನೇ ಮೈಕ್ರೋ ಸಾಫ್ಟ್, ಇಂಟೆಲ್, ಆಕ್ಸೆಂಚರ್, ಐ.ಬಿ.ಎಂ ಮತ್ತು ಬಿಎಫ್‌ಎಸ್ ಕಾಂಸಾರ್ಟಿಯಂ ಜೊತೆಗೆ ಸಹಿ ಹಾಕಲಾದ ಐದು ಒಪ್ಪಂದಗಳು ಕರ್ನಾಟಕದ ಒಂದು ಲಕ್ಷ ವ್ಯಕ್ತಿಗಳನ್ನು ಕೌಶಲಯುಕ್ತಗೊಳಿಸಲಿದೆ. ಮಂಗಳೂರಿನ ಫಿನ್ ಟೆಕ್ ಲೀಡರ್ ಶಿಪ್‌ನಿಂದ ಹುಬ್ಬಳ್ಳಿ ಧಾರವಾಡದ ಇವಿ ಪ್ರಗತಿ ಮತ್ತು ಡ್ರೋನ್‌ಗಳು ಹಾಗೂ ಮೈಸೂರು ಪಿಸಿಬಿ ಕ್ಲಸ್ಟರ್ ಆಗುವವರೆಗೆ ಕ್ಲಸ್ಟರ್ ಆಧಾರಿತ ಅನುಸಂಧಾನದ ಮೂಲಕ ಸಮತೋಲಿತ ಪ್ರಾದೇಶಿಕ ಬೆಳವಣಿಗೆಯನ್ನು ಸಾಧಿಸಲಾಗುತ್ತಿದೆ ಎಂದು ತಿಳಿಸಿದರು. ಬೆಂಗಳೂರಿನ ಮೇಲೆ ನಮ್ಮ ಗಮನವನ್ನು ಕೇಂದ್ರೀಕರಿಸುತ್ತಲೇ, ಪ್ರಾದೇಶಿಕ ಬಲವನ್ನು ಸಜ್ಜುಗೊಳಿಸಲು ಹಾಗೂ ಹೂಡಿಕೆಗಳನ್ನು ಆಕರ್ಷಿಸಲು ಸೂಕ್ತ ನೀತಿ ಮತ್ತು ಮೂಲ ಸೌಕರ್ಯಗಳನ್ನು ಸೃಜಿಸಲಾಗುತ್ತಿದೆ. ಟೆಕ್ ಆಧಾರಿತ ವಲಯಗಳನ್ನು ಉತ್ತೇಜಿಸಲು ಭೌತಿಕ ಮತ್ತು ಡಿಜಿಟಲ್ ಮೂಲಸೌಕರ್ಯದ ಮೇಲೆ ನಮ್ಮ ಸರ್ಕಾರವು ಗಮನಾರ್ಹ ಹೂಡಿಕೆಗಳನ್ನು ಮಾಡಿದೆ.ಗ್ರಾಮೀಣ ಸಂಪರ್ಕಕ್ಕಾಗಿ 'ನಮ್ಮ ಗ್ರಾಮ ನಮ್ಮ ಯೋಜನೆ' ಮತ್ತು ವಿಶೇಷ ಅಭಿವೃದ್ಧಿ ಯೋಜನೆಗಳು ಸಂಪರ್ಕ ಮತ್ತು ಆರ್ಥಿಕ ಅವಕಾಶಗಳನ್ನು ಕರ್ನಾಟಕದಾದ್ಯಂತ ವೃದ್ಧಿಸಿದೆ.

ಬಿಯಾಂಡ್ ಬೆಂಗಳೂರು ಕಾರ್ಯಕ್ರಮಗಳ ಮೂಲಕ ಬೆಳವಣಿಗೆಯ ಸೌಲಭ್ಯಗಳನ್ನು ಟೆಕ್ ವಲಯದಿಂದಾಚೆಗೂ ಕೊಂಡೊಯ್ಯುವುದರಲ್ಲಿ ನಮಗೆ ನಂಬಿಕೆಯಿದೆ. ಇದರಿಂದ ಗ್ರಾಮೀಣ ಪ್ರದೇಶಗಳಿಗೆ ತಂತ್ರಜ್ಞಾನ, ವಿದ್ಯಾರ್ಥಿಗಳಿಗೆ ಇ – ಶಿಕ್ಷಣದ ಸುಧಾರಣೆ ಮತ್ತು ಎಲ್ಲಾ ನಾಗರಿಕ ಸೇವೆಗಳ ಮೇಲೆ ಸಕಾರಾತ್ಮಕ ಪರಿಣಾಮ ಬೀರಲಿದೆ. 2022ರಿಂದ 2023 ರವರೆಗೆ 18.2% ಏರಿಕೆಯನ್ನು ಕಂಡಿರುವ ಕರ್ನಾಟಕದ ಸ್ಟಾರ್ಟ್ ಅಪ್ ಪರಿಸರ ಗಮನಾರ್ಹ ಬೆಳವಣಿಗೆಯನ್ನು ಕಂಡಿದೆ. ಒಟ್ಟು 3,036 ಸ್ಟಾರ್ಟ್‌ಅಪ್‌ಗಳನ್ನು ಹೊಂದಿರುವ ಕರ್ನಾಟಕ ಭಾರತದ ಒಟ್ಟು ಸ್ಟಾರ್ಟ್ ಅಪ್‌ಗಳಲ್ಲಿ 8.7% ಸ್ಟಾರ್ಟ್ ಅಪ್‌ಗಳನ್ನು ಹೊಂದುವ ಮೂಲಕ ಅಗ್ರಸ್ಥಾನದಲ್ಲಿದೆ. ಈ ಯಶಸ್ಸು ಉದ್ಯಮಿಗಳಿಗೆ ನಮ್ಮ ಬೆಂಬಲ ಮತ್ತು ವೈವಿಧ್ಯಮಯ ಅವಕಾಶಗಳನ್ನು ಬಿಂಬಿಸುತ್ತದೆ ಎಂದರು.